**ಸಂಪುಟ:** 05 **ಸಂಚಿಕೆ:** 58 **ಪುಟಗಳು:** 08   ಸೋಮವಾರ 12 ಮೇ 2025
www.udayavahini.in  epaper.udayavahini.in  Udaya vahini news  Udaya vahini news  Udayavahini news youtube  udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ   RNI No. KARKAN/2021/80833   9448225696   +91 8035841833   ₹5

ಮುಂಜಾನೆ ಮಾತು

ನೋಡಿ, ದೇವರು ಕಷ್ಟಪಟ್ಟು ಕೆಲಸ ಮಾಡುವ ಜನರಿಗೆ ಮಾತ್ರ ಸಹಾಯ ಮಾಡುತ್ತಾನೆ. ಆ ತತ್ವ ತುಂಬಾ ಸ್ಪಷ್ಟವಾಗಿದೆ.



# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


## ಉಗ್ರರನ್ನು ಸದೆಬಡಿದ ಪುರಾವೆಗಳನ್ನು ಬಿಚ್ಚಿಟ್ಟ ಡಿಜಿಎಂಒ

• ಉದಯವಾಹಿನಿ, ನವದೆಹಲಿ

ನಾಲ್ಕು ದಿನಗಳ ಹಿಂದೆ ಮೇ 7ರಂದು ಭಾರತ ನಡೆಸಿದ ಆಪರೇಷನ್ ಸಿಂಧೂರ್‌ನಲ್ಲಿ 9 ಸ್ಥಳಗಳಲ್ಲಿ 100ಕ್ಕೂ ಹೆಚ್ಚು ಉಗ್ರರನ್ನು ಕೊಲ್ಲಲಾಗಿದೆ ಎಂದು ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕ ಡಿಜಿಎಂಒ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಹೇಳಿದ್ದಾರೆ. ಕದನ ವಿರಾಮ ಘೋಷಣೆಯಾಗಿ ಒಂದು ದಿನದ ಬಳಿಕ ಭಾರತದ ವಿವಿಧ ಪಡೆಗಳ ಮಹಾನಿರ್ದೇಶಕರು ಸುದ್ದಿಗೋಷ್ಠಿ ನಡೆಸಿ ಆಪರೇಷನ್ ಸಿಂಧೂರ್ ಹಾಗು ನಂತರದ ಭಾರತದ ರಣತಂತ್ರಗಳ ಕೆಲ ವಿವರಗಳನ್ನು ಬಿಚ್ಚಿಟ್ಟಿದ್ದಾರೆ. ವಾಯುಪಡೆ ಕಾರ್ಯಾಚರಣೆಗಳ ಡೈರೆಕ್ಟರ್ ಜನರಲ್ ಏರ್ ಮಾರ್ಷಲ್ ಎ.ಕೆ. ಭಾರ್ತಿ, ನೌಕಾಪಡೆ ಕಾರ್ಯಾಚರಣೆಗಳ ಡೈರೆಕ್ಟರ್ ಜನರಲ್ ವೈಸ್ ಅಡ್ಮಿರಲ್ ಪ್ರಮೋದ್ ಅವರೂ ಈ ಸುದ್ದಿಗೋಷ್ಠಿಯಲ್ಲಿ ಪಾಲ್ಗೊಂಡು, ಕಾರ್ಯಾಚರಣೆಗಳ ಕೆಲ ವಿವರ ನೀಡಿದ್ದಾರೆ. ಆಪರೇಷನ್ ಸಿಂಧೂರ್‌ನಲ್ಲಿ ಪಾಕಿಸ್ತಾನದ ಉಗ್ರ ನೆಲೆಗಳನ್ನು ನಾಶ ಮಾಡಿರುವುದಕ್ಕೆ ಸಾಕ್ಷ್ಯಗಳನ್ನೂ ಈ ಸಂದರ್ಭದಲ್ಲಿ ಪ್ರಸ್ತುತಪಡಿಸಿದ್ದಾರೆ.



### ಭಾರತದಲ್ಲಿ ಡಿಜಿಎಂಒ ಪಾತ್ರ ಏನು

ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು ಇತರ ದೇಶಗಳ ಡಿಜಿಎಂಒಗಳ ಜೊತೆ ನೇರ ಸಂಪರ್ಕದಲ್ಲಿರುತ್ತಾರೆ. ಎರಡು ದೇಶಗಳ ಮಧ್ಯೆ ಅನಗತ್ಯವಾದ ಸಂಘರ್ಷ ಏರ್ಪಡದಂತೆ ನಿಯಂತ್ರಿಸುವುದು ಸೇರಿದಂತೆ ಹಲವು ಜವಾಬ್ದಾರಿಗಳು ಅವರಿಗೆ ಇರುತ್ತವೆ. ಭಯೋತ್ಪಾದನೆ ವಿರೋಧಿ ಕ್ರಮಗಳು ಸೇರಿದಂತೆ ವಿವಿಧ ಮಿಲಿಟರಿ ಕಾರ್ಯಾಚರಣೆಗಳನ್ನು ಯೋಜಿಸುವುದು ಇವರ ಜವಾಬ್ದಾರಿಗಳಲ್ಲಿ ಒಂದು.

ಆಪರೇಷನ್ ಸಿಂಧೂರ್‌ನಲ್ಲಿ ಹಲವು ಉಗ್ರರನ್ನು ಕೊಲ್ಲಲಾಗಿದೆ. ಲಷ್ಕರೆ ತೈಯಬಾದ ಮುದಾಸಿರ್, ಜೈಷೆ ಸಂಘಟನೆಯ ಉಗ್ರ ಹಫೀಜ್ ಮೊಹಮ್ಮದ್, ಬಹಾವಲ್ಪುರದ ಮರ್ಕಜ್ ಸಭಾನಲ್ಲಾದ ಉಸ್ತುವಾರಿ ಜಮೀಲ್, ಲಷ್ಕರೆ ತೈಬಾ ಉಗ್ರ ಖಾಲಿದ್ ಮೊದಲಾದವರು ಕಾರ್ಯಾಚರಣೆಯಲ್ಲಿ ಹತ್ಯೆಯಾಗಿರುವ ಸಂಗತಿಯನ್ನು ಡಿಜಿಎಂಒ ನೀಡಿದ್ದಾರೆ. ಭಾರತವು ಪಾಕಿಸ್ತಾನದ ನಾಗರಿಕರನ್ನು ಗುರಿಯಾಗಿಸಿ ಯಾವುದೇ ದಾಳಿ ಮಾಡಿಲ್ಲ. ಆದರೆ, ಪಾಕಿಸ್ತಾನವು ಭಾರತದಲ್ಲಿ ನಾಗರಿಕರನ್ನು ಗುರಿಯಾಗಿಸಿ ದಾಳಿ ಮಾಡಿದೆ ಎಂದರು ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು.

## 13 ವಿದ್ಯಾರ್ಥಿಗಳು ವಾಪಸ್ ಕರೆತರಲು ನೆರವಾದ ಹೆಚ್‌ಡಿಕೆ

• ಉದಯವಾಹಿನಿ, ನವದೆಹಲಿ

ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗುತ್ತಿದ್ದು, ಇದರ ನಡುವೆ ಕಾಶ್ಮೀರದಲ್ಲಿ ಸಿಲುಕಿರುವ 13 ಕನ್ನಡಿಗರಾದ ವಿದ್ಯಾರ್ಥಿಗಳನ್ನು ವಾಪಸ್ ರಾಜ್ಯಕ್ಕೆ ಕರೆತರಲು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ನೆರವಾಗಿದ್ದಾರೆ. ಕಾಶ್ಮೀರದ ಕೃಷಿ ವಿಶ್ವವಿದ್ಯಾಲಯದಲ್ಲಿ ರಾಜ್ಯದ 13 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಪಾಕ್‌ನ ಡ್ರೋನ್ ದಾಳಿ ಭೀತಿಯಿಂದಾಗಿ ಪರದಾಡುತ್ತಿದ್ದರು. ಇದರಿಂದಾಗಿ ತಗಚಗೆರೆ ಗ್ರಾಮದ ಜೆಡಿಎಸ್ ಮುಖಂಡರೊಬ್ಬರು ತಮ್ಮ ಪುತ್ರ ಹರ್ಷಿತ್ ಕಾಶ್ಮೀರದಲ್ಲಿ ಓದುತ್ತಿದ್ದು, ಯುದ್ಧ ಭೀತಿಯಿರುವ ಕಾರಣ ಅವರನ್ನು ಕರ್ನಾಟಕಕ್ಕೆ ಹಿಂತಿರುಗಿಸಲು ಸಹಾಯ ಕೋರಿ, ಹೆಚ್‌ಡಿ ಕುಮಾರಸ್ವಾಮಿಯವರಿಗೆ ಮನವಿ ಮಾಡಿಕೊಂಡಿದ್ದರು. ಇದೇ ವೇಳೆ ಕರ್ನಾಟಕದ ಹಲವು ವಿದ್ಯಾರ್ಥಿಗಳು ಅಲ್ಲಿ ಓದುತ್ತಿರುವ ಮಾಹಿತಿ ಸಿಕ್ಕಿದೆ. ಕೂಡಲೇ ಸ್ಪಂದಿಸಿದ ಸಚಿವರು, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ, ವಿದ್ಯಾರ್ಥಿಗಳ ರಕ್ಷಣೆಗಾಗಿ ತಮ್ಮ ಸಚಿವಾಲಯದ ಅಧಿಕಾರಿಗಳನ್ನು ನಿಯೋಜಿಸಿದ್ದರು. ಸದ್ಯ ವಿದ್ಯಾರ್ಥಿಗಳನ್ನು ದೆಹಲಿಯ ಕರ್ನಾಟಕ ಭವನಕ್ಕೆ ಕರೆತರಲಾಗಿದ್ದು, ಸದ್ಯ ಎಲ್ಲರೂ ಸುರಕ್ಷಿತರಾಗಿದ್ದಾರೆ. ನಾಳೆ ಬೆಳಿಗ್ಗೆ 8 ಗಂಟೆಗೆ ದೆಹಲಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದು, ಇದೇ 14ರಂದು ಬೆಳಿಗ್ಗೆ 8 ಗಂಟೆಗೆ ಬೆಂಗಳೂರು ತಲುಪಲಿದ್ದಾರೆ.

## ಮುಜರಾಯಿ ಕಾನೂನು ತಿದ್ದುಪಡಿ ರಾಜ್ಯಪಾಲರು ಒಪ್ಪಿಗೆ ನೀಡಲಿ

• ಉದಯವಾಹಿನಿ, ಬೆಂಗಳೂರು

ಮುಜರಾಯಿ ಕಾನೂನು ತಿದ್ದುಪಡಿ ಮಸೂದೆಗೆ ರಾಜ್ಯಪಾಲರು ಒಪ್ಪಿಗೆ ನೀಡುವ ಮೂಲಕ 'ಸಿ' ಶ್ರೇಣಿಯ ದೇವಸ್ಥಾನಗಳ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಅಖಿಲ ಕರ್ನಾಟಕ ಅರ್ಚಕರ ಆಗಮಿಕರ ಮತ್ತು ಉಪಾಧಿವಂತರ ಒಕ್ಕೂಟ ಮನವಿ ಮಾಡಿದೆ. ಒಕ್ಕೂಟದ ಅಧ್ಯಕ್ಷ ಕೆ.ಇ. ರಾಧಾಕೃಷ್ಣ, ಪ್ರಧಾನ ಕಾರ್ಯದರ್ಶಿ ಕೆ.ಎಸ್.ಎನ್. ದೀಕ್ಷಿತ್ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ಮುಜರಾಯಿ ಕಾನೂನಿಗೆ ತಿದ್ದುಪಡಿ ಮಾಡಿದರೆ ಹೆಚ್ಚು ವರಮಾನ ಇರುವ 'ಎ' ಮತ್ತು 'ಬಿ' ಶ್ರೇಣಿಯ ದೇವಸ್ಥಾನಗಳ ಹೆಚ್ಚುವರಿ ಆದಾಯದ ಪಾಲು 'ಸಿ' ಶ್ರೇಣಿಯ ದೇವಸ್ಥಾನಗಳಿಗೆ ಸಿಗಲಿದ್ದು, ಈ ದೇವಸ್ಥಾನಗಳ ಅಭಿವೃದ್ಧಿಗೆ ಸಹಾಯವಾಗುತ್ತದೆ. ಆದರೆ, ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ಈ ಮಸೂದೆಯನ್ನು ಯಾಕೆ ವಾಪಸ್ ಕಳುಹಿಸಿದರು ಎಂಬುದು ಗೊತ್ತಾಗುತ್ತಿಲ್ಲ' ಎಂದು ತಿಳಿಸಿದರು. ರಾಜ್ಯ ಪುರಾತತ್ವ ಇಲಾಖೆ ಮತ್ತು ಮುಜರಾಯಿ ಇಲಾಖೆಗಳು ಜಂಟಿಯಾಗಿ ಕಾಲಮಿತಿ ನಿಗದಿಪಡಿಸಿಕೊಂಡು ಐತಿಹಾಸಿಕ ದೇವಸ್ಥಾನಗಳ ಆಸ್ತಿಗಳ ಸರ್ವೇಕ್ಷಣೆ ನಡೆಸಬೇಕು. ಅವುಗಳ ಅಭಿವೃದ್ಧಿಗೆ 500 ಕೋಟಿ ಮೀಸಲಿಡಬೇಕು. ಮುಜರಾಯಿ ದೇವಸ್ಥಾನಗಳಿಗೆ ಸಂಬಂಧಪಟ್ಟ ಸುಮಾರು ಒಂದು ಲಕ್ಷ ಎಕರೆ ವಿಸ್ತೀರ್ಣದ ಜಮೀನುಗಳನ್ನು ಪಟ್ಟಭದ್ರರು ಅತಿಕ್ರಮಣ ಮಾಡಿದ್ದಾರೆ. ಬೆಂಗಳೂರು ನಗರದಲ್ಲಿಯೂ ದೇವಸ್ಥಾನಗಳ ಬೆಲೆ ಬಾಳುವ ಜಮೀನು ಬಲಿಷ್ಠರ ಕೈಯಲ್ಲಿದೆ. ಎ.ಟಿ. ರಾಮಸ್ವಾಮಿ ವರದಿಯನ್ನು ಅನುಷ್ಠಾನಕ್ಕೆ ತರುವ ಮೂಲಕ ಆ ಜಮೀನು ವಶಪಡಿಸಿಕೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಅರ್ಚಕರು, ಉದ್ಯೋಗಿಗಳ ಮೇಲೆ ನಡೆಯುವ ದೌರ್ಜನ್ಯ ತಡೆಯಲು ನೀತಿ ರೂಪಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿರುವ ದೇವಸ್ಥಾನಗಳಲ್ಲಿ ಅರ್ಚಕರಿಗೆ ವಸತಿ ನಿರ್ಮಿಸಿಕೊಡಬೇಕು. ದೇವಸ್ಥಾನಗಳ ಪಕ್ಕದಲ್ಲಿ ಸ್ನಾನಗೃಹ, ಶೌಚಾಲಯ ನಿರ್ಮಿಸಬೇಕು. ಆಗಮ, ಆಚರಣೆ, ಮತ್ತು ನಿರ್ವಹಣೆಗಾಗಿ ತರಬೇತಿ ನೀಡಬೇಕು. ಪೂಜಾದ್ರವ್ಯಗಳ ನಿರ್ವಹಣೆಗಾಗಿ ತಿಂಗಳಿಗೆ 5,000 ನೀಡಬೇಕು ಎಂದು ಆಗ್ರಹಿಸಿದರು.

**ಸ್ವಾತಂತ್ರ್ಯ ಸಿಕ್ಕಿದ ಬಳಿಕ ಭಾರತ (India) ಶಾಂತಿ ಮಂತ್ರವನ್ನು ಅನುಸರಿಸಿದರೂ ಪಾಕಿಸ್ತಾನ ಮತ್ತು ಚೀನಾದ (China) ಮಧ್ಯೆ ಯುದ್ಧ ನಡೆಸಬೇಕಾಯಿತು. 1947, 1965, 1971 ರಲ್ಲಿ ಪಾಕಿಸ್ತಾನದ ಜೊತೆ 1962 ರಲ್ಲಿ ಚೀನಾದ ಜೊತೆ ಯುದ್ಧ ಮಾಡಬೇಕಾಯಿತು. ಪಾಕಿಸ್ತಾನ ಜೊತೆಗಿನ ಮೂರು ಯುದ್ಧದಲ್ಲಿ ಭಾರತ ಗೆದ್ದರೆ ಚೀನಾದ ವಿರುದ್ಧ ಭಾರತ ಸೋತಿತ್ತು. ಗಡಿಯಲ್ಲಿರುವ ಈ ದೇಶಗಳ ಕಿರಿಕಿರಿ ಜಾಸ್ತಿ ಆಗುತ್ತಿದ್ದಂತೆ ಭಾರತ ಸರ್ಕಾರ ರಕ್ಷಣೆಗೆ ಹೆಚ್ಚು ಒತ್ತು ನೀಡಲು ಆರಂಭಿಸಿತು. ಅಷ್ಟೇ ಅಲ್ಲದೇ ಸ್ವಂತ ಕ್ಷಿಪಣಿ ಅಭಿವೃದ್ಧಿ ಪಡಿಸಲು ಮುಂದಾಯಿತು. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯಾದ ಡಿಆರ್‌ಡಿಒ ವಿಜ್ಞಾನಿಗಳು 1989ರಲ್ಲಿ ಅಗ್ನಿ ಕ್ಷಿಪಣಿಯನ್ನು ಅಭಿವೃದ್ಧಿ ಪಡಿಸಿ ಪರೀಕ್ಷಾರ್ಥ ಪ್ರಯೋಗ ನಡೆಸಿದ್ದರು. ಧ್ವನಿಗಿಂತ ವೇಗವಾಗಿ ಸಂಚರಿಸುವ ಸೂಪರ್ ಸಾನಿಕ್ ಕ್ಷಿಪಣಿಯನ್ನು ಅಭಿವೃದ್ಧಿ ಪಡಿಸಲು ಭಾರತ ಮುಂದಾಯಿತು.**

# ಭಯಂಕರ ಬ್ರಹ್ಮೋಸ್ ಕೆಣಕಿದರೆ ಖಲ್ಲಾಸ್

- ನಿಲ್ಲಲ್ಲ ,ಪಾಕ್ ದಾಳಿ ಮಾಡಿದರೆ ನಾವು ಭೀಕರ ದಾಳಿ ಮಾಡುತ್ತೇವೆ
- ಪಿಒಕೆ ಬಿಟ್ಟು ತೆರಳಿದರೆ ಮಾತ್ರ ಪಾಕ್ ಜೊತೆ ಮಾತುಕತೆ
- ಪಾಕಿಸ್ತಾನದ ಸಾರ್ವಭೌಮತೆ, ಸ್ವಾತಂತ್ರ್ಯಕ್ಕೆ ನಮ್ಮ ಬೆಂಬಲ
- ಭಾರತದ ನೆರೆಯ ರಾಷ್ಟ್ರಗಳಾದ ಚೀನಾ ಮತ್ತು ಪಾಕಿಸ್ತಾನ ತಾವಿಬ್ಬರೂ ಭಾಯಿ ಭಾಯಿ ಎಂದು ಮತ್ತೆ ಘೋಷಿಸಿವೆ.



**ಪಾಕ್ ಬಾಲ ಬಿಚ್ಚಿದರೆ ತುಂಡು ಮಾಡ್ತೀವಿ**

• ಉದಯವಾಹಿನಿ, ನವದೆಹಲಿ

ಪಾಕ್ ದಾಳಿ ಮಾಡಿದರೆ ಭಾರತ ಪ್ರತಿಯಾಗಿ ಭೀಕರ ದಾಳಿ ಮಾಡುತ್ತದೆ ಎಂದು ಪ್ರಧಾನಿ ಮೋದಿ ಪಾಕಿಸ್ತಾನಕ್ಕೆ ನೇರ ಎಚ್ಚರಿಕೆ ಕೊಟ್ಟಿದ್ದಾರೆ. ಪಾಕ್‌ನೊಂದಿಗಿನ ಸಂಘರ್ಷದ ಕುರಿತು ದೂರವಾಣಿ ಕರೆ ಮೂಲಕ ಯುಎಸ್ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಜೊತೆ ಪ್ರಧಾನಿ ಮೋದಿ ಚರ್ಚಿಸಿದರು. ಈ ವೇಳೆ ಪಾಕಿಸ್ತಾನ ದಾಳಿ ಮಾಡಿದರೆ ನಮ್ಮ ದಾಳಿ ಬಲವಾಗಿರುತ್ತದೆ. ಮತ್ತೆ ತಂಟೆಗೆ ಬಂದರೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ವಾರ್ನಿಂಗ್ ಕೊಟ್ಟಿದ್ದಾರೆ. ಆಪರೇಷನ್ ಸಿಂಧೂರ ಇನ್ನೂ ಪೂರ್ಣಗೊಂಡಿಲ್ಲ. ಪಾಕ್ ಗುಂಡು ಹೊಡೆದರೆ, ನಾವು ಫಿರಂಗಿಗಳ ಮೂಲಕ ಉತ್ತರಿಸಬೇಕು. ಉಗ್ರವಾದ ನಿಲ್ಲುವವರೆಗೂ ಸಿಂಧೂ ಒಪ್ಪಂದ ಸ್ಥಗಿತಗೊಳಿಸಲಾಗುವುದು. ಸಭೆಯಲ್ಲಿ ಪಿಒಕೆ ವಿಚಾರ ಮಾತ್ರ ಚರ್ಚೆ ಮಾಡಲಾಗುವುದು. ಕಾಶ್ಮೀರ ವಿಚಾರದಲ್ಲಿ ಅಮೆರಿಕ ಮಧ್ಯಸ್ಥಿಕೆ ಅಗತ್ಯವಿಲ್ಲ. ಕಾಶ್ಮೀರ ವಿವಾದ ಬಗೆಹರಿಸುವ ಶಕ್ತಿ ಭಾರತಕ್ಕಿದೆ. ಕಾಶ್ಮೀರ ವಿವಾದ ಜಾಗತಿಕಗೊಳಿಸಲು ಇಚ್ಛೆಪಡಲ್ಲ ಎಂದು ಮೋದಿ, ದೊಡ್ಡಣ್ಣ ಅಮೆರಿಕಾಗೆ ಕಠಿಣ ಸಂದೇಶ ರವಾನಿಸಿದ್ದಾರೆ.

ಮ್ಯಾರಥಾನ್ ಸಭೆ ನಡೆಸಿದ ಮೋದಿ, ರಾಜನಾಥ್ ಸಿಂಗ್, ಎನ್‌ಎಸ್‌ಎ ಅಜಿತ್ ದೋವಲ್, ಸಿಡಿಎಸ್ ಮೇಜರ್ ಅನಿಲ್ ಚೌಹಾಣ್, ಮೂರೂ ಸೇನೆಗಳ ಮುಖ್ಯಸ್ಥರ ಜೊತೆ ಎರಡು ಗಂಟೆ ಚರ್ಚೆ ನಡೆಸಿದ್ದಾರೆ. ಮುಂದಿನ ಕಾರ್ಯತಂತ್ರಗಳ ಬಗ್ಗೆ ಸಲಹೆ ಸೂಚನೆ ನೀಡಿದ್ದಾರೆ. ಪಿಒಕೆ ಬಿಟ್ಟು ತೆರಳಿದರೆ ಮಾತ್ರ ಪಾಕ್ ಜೊತೆ ನಮ್ಮ ಮಾತುಕತೆ. ಇನ್ನೂ ನಾವು ಯಾರ ಮಧ್ಯಸ್ಥಿಕೆಯನ್ನೂ ಒಪ್ಪುವುದಿಲ್ಲ. ಕಾಶ್ಮೀರ ವಿಚಾರದಲ್ಲಿ ಅಮೆರಿಕ ಮಧ್ಯಸ್ಥಿಕೆ ನಾವು ಒಪ್ಪಲ್ಲ. ನಾಳೆ ಪಿಒಕೆ ವಿಚಾರವಾಗಿ ಮಾತುಕತೆ ನಡೆಸಿ ನಿರ್ಣಯ ಮಾಡಲಾಗುವುದು ಎಂದು ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದು ವಿದೇಶಾಂಗ ಸಚಿವ ಜೈಶಂಕರ್ ತಿಳಿಸಿದ್ದಾರೆ. ಪಾಕಿಸ್ತಾನ ಮೇಲೆ ಏರ್‌ಸ್ಟ್ರೈಕ್ ಮಾಡಿದ ಬಳಿಕ ದೇಶದಲ್ಲಿ ಈಗ ಬ್ರಹ್ಮೋಸ್ ಕ್ಷಿಪಣಿ ದೊಡ್ಡ ಮಟ್ಟದಲ್ಲಿ ಸುದ್ದಿಯಾಗುತ್ತಿದೆ. ಉಗ್ರರ ನೆಲೆಗಳು ಮತ್ತು ಪಾಕ್ ವಾಯುನೆಲೆಗಳ ಛಿದ್ರವಾಗಲು ಕಾರಣ ಈ ಬ್ರಹ್ಮೋಸ್. ಲಕ್ನೋದಲ್ಲಿ ರಕ್ಷಣಾ ಕೈಗಾರಿಕಾ ಕಾರಿಡಾರ್‌ನಲ್ಲಿ ಬ್ರಹ್ಮೋಸ್ ಸೂಪರ್ ಸಾನಿಕ್ ಕ್ರೂಸ್ ಕ್ಷಿಪಣಿ ಉತ್ಪಾದನಾ ಘಟಕದ ಉದ್ಘಾಟನಾ ಸಮಾರಂಭ ನಡೆದಿದೆ. ಹೀಗಾಗಿ ಈ ಕ್ಷಿಪಣಿಯ ವಿಶೇಷತೆ ಏನು ಈ ಕ್ಷಿಪಣಿ ನಿರ್ಮಾಣಕ್ಕೆ ಭಾರತ ಕೈ ಹಾಕಿದ್ದು ಯಾಕೆ ಮಿಸೈಲ್ ಮ್ಯಾನ್ ಅಬ್ದುಲ್ ಕಲಾಂ ಪಾತ್ರದ ಬಗ್ಗೆ ಅರಿಯಬೇಕಿದೆ. ಅಲ್ಲದೆ, ಪಾಕಿಸ್ತಾನಕ್ಕೆ ಈ ಕ್ಷಿಪಣಿ ಹಾರಿದ್ದರ ಕೌತುಕದ ಬಗ್ಗೆ ಸಾಮರ್ಥ್ಯದ ಬಗ್ಗೆ ಅಚ್ಚರಿಯಾಗುತ್ತದೆ.

### ಟರ್ಕಿ, ಯುಎಇ ಜೊತೆಗೆ ಪಾಕ್ ಮಾತುಕತೆ

ಚೀನಾದ ಬಳಿಕ ಇನ್ನೊಂದು ಮುಸ್ಲಿಂ ರಾಷ್ಟ್ರವಾದ ಟರ್ಕಿ ಜೊತೆಗೂ ಪಾಕಿಸ್ತಾನ ಮಾತುಕತೆ ನಡೆಸಿದೆ. ಟರ್ಕಿಯ ವಿದೇಶಾಂಗ ಸಚಿವ ಹಕನ್ ಫಿಡಾನ್ ಅವರೊಂದಿಗೆ ಸದ್ಯದ ಪರಿಸ್ಥಿತಿಯ ಬಗ್ಗೆ ಮಾಹಿತಿ ನೀಡಿದ್ದಾರೆ. ಇದಲ್ಲದೇ, ಯುಎಇ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅವರೊಂದಿಗೂ ಮಾತುಕತೆ ನಡೆಸಿದ್ದಾರೆ. ಈ ವೇಳೆ ಯುಎಇ ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದವನ್ನು ಸ್ವಾಗತಿಸಿದೆ.




**ಯಾರ ಮಧ್ಯಸ್ಥಿಕೆ ಒಪ್ಪಲ್ಲ**

1. ಆ ಕಡೆಯಿಂದ ಗುಂಡು ಬಂದರೆ, ಇಲ್ಲಿಂದ ಬಾಂಬ್ ಹಾಕಿ...!
2. ಪಾಕ್‌ಗೆ ಬುದ್ದಿಕಲಿಸಲು ಸೇನೆಗೆ ಪರಮಾಧಿಕಾರ ನೀಡಿದ ಮೋದಿ
3. ಕಾಶ್ಮೀರದ ವಿಷಯಕ್ಕೆ 3ನೇಯವರ ಮಧ್ಯಸ್ಥಿಕೆ ಬೇಡ: ಅಮೇರಿಕಾಗೆ ಮೋದಿ ಸ್ಪಷ್ಟ ಸಂದೇಶ
4. ಭಾರತ-ಪಾಕ್ ಸಂಘರ್ಷ – ಬಿನ್ ಲಾಡೆನ್ ಆಪ್ತನ ಮಗ ಈಗ ಪಾಕ್ ಸೇನಾ ವಕ್ತಾರ

### ಪ್ರಧಾನಿ ಮೋದಿ ಉನ್ನತ ಮಟ್ಟದ ಸಭೆ

- ಭಾರತ ಮತ್ತು ಪಾಕಿಸ್ತಾನ ಮಿಲಿಟರಿ ಕ್ರಮಗಳನ್ನು ನಿಲ್ಲಿಸಲು ಒಪ್ಪಂದ ಮಾಡಿಕೊಂಡ ಒಂದು ದಿನದ ನಂತರ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ಸೇರಿದಂತೆ ಉನ್ನತ ಸರ್ಕಾರಿ ಅಧಿಕಾರಿಗಳ ಜೊತೆ ಪ್ರಧಾನಿ ಮೋದಿ ಭಾನುವಾರ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದರು.
- ಎನ್‌ಎಸ್‌ಎ ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಮತ್ತು ಮೂರೂ ಸೇನಾಪಡೆಗಳ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.
- ಭಾರತ ಪಾಕಿಸ್ತಾನವು ಒಪ್ಪಂದದ ನಿಯಮಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿತ್ತು ಮತ್ತು ಈ ಉಲ್ಲಂಘನೆಗಳನ್ನು ಪರಿಹರಿಸಲು ಮತ್ತು ಪರಿಸ್ಥಿತಿ ಗಂಭೀರತೆ ಮತ್ತು ಜವಾಬ್ದಾರಿಯಿಂದ ನಿಭಾಯಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೇಳಿತ್ತು.
- ಶೆಲ್ ದಾಳಿ ಮತ್ತು ಡ್ರೋನ್ ಘಟನೆಗಳ ನಂತರ ಹಲವಾರು ಗಡಿ ಪ್ರದೇಶಗಳಲ್ಲಿನ ನಿವಾಸಿಗಳು ಭಯದ ಸ್ಥಿತಿಯಲ್ಲಿ ವಾಸಿಸುತ್ತಿದ್ದರೂ ಸಹ, ಪರಿಸ್ಥಿತಿ ಸದ್ಯಕ್ಕೆ ತಣ್ಣಗಾಗಿದೆ.

### ಮತ್ತೆ ಪಾಕ್ ಪರ ನಿಂತ ಚೀನಾ

ಭಾರತಕ್ಕೆ ಮಗ್ಗುಲಮುಳ್ಳಾಗಿ ಕಾಡುತ್ತಿರುವ ಪಾಕಿಸ್ತಾನಕ್ಕೆ ತನ್ನ ಬೆಂಬಲವಿದೆ ಎಂದು ಚೀನಾ ಮತ್ತೊಮ್ಮೆ ಪ್ರಕಟಿಸಿದೆ. ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರ್ಯವನ್ನು ಎತ್ತಿಹಿಡಿಯುವಲ್ಲಿ ತನ್ನ ದೇಶವು ಪಾಕಿಸ್ತಾನದ ಪರ ನಿಲ್ಲುತ್ತದೆ ಎಂದು ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಶನಿವಾರ ಹೇಳಿದ್ದಾರೆ. ಪಾಕ್‌ನ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವರೂ ಆಗಿರುವ ಇಶಾಕ್ ದಾರ್ ಜೊತೆ ದೂರವಾಣಿ ಸಂಭಾಷಣೆ ನಡೆಸಿದ ಚೀನಾದ ವಿದೇಶಾಂಗ ಸಚಿವ, ಭಾರತದ ಜೊತೆಗಿನ ಸಂಘರ್ಷ ಮತ್ತು ಕದನ ವಿರಾಮದ ಬಗ್ಗೆ ಚರ್ಚಿಸಿದ್ದಾಗಿ ವಿದೇಶಾಂಗ ಕಚೇರಿಯು ಹೇಳಿಕೆ ಬಿಡುಗಡೆ ಮಾಡಿದೆ. ಭಾರತದ ಜೊತೆಗಿನ ಸಂಘರ್ಷದಲ್ಲಿ ಪಾಕಿಸ್ತಾನ ಸಂಯಮ ಮತ್ತು ಸವಾಲಿನ ಸಂದರ್ಭಗಳನ್ನು ಎದುರಿಸಿದ ರೀತಿಯನ್ನು ವಾಂಗ್ ಯಿ ಶ್ಲಾಘಿಸಿದರು. ದೇಶದ ಸಾರ್ವಭೌಮತೆಯ ವಿಚಾರದಲ್ಲಿ ನಿಮ್ಮೊಂದಿಗೆ ಇರುತ್ತೇವೆ.

## ರಾಜ್ಯಕ್ಕೆ ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್

• ಉದಯವಾಹಿನಿ, ಬೆಳಗಾವಿ

ಬೆಂಗಳೂರು – ಧಾರವಾಡ ನಡುವೆ ಸಂಚರಿಸುತ್ತಿರುವ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿವರೆಗೆ ವಿಸ್ತರಿಸುವ ಬದಲಾಗಿ, ಬೆಳಗಾವಿ – ಬೆಂಗಳೂರು ನಡುವೆ ಪ್ರತ್ಯೇಕ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅನುಮೋದನೆ ನೀಡಿದ್ದಾರೆ ಎಂದು ಸಂಸದ ಜಗದೀಶ ಶೆಟ್ಟರ್ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಸಂಸದ ಶೆಟ್ಟರ್ ಅವರು, ಬೆಂಗಳೂರು ಧಾರವಾಡ ನಡುವೆ ಸದ್ಯ ಸಂಚರಿಸುತ್ತಿರುವ ವಂದೇ ಭಾರತ ಎಕ್ಸಪ್ರೆಸ್ ರೈಲು ಸೇವೆಯನ್ನು ಬೆಳಗಾವಿ ನಗರದ ವರೆಗೆ ವಿಸ್ತರಿಸುವ ಕುರಿತಾದ ನಮ್ಮ ಬೇಡಿಕೆಯ ಬದಲು, ಬೆಳಗಾವಿಯಿಂದ ಬೆಂಗಳೂರು ವರೆಗೆ ಹೊಸದೊಂದು ವಂದೇ ಭಾರತ ಎಕ್ಸ್‌ಪ್ರೆಸ್ ರೈಲು ಚಲಿಸಲಾಗುವ ಕುರಿತು ಅಗತ್ಯ ಅನುಮೋದನೆ / ಆದೇಶ ನೀಡಿರುವ ಬಗ್ಗೆ ಕೇಂದ್ರ ರೇಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರು ತಿಳಿಸಿರುವುದು ಅತ್ಯಂತ ಸಂತಸದ ಸಂಗತಿ ಎಂದಿದ್ದಾರೆ.

ಬೆಂಗಳೂರು– ಧಾರವಾಡ ನಡುವೆ ಸದ್ಯ ಸಂಚರಿಸುತ್ತಿರುವ ವಂದೇ ಭಾರತ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಬೆಳಗಾವಿ ನಗರದ ವರೆಗೆ ವಿಸ್ತರಿಸುವ ಕುರಿತು ಕೇಂದ್ರ ರೇಲ್ವೆ ಸಚಿವರಾದ ಅಶ್ವಿನಿ ವೈಷ್ಣವ್, ಕೇಂದ್ರ ರೇಲ್ವೆ ರಾಜ್ಯ ಸಚಿವರಾದ ವಿ. ಸೋಮಣ್ಣ ಇವರೊಂದಿಗೆ ಹಲವು ಬಾರಿ ಸಭೆಯನ್ನು / ಚರ್ಚೆಯನ್ನು ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವರಾದ ಪ್ರಹ್ಲಾದ್ ಜೋಶಿ ಇವರ ಉಪಸ್ಥಿತಿಯಲ್ಲಿ ನಡೆದಿತ್ತು ಎಂದು ತಿಳಿಸಿದ್ದಾರೆ. ಈ ಹೊಸ ವಂದೇ ಭಾರತ್ ರೈಲು ಬೆಳಗಾವಿ ನಗರದಿಂದ ಬೆಳಿಗ್ಗೆ ಸಂಚಾರವನ್ನು ಪ್ರಾರಂಭಿಸಿ ಮಧ್ಯಾಹ್ನ ಬೆಂಗಳೂರು ತಲುಪುತ್ತದೆ. ತದ ನಂತರ ಮಧ್ಯಾಹ್ನ ಬೆಂಗಳೂರಿನಿಂದ ಹೊರಟು ರಾತ್ರಿ ಬೆಳಗಾವಿ ತಲುಪುವುದು ಎಂದು ಮಾಹಿತಿ ಇದೆ ಎಂದು ಸಂಸದ ಶೆಟ್ಟರ್ ತಿಳಿಸಿದ್ದಾರೆ. ನೂತನ ವಂದೇ ಭಾರತ ಎಕ್ಸಪ್ರೆಸ್ ರೈಲು ಸೇವೆಯನ್ನು ಬೆಳಗಾವಿಯಿಂದ ಪ್ರಾರಂಭಿಸುವ ವಿಷಯವಾಗಿ ಅಗತ್ಯ ಅನುಮೋದನೆ ದೊರೆತಿರುವುದಕ್ಕೆ ಮೊದಲನೆಯದಾಗಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ರೇಲ್ವೆ ಸಚಿವರಾದ ಅಶ್ವಿನಿ ವೈಷ್ಣವ್, ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಹ್ಲಾದ್ ಜೋಶಿ ಹಾಗೂ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

**ಬೆಳಿಗ್ಗೆ ಬೆಳಗಾವಿ ಹತ್ತಿದ್ರೆ ಮಧ್ಯಾಹ್ನಕ್ಕೆ ಬೆಂಗಳೂರು!**



## ಕಂದಾಯ ಭೂಮಿಲಿ ವಾಸವಿರುವ 1 ಲಕ್ಷ ಜನರಿಗೆ ಪಟ್ಟಾ ಖಾತೆ ವಿತರಣೆಗೆ ನಿರ್ಧಾರ

■ ನಾಯಕರಾಗಿ ಬೆಳೆಯಬೇಕು ಎಂದರೆ ತಳಮಟ್ಟದಿಂದ ಕೆಲಸ ಮಾಡಬೇಕು ■ ಕೊಟ್ಟ ಜವಾಬ್ದಾರಿ ನಿಭಾಯಿಸಬೇಕು

• ಉದಯವಾಹಿನಿ, ಹೊಸದಿಲ್ಲಿ

ಕಾಂಗ್ರೆಸ್ ಸರ್ಕಾರಕ್ಕೆ ಎರಡು ವರ್ಷ ತುಂಬಿದ ಹಿನ್ನೆಲೆಯಲ್ಲಿ ಮೇ 20 ರಂದು ವಿಜಯನಗರದಲ್ಲಿ ನಡೆಯುವ ಸಮಾವೇಶದಲ್ಲಿ ತಾಂಡಾ, ಹಟ್ಟಿ ಸೇರಿದಂತೆ ಕಂದಾಯ ಭೂಮಿಯಲ್ಲಿ ವಾಸವಿರುವ 1 ಲಕ್ಷ ಜನರಿಗೆ ಪಟ್ಟಾ ಖಾತೆ ನೀಡಲಾಗುವುದು ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಹೇಳಿದರು.

ರಾಮನಗರದಲ್ಲಿ ಭಾನುವಾರ ನಡೆದ ಜಿಲ್ಲಾ ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭ 'ಯುವ ಪರ್ವ' ಸಮಾವೇಶದಲ್ಲಿ ಮಾತನಾಡಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕೊಟ್ಟ ಮಾತನ್ನು ಉಳಿಸಿಕೊಂಡಿದೆ. ಯುವಕರಿಗೆ ಯುವನಿಧಿ ಮೂಲಕ ನೆರವಿಗೆ ನಿಂತಿದೆ. ಮಹಿಳೆಯರ ಪರವಾಗಿ ಐತಿಹಾಸಿಕ ಯೋಜನೆಗಳನ್ನು ತಂದು ಇತಿಹಾಸ ನಿರ್ಮಾಣ ಮಾಡಿರುವುದು ಕಾಂಗ್ರೆಸ್ ಪಕ್ಷ. ಉಚಿತ ಬಸ್, ಗೃಹಲಕ್ಷ್ಮೀ ಸೇರಿದಂತೆ ಅನೇಕ ಯೋಜನೆಗಳನ್ನು ದಳ, ಬಿಜೆಪಿಯವರು ನೀಡಿದ್ದಾರೆಯೇ ಎಂದು ಪ್ರಶ್ನಿದರು.

**ಕರ್ನಾಟಕ ಸರ್ಕಾರಕ್ಕೆ 2 ವರ್ಷ**





ಯುವ ಕಾಂಗ್ರೆಸ್ ಪಕ್ಷ ನಾಯಕತ್ವ ಬೆಳೆಸುವ ಪ್ರಯೋಗ ಶಾಲೆ. ನೀವು ನಾಯಕರಾಗಿ ಬೆಳೆಯಬೇಕು ಎಂದರೆ ತಳಮಟ್ಟದಿಂದ ಕೆಲಸ ಮಾಡಬೇಕು. ಕೊಟ್ಟ ಜವಾಬ್ದಾರಿಯನ್ನು ನಿಭಾಯಿಸಬೇಕು. ಯುವಕರಿಗೆ ನಿಮ್ಮ ಶಕ್ತಿಯ ಅರಿವಿಲ್ಲ. ಯಾರೋ ಮಾಡುವ ಟೀಕೆಗಳಿಗೆ ಹೆದರಬಾರದು ಎಂದರು.

### ಮೈಸೂರು ಭಾಗದಲ್ಲಿ ಕಾಂಗ್ರೆಸ್‌ಗೆ 40 ಸ್ಥಾನ

ಅಧಿಕಾರ ಎಂದಿಗೂ ಶಾಶ್ವತವಲ್ಲ. ದೇವೇಗೌಡರು ಈ ರಾಜ್ಯದ ಮುಖ್ಯಮಂತ್ರಿಗಳಾಗಿ ನಂತರ ಪ್ರಧಾನಿಯಾದರು ಅವರಿಂದ ತೆರವಾದ ಸ್ಥಾನಕ್ಕೆ ಚಿತ್ರನಟ ಅಂಬರೀಶ್ ಅವರನ್ನು ನಿಲ್ಲಿಸಿದ್ದರು. ನಾವು ಅಂದು ಹೋರಾಟ ಮಾಡಿ ಸಿ.ಎಂ.ಲಿಂಗಪ್ಪ ಅವರನ್ನು ನಿಲ್ಲಿಸಿ ಗೆಲ್ಲಿಸಿದೆವು ಎಂದು ಹೇಳಿದರು. ಬಿಜೆಪಿ, ದಳ, ಕಾಂಗ್ರೆಸ್ ಹೀಗೆ ರಾಜಕೀಯದಲ್ಲಿ ಯಾವುದು ಶಾಶ್ವತವಲ್ಲ. 8 ಬಾರಿ ಶಾಸಕನಾಗಿರುವ ನಾನು, ದೇಶದ ಪ್ರಧಾನಿಗಳಾಗಿ ಮೂರು ಬಾರಿ ಆಯ್ಕೆಯಾಗಿದ್ದಾರೆ ಎನ್ನುವುದೆಲ್ಲಾ ರಾಜಕೀಯದಲ್ಲಿ ಕ್ಷಣಿಕ. ರಾಮನಗರ, ಮೈಸೂರು, ಮಂಡ್ಯದಲ್ಲಿ ನಾವು ಗೆದ್ದಿಲ್ಲವೇ. ಮೈಸೂರು ಭಾಗದಲ್ಲಿ 40 ಕ್ಕೂ ಹೆಚ್ಚು ಸ್ಥಾನ ಗೆದ್ದಿದ್ದೇವೆ. ಸೋತಿರುವ ಕ್ಷೇತ್ರದಲ್ಲಿ ಮುಂದೆ ಗೆಲ್ಲಲು ಪ್ರಯೋಗ ಪ್ರಾರಂಭ ಮಾಡಿದ್ದೇವೆ ಎಂದರು.

**ನೀವು ನನ್ನ ಸಹಪಾಠಿಗಳು ಎಂದ ಡಿಕೆ ಶಿವಕುಮಾರ್:** ನಿಮ್ಮ ಏರಿಯಾ, ಬೂತ್ ಮಟ್ಟದಲ್ಲಿ ನೀವು ಪ್ರಬಲವಾಗಿ ಬೆಳೆಯಬೇಕು. ನೀವು ಮಾಡುವ ಕೆಲಸಗಳು ಶಾಶ್ವತವಾಗಿ ಉಳಿಯಬೇಕು. ಜನರ ಮನಸ್ಸನ್ನು ಗೆಲ್ಲಬೇಕು. ನಿಮ್ಮನ್ನು ನಾಯಕರನ್ನಾಗಿ ರೂಪಿಸಬೇಕು ಎನ್ನುವುದು ನನ್ನ ಗುರಿ, ಹಿಂಬಾಲಕರನ್ನಾಗಿ ಮಾಡುವುದಲ್ಲ. ನೀವು ನನ್ನ ಸಹಪಾಠಿಗಳು ಎಂದರು.

ಯುವ ಹಾಗೂ ವಿದ್ಯಾರ್ಥಿ ಕಾಂಗ್ರೆಸ್ ಮೂಲಕ ಬೆಳೆದವರು ಪಕ್ಷವನ್ನು ಎಂದಿಗೂ ಬಿಟ್ಟು ಹೋಗುವುದಿಲ್ಲ. ಬೂತ್, ಪಂಚಾಯತಿ, ವಾರ್ಡ್ ಮಟ್ಟದಲ್ಲಿ ನಿಮಗೆ ನೀಡಿದ ಜವಾಬ್ದಾರಿ ನಿಭಾಯಿಸಿದಾಗ, ಪಕ್ಷಕ್ಕೆ ಹೆಚ್ಚಿನ ಮತಗಳನ್ನು ತಂದುಕೊಟ್ಟಾಗ ಮಾತ್ರ ನೀವು ನಾಯಕರಾಗಿ ಹೊರಹೊಮ್ಮಬಹುದು. ಆಗ ಶಾಸಕರು ನಿಮ್ಮನ್ನು ಹುಡುಕಿಕೊಂಡು ಬಂದು ಅಧಿಕಾರ ನೀಡುವ ಕೆಲಸ ಮಾಡುತ್ತಾರೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,868/Gram24ct ₹9,045/Gram22ct | ಬೆಳ್ಳಿ: ₹99.00/Gram

## ರಿಜಿಸ್ಟ್ರಾರ್ ಹುದ್ದೆ ಕೊಡಿಸುವುದಾಗಿ ಪ್ರೊಫೆಸರ್‌ಗೆ 35 ಲಕ್ಷ ವಂಚನೆ

### ಪೊಲೀಸ್ ಠಾಣೆಯಲ್ಲಿ ವಂಚನೆ, ನಂಬಿಕೆ ದ್ರೋಹ, ಜೀವ ಬೆದರಿಕೆ ಸೇರಿ ವಿವಿಧ ಆರೋಪದಡಿ ಎಫ್‌ಐಆರ್ ದಾಖಲೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ವಿಶ್ವವಿದ್ಯಾಲಯದ ಹೆಸರಲ್ಲಿ ಮತ್ತೊಂದು ವಂಚನೆ ಪ್ರಕರಣ ದಾಖಲಾಗಿದ್ದು, ವಿವಿಯ ರಿಜಿಸ್ಟ್ರಾರ್ ಹುದ್ದೆ ಕೊಡಿಸುವುದಾಗಿ ಪ್ರೊಫೆಸರ್ ಒಬ್ಬರಿಗೆ 35 ಲಕ್ಷ ರೂ. ಪಡೆದು ವಂಚಿಸಿರುವ ಕುರಿತು ದೂರು ದಾಖಲಾಗಿದೆ.

ಮೂಲಗಳ ಪ್ರಕಾರ ನಿವೃತ್ತ ಪ್ರಾಧ್ಯಾಪಕ ಆರ್.ಕೆ.ಸೋಮಶೇಖರ್ (67) ಎಂಬುವವರಿಗೆ ವಂಚನೆ ಮಾಡಲಾಗಿದ್ದು, ಈ ಸಂಬಂಧ ಅವರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ದೂರಿನ ಮೇರೆಗೆ ಹೊರಮಾವು ನಂದನಂ ಲೇಔಟ್ ನಿವಾಸಿ ಬಿ.ಜಿ.ರವಿಕುಮಾರ್ ಎಂಬುವವರ ವಿರುದ್ಧ ಗೋವಿಂದರಾಜನಗರ ಪೊಲೀಸ್ ಠಾಣೆಯಲ್ಲಿ ವಂಚನೆ, ನಂಬಿಕೆ ದ್ರೋಹ, ಜೀವ ಬೆದರಿಕೆ ಸೇರಿ ವಿವಿಧ ಆರೋಪದಡಿ ಎಫ್‌ಐಆರ್ ದಾಖಲಿಸಲಾಗಿದೆ.

ದೂರುದಾರ ಆರ್.ಕೆ.ಸೋಮಶೇಖರ್ 1983ರಿಂದ ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಕ್ಯಾಂಪಸ್‌ನ ಪರಿಸರ ವಿಜ್ಞಾನ ವಿಭಾಗದಲ್ಲಿ ಪ್ರೊಫೆಸರ್ ಆಗಿ ಕೆಲಸ ಮಾಡುತ್ತಿದ್ದು, 2019 ರಲ್ಲಿ ನಿವೃತ್ತರಾಗಿದ್ದರು. ಈ ನಡುವೆ 2010ರಲ್ಲಿ ಸ್ನೇಹಿತರ ಮೂಲಕ ಆರೋಪಿ ಬಿ.ಜಿ.ರವಿಕುಮಾರ್ ಪರಿಚಯವಾಗಿ ಬಳಿಕ ಸ್ನೇಹಿತರಾಗಿದ್ದರು. 2015ರಲ್ಲಿ ರವಿಕುಮಾರ್ ತನಗೆ ಪ್ರಭಾವಿ ರಾಜಕಾರಣಿಗಳ ಪರಿಚಯವಿದೆ.



ಉದಯವಾಹಿನಿ ಚಿತ್ರ

**ಕೆ.ಸೋಮಶೇಖರ್ (67) ಎಂಬುವವರಿಗೆ ವಂಚನೆ**

ಈಗಿನ ಸರ್ಕಾರದ ಹಲವರು ಪರಿಚಯರಿದ್ದಾರೆ. ನಿಮಗೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ರಿಜಿಸ್ಟ್ರಾರ್ ಹುದ್ದೆ ಕೊಡಿಸುತ್ತೇನೆ ಎಂದು ಹೇಳಿ ನಂಬಿಸಿದ್ದ.

ಬಳಿಕ ಅದಕ್ಕಾಗಿ 50 ಲಕ್ಷ ರೂ. ಖರ್ಚಾಗಲಿದೆ ಎಂದು ರವಿಕುಮಾರ್ ಹೇಳಿದ್ದಾರೆ. ಬಳಿಕ ಇಬ್ಬರೂ ಮಾತುಕತೆ ನಡೆಸಿ 35 ಲಕ್ಷ ರೂ.ಗೆ ತೀರ್ಮಾನಿಸಲಾಗಿತ್ತು. ಕೆಲಸ ಆಗದಿದ್ದಲ್ಲಿ ಹಣ ವಾಪಸ್ ಕೊಡುವುದಾಗಿಯೂ ರವಿಕುಮಾರ್ ಹೇಳಿದ್ದ ಎಂದು ಸೋಮಶೇಖರ್ ದೂರಿನಲ್ಲಿ ಆರೋಪಿಸಿದ್ದಾರೆ.

ಅದರಂತೆ ಸೋಮಶೇಖರ್ 2015ರ ಜುಲೈನಲ್ಲಿ ವಿವಿಧ ಹಂತಗಳಲ್ಲಿ ರವಿಕುಮಾರ್‌ಗೆ ನಗದು ರೂಪದಲ್ಲಿ ಒಟ್ಟು 35 ಲಕ್ಷ ರೂ. ನೀಡಿದ್ದಾರೆ. 6 ತಿಂಗಳೊಳಗೆ ಕೆಲಸ ಆಗಲಿದೆ ಎಂದು ರವಿಕುಮಾರ್ ಹೇಳಿದ್ದರು. ಈ ವಿಷಯವನ್ನು ಯಾರ ಬಳಿಯೂ ಹೇಳದಂತೆ ಸೂಚಿಸಿದ್ದರು. ಆರು ತಿಂಗಳ ಬಳಿಕ ವಿಚಾರಿಸಿದಾಗ ಇಲ್ಲದ ಸಬೂಬು ಹೇಳಿ ಆರೋಪಿ ರವಿಕುಮಾರ್ ದಿನ ದೂಡುತ್ತಿದ್ದ. ಅಷ್ಟರಲ್ಲಿ ತಾನು ಸೇವೆಯಿಂದ ನಿವೃತ್ತನಾಗಿದ್ದು, ತಮ್ಮ ಹಣ ವಾಪಸ್ ನೀಡುವಂತೆ ಕೇಳಿದ್ದೆ. ಒಂದು ವರ್ಷದ ಸಮಯ ಕೊಡಿ ಎಂದ ರವಿಕುಮಾರ್ ನಂತರವೂ ಹಣ ವಾಪಸ್ ನೀಡಿಲ್ಲ. 2024ರ ಡಿಸೆಂಬರ್‌ನಲ್ಲಿ ಕರೆ ಮಾಡಿ ಹಣ ವಾಪಸ್ ಕೇಳಿದ್ದಕ್ಕೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ ಎಂದು ಸೋಮಶೇಖರ್ ದೂರಿದ್ದಾರೆ.

> **ಈ ಮಧ್ಯೆ 2025ರ ಮಾ.9ರಂದು ವಿಜಯನಗರದ ಸರ್ವಿಸ್ ರಸ್ತೆಯಲ್ಲಿರುವ ಇಂದ್ರಪ್ರಸ್ಥ ಹೋಟೆಲ್‌ಗೆ ಕರೆಸಿ ಕೊಂಡಿದ್ದ ರವಿಕುಮಾರ್, ಕಾರಿನಲ್ಲಿ ಕೂರಿಸಿಕೊಂಡು ಚಾಕು ತೆಗೆದು ಕುತ್ತಿಗೆಗೆ ಹಿಡಿದು ಇನ್ನು ಮುಂದೆ ಹಣ ಕೇಳಿದರೆ ಕೊಲೆ ಮಾಡುವುದಾಗಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ಸೋಮಶೇಖರ್ ದೂರಿನಲ್ಲಿ ಆರೋಪಿಸಿದ್ದಾರೆ. ಇದೀಗ ಪ್ರಕರಣ ದಾಖಲಿಸಿಕೊಂಡಿರುವ ಗೋವಿಂದರಾಜನಗರ ಠಾಣೆ ಪೊಲೀಸ್ ತನಿಖೆ ನಡೆಸುತ್ತಿದ್ದಾರೆ.**

## ಶ್ರೀ ನರಸಿಂಹ ಜಯಂತಿ ಮತ್ತು ಶ್ರೀ ಶ್ಯಾಮಸುಂದರದಾಸರ ಆರಾಧನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶ್ರೀ ಶ್ರೀಪಾದರಾಜ ಮಠಾಧೀಶರಾದ ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸುಜಯೀಂದ್ರತೀರ್ಥ ಶ್ರೀಪಾದಂಗಳವರ ಅನುಗ್ರಹದೊಂದಿಗೆ ದಾಸವಾಣಿ ಕರ್ನಾಟಕ ಸಂಸ್ಥೆ ವತಿಯಿಂದ ಮೇ 10 ರಂದು ರಾಘವೇಂದ್ರ ಕಾಲೋನಿಯ ಶ್ರೀ ಶ್ರೀಪಾದರಾಜರ ಮಠದಲ್ಲಿ ಶ್ರೀ ಶ್ಯಾಮಸುಂದರದಾಸರ ಆರಾಧನೆ, ನರಸಿಂಹ ಜಯಂತಿಯನ್ನು ಆಚರಿಸಲಾಯಿತು. ದಾಸವಾಣಿ ಕರ್ನಾಟಕದ ಸಂಸ್ಥಾಪಕರಾದ ಶ್ರೀ ಜಯರಾಜ ಕುಲಕರ್ಣಿ ಮತ್ತು ಶ್ರೀ ಶ್ಯಾಮಸುಂದರದಾಸರ ಮರಿಮಗಳಾದ ಶ್ರೀಮತಿ ಮಾನಸ ಕುಲಕರ್ಣಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ದಾಸವಾಣಿ ಕರ್ನಾಟಕ ಮತ್ತು ಸ್ವರಾತ್ಮಿಕ ಸಂಗೀತ ವೃಂದದವರಿಂದ ಶ್ರೀ ಶ್ಯಾಮಸುಂದರದಾಸರ ಅನೇಕ ಕೃತಿಗಳ ಗಾಯನ ಸೇವೆ ನಡೆಯಿತು. ಇದೇ ಸಂದರ್ಭದಲ್ಲಿ ಮೈತ್ರೇಯಿ ಕನ್ನಡ ಮಹಿಳಾ ಹರಿದಾಸ ಟ್ರಸ್ಟ್‌ನ ಅಧ್ಯಕ್ಷರಾದ ಡಾ|| ಸುಧಾ ದೇಶಪಾಂಡೆ ಮತ್ತು ಪ್ರಧಾನ ಕಾರ್ಯದರ್ಶಿ ಡಾ. ವೃಂದಾ ಸಂಗಮ್ ಅವರು ಶ್ರೀ ಶ್ಯಾಮಸುಂದರ ದಾಸರ ಜೀವನ ಚರಿತ್ರೆ ಮತ್ತು ಅವರ ಕೃತಿಗಳ ವಿಶೇಷತೆ ಬಗ್ಗೆ ತಿಳಿಸಿಕೊಟ್ಟರು. ಶ್ರೀ ಶ್ಯಾಮಸುಂದರದಾಸರು ವರಕವಿ ದ. ರಾ. ಬೇಂದ್ರೆ ಅವರಿಗೆ ಮಾನವಿಯಲ್ಲಿ ಸಾಹಿತ್ಯ ಸಮ್ಮೇಳನಕ್ಕೆ ಬರಲು ಅವರಿಗೆ ಬರೆದ ವಿಶೇಷ ಪತ್ರವನ್ನು ಸಂಸ್ಕೃತಿ ಚಿಂತಕರಾದ ಡಾ. ಗುರುರಾಜ್ ಪೊಶೆಟ್ಟಿಹಳ್ಳಿ ಅವರು ಓದಿದರು. ಕಾರ್ಯಕ್ರಮದಲ್ಲಿ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಬ್ಯಾಂಕ್ ನೌಕರರಿಗೆ ಹಲವು ಸವಾಲು: ಸಿ.ಎಚ್.ವೆಂಕಟಾಚಲಂ

• ಉದಯವಾಹಿನಿ, ಬೆಂಗಳೂರು

ಬ್ಯಾಂಕ್ ನೌಕರರ ಮುಂದೆ ಸಾಕಷ್ಟು ಸವಾಲುಗಳಿವೆ. ಬದುಕಿಗಾಗಿ ಹೋರಾಡಬೇಕು ಮತ್ತು ಹೋರಾಡಲು ಬದುಕಬೇಕು ಎಂದು ಅಖಿಲ ಭಾರತ ಬ್ಯಾಂಕ್ ನೌಕರರ ಸಂಘದ(ಎಐಬಿಇಎ) ಪ್ರಧಾನ ಕಾರ್ಯದರ್ಶಿ ಸಿ.ಎಚ್.ವೆಂಕಟಾಚಲಂ ಕರೆ ನೀಡಿದರು.ಸೆಂಟ್ರಲ್ ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಕೆನರಾ ಬ್ಯಾಂಕ್ ನೌಕರರ ಸಂಘದ (ಸಿಬಿಇಯು) ಅಮೃತ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದರು. ಆಡಳಿತ ಮಂಡಳಿ, ಸರ್ಕಾರದ ನೀತಿಗಳ ವಿರುದ್ಧ ಹಿಂದಿನಿಂದಲೂ ಹೋರಾಟ ನಡೆಸಿಕೊಂಡು ಬಂದಿದ್ದೇವೆ. ಮುಂದೆಯೂ ಹೋರಾಟ ನಡೆಸ ಬೇಕಾಗಿದೆ. ವಿದೇಶಿ ಬಂಡವಾಳ ಹೂಡಿಕೆಯನ್ನು ವಿರೋಧಿಸಿದ್ದೇವೆ. ದೇಶದ ಹಿತ ಕಾಯುವುದು ಸಂಘಟನೆಯ ಧ್ಯೇಯವಾಗಿದೆ ಎಂದು ಸ್ಪಷ್ಟಪಡಿಸಿದರು. 1951ರಲ್ಲಿ ಕೆನರಾ ಬ್ಯಾಂಕ್ ನೌಕರರ ಸಂಘ ಪ್ರಾರಂಭವಾಯಿತು. ಇದಕ್ಕೂ ಮುಂಚೆ ಬ್ಯಾಂಕಿಂಗ್ ಕ್ಷೇತ್ರದಲ್ಲಿ ನೌಕರರ ಸ್ಥಿತಿ ಶೋಚನೀಯವಾಗಿತ್ತು. ಇದನ್ನು ವಿರೋಧಿಸಿದರೆ, ಪ್ರತಿಭಟನೆ ಮಾಡಿದರೆ ಅಂತಹವರನ್ನು ಸೇವೆಯಿಂದ ವಜಾ ಮಾಡಲಾಗುತ್ತಿತ್ತು. ಇದನ್ನೆಲ್ಲಾ ಮನಗಂಡು ಸಂಘ ಸ್ಥಾಪಿಸಿ ನೌಕರರ ಕ್ಷೇಮಾಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದು ವಿವರಿಸಿದರು. ಕೆನರಾ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಸತ್ಯನಾರಾಯಣ ರಾಜು ಮಾತನಾಡಿ, ರೂ. 17 ಸಾವಿರ ಕೋಟಿ ಠೇವಣಿ ಸಂಗ್ರಹಿಸಿದ್ದು, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಚರಿತ್ರೆ ನಿರ್ಮಾಣ ವಾಗಿದೆ ಎಂದರು.

## ಒಳಚರಂಡಿ ಮುಗಿದ ಮೇಲೆ ಕಾವೇರಿ ಸಂಪರ್ಕ: ಎಸ್.ಟಿ.ಸೋಮಶೇಖರ್

• ಉದಯವಾಹಿನಿ, ರಾಜರಾಜೇಶ್ವರಿನಗರ

ಸೂಲಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸವೇಶ್ವರ ನಗರದಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡ ನಂತರ ಕಾವೇರಿ ನೀರಿನ ಸಂಪರ್ಕ ಕಲ್ಪಿಸಲಾಗುವುದು ಎಂದು ಶಾಸಕ ಎಸ್.ಟಿ.ಸೋಮಶೇಖರ್ ತಿಳಿಸಿದರು. ಬಸವೇಶ್ವರ ನಗರದಲ್ಲಿ ಒಳಚರಂಡಿ. ಸಿ.ಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, 'ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ (ಬಿಡಿಎ) ಕೆಂಪೇಗೌಡ ಬಡಾವಣೆಗೆ ಹೊಂದಿಕೊಂಡಿರುವ 14 ಗ್ರಾಮಗಳ ವ್ಯಾಪ್ತಿಯಲ್ಲಿ ರೂ. 55 ಕೋಟಿ ವೆಚ್ಚದಲ್ಲಿ ಒಳಚರಂಡಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು. ಗ್ರೇಟರ್ ಬೆಂಗಳೂರು ವಿಧೇಯಕಕ್ಕೆ ರಾಜ್ಯಪಾಲರು ಸಹಿ ಹಾಕಿದರೆ, ಇದಕ್ಕೆ ಹಲವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಇದು ಸರಿಯಲ್ಲ. ಗ್ರೇಟರ್ ಬೆಂಗಳೂರು ಮಾಡುವುದರಿಂದ ಬೆಂಗಳೂರು ಪ್ರಗತಿ ಕಾಣಲಿದೆ ಎಂದರು. ಸೂಲಿಕೆರೆ ಗ್ರಾಮ ಪಾಂಚಾಯಿತಿ ಸದಸ್ಯ ಎಸ್.ಆರ್.ಮೋಹನ್ ಕುಮಾರ್, ಕಾಂಗ್ರೆಸ್ ಮುಖಂಡ ಕೆ.ಎಚ್.ತಿಮ್ಮೇಗೌಡ, ಗ್ರಾಮ ಪಂಚಾಯಿತಿ ಅಧ್ಯಕ್ಷ ಚಿಕ್ಕಣ್ಣ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೀರಭದ್ರಸ್ವಾಮಿ, ಕಾರ್ಯದರ್ಶಿ ಉಮಾದೇವಿ, ಬಯಲು ಬಸವೇಶ್ವರ ಹಿರಿಯ ನಾಗರಿಕ ವೇದಿಕೆಯ ಮುಖಂಡರು ಕಾರ್ಯಕ್ರಮದಲ್ಲಿ ಹಾಜರಿದ್ದರು.

## ಅರ್ಜಿ ಸಲ್ಲಿಸಲು ಮೇ 13ರವರೆಗೆ ದಿನಾಂಕ ವಿಸ್ತರಣೆ: ಕೆಇಎ

• ಉದಯವಾಹಿನಿ, ಬೆಂಗಳೂರು

ಡಿಸಿಇಟಿ-25ಗೆ ಅರ್ಜಿ ಸಲ್ಲಿಸಲು ಇದ್ದ ಕೊನೆ ದಿನಾಂಕವನ್ನು ಮೇ 13ರವರೆಗೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ. ಅಂದು ಬೆಳಿಗ್ಗೆ 11ರವರೆಗೆ ಅರ್ಜಿ ಸಲ್ಲಿಸಿ, ಅಂದೇ ಸಂಜೆ 6 ಗಂಟೆ ಒಳಗೆ ಶುಲ್ಕ ಪಾವತಿಸಬೇಕು ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಡಿಪ್ಲೊಮಾ ಮಾಡಿದವರಿಗೆ ಎಂಜಿನಿಯರಿಂಗ್ ಕೋರ್ಸ್‌ಗೆ 3ನೇ ಸೆಮಿಸ್ಟರ್ ಅಥವಾ ಎರಡನೇ ವರ್ಷಕ್ಕೆ ನೇರ ಪ್ರವೇಶ ನೀಡಲು ಡಿಸಿಇಟಿ ನಡೆಸಲಾಗುತ್ತದೆ ಎಂದು ಅವರು ವಿವರಿಸಿದ್ದಾರೆ.

## ಚಕ್ರವರ್ತಿ ಸೂಲಿಬೆಲೆ ವಿರುದ್ಧ ಕಾಂಗ್ರೆಸ್ ದೂರು

• ಉದಯವಾಹಿನಿ, ಬೆಂಗಳೂರು

ಯುವ ಬ್ರಿಗೇಡ್‌ನ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಅವರು ಭಾರತೀಯ ಸೈನಿಕರ ಆತ್ಮಸ್ಥೈರ್ಯ ಕುಗ್ಗಿಸುವಂತಹ ಹೇಳಿಕೆ ನೀಡುತ್ತಿದ್ದು, ಕಾಂಗ್ರೆಸ್ ಪಕ್ಷದ ವಿರುದ್ಧ ಅಪ ಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್ ಅವರು ಹೈಗ್ರೌಂಡ್ಸ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪಾಕಿಸ್ತಾನದ ಉಗ್ರರ ಅಡಗು ತಾಣಗಳನ್ನು ಭಾರತೀಯ ಸೇನೆ ಧ್ವಂಸ ಮಾಡಿದೆ. ಇಂತಹ ಸಂದರ್ಭದಲ್ಲಿ ರಾಜಕೀಯ ಲಾಭಕ್ಕಾಗಿ ಪ್ರಚಾರ ಪಡೆಯುವ ಸೂಲಿಬೆಲೆ ಚಕ್ರವರ್ತ,ಭಾರತದ ಸೈನಿಕರ ಆತ್ಮಸ್ಥೈರ್ಯ ಕುಗ್ಗಿಸುವಂತಹ ಹೇಳಿಕೆ ನೀಡಿದ್ದಾರೆ.

ಅವರ ವಿರುದ್ಧ ಕೂಡಲೇ ಕಾನೂನಾತ್ಮಕ ಕ್ರಮ ಕೈಗೊಳ್ಳಬೇಕು, ಕೂಡಲೇ ಬಂಧಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಚಕ್ರವರ್ತಿ ಸೂಲಿಬೆಲೆ ಪ್ರತಿ ಬಾರಿಯೂ ಸಹ ಹಿಂದೂ ಮುಸ್ಲಿಂ ಹಾಗೂ ಭಾರತ- ಪಾಕಿಸ್ತಾನ ಹೆಸರಿನಲ್ಲಿ ತನ್ನ ಪ್ರಚಾರವನ್ನು ಗಿಟ್ಟಿಸಿಕೊಳ್ಳಲು ಸುಳ್ಳಿನ ಮಾಹಿತಿಯನ್ನು ಹರಿಬಿಡುತ್ತಾರೆ. ಸುಳ್ಳಿನ ಪ್ರಚಾರ ಮಾಡಿ ಸತ್ಯದ ರೀತಿ ಬಿಂಬಿಸುವುದು ಅವರ ಒಂದಂಶದ ಕಾರ್ಯಕ್ರಮವಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಪಾಕಿಸ್ತಾನ ಬೆಂಗಳೂರು ನಗರದ ಮೇಲೂ ದಾಳಿ ನಡೆಸುವ ಸಂಭವ ಇದೆ ಎಂಬ ಹೇಳಿಕೆ ನೀಡುವ ಮೂಲಕ ಜನರಲ್ಲಿ ಭಯದ ವಾತಾವರಣ ಸೃಷ್ಟಿಸುತ್ತಿದ್ದು, ಕಾಂಗ್ರೆಸ್ ಪಕ್ಷ ಪಾಕಿಸ್ತಾನವನ್ನು ಬೆಂಬಲಿಸುತ್ತಿದೆ ಎಂಬ ಆರೋಪ ಹಾಗೂ ಆಧಾರ ರಹಿತ ಹೇಳಿಕೆ ನೀಡಿ ಜನರಿಗೆ ತಪ್ಪು ಸಂದೇಶ ರವಾನಿಸಿರುವ ಹಿನ್ನೆಲೆಯಲ್ಲಿ ಕೂಡಲೇ ಚಕ್ರವರ್ತಿ ಸೂಲಿಬೆಲೆ ಅವರನ್ನು ಬಂಧಿಸಿ ದೇಶದ್ರೋಹ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿಯಲ್ಲಿ ಕಡಿಮೆ ತೇರ್ಗಡೆ ದರ ನಿಭಾಯಿಸಲು ಒ ಮಿಷನ್ ನೋಡ್ರಾಪೌಟ್ ಉಪಕ್ರಮ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿಯಲ್ಲಿ ಅನುತ್ತೀರ್ಣ ಶೇಕಡಾವಾರು ಪ್ರಮಾಣವನ್ನು ನಿಭಾಯಿಸಲು ಆಕ್ಟಿವ್ ಬೆಂಗಳೂರು ಫೌಂಡೇಶನ್ ಮಿಷನ್ ನೋಡ್ರಾಪೌಟ್' ಉಪಕ್ರಮವನ್ನು ಪ್ರಾರಂಭಿಸಿದೆ. 2 ಬಿ ವರ್ಗದಂತಹ ಹಿಂದುಳಿದ ಹಿನ್ನೆಲೆಯ ವಿದ್ಯಾರ್ಥಿಗಳು ಶೇ. 33.86 ರ ವೈಫಲ್ಯ ದರದೊಂದಿಗೆ ಕಡಿಮೆ ಉತ್ತೀರ್ಣ ಶೇಕಡಾವಾರುಗಳನ್ನು ದಾಖಲಿಸಿದ್ದಾರೆ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಲ್ಲಿ 57.27 ಉತ್ತೀರ್ಣ ಪ್ರಮಾಣ ಮತ್ತು ಒಟ್ಟಾರೆಯಾಗಿ ಶೇಕಡಾ 58.4 ಉತ್ತೀರ್ಣ ಪ್ರಮಾಣ ಹೊಂದಿದ್ದಾರೆ.

ಮಿಷನ್ ನೋಡ್ರಾಪೌಟ್ ಒಂದು ವಾಣಿಜ್ಯೇತರ ಅಭಿಯಾನವಾಗಿದ್ದು, ಮೇ 26 ರಿಂದ ಪ್ರಾರಂಭವಾಗುವ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳನ್ನು ಬೆಂಬಲಿಸುವ ಗುರಿಯನ್ನು ಹೊಂದಿದೆ. ಪ್ರಸ್ತುತ, ಬೆಂಗಳೂರಿನಾದ್ಯಂತ 22 ತರಬೇತಿ ಕೇಂದ್ರಗಳು ಈ ಉಪಕ್ರಮದಲ್ಲಿ ಭಾಗವಹಿಸುತ್ತಿದ್ದು, ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ತಲುಪುತ್ತಿವೆ, ವಿಶೇಷವಾಗಿ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳು, ನಗರ ಕೊಳೆಗೇರಿಗಳು, ಸರ್ಕಾರಿ ಶಾಲೆಗಳು ಮತ್ತು ಸಾಮಾಜಿಕ-ಆರ್ಥಿಕ ಸವಾಲುಗಳನ್ನು ಎದುರಿಸುತ್ತಿರುವವರು.

ಶಿಕ್ಷಕರು ಮತ್ತು ಶಾಲಾ ಆಡಳಿತಾಧಿಕಾರಿಗಳ ಸಹಾಯದಿಂದ ನಡೆಸಲಾಗುವ ದೈನಂದಿನ ತರಗತಿಗಳು ಕನ್ನಡ, ವಿಜ್ಞಾನ ಮತ್ತು ಗಣಿತದಂತಹ ವಿಷಯಗಳ ಮೇಲೆ ಕೇಂದ್ರೀಕರಿಸುತ್ತವೆ.


ಉದಯವಾಹಿನಿ ಚಿತ್ರ

> **ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ವಿದ್ಯಾರ್ಥಿಗಳಿಗಾಗಿ ನಾವು ಈ ಉಪಕ್ರಮವನ್ನು ಪ್ರಾರಂಭಿಸಿದ್ದೇವೆ, ಇಂಥವರು ಪರೀಕ್ಷೆಗಳಲ್ಲಿ ಅನುತ್ತೀರ್ಣರಾದರೆ ಶಿಕ್ಷಣ ಸ್ಥಗಿತಗೊಳ್ಳಬಹುದು ಎಂದು ಎಬಿಎಫ್‌ನ ಸ್ಥಾಪಕ ಸದಸ್ಯ ಸೈಯದ್ ತೌಸಿಫ್ ಮಜೂದ್ ಹೇಳುತ್ತಾರೆ. ಹೆಚ್ಚಿನ ಶಾಲೆಗಳು ಈ ಉಪಕ್ರಮಕ್ಕೆ ಸೇರಬೇಕೆಂದು ನಾವು ಒತ್ತಾಯಿಸುತ್ತೇವೆ, ಇಂತಹ ಕ್ರಮಗಳು ಮಕ್ಕಳ ಭವಿಷ್ಯವನ್ನು ಸುರಕ್ಷಿತಗೊಳಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.**

## ಬಿಡಿಎ ತೆರಿಗೆ ಬರೆ: ಆಸ್ತಿ ಮಾಲೀಕರಿಗೆ ಹೊರೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ತನ್ನ ವ್ಯಾಪ್ತಿಯ ಸ್ವತ್ತುಗಳ ಮೇಲಿನ ತೆರಿಗೆಯನ್ನು ಶೇಕಡಾ 9 ರಿಂದ 50ರಷ್ಟು ಹೆಚ್ಚಳ ಮಾಡಿರುವುದನ್ನು ಆಸ್ತಿ ಮಾಲೀಕರು ತೀವ್ರವಾಗಿ ವಿರೋಧಿಸಿದ್ದಾರೆ.

ಬಿಡಿಎ ಅಭಿವೃದ್ಧಿಪಡಿಸಿರುವ ನಾಡಪ್ರಭು ಕೆಂಪೇಗೌಡ, ಅಂಜನಾಪುರ, ವಿಶ್ವೇಶ್ವರಯ್ಯ, ಅರ್ಕಾವತಿ, ಬನಶಂಕರಿ ಸೇರಿ 9 ಬಡಾವಣೆಗಳು, ಪ್ರಾಧಿಕಾರ ಅನುಮೋದಿತ ಬಡಾವಣೆ, ಹಂಚಿಕೆ ಮಾಡಿರುವ ಅಪಾರ್ಟ್‌ಮೆಂಟ್ ವಸತಿಗಳೂ ಸೇರಿದಂತೆ ಸುಮಾರು 1.22 ಲಕ್ಷಕ್ಕೂ ಹೆಚ್ಚು ಜನರಿಗೆ ತೆರಿಗೆ ಏರಿಕೆಯ ಬಿಸಿ ತಟ್ಟಿದೆ. ಅದರಲ್ಲೂ ಕೆಂಪೇಗೌಡ ಬಡಾವಣೆಗೆ ಶೇ 10 ರಿಂದ 50ರಷ್ಟು ಹೆಚ್ಚಳವಾಗಿದೆ.

ಮೂಲ ಸೌಕರ್ಯ ಕಲ್ಪಿಸದೇ ತೆರಿಗೆ ಹೆಚ್ಚಳದ ಕ್ರಮಕ್ಕೆ ವಿವಿಧ ಬಡಾವಣೆಗಳ ನಿವಾಸಿಗಳ ಸಂಘಗಳು ವಿರೋಧ ವ್ಯಕ್ತಪಡಿಸಿವೆ. ಆಸ್ತಿಗಳ ಮೇಲಿನ ತೆರಿಗೆ ಪರಿಷ್ಕರಣೆ ಅವೈಜ್ಞಾನಿಕವಾಗಿದ್ದು, ಕೂಡಲೇ ತೆರಿಗೆ ಹೆಚ್ಚಳ ವಾಪಸ್ ಪಡೆಯುವಂತೆ ಪ್ರಾಧಿಕಾರಕ್ಕೆ ಮನವಿ ಮಾಡಿದ್ದಾರೆ. ನಾಡಪ್ರಭು ಕೆಂಪೇಗೌಡ ಬಡಾವಣೆ (ಎನ್‌ಕೆಪಿಎಲ್) ಮುಕ್ತ ವೇದಿಕೆಯ ಜಂಟಿ ಕಾರ್ಯದರ್ಶಿ ಸೂರ್ಯಕಿರಣ್, ಎನ್‌ಕೆಪಿಎಲ್ ಬಡಾವಣೆಗೆ ಶೇ 10ರಿಂದ 50ರಷ್ಟು ಹೆಚ್ಚಳವಾಗಿದೆ. ಎಂಟು ವರ್ಷದಿಂದ ತೆರಿಗೆ ಪಾವತಿಸುತ್ತಿದ್ದೇವೆ. ಗುತ್ತಿಗೆ ಆಧಾರದ ಮೇಲೆ ನಿವೇಶನ ಹಂಚಿಕೆ ಮಾಡಲಾಗಿದೆ. ಹತ್ತು ವರ್ಷದವರೆಗೆ ನಿವೇಶನ ಮಾರಾಟ ಮಾಡುವಂತಿಲ್ಲ.




ಬಡಾವಣೆಗೆ ಪೂರ್ಣ ಅಭಿವೃದ್ಧಿಯಾಗಿಲ್ಲ. ಹೀಗಿರುವಾಗ ಆಸ್ತಿ ತೆರಿಗೆ ಪರಿಷ್ಕರಣೆ ಮಾಡುವುದು ಅವಶ್ಯಕತೆಯೇ ಇಲ್ಲ. ನಿಯಮದ ಪ್ರಕಾರ ಆಸ್ತಿ ತೆರಿಗೆ ಪರಿಷ್ಕರಣೆಗೂ ಮುನ್ನ ಅಧಿಸೂಚನೆ ಹೊರಡಿಸಿ, ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಬೇಕು. ಆದರೆ, ಇಲ್ಲಿ ನಿಯಮ ಪಾಲನೆ ಮಾಡಿಲ್ಲ. ಮೂಲ ಸೌಕರ್ಯ ಇಲ್ಲದೇ ಮನೆ ಕಟ್ಟಲು ಪರದಾಡುತ್ತಿದ್ದೇವೆ' ಎಂದು ಬೇಸರ ವ್ಯಕ್ತಪಡಿಸಿದರು. 'ತೆರಿಗೆ ಜತೆ ಸೆಸ್ ವಿಧಿಸುತ್ತಿರುವುದು ಅವೈಜ್ಞಾನಿಕ. ಯಾವ ಕಾರಣಕ್ಕೆ ಸೆಸ್ ಸಂಗ್ರಹ ಮಾಡಲಾಗುತ್ತಿದೆ ಎಂಬುದರ ಬಗ್ಗೆ ತಿಳಿಸಿಲ್ಲ. ಆಸ್ತಿ ತೆರಿಗೆ ಪರಿಷ್ಕರಣೆ ರದ್ದುಗೊಳಿಸುವಂತೆ ಮನವಿ ಮಾಡಲಾಗಿದೆ' ಎಂದು ತಿಳಿಸಿದರು.

## ವಿಧಾನಸೌಧದ ಮುಂದಿರುವ ಟ್ಯಾಂಕರ್ ಪರಿಶೀಲಿಸಿ

• ಉದಯವಾಹಿನಿ, ಬೆಂಗಳೂರು

ಮನೆ ಬಾಗಿಲಿಗೆ ಶುದ್ಧ ನೀರನ್ನು ತಲುಪಿಸುವ ಹೆಸರಿನಲ್ಲಿ ಬೆಂಗಳೂರು ಜಲಮಂಡಳಿ ಆರಂಭಿಸಿರುವ ಸಂಚಾರಿ ಕಾವೇರಿ ಕಾರ್ಯಕ್ರಮದಡಿ ತುಕ್ಕು ಹಿಡಿದ ಟ್ಯಾಂಕರ್‌ಗಳಿಗೆ ಬಣ್ಣ ಬಳಿದಿದ್ದು ಅಶುದ್ಧ ನೀರು ಪೂರೈಕೆಯ ಭೀತಿ ಮೂಡಿದೆ,'' ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ.

ಸಂಚಾರಿ ಕಾವೇರಿ ಕಾರ್ಯಕ್ರಮದಡಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ವಿಧಾನಸೌಧದ ಮೆಟ್ಟಿಲುಗಳ ಮುಂದೆ ಶುಕ್ರವಾರ 250 ಟ್ಯಾಂಕರ್ ನೀರು ಸೇವೆಗೆ ಚಾಲನೆ ನೀಡಿದ್ದು, ಆಯ್ದ ಟ್ಯಾಂಕರ್‌ಗಳನ್ನು ಎಂಎಲ್ಸಿ ಕೇಶವ ಪ್ರಸಾದ್ ಅವರೊಂದಿಗೆ ಪರಿಶೀಲಿಸಿರುವ ವಿಡಿಯೊವನ್ನು ಎಕ್ಸ್‌ನಲ್ಲಿ ಹಂಚಿಕೊಂಡಿರುವ ಛಲವಾದಿ ನಾರಾಯಣ-ಸ್ವಾಮಿ ಅವರು ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಕಿಡಿ ಕಾರಿದ್ದಾರೆ.

**ತುಕ್ಕು ಹಿಡಿದಿರುವ ಟ್ಯಾಂಕರ್‌ನಲ್ಲಿ ನೀರು ಪೂರೈಕೆ:** ಜನಪರ ಯೋಜನೆ ಎಂಬ ಮಂತ್ರ ಜಪಿಸುತ್ತಲೇ, ಸರಕಾರ ನಿಜವಾದ ಜನಪರತೆಯಿಂದ ದೂರವಾಗಿ, ಟ್ಯಾಂಕರ್‌ಗಳ ಮೇಲ್ಮೈ ಬಣ್ಣವನ್ನು ಬದಲಾಯಿಸುವ ಮೂಲಕ ಜನರ ಆರೋಗ್ಯಕ್ಕೆ ಬಣ್ಣದ ಲೇಪನ ಹಾಕುತ್ತಿದೆ. ಈ ಯೋಜನೆಯ ರೂವಾರಿಯಾದ ಬೆಂಗಳೂರು ಉಸ್ತುವಾರಿ ಸಚಿವರ ಚಿಂತನೆಗೂ ಈಗಾಗಲೇ ತುಕ್ಕು ಹಿಡಿದಿದೆ ಎಂಬುದು ಸ್ಪಷ್ಟ, ಎಂದು ಕುಟುಕಿದ್ದಾರೆ. ಡಿಸಿಎಂ ಅವರು ಮನೆ ಬಾಗಿಲಿಗೆ ಶುದ್ಧ ನೀರನ್ನು ತಲುಪಿಸುವ ಯೋಜನೆ' ಎಂದು ಹೇಳುವ ಬದಲಿಗೆ 'ತುಕ್ಕು ಹಿಡಿದ ಟ್ಯಾಂಕರ್‌ಗಳಲ್ಲಿ ಮನೆ ಬಾಗಿಲಿಗೆ ಅಶುದ್ಧ ನೀರನ್ನು ತಲುಪಿಸುವ ಯೋಜನೆ ಎಂದು ಹೇಳುವುದು ಸೂಕ್ತ. ಸುಸಜ್ಜಿತ ಟ್ಯಾಂಕರ್‌ಗಳಲ್ಲಿ ಶುದ್ಧ ನೀರು ಪೂರೈಸಬೇಕಾದವರು ಅಶುದ್ಧವಾದ ಟ್ಯಾಂಕರ್‌ಗಳಲ್ಲೂ ಇವರ ಜಾಹೀರಾತನ್ನು ಶುದ್ಧವಾಗಿ ಹಾಕಿಕೊಂಡಿರುವುದು ಹಾಸ್ಯಾಸ್ಪದ, ಎಂದು ವ್ಯಂಗ್ಯವಾಡಿದ್ದಾರೆ.

ತುಕ್ಕು ಹಿಡಿದ ಟ್ಯಾಂಕರ್‌ಗಳಿಗೆ ಬಣ್ಣ ಬಳಿದು ಅವುಗಳಲ್ಲಿ ಬಿ.ಐ.ಎಸ್. ಪ್ರಮಾಣಿತ ನೀರು ಪೂರೈಸಲಾಗುತ್ತಿದೆ ಎಂಬ ನಾಟಕವನ್ನು ಜನರು ನಂಬುವುದಿಲ್ಲ. ವಿಧಾನಸೌಧದ ಆವರಣದಲ್ಲೇ ಇಂತಹ ತುಕ್ಕು ಹಿಡಿದ ಟ್ಯಾಂಕರ್‌ಗಳನ್ನು ಪ್ರದರ್ಶಿಸಿದ್ದು, ಕಾಂಗ್ರೆಸ್ ಸರಕಾರದ ಜನವಿರೋಧಿ ಧೋರಣೆಯನ್ನು ಸ್ಪಷ್ಟಪಡಿಸುತ್ತದೆ, ಎಂದಿದ್ದಾರೆ.


ಉದಯವಾಹಿನಿ ಚಿತ್ರ

> **ಕಾವೇರಿ ಆನ್ ವೀಲ್ಸ್ ಯೋಜನೆಯನ್ನು ಅನುಷ್ಠಾನ**
>
> **ಖಾಸಗಿ ಟ್ಯಾಂಕರ್ ಹಾವಳಿ ತಪ್ಪಿಸಿ, ರಾಜಧಾನಿಯ ನಾಗರಿಕರಿಗೆ ಶುದ್ಧ ಕಾವೇರಿ ನೀರು ಒದಗಿಸಲು ನಿರ್ಧರಿಸಿರುವ ಬೆಂಗಳೂರು ಜಲಮಂಡಳಿ, ಸಂಚಾರಿ ಕಾವೇರಿ ಕಾವೇರಿ ಆನ್ ವೀಲ್ಸ್ ಯೋಜನೆಯನ್ನು ಅನುಷ್ಠಾನಗೊಳಿಸಿತ್ತು. ಸಾರ್ವಜನಿಕರು ಈ ಯೋಜನೆಯಡಿ ಆನ್‌ಲೈನ್ ಮೂಲಕವೇ ಬುಕ್ಕಿಂಗ್ ಮಾಡಿದರೆ, ಬಿಐಎಸ್ ಪ್ರಮಾಣೀಕೃತ ಶುದ್ಧ ಕುಡಿಯುವ ನೀರನ್ನು ಟ್ಯಾಂಕರ್‌ಗಳ ಮೂಲಕವೇ ಮನೆ ಬಾಗಿಲಿಗೆ ಸರಬರಾಜು ಮಾಡಲಿದೆ. ಇನ್ನು ಈ ಸೇವೆ ಒದಗಿಸಲು ಇಚ್ಛಿಸುವ ಖಾಸಗಿ ಟ್ಯಾಂಟರ್‌ಗಳು ಮಂಡಳಿಯ ಸಂಚಾರಿ ಕಾವೇರಿ ಪ್ಲಾಟ್‌ಫಾರ್ಮ್‌ನಲ್ಲಿ ನೋಂದಣಿ ಮಾಡಿಕೊಳ್ಳಲು ಏಪ್ರಿಲ್ 10ರವರೆಗೆ ಅವಕಾಶ ನೀಡಿದೆ. ಬೇಸಿಗೆಯಲ್ಲಿ ಅಂತರ್ಜಲ ಕುಸಿತದಿಂದ ನೀರಿನ ಕೊರತೆ ಹೆಚ್ಚುತ್ತದೆ.**

## ಕೆಳ ಹಂತದ ಸರ್ಕಾರಿ ಸಿಬ್ಬಂದಿಗೆ ಕೆನೆಪದರ ವಿನಾಯಿತಿ

• ಉದಯವಾಹಿನಿ, ಬೆಂಗಳೂರು


ರಾಜ್ಯ ಸರ್ಕಾರದ ಕೆಳ ಹಂತದ ಹುದ್ದೆಗಳಲ್ಲಿರುವ ಅಭ್ಯರ್ಥಿಗಳಿಗೆ ಕೆನೆಪದರದಿಂದ ವಿನಾಯಿತಿ ನೀಡುವ ಸುತ್ತೋಲೆಯನ್ನು ಹೊರಡಿಸಲಾಗಿದೆ.

ಸಾಮಾಜಿಕ ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ಆಧರಿಸಿ ಹಿಂದುಳಿದ ವರ್ಗಗಳ ಆಯೋಗವು ತನ್ನ ಶಿಫಾರಸುಗಳಲ್ಲಿ ಒಬಿಸಿ ಗಳಿಗೆ ಕೆನೆಪದರವನ್ನು ಅನ್ವಯಿಸಲು ಶಿಫಾರಸು ಮಾಡಿತ್ತು, ಇದು ಕಳೆದ ಶುಕ್ರವಾರ ನಡೆದ ಸಚಿವ ಸಂಪುಟದ ಕಾರ್ಯಸೂಚಿಗಳಲ್ಲಿ ಒಂದು ವಿಷಯವಾಗಿತ್ತು. ಅಭ್ಯರ್ಥಿಗಳಿಗೆ ಕೆನೆಪದರದಿಂದ ವಿನಾಯಿತಿ ನೀಡುವ ಸುತ್ತೋಲೆಯನ್ನು ಸಚಿವ ಸಂಪುಟ ಸಭೆಗೆ ಒಂದು ದಿನ ಮೊದಲು ಅಂದರೆ ಹೊರಡಿಸಲಾಗಿದೆ. ಸಂವಿಧಾನದ ವಿಧಿ 15(4) ಮತ್ತು 16(4) ರ ಅಡಿಯಲ್ಲಿ ನೇರ ನೇಮಕಾತಿಗಾಗಿ, ವರ್ಗ 20, 2ಃ, 30, 3ಃ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು, ಕೆಳ ಹಂತದ ಹುದ್ದೆಗಳಲ್ಲಿ ನಿಗದಿತ-ನಿರ್ದಿಷ್ಟ ಅವಧಿಯ ಅನುಭವವನ್ನು ಹೊಂದಿದ್ದರೆ, ಅಂತಹ ಸಂದರ್ಭದಲ್ಲಿ ಅವರಿಗೆ ಕೆನೆಪದರ ನಿಯಮ ಅನ್ವಯಿಸುವುದಿಲ್ಲ ಎಂದು ಹಿಂದುಳಿದ ವರ್ಗಗಳ ಇಲಾಖೆ ಹೊರಡಿಸಿದ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಿದೆ.

ಆದ್ದರಿಂದ, ಈ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸೇವೆಯಲ್ಲಿ ವಿನಾಯಿತಿ ನೀಡಲು, ಸಂಬಂಧಿತ ದಾಖಲೆಗಳನ್ನು ಪರಿಶೀಲಿಸಿ, ಜಾತಿ ಪ್ರಮಾಣಪತ್ರಗಳನ್ನು ನೀಡಲು ಕ್ರಮ ಕೈಗೊಳ್ಳಿ ಎಂದು ತಹಶೀಲ್ದಾರ್‌ಗಳಿಗೆ ಸೂಚನೆ ನೀಡಿದೆ. ಈ ನಿರ್ಧಾರವು ಕೆಳ ಹಂತದ ಹುದ್ದೆಗಳಲ್ಲಿರುವ ಸರ್ಕಾರಿ ನೌಕರರ ಮಕ್ಕಳು ಶಿಕ್ಷಣ, ಉದ್ಯೋಗಕ್ಕಾಗಿ ಕೋಟಾ ಪ್ರಯೋಜನಗಳನ್ನು ಪಡೆಯಲು ಸಹಾಯ ಮಾಡುತ್ತದೆ.

ಹಿಂದೆ ಎಸ್‌ಸಿ/ಎಸ್‌ಟಿ, ವರ್ಗ ೧ ಅಭ್ಯರ್ಥಿಗಳಿಗೆ ಕೆನೆಪದರದ ವಿನಾಯಿತಿ ನೀಡಲಾಗಿತ್ತು, ಅದನ್ನು ಈಗ ಒಬಿಸಿಗಳಿಗೂ ವಿಸ್ತರಿಸಿದೆ. ಕರ್ನಾಟಕದಲ್ಲಿ ಇತರ ಹಿಂದುಳಿದ ವರ್ಗಗಳಿಗೆ ಕೆನೆಪದರದ ಸ್ಥಾನಮಾನವನ್ನು ನಿರ್ಧರಿಸಲು ಆದಾಯ ಮಿತಿ ವಾರ್ಷಿಕ 8 ಲಕ್ಷ ರೂಪಾಯಿಗಳಾಗಿದೆ.

ಒಬ್ಬ ವ್ಯಕ್ತಿಯ ವಾರ್ಷಿಕ ಆದಾಯವು ಈ ಮಿತಿಗಿಂತ ಹೆಚ್ಚಿದ್ದರೆ, ಅವರು ಉದ್ಯೋಗ ಅಥವಾ ಶಿಕ್ಷಣದಲ್ಲಿ ಒಬಿಸಿ ಮೀಸಲಾತಿಗೆ ಅರ್ಹರಲ್ಲ.



ಉದಯವಾಹಿನಿ ಚಿತ್ರ

**ರಾಜ್ಯ ಸರ್ಕಾರದಿಂದ ಸುತ್ತೋಲೆ**

## ತಂಬಾಕು ಮಾರಾಟಕ್ಕೆ ಪ್ರತ್ಯೇಕ ಟ್ರೇಡ್ ಲೈಸೆನ್ಸ್ ಜಾರಿಗೆ ಪ್ಲ್ಯಾನ್

• ಉದಯವಾಹಿನಿ, ಬೆಂಗಳೂರು

ಮಹಾನಗರದಲ್ಲಿ ಹೆಚ್ಚುತ್ತಿರುವ ಧೂಮಪಾನಕ್ಕೆ ಕಡಿವಾಣ ಹಾಕುವ ಸಲುವಾಗಿ ಬಿಬಿಎಂಪಿಯು, ತಂಬಾಕು ಮಾರಾಟಕ್ಕೆ ಪ್ರತ್ಯೇಕ ಟ್ರೇಡ್ ಲೈಸೆನ್ಸ್ ಪಡೆಯುವುದನ್ನು ಕಡ್ಡಾಯಗೊಳಿಸಲು ಮುಂದಾಗಿದೆ.

ಕಳೆದ ವರ್ಷವೇ ಈ ಕುರಿತ ನಿಯಮಗಳನ್ನು ಪ್ರಕಟಿಸಿದ್ದರೂ ಪಾಲಿಕೆಯ ಆನ್‌ಲೈನ್ ವ್ಯವಸ್ಥೆಯಲ್ಲಿ ಅದನ್ನು ಸೇರ್ಪಡೆ ಮಾಡುವುದು ವಿಳಂಬವಾಗಿತ್ತು. ಇದೀಗ ಎಲ್ಲ ರೀತಿಯ ಸಿದ್ಧತೆ ಮಾಡಿಕೊಂಡಿದ್ದು, ಉದ್ದಿಮೆ ಪರವಾನಗಿ ನಿಯಮ ಸದ್ಯದಲ್ಲೇ ಜಾರಿಗೆ ಬರಲಿದೆ. ಹೊಸ ಪದ್ಧತಿ ಜಾರಿ ಬಳಿಕ ಅಂಗಡಿ-ಮುಂಗಟ್ಟುಗಳಲ್ಲಿ ಬೀಡಿ, ಸಿಗರೇಟು, ಗುಟ್ಕಾ ಸೇರಿದಂತೆ ಯಾವುದೇ ತುಂಬಾಕು ಪದಾರ್ಥಗಳನ್ನು ಮಾರಾಟ ಮಾಡಬೇಕಾದರೂ ಸಾಮಾನ್ಯ ಟ್ರೇಡ್ ಲೈಸೆನ್ಸ್ ಜತೆಗೆ ತಂಬಾಕು ವ್ಯಾಪಾರ ಪರವಾನಗಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕಿದೆ. ಇಲ್ಲವಾದಲ್ಲಿ ದಂಡ ತೆರಬೇಕಾಗುತ್ತದೆ. ಪರವಾನಗಿ ಶುಲ್ಕವನ್ನು ಐದು ವರ್ಷಗಳಿಗೆ 500 ರೂ. ನಿಗದಿಪಡಿಸಲಾಗಿದೆ. ಒಂದು ವೇಳೆ ಲೈಸೆನ್ಸ್ ಇಲ್ಲದೆ ಬೀಡಿ, ಸಿಗರೇಟ್, ಗುಟ್ಕಾ ಮತ್ತಿತರ ತಂಬಾಕು ಪದಾರ್ಥಗಳನ್ನು ಮಾರಾಟ ಮಾಡಿದರೆ ಮೊದಲ ಬಾರಿಗೆ 5 ಸಾವಿರ ರೂ. ದಂಡ ವಿಧಿಸಲಾಗುತ್ತದೆ. ನಂತರದಲ್ಲಿ ಪ್ರತಿದಿನ 100 ರೂ.ಗಳಂತೆ ದಂಡ ವಿಧಿಸಲು ಬಿಬಿಎಂಪಿ ನಿರ್ಧರಿಸಿದೆ.

60 ಸಾವಿರಕ್ಕೂ ಅಧಿಕ ಅಂಗಡಿ-ಮುಂಗಟ್ಟು: ಅಂದಾಜಿನಂತೆ ಬೆಂಗಳೂರಿನಲ್ಲಿ 60 ಸಾವಿರಕ್ಕೂ ಅಧಿಕ ಅಂಗಡಿ-ಮುಂಗಟ್ಟುಗಳಿವೆ. ಈ ಪೈಕಿ ಅರ್ಧಕ್ಕೂ ಅಧಿಕ ಅಂಗಡಿಗಳಲ್ಲಿ ತಂಬಾಕು ಪದಾರ್ಥಗಳನ್ನು ಯಾವುದೇ ಎಗ್ಗಿಲ್ಲದೆ ಮಾರಾಟ ಮಾಡಲಾಗುತ್ತಿದೆ. ತಂಬಾಕು ಪದಾರ್ಥಗಳನ್ನು 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ, ಶಾಲಾ ಮಕ್ಕಳಿಗೆ ಮಾರಾಟ ಮಾಡುವಂತಿಲ್ಲ. ಸಿಗರೇಟು ಮಾರುವುದಾದರೆ ಇಡೀ ಪ್ಯಾಕೆಟ್ ಮಾರಾಟ ಮಾಡಬೇಕು.

ಬಿಡಿ ಸಿಗರೇಟ್ ಮಾರಾಟ ಮಾಡಬಾರದೆಂಬ ನಿಯಮಗಳಿದ್ದರೂ, ಯಾವುದೇ ವ್ಯಾಪಾರಿಗಳು ಪಾಲಿಸುತ್ತಿಲ್ಲ. ಜತೆಗೆ ತಂಬಾಕು ಮಾರಾಟ ಮಾಡುವ ಮಳಿಗೆಗಳ ಮುಂದೆ 'ಧೂಮಪಾನ ಆರೋಗ್ಯಕ್ಕೆ ಹಾನಿಕರ' ಎಂಬ ಬೋರ್ಡ್ ಅನ್ನು ಎಲ್ಲರಿಗೂ ಸ್ಪಷ್ಟವಾಗಿ ಕಾಣುವಂತೆ ಅಳವಡಿಸಬೇಕು. ಆದರೆ, ಆ ರೀತಿಯ ಫಲಕಗಳನ್ನು ಮೂಲೆಯೊಂದರಲ್ಲಿ ತೂಗು ಹಾಕಲಾಗಿರುತ್ತದೆ.


ಉದಯವಾಹಿನಿ ಚಿತ್ರ

## ಹಳದಿ ಮಾರ್ಗದಲ್ಲಿ ಮೆಟ್ರೋ ರೈಲು ಸಂಚಾರ, ಮೇ 15ಕ್ಕೆ ಬರಲಿದೆ 3ನೇ ರೈಲು!

### 15ರ ವೇಳೆಗೆ ಮೂರನೇ ಸೆಟ್ ರೈಲು ಸಿದ್ಧ, ಆರಂಭದಲ್ಲಿ ಮೂರು ರೈಲುಗಳೊಂದಿಗೆ ವಾಣಿಜ್ಯ ಸಂಚಾರ

• ಉದಯವಾಹಿನಿ, ಬೆಂಗಳೂರು

ಬಹು ನಿರೀಕ್ಷಿತ ಆರ್.ವಿ.ರಸ್ತೆ- ಬೊಮ್ಮಸಂದ್ರ ಹಳದಿ ಮಾರ್ಗ ಮೆಟ್ರೋ ಮಾರ್ಗ ಈ ವರ್ಷದ ಜೂನ್ ಅಂತ್ಯಕ್ಕೆ ವಾಣಿಜ್ಯ ಸಂಚಾರ ಆರಂಭಿಸುವುದು ಬಹುತೇಕ ಖಚಿತವಾಗಿದೆ.

ನಮ್ಮ ಮೆಟ್ರೊ ಹಳದಿ ಮಾರ್ಗದ ಕಾರ್ಯಾಚರಣೆಗೆ ಅಗತ್ಯ ಇರುವ ಮೂರನೇ ರೈಲು ಸೆಟ್(ಮೂರು ಬೋಗಿಗಳು) ಮೇ 2ರಂದು ಪಶ್ಚಿಮ ಬಂಗಾಳದ ಟಿಟಾಗರ್ ಸಂಸ್ಥೆಯಿಂದ ಹೊರಟಿದ್ದು, ಮೇ 15ರ ವೇಳೆಗೆ ಬೆಂಗಳೂರು ಸೇರಲಿವೆ. ಮುಂದಿನ ಕೆಲ ದಿನಗಳಲ್ಲಿ ಎಲ್ಲಾ ಆರು ಬೋಗಿಗಳನ್ನು ರೈಲು ಸೆಟ್‌ನಲ್ಲಿ ಜೋಡಿಸುವ ನಿರೀಕ್ಷೆಯಿದೆ. ಆನಂತರ ಮುಂದಿನ ಕೆಲ ದಿನಗಳವರೆಗೆ ಪ್ರಾಧಿಕಾರವು ರೈಲುಗಳ ಪ್ರಾಯೋಗಿಕ ಪರೀಕ್ಷೆ ನಡೆಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.20 ರಿಂದ 25 ನಿಮಿಷಗಳ ಆವರ್ತನದಲ್ಲಿ ಸದ್ಯಕ್ಕೆ ಐದು ನಿಲ್ದಾಣಗಳೊಂದಿಗೆ ಮಾತ್ರ ವಾಣಿಜ್ಯ ಸಂಚಾರ ನಡೆಯಲಿದೆ. ಕೇವಲ ಮೂರು ರೈಲುಗಳೊಂದಿಗೆ ಕಾರ್ಯಾಚರಣೆ ಪ್ರಾರಂಭಿಸುವ ಬಗ್ಗೆ ನಾವು ಯೋಚಿಸುತ್ತಿದ್ದೇವೆ. ಆರಂಭದಲ್ಲಿ ಜನದಟ್ಟಣೆ ಇದ್ದರೂ ನಮಗೆ ಬೇರೆ ಆಯ್ಕೆಯಿಲ್ಲ,' ಎನ್ನುತ್ತಾರೆ ಅಧಿಕಾರಿಯೊಬ್ಬರು. ಈ ಮಾರ್ಗದಲ್ಲಿ ಒಟ್ಟು 15 ರೈಲುಗಳು ಅಗತ್ಯವಿದೆ. ಸದ್ಯ ಮೂರು ರೈಲುಗಳ (18 ಬೋಗಿ) ಮೂಲಕ ವಾಣಿಜ್ಯ ಸಂಚಾರ ನಡೆಸುವುದಕ್ಕೆ ತೀರ್ಮಾನಿಸಿರುವುದರಿಂದ ಜೂನ್ ಅಂತ್ಯಕ್ಕೆ ಕಾರ್ಯಾಚರಣೆ ಆರಂಭವಾಗುವ ಎಲ್ಲಾ ಸಾಧ್ಯತೆ ಇದೆ. ಸಂಪೂರ್ಣ ಸಿವಿಲ್ ಕಾಮಗಾರಿ ಮುಗಿದರೂ ರೈಲುಗಳ ಕೊರತೆಯಿಂದಾಗಿ ಆರ್.ವಿ ರಸ್ತೆ ಮತ್ತು ಬೊಮ್ಮಸಂದ್ರ ನಡುವಿನ ಬಹುನಿರೀಕ್ಷಿತ 19.15 ಕಿ.ಮೀ. ಹಳದಿ ಮಾರ್ಗದ ಸುಮಾರು ಒಂದು ವರ್ಷ ಕಾರ್ಯಾಚರಣೆ ವಿಳಂಬವಾಗಿದೆ. ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಮತ್ತು ಪ್ರಯಾಣದ ಸಮಯವನ್ನು ಕಡಿತಗೊಳಿಸುವ ಮೂಲಕ ಹಳದಿ ಮಾರ್ಗವು ವಿಶೇಷವಾಗಿ ಐಟಿ ಉದ್ಯೋಗಿಗಳಿಗೆ ನೆರವಾಗಲಿದೆ.

**ವಿಳಂಬ :** ಕಳೆದ ವರ್ಷ ಅಕ್ಟೋಬರ್‌ನಲ್ಲಿ ಬಿಎಂಆರ್‌ಸಿಎಲ್ 2025ರ ಜನವರಿ ತಿಂಗಳಲ್ಲಿ ವಾಣಿಜ್ಯ ಸಂಚಾರ ಆರಂಭಿಸುವುದಾಗಿ ತಿಳಿಸಿತ್ತು. ಆದರೆ ಆರು ತಿಂಗಳ ನಂತರ ಸಂಚಾರ ಆರಂಭವಾಗುತ್ತಿದೆ. ಡಿಸೆಂಬರ್ ತಿಂಗಳಲ್ಲಿ ಈ ಮಾರ್ಗದ ಶಾಸನಬದ್ಧ ಸುರಕ್ಷತಾ ಪರಿಶೀಲನೆ ನಡೆಯಬೇಕಿತ್ತು. ಟಿಟಾಗರ್ ಸಂಸ್ಥೆ ಡಿಸೆಂಬರ್ ವೇಳೆಗೆ ಮೂರು ಸೆಟ್ ರೈಲುಗಳನ್ನು (18 ಬೋಗಿ) ಬಿಎಂಆರ್‌ಸಿಎಲ್‌ಗೆ ನೀಡಬೇಕಿತ್ತು. 2025ರ ಮಾರ್ಚ್ ತಿಂಗಳಿಂದ ಪ್ರತಿ ತಿಂಗಳು ಎರಡು ಸೆಟ್ ರೈಲುಗಳಂತೆ ಆಗಸ್ಟ್ ವೇಳೆಗೆ ಈ ಮಾರ್ಗಕ್ಕೆ ಬೇಕಾದ ಎಲ್ಲಾ 15 ರೈಲು ಸೆಟ್‌ಗಳನ್ನು ಸಂಸ್ಥೆ ಪೂರೈಸಬೇಕಿತ್ತು. ಆದರೆ, ಈಗಿನ ಪರಿಸ್ಥಿತಿಯಲ್ಲಿ ಇದು ಕಷ್ಟಸಾಧ್ಯವಾಗಿದೆ. ಈ ವರ್ಷದ ಅಂತ್ಯದವರೆಗೆ 15 ರೈಲು ಸೆಟ್ ಬರುವ ನಿರೀಕ್ಷೆ ಇದೆ.

> **ಹಸಿರು, ಗುಲಾಬಿ ಮಾರ್ಗಕ್ಕೆ ಸಂಪರ್ಕ**
>
> **ಆರ್.ವಿ ರಸ್ತೆ ನಿಲ್ದಾಣ ಹಸಿರು ಮಾರ್ಗದೊಂದಿಗೆ ಮತ್ತು ಜಯದೇವ ಆಸ್ಪತ್ರೆ ನಿಲ್ದಾಣ ಗುಲಾಬಿ ಮಾರ್ಗಕ್ಕೆ ಸಂಪರ್ಕ ಕಲ್ಪಿಸುತ್ತದೆ. ಜಯದೇವ ಆಸ್ಪತ್ರೆ ನಿಲ್ದಾಣ ಬಹುತೇಕ ಕಾಮಗಾರಿ ಪೂರ್ಣವಾಗಿದೆ. ಈ ಮಾರ್ಗದಲ್ಲಿ ರಾಗಿಗುಡ್ಡದಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗಿನ 3.13 ಕಿಮೀ ಮೆಟ್ರೊ ಮಾರ್ಗ ಮತ್ತು ರಸ್ತೆ ಮೇಲ್ಸೇತುವೆ ಹೊಂದಿದೆ. ಸೆಂಟ್ರಲ್ ಸಿಲ್ಕ್ ಬೋರ್ಡ್ ಜಂಕ್ಷನ್ ವಾಹನಗಳ ದಟ್ಟಣೆ ಕಡಿಮೆ ಮಾಡಲು ರಸ್ತೆ ಮೇಲ್ಸೇತುವೆ ನಿರ್ಮಿಸಲಾಗಿದ್ದು, ಇದು 5 ಲೂಪ್‌ಗಳು ಮತ್ತು ಇಳಿಜಾರುಗಳನ್ನು ಒಳಗೊಂಡಿದೆ.**



**ಕೇವಲ 3 ರೈಲುಗಳೊಂದಿಗೆ ಕಾರ್ಯಾಚರಣೆ ಪ್ರಾರಂಭ**

# ಕೆಆರ್‌ಎಸ್‌ನಲ್ಲಿ ಮಾಕ್ ಡ್ರಿಲ್; ಅಧಿಕಾರಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಪ್ರಯತ್ನ

## ಆತಂಕಕ್ಕೆ ಒಳಗಾಗದಂತೆ ಧೈರ್ಯ ತುಂಬುವ ಪ್ರಯತ್ನ, ಸಂಜೆ 5 ರಿಂದ 7ರವರೆಗೆ ರಕ್ಷಣಾ ಕಾರ್ಯಾಚರಣೆ ಪ್ರದರ್ಶನ

• **ಉದಯವಾಹಿನಿ, ಮಂಡ್ಯ**

ತುರ್ತು ಸಂದರ್ಭಗಳಲ್ಲಿ ಪರಿಸ್ಥಿತಿ ನಿಭಾಯಿಸುವ ಆಶಯದೊಂದಿಗೆ ದೇಶಾದ್ಯಂತ ನಡೆಸುತ್ತಿರುವ ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನಕ್ಕೆ ಜಿಲ್ಲೆಯಲ್ಲಿ ಕೆಆರ್‌ಎಸ್ ಜಲಾಶಯವನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಮೇ 11 ರಂದು ನಡೆಯುವ ಈ ಮಾಕ್ ಡ್ರಿಲ್ ಮೂಲಕ ಅಧಿಕಾರಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ, ಜನರು ಆತಂಕಕ್ಕೆ ಒಳಗಾಗದಂತೆ ಧೈರ್ಯ ತುಂಬುವ ಪ್ರಯತ್ನ ನಡೆಯಲಿದೆ. ಆಪರೇಷನ್ ಅಭ್ಯಾಸ್ ಮಾಕ್ ಡ್ರಿಲ್ ಸಂಬಂಧ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಈಗಾಗಲೇ ಮಂಡ್ಯದಲ್ಲಿ ಒಮ್ಮೆ ನಾನಾ ಇಲಾಖೆಗಳ ಅಧಿಕಾರಿಗಳ ಸಭೆ ನಡೆಸಿ ಸಮಾಲೋಚನೆ ನಡೆಸಿದ್ದರು. ಜತೆಗೆ, ಶನಿವಾರವೂ ನಗರದ ಅಗ್ನಿಶಾಮಕ ಇಲಾಖೆಗೆ ಭೇಟಿ ನೀಡಿ ಅಗ್ನಿಶಾಮಕ ದಳದ ಅಧಿಕಾರಿಗಳು, ಸಿಬ್ಬಂದಿ ಮಾಕ್ ಡ್ರಿಲ್‌ಗೆ ಸಜ್ಜುಗೊಳಿಸಿದರು.

ಇದಕ್ಕಾಗಿ ಕೆಆರ್‌ಎಸ್‌ನ ಬೃಂದಾವನ ಗಾರ್ಡನ್, ದೋಣಿ ವಿಹಾರ ಕೇಂದ್ರ, ರಾಯಲ್ ಆರ್ಕಿಡ್ ಹೋಟೆಲ್‌ನಲ್ಲಿ ಅಣಕು ಕಾರ್ಯಾಚರಣೆಗೆ ತಯಾರಿ ನಡೆಸಲಾಗಿದೆ. ಇದರೊಂದಿಗೆ ಮಯೂರ ಹೋಟೆಲ್, ಪಾರ್ಕಿಂಗ್ ಸ್ಥಳದಲ್ಲೂ ಮಾಕ್ ಡ್ರಿಲ್ ನಡೆಯುವ ಸಾಧ್ಯತೆಯಿದೆ. ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ನೇತೃತ್ವದಲ್ಲಿ ಅಣಕು ಕಾರ್ಯಾಚರಣೆಯ ರೂಪುರೇಷೆ ಸಿದ್ಧಪಡಿಸಲಾಗಿದೆ. ಕಾರ್ಯಾಚರಣೆಯಲ್ಲಿ ಪೊಲೀಸರೊಂದಿಗೆ ಕಂದಾಯ, ಆರೋಗ್ಯ ಇಲಾಖೆ ಅಧಿಕಾರಿಗಳು, ವೈದ್ಯರು, ವೈದ್ಯಕೀಯೇತರ ಸಿಬ್ಬಂದಿ, ಅಗ್ನಿಶಾಮಕದಳ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಲಿದ್ದಾರೆ. ಜತೆಗೆ, ಗೃಹರಕ್ಷಕ ದಳ, ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರನ್ನು ಬಳಸಿಕೊಳ್ಳಲಾಗುತ್ತಿದೆ. ಇವರೆಲ್ಲರೂ ತಮ್ಮ ತಮ್ಮ ವ್ಯಾಪ್ತಿಯ ಕಾಯಚಟುವಟಿಕೆಗಳನ್ನು ಅಣಕು ಕಾರ್ಯಾಚರಣೆ ವೇಳೆ ನಿಭಾಯಿಸಲಿದ್ದಾರೆ.


ಉದಯವಾಹಿನಿ ಚಿತ್ರ

**10 ನಿಮಿಷಗಳ ಕಾಲ ಬ್ಲಾಕ್ ಔಟ್**

ಬೋಟಿಂಗ್ ಸ್ಥಳದಲ್ಲಿ ಜಲಾಘಾತದ ಸಂದರ್ಭದಲ್ಲಿ ರಕ್ಷಣಾ ಕಾರ್ಯಾಚರಣೆ ಹೇಗಿರಲಿದೆ ಜನರನ್ನು ಹೇಗೆ ರಕ್ಷಿಸಲಾಗುತ್ತದೆ ಪರಿಸ್ಥಿತಿ ನಿಭಾಯಿಸುವುದು ಹೇಗೆ ಎಂಬ ಬೋಟ್ ರೆಸ್ಕ್ಯೂಯ ಅಣಕು ಕಾರ್ಯಾಚರಣೆಯ ಪ್ರದರ್ಶನ ನಡೆಯಲಿದೆ. ಏರ್ ಸ್ಟ್ರೈಕ್ ವೇಳೆ ಬಾಂಬ್, ಮಿಸೈಲ್ ದಾಳಿ ಸಂದರ್ಭದಲ್ಲಿ ಅಗ್ನಿ ಅವಘಡ ಸಂಭವಿಸಿದಾಗ ನಡೆಯುವ ರಕ್ಷಣಾ ಕಾರ್ಯಾಚರಣೆ ವಿಧಾನವೂ ಹೋಟೆಲ್‌ಗಳು, ಪಾರ್ಕ್‌ನಲ್ಲಿ ಪ್ರದರ್ಶನಗೊಳ್ಳಲಿದೆ. ಇದಷ್ಟೂ ಅಣಕು ಪ್ರದರ್ಶನವು ಮೇ 11ರಂದು ಸಂಜೆ 4ರಿಂದ ರಾತ್ರಿ 7ರವರೆಗೆ ನಡೆಯಲಿದೆ.

**ಬ್ಲಾಕ್ ಔಟ್:** ಸಂಜೆ 4 ರಿಂದ ರಾತ್ರಿ 7 ರವರೆಗೆ ನಡೆಯುವ ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನದ ನಡುವೆಯೂ ಸಂಜೆ 6.50 ರಿಂದ 7 ರವರೆಗೆ ಸುಮಾರು 10 ನಿಮಿಷಗಳ ಕಾಲ ಬ್ಲಾಕ್ ಔಟ್ ಮಾಡಲಾಗುತ್ತದೆ. ಈ ಸಂದರ್ಭದಲ್ಲಿ ಕೆಆರ್‌ಎಸ್‌ನಲ್ಲಿ ಸಂಪೂರ್ಣ ವಿದ್ಯುತ್ ಕಡಿತ ಮಾಡಲಾಗುತ್ತದೆ.

**ಪೊಲೀಸರ ಕಾರ್ಯಾಚರಣೆ:** ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನದಲ್ಲಿ ಪೊಲೀಸರದ್ದೇ ಪ್ರಮುಖ ಜವಾಬ್ದಾರಿ. ತುರ್ತು ಸಂದರ್ಭದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವಿಕೆ, ಕ್ರೌಡ್ ಕಂಟ್ರೋಲ್ (ಜನಸಮೂಹ ನಿಯಂತ್ರಣ), ಟ್ರಾಫಿಕ್ ನಿರ್ವಹಣೆ, ನಾನಾ ಸ್ಥಳಗಳಲ್ಲಿಅಡಗಿರುವ ಉಗ್ರರು, ಭಯೋತ್ಪಾದಕರಿಗಾಗಿ ಶೋಧ ಕಾರ್ಯಾಚರಣೆ, ಚೆಕ್‌ಪೋಸ್ಟ್ ನಿರ್ಮಿಸಿ ಅಲ್ಲಿ ವಾಹನಗಳ ಮಾನಿಟರಿಂಗ್ ಮಾಡುವಿಕೆ... ಹೀಗೆ ನಾನಾ ಜವಾಬ್ದಾರಿಗಳನ್ನು ಪೊಲೀಸರು ನಿರ್ವಹಣೆ ಮಾಡಲಿದ್ದಾರೆ.

ಉಳಿದಂತೆ ಅಗ್ನಿಶಾಮಕ ಸಿಬ್ಬಂದಿ, ಗೃಹರಕ್ಷಕ ದಳ ಸಿಬ್ಬಂದಿಯಿಂದ ಜನರ ರಕ್ಷಣಾ ಕಾರ್ಯಾಚರಣೆ ವಿಧಾನಗಳ ಪ್ರದರ್ಶನ ನಡೆಯಲಿದೆ. ಆರೋಗ್ಯ ಇಲಾಖೆಯ ವೈದ್ಯರು, ಸಿಬ್ಬಂದಿಯು ಗಾಯಾಳುಗಳಿಗೆ ಚಿಕಿತ್ಸೆ ನೀಡಿ, ಸುಶ್ರೂಷೆ ಮಾಡುವ ಮಾಕ್ ಡ್ರಿಲ್ ನಡೆಯಲಿದೆ. ಆ್ಯಂಬುಲೆನ್ಸ್‌ಗಳನ್ನೂ ಕೂಡ ಮಾಕ್ ಡ್ರಿಲ್‌ಗೆ ಬಳಸಿಕೊಳ್ಳಲಾಗುತ್ತಿದೆ.

> **ಕೇಂದ್ರ, ರಾಜ್ಯ ಸರಕಾರದ ನಿರ್ದೇಶನದಂತೆ ಕೆಆರ್‌ಎಸ್ ಅಣೆಕಟ್ಟೆ ಬಳಿ ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನಕ್ಕೆ ತಯಾರಿ ನಡೆಸಲಾಗಿದೆ. ತುರ್ತು ಸಂದರ್ಭಗಳಲ್ಲಿ ಅಧಿಕಾರಿಗಳಲ್ಲಿ ಆತ್ಮವಿಶ್ವಾಸ ವೃದ್ಧಿಸಲು, ಜನರಲ್ಲಿ ವಿಶ್ವಾಸ, ಅರಿವು ಮೂಡಿಸುವ ಪ್ರಯತ್ನ ಇದಾಗಿದೆ. ಜನರು ಭಯಪಡುವ ಅಗತ್ಯವಿಲ್ಲ.**
> **-ಡಾ.ಕುಮಾರ, ಜಿಲ್ಲಾಧಿಕಾರಿ, ಮಂಡ್ಯ**

> **ಮಾಕ್‌ಡ್ರಿಲ್‌ಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ತುರ್ತು ಸಂದರ್ಭದಲ್ಲಿ ನಾಗರಿಕರ ರಕ್ಷಣೆ, ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವಿಕೆ, ಗಾಯಗೊಂಡವರಿಗೆ ಆಸ್ಪತ್ರೆಗೆ ಸ್ಥಳಾಂತರಿಸುವ, ಏರ್‌ಸ್ಟ್ರೈಕ್, ಬ್ಲಾಕ್‌ಔಟ್ ಚಟುವಟಿಕೆಗಳ ಅಣಕು ಕಾರ್ಯಾಚರಣೆ ಮಾಡಲಾಗುತ್ತದೆ. ತುರ್ತು ಪರಿಸ್ಥಿತಿಯಲ್ಲಿಅಧಿಕಾರಿಗಳು ಹೇಗೆ ಪ್ರತಿಕ್ರಿಯಿಸುತ್ತಾರೆ? ಹೇಗೆ ಅಲರ್ಟ್ ಆಗಿರುತ್ತಾರೆಂಬ ಎಂಬುದು ಮಾಕ್ ಡ್ರಿಲ್‌ನಲ್ಲಿ ಪ್ರತಿಂಬಿಸಲಿದೆ.**
> **-ಮಲ್ಲಿಕಾರ್ಜುನ ಬಾಲದಂಡಿ, ಎಸ್ಪಿ, ಮಂಡ್ಯ**

# ತಲೆ ಎತ್ತುತ್ತಿದೆ ಕಾಂಗ್ರೆಸ್ ಭವನ

## ಬಿ.ಎಂ. ರಸ್ತೆಗೆ ಹೊಂದಿಕೊಂಡಂತೆ 7 ಕೋಟಿ ವೆಚ್ಚದಲ್ಲಿ ನಿರ್ಮಾಣ

• **ಉದಯವಾಹಿನಿ, ರಾಮನಗರ**

ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತವರು ಜಿಲ್ಲೆಯಾದ ರಾಮನಗರ ಜಿಲ್ಲಾ ಕೇಂದ್ರದಲ್ಲಿ ಸದ್ದಿಲ್ಲದೆ ಜಿಲ್ಲಾ ಕಾಂಗ್ರೆಸ್ ಭವನ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಜಿಲ್ಲಾಧಿಕಾರಿ ಕಚೇರಿಗೆ ಕೂಗಳತೆ ದೂರದಲ್ಲಿ ಬೆಂಗಳೂರು-ಮೈಸೂರು ರಸ್ತೆಗೆ ಹೊಂದಿಕೊಂಡಂತಿರುವ ಮಾರುತಿ ನಗರದ ಜಾಗದಲ್ಲಿ ಭವನ ತಲೆ ಎತ್ತುತ್ತಿದೆ.

ಇದುವರೆಗೆ ನಗರದ ವಿವಿಧ ಬಾಡಿಗೆ ಕಟ್ಟಡದಲ್ಲೇ ಕಾರ್ಯನಿರ್ವಹಿಸುತ್ತಿದ್ದ ಕಾಂಗ್ರೆಸ್ ಪಕ್ಷದ ಕಚೇರಿಗೆ ಕಡೆಗೂ ಶಾಶ್ವತ ಕಟ್ಟಡದ ಭಾಗ್ಯದ ದಿನಗಳು ಸಮೀಪಿಸಿವೆ. ಹತ್ತು ಸಾವಿರ ಚದರ ಅಡಿ ಜಾಗದಲ್ಲಿ ತಲೆ ಎತ್ತಲಿರುವ ಜಿ +3 ಭವನದ ಅಡಿಪಾಯದ ಕಾಮಗಾರಿ ಈಗಾಗಲೇ ಪೂರ್ಣಗೊಂಡಿದ್ದು, ಪಿಲ್ಲರ್‌ಗಳ ನಿರ್ಮಾಣ ನಡೆಯುತ್ತಿದೆ. ಮಾಜಿ ಸಂಸದ ಡಿ.ಕೆ. ಸುರೇಶ್ ಭವನದ ಉಸ್ತುವಾರಿ ಹೊತ್ತಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

**7 ಕೋಟಿ ವೆಚ್ಚ:** ಎರಡು ವರ್ಷದ ಹಿಂದೆಯೇ ಪಕ್ಷದ ವತಿಯಿಂದ ಖರೀದಿಸಿದ್ದ ಜಾಗದ ನೋಂದಣಿ ವಿವಿಧ ಕಾರಣಗಳಿಗಾಗಿ ವಿಳಂಬವಾಗಿತ್ತು. ಇದೀಗ, ಜಿಲ್ಲಾ ಕಾಂಗ್ರೆಸ್ ಹೆಸರಿಗೆ ಜಾಗದ ನೋಂದಣಿಯಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸುಮಾರು 7 ಕೋಟಿ ವೆಚ್ಚದಲ್ಲಿ ಕಾಂಗ್ರೆಸ್ ಭವನ


ಉದಯವಾಹಿನಿ ಚಿತ್ರ

ನಿರ್ಮಾಣ ಕಾರ್ಯ ಶುರುವಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಗಂಗಾಧರ್ ತಿಳಿಸಿದರು.

ಭವನದ ಪಕ್ಕದಲ್ಲಿರುವ ಖಾಲಿ ಜಾಗದಲ್ಲೇ ಭಾನುವಾರ ನಡೆಯಲಿರುವ ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಲಿರುವ ಡಿಸಿಎಂ ಭವನಕ್ಕೆ ಸಾಂಕೇತಿಕವಾಗಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಪಕ್ಷದ ನಾಯಕರು, ಮುಖಂಡರು, ವಿವಿಧ ಮೂಲಗಳಿಂದ ಸಂಗ್ರಹಿಸಿದ ದೇಣಿಗೆಯಿಂದ ಭವನ ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದರು. ಭವನದಲ್ಲಿ ಜಿಲ್ಲಾಧ್ಯಕ್ಷರು, ತಾಲ್ಲೂಕು ಅಧ್ಯಕ್ಷರು, ಯುವ ಕಾಂಗ್ರೆಸ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ವಿಭಾಗಗಳ ಕಚೇರಿಗಳು, ಪಕ್ಷದ ಸಭೆ-ಸಮಾರಂಭಗಳಿಗಾಗಿ ಸಭಾಂಗಣ, ಕಚೇರಿಗೆ ಭೇಟಿ ನೀಡುವ ನಾಯಕರು, ಮುಖಂಡರಿಗೆ ವಿಶ್ರಾಂತಿ, ವಾಸ್ತವ್ಯಕ್ಕೆ ಕೊಠಡಿ ಸಹ ಇರಲಿವೆ. ವಾಹನಗಳ ನಿಲುಗಡೆಗೆ ವ್ಯವಸ್ಥೆ ಇರಲಿದೆ. ತಳಮಹಡಿಯನ್ನು ವಾಣಿಜ್ಯ ಉದ್ದೇಶಕ್ಕೆ ಬಾಡಿಗೆಗೆ ನೀಡುವ ಯೋಚನೆ ಇದೆ ಎಂದು ಮಾಹಿತಿ ನೀಡಿದರು.

2007ರಲ್ಲಿ ರಾಮನಗರವು ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ಬೇರ್ಪಟ್ಟು ಪ್ರತ್ಯೇಕ ಜಿಲ್ಲೆಯಾಗಿ ರಚನೆಗೊಂಡಿತು. ಅಂದಿನಿಂದಲೂ ಪಕ್ಷಕ್ಕೆ ಸ್ವಂತ ಕಚೇರಿ ಇರಲಿಲ್ಲ. ಬಾಡಿಗೆ ಕಟ್ಟಡದಲ್ಲಿದ್ದ ಕಚೇರಿ ವಿವಿಧ ಕಾರಣಗಳಿಗಾಗಿ ಆಗಾಗ ಸ್ಥಳಾಂತರಗೊಳ್ಳುತ್ತಲೇ ಇತ್ತು. ಮೊದಲು ಗುಂಡಪ್ಪ ಬಿಲ್ಡಿಂಗ್, ಹಳೆ ಆರ್‌ಟಿಒ ಕಚೇರಿ ಪಕ್ಕಲ್ಲಿದ್ದ ಪಕ್ಷದ ಕಚೇರಿ, ನಂತರ ಮಿನಿ ವಿಧಾನ ಸೌಧದ ಎದುರಿನ ಕಟ್ಟಡಕ್ಕೆ ಸ್ಥಳಾಂತರಗೊಂಡಿತು.

> **ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಸಂಸದ ಡಿ.ಕೆ. ಸುರೇಶ್ ಮಾರ್ಗದರ್ಶನದಂತೆ ಜಿಲ್ಲಾ ಕೇಂದ್ರದಲ್ಲಿ ಸುಮಾರು 7 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಕಾಂಗ್ರೆಸ್ ಭವನ ನಿರ್ಮಾಣವಾಗುತ್ತಿದೆ**
> **-ಗಂಗಾಧರ್, ಜಿಲ್ಲಾಧ್ಯಕ್ಷ ಜಿಲ್ಲಾ ಕಾಂಗ್ರೆಸ್ ಸಮಿತಿ ರಾಮನಗರ ಜಿಲ್ಲೆ**

# ಜೋಶಿ ವಿರುದ್ಧ ಹೋರಾಟಕ್ಕೆ ಮಹಾದೇವ ಬೆಂಬಲ

• **ಉದಯವಾಹಿನಿ, ಮೈಸೂರು**

ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಹೇಶ ಜೋಶಿ ವಿರುದ್ಧ ಕನ್ನಡ ನಾಡು ನುಡಿ ಜಾಗೃತಿ ಸಮಿತಿಯ ನೇತೃತ್ವದಲ್ಲಿ ಮೇ 17ರಂದು ಮಂಡ್ಯದಲ್ಲಿ ಹಮ್ಮಿಕೊಂಡಿರುವ ಮೈಸೂರು ವಿಭಾಗಮಟ್ಟದ ಜನಾಂದೋಲನಕ್ಕೆ ಸಾಹಿತಿ ದೇವನೂರ ಮಹಾದೇವ ಬೆಂಬಲ ಸೂಚಿಸಿದ್ದಾರೆ.

ಸಮಿತಿಯ ನಿಯೋಗವು ಇಲ್ಲಿನ ಅವರ ನಿವಾಸದಲ್ಲಿ ಭೇಟಿಯಾಗಿ ಮಾತುಕತೆ ನಡೆಸಿತು. ಜೋಶಿಯವರು ದುರಾಡಳಿತ, ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದಾರೆ. ಇದೆಲ್ಲ ಕಾರಣದಿಂದ ಅವರ ವಿರುದ್ಧ ಹೋರಾಟ ನಡೆಸಲಾಗುತ್ತಿದೆ ಎಂದು ಸಮಿತಿಯವರು ತಿಳಿಸಿದರು.

ಇದೆಲ್ಲವನ್ನೂ ಮುಖ್ಯ ಮಂತ್ರಿಯವರ ಗಮನಕ್ಕೆ ತಂದು ಸೂಕ್ತ ಕಾನೂನು ಕ್ರಮ ಆಗುವಂತೆ ಮಾಡಲು ಸಹಕರಿಸಬೇಕು ಎಂದು ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ಮಹಾದೇವ, ಈ ಎಲ್ಲಾ ಬೆಳವಣಿಗೆಗಳು ಮಾಧ್ಯಮದ ಮೂಲಕ ಗೊತ್ತಾಗಿದೆ. ನಿಮ್ಮ ಹೋರಾಟಕ್ಕೆ ನನ್ನ ನೈತಿಕ ಬೆಂಬಲವಿದೆ. ಹೋರಾಟ ಮುಂದುವರಿಯಲಿ. ನಾನೂ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಕ್ರಮ ಜರುಗಿಸುವಂತೆ ಒತ್ತಾಯಿಸುತ್ತೇನೆ ಎಂದು ತಿಳಿಸಿದ್ದಾರೆ ಎಂದು ಸಮಿತಿಯವರು ಮಾಹಿತಿ ನೀಡಿದ್ದಾರೆ.


ಉದಯವಾಹಿನಿ ಚಿತ್ರ

### ನಿಯೋಗ ತೆರಳಲು ನಿರ್ಧಾರ

**ಇದಕ್ಕೂ ಮುನ್ನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ನಗರದ ಸಾಹಿತಿಗಳು, ಪ್ರಾಧ್ಯಾಪಕರು, ಹೋರಾಟಗಾರರು, ಸಂಘ ಸಂಸ್ಥೆಗಳ ಪ್ರಮುಖರು, ಮಹೇಶ್ ಜೋಶಿ ವಿರುದ್ಧದ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು. ಜೋಶಿ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ಸಮಗ್ರ ತನಿಖೆಗೆ ಒತ್ತಾಯಿಸಲು ಮುಖ್ಯಮಂತ್ರಿ ಬಳಿಗೆ ನಿಯೋಗ ತೆರಳಬೇಕೆಂದು ನಿರ್ಣಯಿಸಲಾಯಿತು.**

# ಸಮುದಾಯದಲ್ಲಿ ಒಗ್ಗಟ್ಟಿನ ಕೊರತೆ ಇದೆ

• **ಉದಯವಾಹಿನಿ, ಕೊಳ್ಳೇಗಾಲ**

ನಮ್ಮ ಸಮುದಾಯದಲ್ಲಿ ಒಗ್ಗಟ್ಟಿನ ಕೊರತೆ ಇದೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಬೇಸರ ವ್ಯಕ್ತಪಡಿಸಿದರು. ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಭಾನುವಾರ ನಡೆದ ಅಂಬೇಡ್ಕರ್ ಸ್ಮಾರಕ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡಿದರು.

ಸಮುದಾಯದ ವಿಚಾರ ಬಂದರೆ ಯಾರಿಗೂ ತಲೆಬಾಗದೆ ಸಮುದಾಯದ ಪರ ನಿಂತು ಕೆಲಸ ಮಾಡಿ ಏಳಿಗೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು. ಇಲ್ಲಿನ ಅಂಬೇಡ್ಕರ್ ಸಂಘ ಇಡೀ ತಾಲ್ಲೂಕಿಗೆ ಮಾದರಿ ಸಂಘವಾಗಬೇಕು ಮತ್ತು ಪ್ರತಿಯೊಂದು ತಾಲ್ಲೂಕಿನಲ್ಲೂ ಅಂಬೇಡ್ಕರ್ ಸಮುದಾಯ ಭವನ ಹಾಗೂ ಪ್ರತಿಮೆಗಳು ನಿರ್ಮಾಣ ಆಗಬೇಕು. ಸಮುದಾಯ ಭವನಗಳು ನಿರ್ಮಾಣವಾದರೆ ನಮ್ಮ ಸಮುದಾಯದವರಿಗೆ ಅನುಕೂಲವಾಗುತ್ತದೆ. ಅದರಲ್ಲೂ ನಮ್ಮ ಮಕ್ಕಳು



ಉದಯವಾಹಿನಿ ಚಿತ್ರ

ಖಾಸಗಿ ಕಲ್ಯಾಣ ಮಂಟಪದಲ್ಲಿ ಮದುವೆ ಆಗುವ ಬದಲು ಕಡಿಮೆ ಬೆಲೆಯಲ್ಲಿ ನಮ್ಮ ಭವನದಲ್ಲಿ ಮದುವೆಯಾಗುವುದೇ ಉತ್ತಮ ಎಂದು ಹೇಳಿದರು. ನನಗೆ 19 ವರ್ಷ ವನವಾಸ ಮುಕ್ತಿ ಆದ ಬಳಿಕ ಮತ್ತೆ ಶಾಸಕನಾದೆ. ಅದೇ ರೀತಿ ಇಲ್ಲಿನ ಅಂಬೇಡ್ಕರ್ ಭವನಕ್ಕೆ 21 ವರ್ಷ ವನವಾಸ ಆಗಿದೆ, ಹಾಗಾಗಿ ಈ ವರ್ಷ ಈ ಭವನದ ಕಾಮಗಾರಿಯನ್ನು ಮುಕ್ತಾಯ ಮಾಡಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ಕೊಡಬೇಕು. ಈಗಾಗಲೇ 3 ಕೋಟಿ ಅನುದಾನ ಬಿಡುಗಡೆಯಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಅನುದಾನವನ್ನು ತರುವ ಮೂಲಕ ಭವನ ಉದ್ಘಾಟನೆ ಕಾಮಗಾರಿಗೆ ಜವಾಬ್ದಾರಿ ವಹಿಸುತ್ತೇನೆ. ನೀವು ಕೊಟ್ಟ ಮತ ಭಿಕ್ಷೆಯಿಂದ ನಾನು ಇಲ್ಲಿ ಬಂದು ಶಾಸಕನಾಗಿ ಮಾತನಾಡುತ್ತಿದ್ದೇನೆ. ಕಾನೂನಾತ್ಮಕವಾಗಿ ಈ ಸಂಘದಲ್ಲಿ ಚುನಾವಣೆ ನಡೆದು ಅಧ್ಯಕ್ಷರು, ಪದಾಧಿಕಾರಿಗಳ ಆಯ್ಕೆಯಾಗಿದೆ. ಹಾಗಾಗಿ ಈ ಸಂಘ ಅಧಿಕೃತವಾದ ಸಂಘವಾಗಿದೆ.

ಬೇರೆ ಯಾರೂ ಈ ಸಂಘದ ಬಗ್ಗೆ ಮಾತನಾಡುವ ಅವಶ್ಯಕತೆ ಇಲ್ಲ. ಇದು ಸರ್ಕಾರದಿಂದ ಆಗಿರುವ ಸಂಘ ನಿಮ್ಮ ಸಂಘದ ಜೊತೆ ಸದಾ ನಾನು ಇರುತ್ತೇನೆ. ಅಂಬೇಡ್ಕರ್ ಸಂಘದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಆನಂದ್ ಮೂರ್ತಿ ಅವರು ಸಂಘವನ್ನು ನಡೆಸಿಕೊಂಡು ಹೋಗಬೇಕು, ಅವರೊಂದಿಗೆ ಜೊತೆ ಇಡೀ ಸಮುದಾಯ ಇರುತ್ತದೆ ಎಂದರು. ಯಾರಿಗೂ ಗುಲಾಮರಾಗಿ ಬದುಕಬೇಡಿ, ಸ್ವಾಭಿಮಾನದಿಂದ ಬದುಕಿ. ನೂತನವಾಗಿ ಆಯ್ಕೆಯಾಗಿರುವ ಆನಂದ್ ಮೂರ್ತಿ ಅವರು ರಾಜಕೀಯಕ್ಕೆ ಬರುವುದು ಬೇಡ. ಈಗಾಗಲೇ ಅನೇಕ ಅಧಿಕಾರಿಗಳು ರಾಜಕೀಯಕ್ಕೆ ಬಂದು ಹಣ ಕಳೆದುಕೊಂಡು ಹೋಗಿದ್ದಾರೆ. ನೀವು ಒಬ್ಬ ಎಂಜಿನಿಯರ್ ಆಗಿ ಉತ್ತಮ ಸೇವೆ ಸಲ್ಲಿಸಿ ಅನೇಕ ಕೆಲಸ ಕಾರ್ಯಗಳನ್ನು ಮಾಡಿಕೊಂಡು ಬಂದಿದ್ದೀರಿ. ನೀವು ಸಮಾಜ ಸೇವೆ ಮಾಡಿಕೊಂಡು ಹೋದರೆ ಸಾಕು ಎಂದರು.

> **ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ನಂಜುಂಡಸ್ವಾಮಿ ಮಾತನಾಡಿ, ರಾಜಕೀಯ ಕೈವಾಡಗಳಿಂದ 21 ವರ್ಷವಾದರು ಸಹ ಇನ್ನೂ ಈ ಭವನ ಉದ್ಘಾಟನೆಯಾಗದಿರುವುದು ಬೇಸರದ ವಿಷಯ. ಹಾಗಾಗಿ ಈ ವರ್ಷ ಈ ಸಮುದಾಯ ಭವನ ಉದ್ಘಾಟನೆ ಆಗಲೇಬೇಕು. ಇದಕ್ಕೆ ಶಾಸಕರು ಹೆಚ್ಚಿನ ಅನುದಾನವನ್ನು ನೀಡಲೇಬೇಕು. ಇದು ನಮ್ಮ ಸಮುದಾಯದ ಆಸ್ತಿ ಹಾಗಾಗಿ ನಾವು ಇದನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿಕೊಂಡು ಹೋಗಬೇಕು ಎಂದರು.**

# ಪ್ರವಾಸಿಗರಿಂದ ಮಾಹಿತಿ ಪಡೆದ ಸಚಿವ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಭಾನುವಾರ ಬೆಳ್ಳಂ ಬೆಳಿಗ್ಗೆ ನಂದಿಗಿರಿಧಾಮಕ್ಕೆ ಭೇಟಿ ನೀಡಿ ಪ್ರವಾಸಿಗರಿಂದ ಸೌಲಭ್ಯಗಳ ಮಾಹಿತಿ ಪಡೆದರು.ಸಾರಿಗೆ, ವಾಹನ ನಿಲುಗಡೆ, ಸಂಚಾರ ದಟ್ಟಣೆ, ಜನಸಂದಣಿ ನಿಯಂತ್ರಣ, ಶೌಚಾಲಯ ಸೌಲಭ್ಯ ಹೀಗೆ ವಿವಿಧ ವಿಚಾರಗಳ ಕುರಿತು ಪ್ರವಾಸಿಗರಿಂದ ಮಾಹಿತಿ ಪಡೆದರು. ರೋಪ್ ವೇಗೆ ಸಂಬಂಧಿಸಿದಂತೆ ಅಧಿಕಾರಿಗಳ ಜೊತೆ ಚರ್ಚೆ ನಡೆಸಿದರು. ಭಾನುವಾರ ಬೆಳಿಗ್ಗೆ 5ಕ್ಕೆ ಗಿರಿಧಾಮದ ಪ್ರವೇಶ ದ್ವಾರಕ್ಕೆ ಸಚಿವರು ಬಂದರು. ಈ ವೇಳೆ ಸ್ಥಳದಲ್ಲಿ ಇದ್ದ ಪ್ರವಾಸಿಗರ ಜೊತೆ ಮಾತುಕತೆ ನಡೆಸಿದರು. 5.30ರ ವೇಳೆಗೆ ಗಿರಿಧಾಮ ಪ್ರವೇಶಿಸಿದರು.

ಪ್ರವಾಸಿಗರಿಂದ ಶುಲ್ಕವನ್ನು ಯಾವ ರೀತಿಯಲ್ಲಿ ಸಂಗ್ರಹಿಸಲಾಗುತ್ತಿದೆ. ನಗದು ರೂಪವೇ, ಇ-ಪೇಮೆಂಟ್ ಯಾವ ರೀತಿ ಸಂಗ್ರಹಿಸಲಾಗುತ್ತಿದೆ ಎನ್ನುವ ಬಗ್ಗೆ ಮಾಹಿತಿ ಪಡೆದರು. ಖುದ್ದು ಪರಿಶೀಲನೆ ಸಹ ನಡೆಸಿದರು. ಯಾವುದಕ್ಕೆ ಯಾವ ಶುಲ್ಕಗಳನ್ನು ವಿಧಿಸಲಾಗುತ್ತಿದೆ ಎನ್ನುವುದನ್ನು ತಿಳಿಸಿದರು. ಶೌಚಾಲಯದ ಸ್ಥಿತಿಗಳು ಉತ್ತಮವಾಗಿವೆಯೇ, ಗಿರಿಧಾಮದಲ್ಲಿ ಮತ್ತಷ್ಟು ಸುಧಾಕರಣೆಯ ಕ್ರಮಗಳನ್ನು ಯಾವ ರೀತಿ ಕೈಗೊಳ್ಳಬಹುದು ಎನ್ನುವ ಬಗ್ಗೆ ಪ್ರವಾಸಿಗರಿಂದಲೇ ಮಾಹಿತಿ ಪಡೆದರು. ವಿಶೇಷವಾಗಿ ವಾರಾಂತ್ಯದ ದಿನಗಳಲ್ಲಿ


ಉದಯವಾಹಿನಿ ಚಿತ್ರ

ಸಂಚಾರ ದಟ್ಟಣೆ ಎದುರಾಗುತ್ತದೆ. ಈ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಯಾವ ಕ್ರಮಗಳನ್ನು ಕೈಗೊಳ್ಳಬಹುದು ಎನ್ನುವುದನ್ನು ಪ್ರಮುಖವಾಗಿ ಚರ್ಚಿಸಿದರು.

**ರೋಪ್ ವೇ ಚರ್ಚೆ:** ನಂದಿ ಗಿರಿಧಾಮಕ್ಕೆ ರೂಪಿಸುತ್ತಿರುವ ರೋಪ್ ವೇ ಕಾಮಗಾರಿಯು ಸದ್ಯ ಯಾವ ಹಂತದಲ್ಲಿ ಇದೆ ಎನ್ನುವ ಬಗ್ಗೆ ಮಾಹಿತಿ ಪಡೆದರು. ಎಲ್‌ಟಿಪಿ, ಯುಟಿಪಿಗಳಲ್ಲಿ ಯಾವ ಕೆಲಸಗಳು ಆಗಿವೆ. ಯಾವ ಕೆಲಸಗಳು ಆಗಬೇಕು. ರೋಪ್ ವೇ ಟೆಂಡರ್ ಪಡೆದಿರುವ ಸಂಸ್ಥೆಯು ಮತ್ತೆ ಇನ್ನೇನು ಸೌಲಭ್ಯಗಳನ್ನು ಬಯಸಿದೆ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಅವರಿಂದ ಸಮಗ್ರವಾಗಿ ಮಾಹಿತಿ ಕಲೆ ಹಾಕಿದರು. ಸಚಿವ ಸಂಪುಟದ ಸಭೆಯ

**ವಿಚಾರವೂ ಚರ್ಚೆ:** ಮುಂದಿನ ದಿನಗಳಲ್ಲಿ ಬೆಂಗಳೂರು ವಿಭಾಗದ ಸಚಿವ ಸಂಪುಟ ಸಭೆಯು ನಂದಿಗಿರಿಧಾಮದಲ್ಲಿ ನಡೆಯಲಿದೆ. ಆಗ ಇಲ್ಲಿ ಯಾವ ರೀತಿಯ ವ್ಯವಸ್ಥೆಗಳನ್ನು ಮಾಡಿಕೊಳ್ಳಬಹುದು. ಎಲ್ಲಿ ಸಭೆ ಮಾಡಬಹುದು ಎನ್ನುವ ಬಗ್ಗೆಯೂ ಚರ್ಚೆ ನಡೆಸಿದರು.

# ಮುಂಗಾರು ಮಳೆ | ಜಾಗರೂಕರಾಗಿರಿ: ಕೊಡಗು ಜಿಲ್ಲಾಧಿಕಾರಿ ಸೂಚನೆ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಮುಂಗಾರು ಆರಂಭವಾಗುವ ಸಾಧ್ಯತೆ ಇದ್ದು, ವ್ಯಾಪಕ ಮಳೆಯಿಂದ ಸಂಭವಿಸಬಹುದಾದ ಅನಾಹುತವನ್ನು ತಡೆಯುವ ನಿಟ್ಟಿನಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚಿಸಿದರು. ಇಲ್ಲಿನ ಕೊಡಗು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂಗಾರು ಮಳೆಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು ಹಾಗೂ ಎಂಜಿನಿಯರ್‌ಗಳು ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲು ಸಿದ್ಧತೆ ನಡೆಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಮುಂಗಾರು ಸಂದರ್ಭದಲ್ಲಿ ಯಾವುದೇ ಬಗೆಯ ಪ್ರಾಣ ಹಾನಿ, ಜಾನುವಾರು ಹಾನಿಯಾಗದಂತೆ ಎಚ್ಚರ ವಹಿಸಬೇಕು ಎಂದರು. ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಅವರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ನಿಗಾ ವಹಿಸಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

> **ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಎಚ್ಚರ ವಹಿಸಲೇಬೇಕು. ಲೋಕೋಪಯೋಗಿ, ಪಂಚಾಯತ್ ರಾಜ್ ಇಲಾಖೆ ಎಂಜಿನಿಯರ್‌ಗಳು ತಮ್ಮ ತಮ್ಮ ವ್ಯಾಪ್ತಿಯ ರಸ್ತೆಗಳನ್ನು ಸರಿಪಡಿಸಿ, ಸುಸ್ಥಿತಿಯಲ್ಲಿರಿಸಬೇಕು ಎಂದು ಹೇಳಿದರು.**

ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಜನರ ಸುರಕ್ಷತೆ ಕಾಪಾಡಬೇಕು. ಅದಕ್ಕಾಗಿ ಅಗ್ನಿಶಾಮಕ ಸಿಬ್ಬಂದಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಎನ್‌ಡಿಆರ್‌ಎಫ್ ತಂಡದ ಜೊತೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಅವರು ತಿಳಿಸಿದರು. ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಔಷಧಗಳನ್ನು ದಾಸ್ತಾನು ಮಾಡಿಕೊಂಡು ಮುಂಗಾರು ವೇಳೆ ಸಾಂಕ್ರಾಮಿಕ ರೋಗ ಗಳು ಉಲ್ಬಣಗೊಳ್ಳದಂತೆ ಎಚ್ಚರ ವಹಿಸಬೇಕು. ಮಳೆಗಾಲದಲ್ಲಿ ಹರಡುವ ಕಾಯಿಲೆಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಪೊಲೀಸ್, ಕಂದಾಯ, ಪಂಚಾಯತ್ ರಾಜ್, ಲೋಕೋಪಯೋಗಿ, ಅಗ್ನಿಶಾಮಕ ಹೀಗೆ ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಆಗಬೇಕಿರುವ ಕಾರ್ಯಗಳ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಐಶ್ವರ್ಯ, ಉಪ ವಿಭಾಗಾಧಿಕಾರಿ ವಿನಾಯಕ ನರ್ವಡೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ದಿನೇಶ್ ಕುಮಾರ್, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಒಳಮೀಸಲಾತಿಗಾಗಿ ಪರಿಶಿಷ್ಟ ಜಾತಿ ಸಮೀಕ್ಷೆ; ನಿಗದಿತ ಗುರಿ ತಲುಪಲು ಪರದಾಟ

# ತಾಂತ್ರಿಕ ಅಡಚಣೆ, ಸಮೀಕ್ಷೆ ವಿಳಂಬ

• **ಉದಯವಾಹಿನಿ, ಕೋಲಾರ**

ಪರಿಶಿಷ್ಟ ಜಾತಿಯ ಒಳಮೀಸಲಾತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೈಗೊಂಡಿರುವ ಜಾತಿ ಸಮೀಕ್ಷೆಯು ಜಿಲ್ಲೆಯಲ್ಲಿ ತಾಂತ್ರಿಕ ಸಮಸ್ಯೆ ಸೇರಿದಂತೆ ವಿವಿಧ ಕಾರಣಗಳಿಂದ ಆಮೆಗತಿಯಲ್ಲಿ ಸಾಗಿದೆ. ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ನೇತೃತ್ವದ ಏಕ ಸದಸ್ಯ ವಿಚಾರಣಾ ಆಯೋಗದ ನೇತೃತ್ವದಲ್ಲಿ ಮೇ 5ರಂದು ಮೊದಲ ಹಂತದ ಸಮೀಕ್ಷೆ ಆರಂಭವಾಗಿದೆ. ಈಗಾಗಲೇ ಆರು ದಿನ ಕಳೆದಿದ್ದು, ಜಿಲ್ಲೆಯು ನಿಗದಿತ ಗುರಿ ಮುಟ್ಟಿಲ್ಲ. ಜಿಲ್ಲೆಯಲ್ಲಿ 4 ಲಕ್ಷಕ್ಕೂ ಅಧಿಕ ಕುಟುಂಬಗಳಿವೆ. ಅದರಲ್ಲಿ ಪರಿಶಿಷ್ಟ ಜಾತಿಯ ಸುಮಾರು 1.32 ಲಕ್ಷ ಕುಟುಂಬಗಳಿವೆ. ಸಮೀಕ್ಷೆ ಗಾಗಿ 1,538 ಬೂತ್ ಗುರುತಿಸಿದ್ದು, ಅಷ್ಟೇ ಗಣತಿದಾರರನ್ನು ನೇಮಿಸಲಾಗಿದೆ. ಸಮೀಕ್ಷೆಯಲ್ಲಿ ದಿನಕ್ಕೆ 37 ಸಾವಿರ ಕುಟುಂಬ ತಲುಪುವ ಗುರಿ ಹೊಂದಲಾಗಿದೆ. ಸಮೀಕ್ಷೆಯಲ್ಲಿ ಒಂದು ಮನೆಯ ಮಾಹಿತಿ ಪಡೆಯಲು 20 ನಿಮಿಷ ನಿಗದಿಪಡಿಸಲಾಗಿದೆ. ಆದರೆ, 42 ಪ್ರಶ್ನೆ ಕೇಳಿ ಆ್ಯಪ್‌ನಲ್ಲಿ ಮನೆಯ ಸದಸ್ಯರ ಮಾಹಿತಿಯನ್ನು ಭರ್ತಿ ಮಾಡಲು ಕನಿಷ್ಠ ಒಂದು ಗಂಟೆ ತೆಗೆದುಕೊಳ್ಳುತ್ತಿರುವುದಾಗಿ ಗಣತಿದಾರರು ಹೇಳುತ್ತಿದ್ದಾರೆ. ಹೀಗಾಗಿ, ನಿತ್ಯ ನಿಗದಿಯಂತೆ ಮನೆಗಳನ್ನು ತಲುಪಲು ಆಗುತ್ತಿಲ್ಲ. ಇದಕ್ಕೆ ಆ್ಯಪ್ ಸಮಸ್ಯೆ, ಸರ್ವರ್ ಡೌನ್ ಆಗುವುದು ಸೇರಿದಂತೆ ಹಲವು ಕಾರಣಗಳನ್ನು ಅವರು ಹೇಳುತ್ತಿದ್ದಾರೆ. ಹೊಸ ಆ್ಯಪ್ ಬಳಸುತ್ತಿದ್ದರೂ ಅದಕ್ಕೆ ಗಣತಿದಾರರು ಇನ್ನು ಹೊಂದಿಕೊಂಡಿಲ್ಲ. ಜೊತೆಗೆ ಗಣತಿದಾರರನ್ನಾಗಿ ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಕರನ್ನು ನೇಮಿಸಲಾಗಿದೆ. ಆದರೆ, ಅವರು ವಿವಿಧ ಕಾರಣವೊಡ್ಡಿ ಸಮೀಕ್ಷೆಗೆ ತಪ್ಪಿಸಿಕೊಳ್ಳುತ್ತಿದ್ದಾರೆ, ರಜೆ ಹಾಕುತ್ತಿದ್ದಾರೆ. ಜೊತೆಗೆ ಕೆಲವರು ಇನ್ನೂ ಲಾಗಿನ್ ಆಗಿಲ್ಲ. ಗಣತಿಗೆ ಗೈರು ಹಾಜರಾಗುವವರ ವಿರುದ್ಧ ಕ್ರಮ ವಹಿಸುವುದಾಗಿ ಈಗಾಗಲೇ ಜಿಲ್ಲಾಧಿಕಾರಿ ಎಂ.ಆರ್.ರವಿ ಕೂಡ ಎಚ್ಚರಿಕೆ ನೀಡಿದ್ದಾರೆ. ನಿತ್ಯ ಬೆಳಿಗ್ಗೆ 6.30ಕ್ಕೆ ಸಮೀಕ್ಷೆ ಆರಂಭಿಸಬೇಕು. ಆದರೆ, ಗಣತಿದಾರರು ಸಮೀಕ್ಷೆಗಾಗಿ ಮನೆಗಳನ್ನು ತಲುಪುವುದೇ ಎರಡು ಗಂಟೆ ತಡವಾಗಿ. ಅಂದರೆ ಬೆಳಿಗ್ಗೆ 8.30ಕ್ಕೆ ಸಮೀಕ್ಷೆ ಆರಂಭಿಸುವುದು ಕೆಲವೆಡೆ ಕಂಡುಬಂದಿದೆ. ಸಮೀಕ್ಷೆ ನಡೆಸಲು ಒಬ್ಬೊಬ್ಬ ಗಣತಿದಾರರಿಗೆ 150ರಿಂದ 200 ಮನೆಗಳನ್ನು ನಿಗದಿಪಡಿಸಲಾಗಿದೆ. ಕೆಲವರು ನಿಗದಿಪಡಿಸಿದಂತೆ ಪ್ರಗತಿ ಸಾಧಿಸಿದ್ದರೆ, ಇನ್ನು ಕೆಲವರು ಬಹಳ ಹಿಂದೆ ಉಳಿದಿದ್ದಾರೆ.


ಉದಯವಾಹಿನಿ ಚಿತ್ರ

**ಆನ್ ಲೈನ್‌ನಲ್ಲಿ ಸಮೀಕ್ಷೆಗೆ ಮಾಹಿತಿ**

ಮೇ 6ರಂದು ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಖುದ್ದಾಗಿ ಕೋಲಾರಕ್ಕೆ ಭೇಟಿ ನೀಡಿ ಸಮೀಕ್ಷೆ ನಡೆಯುತ್ತಿರುವ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ್ದರು. ಯಾವುದೇ ಗೊಂದಲ ಇಲ್ಲದಂತೆ, ಸಂಯಮದಿಂದ ಸಮೀಕ್ಷೆ ನಡೆಸುವಂತೆ ಸೂಚನೆ ನೀಡಿದ್ದರು. ಜಿಲ್ಲೆಯಲ್ಲಿನ ಪ್ರಗತಿ ಪರಿಶೀಲನೆ ಸಭೆ ಕೂಡ ನಡೆಸಿದ್ದರು. ಮೊದಲ ಹಂತದಲ್ಲಿ ಮನೆ ಮನೆ ಸಮೀಕ್ಷೆ ಮೇ 17 ರವರೆಗೆ ನಡೆಯಲಿದೆ. ಮೇ 19 ರಿಂದ 21 ರವರೆಗೆ ಆಯಾ ಗ್ರಾಮ ಪಂಚಾಯ್ತಿಗಳಲ್ಲಿ ವಿಶೇಷ ಶಿಬಿರ ಆಯೋಜಿಸಲಾಗುತ್ತದೆ. ಕೂಲಿಕಾರ್ಮಿಕರು, ವಲಸೆ ಹೋಗಿರುವಂಥವರನ್ನು ಸಮೀಕ್ಷೆ ಮಾಡಲಾಗುವುದು. 3ನೇ ಹಂತದಲ್ಲಿ ಆನ್‌ಲೈನ್‌ನಲ್ಲಿ ಸಮೀಕ್ಷೆಗೆ ಮಾಹಿತಿಯನ್ನು ನಮೂದಿಸುವ ಅವಕಾಶ ಕಲ್ಪಿಸಲಾಗಿದೆ.

### ತಾಂತ್ರಿಕ ಸಮಸ್ಯೆಯಿಂದ ವಿಳಂಬ

**ಮೊದಲಿನ ಆ್ಯಪ್ ಬದಲಿಸಿ ಎರಡು ದಿನಗಳಿಂದ ಹೊಸ ಆ್ಯಪ್ ಬಳಸುತ್ತಿದ್ದ ಅದಕ್ಕೆ ಗಣತಿದಾರರು ಹೊಂದಿಕೊಳ್ಳಬೇಕು. 42 ಪ್ರಶ್ನೆ ಕೇಳಲು 20 ನಿಮಿಷ ನಿಗದಿಪಡಿಸಲಾಗಿದೆ. ಕೆಲ ನಿಮಿಷ ಹೆಚ್ಚು ತೆಗೆದುಕೊಳ್ಳುತ್ತಿದ್ದಾರೆ. ನಿರೀಕ್ಷಿತ ಗುರಿ ಮುಟ್ಟಲು ಪ್ರಯತ್ನ ಹಾಕುತ್ತಿದ್ದೇವೆ. ಸರ್ವರ್ ಸಮಸ್ಯೆ ಸೇರಿದಂತೆ ತಾಂತ್ರಿಕ ಸಮಸ್ಯೆ ಉಂಟಾಗುತ್ತಿದೆ. ಜೊತೆಗೆ ತರಬೇತಿ ನೀಡುವ ಬಗ್ಗೆಯೂ ಚಿಂತಿಸುತ್ತಿದ್ದೇವೆ**
**-ಎಂ. ಶ್ರೀನಿವಾಸನ್**
**ಜಂಟಿ ನಿರ್ದೇಶಕ ಸಮಾಜ ಕಲ್ಯಾಣ ಇಲಾಖೆ**

## ಮಿನಿ ನ್ಯೂಸ್

### ಅಡುಗೆ ಅನಿಲ ಸಿಲೆಂಡರ್ ಸ್ಫೋಟ ತಾಯಿ, ಮಕ್ಕಳಿಗೆ ಗಾಯ

• **ಉದಯವಾಹಿನಿ, ಚಿಂತಾಮಣಿ**

ನಗರದ ಹೊರವಲಯದ ಮುರುಗಮಲ್ಲ ರಸ್ತೆಯಲ್ಲಿರುವ ಕರಿಯಪ್ಪಲ್ಲಿಯ ಮನೆಯೊಂದರಲ್ಲಿ ಭಾನುವಾರ ಅಡುಗೆ ಅನಿಲದ ಸಿಲೆಂಡರ್ ಸ್ಫೋಟಗೊಂಡು ತಾಯಿ ಮತ್ತು ಮೂವರು ಮಕ್ಕಳು ಗಾಯಗೊಂಡಿದ್ದಾರೆ. ತಾಯಿ, ಮಗ ಗಂಭೀರವಾಗಿ ಗಾಯಗೊಂಡಿದ್ದು ಚಿಂತಾಜನಕ ಸ್ಥಿತಿಯಲ್ಲಿದ್ದು, ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ. ಗ್ರಾಮದ ಲಕ್ಷ್ಮೀದೇವಮ್ಮ ಎಂಬುವವರ ಮನೆಯಲ್ಲಿ ಸಿಲೆಂಡರ್ ಸ್ಫೋಟಗೊಂಡಿದ್ದು, ಮನೆಯಲ್ಲಿದ್ದ ತಾಯಿ ಲಕ್ಷ್ಮೀದೇವಮ್ಮ(33), ಮಗ ಹರ್ಷವರ್ಧನ(12) ಮತ್ತು ಲಕ್ಷ್ಮೀದೇವಮ್ಮ ಅವರ ಸಹೋದರನ ಮಕ್ಕಳಾದ ಸಂಜಯ್ (12), ಹರಿಪ್ರಿಯಾ(10) ಗಾಯಗೊಂಡಿದ್ದಾರೆ. ಸ್ಫೋಟದ ಶಬ್ದ ಕೇಳಿ ಕೂಡಲೇ ಧಾವಿಸಿದ ಅಕ್ಕಪಕ್ಕದವರು ಗಾಯಾಳಯಗಳನ್ನು ನಗರದ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಲಕ್ಷ್ಮೀದೇವಮ್ಮ, ಹರ್ಷವರ್ಧನ್ ಅವರಿಗೆ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂ ರಿನ ವಿಕ್ಟೋರಿಯಾ ಆಸ್ಪತ್ರೆಗೆ ಕಳುಹಿಸಲಾಗಿದೆ. ಸಂಜಯ್ ಮತ್ತು ಹರಿಪ್ರಿಯಾಗೆ ಸಣ್ಣಪುಟ್ಟ ಗಾಯವಾಗಿದೆ. ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಫೋಟದ ರಭಸಕ್ಕೆ ಮನೆಯ ಮೇಲ್ಛಾವಣಿಗೆ ಹಾನಿಯಾಗಿದೆ. ಮನೆಯಲ್ಲಿದ್ದ ಗೃಹಬಳಕೆಯ ವಸ್ತುಗಳು ಸುಟ್ಟು ಹೋಗಿವೆ. ಸ್ಫೋಟದ ಶಬ್ದ ಬಹುದೂರದವರೆಗೂ ಕೇಳಿಸಿತು. ಅನಿಲ ಸೋರಿಕೆಯಾಗಿ ಸ್ಫೋಟಗೊಂಡಿರಬಹುದು ಎಂದು ಸ್ಥಳೀಯರು ತಿಳಿಸಿದರು. ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಮುಂದಿನ ಕ್ರಮಕೈಗೊಂಡಿದ್ದಾರೆ.

### ಒಳ ಮೀಸಲಾತಿ ಸಮೀಕ್ಷೆ ಕಾಲಮಿತಿಯೊಳಗೆ ಪೂರ್ಣಗೊಳಿಸಿ

• **ಉದಯವಾಹಿನಿ, ಚಾಮರಾಜನಗರ**

ಒಳ ಮೀಸಲಾತಿ ಜಾತಿ ಗಣತಿಯನ್ನು ವೈಜ್ಞಾನಿಕವಾಗಿ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿ ಜಿಲ್ಲಾ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾಹುಡೇದ ಅವರಿಗೆ ಈಚೆಗೆ ಮನವಿ ಸಲ್ಲಿಸಲಾಯಿತು. ಒಳಮೀಸಲಾತಿ ಜಾರಿ ಸಂಬಂಧ ಸರ್ಕಾರ ಪರಿಶಿಷ್ಟ ಜಾತಿಗಳೊಳಗೆ ಉಪ ಜಾತಿಗಳ ಮಾಹಿತಿ ಸಂಗ್ರಹ ಮಾಡುತ್ತಿದ್ದು, ಜಿಲ್ಲೆಯಲ್ಲಿ ಸಮೀಕ್ಷೆ ವಿಳಂಬಗತಿಯಲ್ಲಿ ಸಾಗಿದೆ. ಪರಿಶಿಷ್ಟ ಜಾತಿಯ ಮಾದಿಗ ಜನಾಂಗದ ಬೀದಿಗಳಲ್ಲಿ ಸಮರ್ಪಕವಾಗಿ ಸಮೀಕ್ಷೆ ನಡೆಯುತ್ತಿಲ್ಲ ಎಂಬ ದೂರುಗಳು ಬಂದಿವೆ.

ಸಿಬ್ಬಂದಿಗೆ 101 ಜಾತಿಗಳ ಮಾಹಿತಿಯ ಕೊರತೆ ಇದ್ದು, ಸಮೀಕ್ಷೆಯ ಸಂಪೂರ್ಣ ಮಾಹಿತಿ ಇಲ್ಲವಾಗಿದೆ. ಸರ್ವರ್ ಸಮಸ್ಯೆ, ತಾಂತ್ರಿಕ ತೊಡಕುಗಳು ಎದುರಾಗುತ್ತಿದ್ದು ಸಮೀಕ್ಷೆಯಿಂದ ಹಲವರು ಹೊರಗುಳಿಯುವ ಆತಂಕ ಎದುರಾಗಿದೆ. ಸಿಬ್ಬಂದಿ ಕಾರ್ಯ ವೈಖರಿ ಯನ್ನು ಪರಿಶೀಲಿಸಲು ನೋಡಲ್ ಅಧಿಕಾರಿಗಳನ್ನು ನಿಯೋ ಜನೆ ಮಾಡಬೇಕು ಎಂದು ಮನವಿಯಲ್ಲಿ ಜಿಲ್ಲಾ ಮಾದಿಗ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.

### ಕಾರು, ಬೈಕ್ ಮುಖಾಮುಖಿ: ವ್ಯಕ್ತಿ ಸಾವು

• **ಉದಯವಾಹಿನಿ, ನಾಗಮಂಗಲ**

ಚಾಮರಾಜನಗರ- ಜೇವರ್ಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರು ಮತ್ತು ಬೈಕ್ ನಡುವೆ ಮುಖಾಮುಖಿ ಡಿಕ್ಕಿಯಾಗಿ ಒಬ್ಬರು ಮೃತಪಟ್ಟಿದ್ದು, ಮತ್ತೊಬ್ಬರಿಗೆ ಗಂಭೀರ ಗಾಯಗಳಾಗಿವೆ. ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಸಿ.ಎಸ್.ಪುರ ಗ್ರಾಮದ ರಾಮೇಗೌಡ(45) ಮೃತರು. ತಾಲ್ಲೂಕಿನ ಬೆಂಗಮಂಗಲ ಮತ್ತು ಅಂಚೆಭೂವನಹಳ್ಳಿ ಸಮೀಪ ಭಾನುವಾರ ಸಂಜೆ ಮುಳಕಟ್ಟೆ ಗ್ರಾಮದಲ್ಲಿ ಅಡುಗೆ ಕೆಲಸಕ್ಕೆ ಬಂದಿದ್ದ ರಾಮೇಗೌಡ ಅವರು ಮತ್ತೊಬ್ಬ ವ್ಯಕ್ತಿಯ ಜೊತೆ ಹೀರೋ ಸ್ಪೆಂಡರ್ ಬೈಕ್‌ನಲ್ಲಿ ಬೆಳ್ಳೂರು ಕ್ರಾಸ್ ಕಡೆಗೆ ಬರುತ್ತಿದ್ದಾಗ ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ರಾಮೇಗೌಡ ತೀವ್ರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟರು. ಮತ್ತೊಬ್ಬ ಯುವಕನಿಗೆ ಗಾಯವಾಗಿದ್ದು, ಅವರನ್ನು ಬಿ.ಜಿ.ನಗರದ ಆದಿಚುಂಚನಗಿರಿ ವೈದ್ಯಕೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಳ್ಳೂರು ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಬುದ್ಧ ಪೂರ್ಣಿಮೆ: ವಿವಿಧೆಡೆ ಜಾಗೃತಿ

• **ಉದಯವಾಹಿನಿ, ಶ್ರೀರಂಗಪಟ್ಟಣ**

ಬುದ್ಧ ಪೂರ್ಣಿಮೆ ನಿಮಿತ್ತ ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಮತ್ತು ಇತರೆಡೆ ಭಾನುವಾರ ಬುದ್ಧ ದಮ್ಮ ಜಾಗೃತಿ ಕಾರ್ಯಕ್ರಮ ನಡೆಯಿತು. ತಾಲ್ಲೂಕಿನ ಕೆ.ಶೆಟ್ಟಹಳ್ಳಿಯ ವಿನಯ ವನ ಬುದ್ಧ ವಿಹಾರ, ಬುದ್ಧ ಟ್ರಸ್ಟ್ ಹಾಗೂ ಭಾರತೀಯ ಬೌದ್ಧ ಮಹಾಸಭಾ ವತಿಯಿಂದ, ಬುದ್ಧ ಪೂರ್ಣಿಮೆ ಮುನ್ನಾ ದಿನ ಬುದ್ಧನ ಅನುಯಾಯಿಗಳು ಜಾಗೃತಿ ನಡೆಸಿದರು. ಸಾರ್ವಜನಿಕರು, ಆಸ್ಪತ್ರೆಯ ಸಿಬ್ಬಂದಿ, ರೋಗಿಗಳು ಮತ್ತು ಅವರ ಬಂಧುಗಳಿಗೆ ಬುದ್ಧನ ಸಂದೇಶಗಳನ್ನು ತಿಳಿಸಿದರು.

ಗೌತಮ ಬುದ್ಧ ಸಾರಿದ ಸರಳತೆಯ ತತ್ವ ಎಲ್ಲರ ಮನ, ಮನೆಗಳಿಗೆ ತಲುಪಬೇಕು. ಜಾತಿ, ಧರ್ಮ, ವರ್ಗ, ವರ್ಣ ರಹಿತ ಸಮಾಜ ನಿರ್ಮಾಣ ಆಗಬೇಕಾದರೆ ಬುದ್ಧನ ಪಂಚಶೀಲ ತತ್ವಗಳನ್ನು ಅನುಸರಿಸಬೇಕು. ಈ ದಿಸೆಯಲ್ಲಿ ಮೂರು ದಿನಗಳ ಕಾಲ ವಿವಿಧೆಡೆ ಜನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬುದ್ಧ ಟ್ರಸ್ಟ್ ಅಧ್ಯಕ್ಷ ಮೋಹನದಾಸ್ ತಿಳಿಸಿದರು. ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಣೆ ನಡೆಯಿತು. ಪ್ರೇರಣಾ ಅಂಗವಿಕಲ ಶಾಲೆಯ ಮಕ್ಕಳಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು. ಸೋಮವಾರ ವಿನಯ ವನ ಬುದ್ಧ ವಿಹಾರದಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಯಲಿದೆ ಎಂದು ಟ್ರಸ್ಟ್ ಕಾರ್ಯದರ್ಶಿ ಶ್ರೀನಿವಾಸ್ ತಿಳಿಸಿದರು.

### ಮೇಳಾಪುರ ಗ್ರಾ.ಪಂ.ಗೆ ರಾಧಾ ಮಹೇಶ್ ಅಧ್ಯಕ್ಷೆ

• **ಉದಯವಾಹಿನಿ, ಶ್ರೀರಂಗಪಟ್ಟಣ**



ತಾಲ್ಲೂಕಿನ ಮೇಳಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ರಾಧಾ ಮಹೇಶ್ ಶುಕ್ರವಾರ ಅವಿರೋಧವಾಗಿ ಆಯ್ಕೆಯಾದರು. ರತ್ನಮ್ಮ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಈ ಆಯ್ಕೆ ನಡೆಯಿತು. ಬಿಇಒ ಆರ್.ಪಿ. ಮಹೇಶ್ ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು.

ರಾಧಾ ಮಹೇಶ್ ಅವರ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಗ್ರಾ.ಪಂ. ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ವೇಳೆ ಉಪಾಧ್ಯಕ್ಷ ವೆಂಕಟೇಶ್, ಮಾಜಿ ಅಧ್ಯಕ್ಷ ಬೆಟ್ಟೇಗೌಡ, ಸದಸ್ಯರಾದ ಅನುಪಮಾ, ಸೌಮ್ಯಾ, ಧನರಾಜ್, ಈರೇಗೌಡ, ಸದಾಶಿವ, ಬಾಲರಾಜು, ಪ್ರೇಮಾ, ಮಮತಾ, ಮೋಹನಕುಮಾರ್, ಸುನಂದಮ್ಮ ಹಾಜರಿದ್ದರು.

ಅಂತರಾಳದಿಂದ...
EDITORIAL

# ಒಳಮೀಸಲಾತಿ: ನಮ್ಮ ಗುರುತು ನಮಗೆ ಉರುಳಾಗದಿರಲಿ



ರಾಜ್ಯಾದ್ಯಂತ ಒಳಮೀಸಲಾತಿಗೆ ಸಂಬಂಧಿಸಿದ ಸಮೀಕ್ಷೆಗಳು ಆರಂಭಗೊಂಡಿವೆ. ಈ ಸಮೀಕ್ಷೆ ಅತಿ ಶೀಘ್ರ ಮುಗಿದು ಒಳ ಮೀಸಲಾತಿ ಜಾರಿಗೊಳ್ಳಬೇಕು ಮತ್ತು ಎಲ್ಲಾ ಜಾತಿಗಳು ತಮ್ಮ ಅರ್ಹತೆಗನುಸಾರವಾಗಿ ಸರಕಾರದ ಸವಲತ್ತುಗಳನ್ನು ತಮ್ಮದಾಗಿಸಿಕೊಳ್ಳಬೇಕು ಎನ್ನುವುದು ಎಲ್ಲರ ಆಗ್ರಹವಾಗಿದೆ. ಒಳ ಮೀಸಲಾತಿ ಶೀಘ್ರದಲ್ಲಿ ಜಾರಿಗೊಳ್ಳಬೇಕಾದರೆ ಪರಿಶಿಷ್ಟ ಜಾತಿಯೊಳಗಿನ ಸಮೀಕ್ಷೆಗಳು ಯಾವುದೇ ಗೊಂದಲಗಳಿಲ್ಲದೆ ಮುಗಿಯಬೇಕು. ಒಮ್ಮೆ ಸಮೀಕ್ಷೆ ಪೂರ್ತಿಯಾಯಿತು ಎಂದಾದರೆ, ಅದರ ಬಗ್ಗೆ ಎಲ್ಲರೂ ಒಮ್ಮತದ ಅಭಿಪ್ರಾಯವನ್ನು ಹೊಂದಿರಬೇಕು. ಸಮೀಕ್ಷೆ ಪೂರ್ತಿಯಾದ ಬಳಿಕ ಮತ್ತೆ ಭಿನ್ನಮತಗಳು ಭುಗಿಲೆದ್ದು ದಲಿತ ಸಮುದಾಯದ ಬೇರೆ ಬೇರೆ ಗುಂಪುಗಳು ಬೀದಿಗಿಳಿದರೆ ಒಳ ಮೀಸಲಾತಿ ಜಾರಿ ಕಷ್ಟವಾಗಬಹುದು. ಈಗಾಗಲೇ ವಿವಿಧ ಸಂಘಟನೆಗಳು ತಮ್ಮ ತಮ್ಮ ಜಾತಿ ಗುರುತುಗಳ ಬಗ್ಗೆ ಹೇಳಿಕೆಗಳನ್ನು ನೀಡುತ್ತಿವೆ. ರಾಜ್ಯದಲ್ಲಿ ಒಂದೇ ಜಾತಿಗೆ ಸಂಬಂಧ ಪಟ್ಟವರು ಬೇರೆ ಬೇರೆ ಹೆಸರುಗಳಿಂದ, ಬೇರೆ ಬೇರೆ ಗುಂಪುಗಳಿಂದ ಗುರುತಿಸಲ್ಪಡುತ್ತಿರುವುದು ಸಮಸ್ಯೆಗಳಿಗೆ ಕಾರಣವಾಗಿದೆ. ಇದು ಸಮೀಕ್ಷೆಯ ದಿಕ್ಕು ತಪ್ಪಿಸುವ ಸಾಧ್ಯತೆಗಳಿವೆ ಎನ್ನುವುದು ಕೆಲವು ದಲಿತ ಸಂಘಟನೆಗಳ ಆತಂಕವಾಗಿದೆ. ದಲಿತ ಸಮುದಾಯದೊಳಗಿರುವ ಎಷ್ಟೋ ಜನರಿಗೆ ತಮ್ಮ ಜಾತಿ ಯಾವುದು ಎನ್ನುವುದರ ಬಗ್ಗೆಯೇ ಗೊಂದಲಗಳಿವೆ. ತಮ್ಮ ಜಾತಿಯನ್ನು ಬಹಿರಂಗ ಪಡಿಸುವುದರ ಬಗ್ಗೆ ಕೀಳರಿಮೆಗಳಿವೆ. ಈಗಾಗಲೇ ಆದಿ ದ್ರಾವಿಡ, ಆದಿ ಕರ್ನಾಟಕ ಮೊದಲಾದ ಹೆಸರುಗಳಿಂದ ಗುರುತಿಸಲ್ಪಡುತ್ತಿರುವವರೆಲ್ಲ ತಮ್ಮ ಮೂಲ ಉಪಜಾತಿಗಳ ಮೂಲಕ ಹೊಸದಾಗಿ ಗುರುತಿಸಲು ಮುಂದಾಗಬೇಕಾಗಿದೆ. ಹಲವರಿಗೆ ಇದರಲ್ಲಿ ಹಲವು ತೊಡಕುಗಳು ಕಾಣುತ್ತಿವೆ. ಈ ಗೊಂದಲಗಳನ್ನು ರಾಜಕೀಯ ಶಕ್ತಿಗಳು ದುರುಪಯೋಗ ಪಡಿಸಿಕೊಳ್ಳುವ ಸಾಧ್ಯತೆಗಳು ಇಲ್ಲದಿಲ್ಲ.

ಇತರ ಜಾತಿಗಳ ಅಂಕಿಅಂಶಗಳನ್ನು ಸುಲಭದಲ್ಲಿ ಸಂಗ್ರಹಿಸಿದಂತೆ ದಲಿತ ಸಮುದಾಯದ ಜಾತಿಗಳ ಡೇಟಾಗಳನ್ನು ಸಂಗ್ರಹಿಸುವುದು ಸಾಧ್ಯವಿಲ್ಲ. ಇದು ಅತ್ಯಂತ ತಾಳ್ಮೆಯಿಂದ ನಿಭಾಯಿಸಬೇಕಾದ ಸೂಕ್ಷ್ಮ ಕೆಲಸವಾಗಿದೆ. ಆದರೆ ಒಳ ಮೀಸಲಾತಿ ಜಾರಿಗೊಳಿಸುವುದನ್ನು ಮುಂದೂಡಲು ಇದನ್ನು ನೆಪವಾಗಿ ಬಳಸಿಕೊಳ್ಳಬಾರದು. ಎಲ್ಲರೂ ತಮ್ಮ ತಮ್ಮ ಉಪಜಾತಿಗಳನ್ನು ಮೂಲ ಜಾತಿಗಳನ್ನು ನಮೂದಿಸಿ ಎನ್ನುವ ಕರೆಯನ್ನು ಹಲವು ಸಂಘಟನೆಗಳು ನೀಡಿವೆ. ಆದರೆ ಇದು ಎಷ್ಟರಮಟ್ಟಿಗೆ ಸಾಧ್ಯವಾಗಬಹುದು ಎನ್ನುವುದರ ಬಗ್ಗೆ ಅನುಮಾನಗಳಿವೆ. ಇದು ಸಾಧ್ಯವಾಗದೇ ಇದ್ದರೆ, ಒಳಮೀಸಲಾತಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಕಷ್ಟವಾಗಬಹುದು. ಮುಂದಿನ ದಿನಗಳಲ್ಲಿ ಮತ್ತೆ ಕೆಲವು ಜಾತಿ ಸಂಘಟನೆಗಳು ಒಳಮೀಸಲಾತಿಗೆ ಹೊಸ ಸಮೀಕ್ಷೆಯನ್ನು ನಡೆಸಬೇಕು ಎಂದು ಒತ್ತಡಗಳನ್ನು ಹೇರುವ ಸಾಧ್ಯತೆಗಳಿವೆ. ಈ ಕಾರಣದಿಂದ ಜಾತಿ ಸಮೀಕ್ಷೆಗಳನ್ನು ನಡೆಸುವಾಗ, ಜಾತಿಗಳನ್ನು ಉಲ್ಲೇಖಿಸುವಾಗ ಕೆಲವು ನಿರ್ದಿಷ್ಟ ಜಾತಿಗಳು ಎದುರಿಸುತ್ತಿರುವ ಬಿಕ್ಕಟ್ಟನ್ನು ಸರಕಾರ ಗಂಭೀರವಾಗಿ ಪರಿಗಣಿಸಬೇಕಾಗಿದೆ. ಅವರ ಆತಂಕಗಳಿಗೆ ಕಿವಿಯಾಗಬೇಕಾಗಿದೆ. ಮುಖ್ಯವಾಗಿ ಜಾತಿ ಗುರುತುಗಳು ಮೇಲ್‌ಜಾತಿಯ ಜನರಿಗೆ ಒಂದು ಪದವಿಯಾಗಿದೆ. ಆದುದರಿಂದ ಅವರು ಅದನ್ನು ತಮ್ಮ ಹೆಸರಿನ ಜೊತೆಗೇ ಹೆಮ್ಮೆಯಿಂದಲೂ, ಆತ್ಮವಿಶ್ವಾಸದಿಂದಲೂ ಧರಿಸಿಕೊಂಡಿರುತ್ತಾರೆ. ಆದರೆ ದಲಿತರ ಪಾಲಿಗೆ ಜಾತಿ ಗುರುತು ಅವರಲ್ಲಿ ಕೀಳರಿಮೆಯನ್ನು ತುಂಬಿದೆ. ಅವರು ಅದನ್ನು ಬಹಿರಂಗವಾಗಿ ತಮ್ಮ ಹೆಸರಿನ ಜೊತೆಗೆ ಪ್ರದರ್ಶಿಸುವ ಬದಲು, ಎಲ್ಲಿ ಹೇಗೆ ಮುಚ್ಚಿಡಬಹುದು ಎನ್ನುವ ಪ್ರಯತ್ನ ನಡೆಸಿದ್ದೇ ಹೆಚ್ಚು ಜಾತಿಯ ಹೆಸರಿನ ಜೊತೆ ಜೊತೆಗೇ ಅಂಟಿಕೊಂಡಿರುವ ಕಳಂಕಗಳು, ಅವಮಾನಗಳನ್ನು ಕಿತ್ತೆಸೆಯುವ ಭರದಲ್ಲಿ ಆ ಹೆಸರನ್ನೇ ಕಳಚಿಕೊಳ್ಳುವ ಪ್ರಯತ್ನ ನಡೆಸುತ್ತಾ ಬಂದಿದ್ದಾರೆ. ಅನೇಕರು ತಮ್ಮ ಉಪ ಜಾತಿಗಳ ಹೆಸರನ್ನು ಕೈ ಬಿಟ್ಟು ಆದಿ ದ್ರಾವಿಡ, ಆದಿ ಕರ್ನಾಟಕ, ಆದಿ ಅಂಧ್ರ ಎಂದು ಸಾರ್ವಜನಿಕವಾಗಿ ಗುರುತಿಸಲು ಇದೂ ಒಂದು ಕಾರಣ. ಇದೀಗ ಈ ನೆಲಮೂಲದ ಜೊತೆಗೆ ಹೊಂದಿರುವ ಕರುಳ ಸಂಬಂಧವನ್ನು ಮುಂದಿಟ್ಟುಕೊಂಡು ತಮ್ಮ ಜಾತಿ ಹೆಸರನ್ನು ಮರು ಸ್ಥಾಪಿಸಲು ಕೆಲವರು ಪ್ರಯತ್ನಿಸುತ್ತಿದ್ದಾರಾದರೂ, ಅದು ಅಷ್ಟು ಸುಲಭದ ಕೆಲಸವೇನೂ ಅಲ್ಲ. ಹೊಲದ ಒಡೆಯನೇ ಹೊಲೆಯ ಎನ್ನುವುದು ಹೊಲೆಯ ಸಮುದಾಯದ ಹೆಗ್ಗಳಿಕೆಯಾದರೂ, ಈ ಸಮಾಜ ಹೊಲೆಯ ಎನ್ನುವ ಪದವು 'ಹೊಲಸಿನಿಂದ ಹುಟ್ಟಿತು ಎಂದು ನಂಬಿಸುತ್ತಾ ಬಂದಿದೆ. ಆದುದರಿಂದಲೇ, ಸಾಮಾಜಿಕವಾಗಿ ಜಾಗೃತಗೊಂಡ ಒಂದು ತಲೆಮಾರು ತಮ್ಮನ್ನು ತಾವು ಹೊಲೆಯ ಎಂದು ಗುರುತಿಸಿಕೊಳ್ಳಲು ಹಿಂದೇಟು ಹಾಕುತ್ತವೆ. ಒಂದು ಕಾಲದಲ್ಲಿ ಮಾದಿಗ, ಹೊಲೆಯ ಎಂದು ಕರೆಯುವುದು ಕೂಡ ಅಪರಾಧವೆಂದು ಭಾವಿಸಲಾಗಿತ್ತು. ಇದೀಗ ನಿಮ್ಮನ್ನು ನೀವು ಹೊಲೆಯ, ಮಾದಿಗ ಎಂದು ಗುರುತಿಸಿಕೊಳ್ಳಿ ಎಂದು ಸಂಘಟನೆಗಳು ಕರೆ ನೀಡುತ್ತಿವೆ. ಆದರೆ ಇಂದಿಗೂ ಹೊಲೆಯ, ಮಾದಿಗ ಎಂದು ಗುರುತಿಸಿಕೊಳ್ಳಲು ಹಿಂಜರಿಯುವ ಪರಿಶಿಷ್ಟ ಜಾತಿಯ ಜನರಿದ್ದಾರೆ.

## ರಾಮಾಯಣ



ಚಿತ್ರಕೂಟಕ್ಕೆ ಶ್ರೀರಾಮನ ಪ್ರಯಾಣ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಅದರ ತೆಂಕಣತೀರದಲ್ಲಿ ಒಂದು ಆಲದ ಮರವಿದೆ. ಅದು ಪಚ್ಚೆವರ್ಣವುಳ್ಳ ಎಲೆಗಳಿಂದ ಕೂಡಿ ಬೆಳೆದು ಅನೇಕ ಸಿದ್ಧರಿಂದ ಸೇವಿಸಲ್ಪಟ್ಟದ್ದಾಗಿ ಶ್ಯಾಮಲವರ್ಣವಾಗಿರುವುದು. ಆ ವೃಕ್ಷದ ಸಮೀಪದಲ್ಲಿ ಹೋಗಿ ಸೀತಾದೇವಿಯು ಅದಕ್ಕೆ ನಮಸ್ಕಾರ ಪೂರ್ವಕವಾಗಿ ಪ್ರಾರ್ಥನೆ ಮಾಡಲಿ. ಮುಂದೆ ಕಪ್ಪಾದ ವನವಿರುವುದು. ಆ ವನದಲ್ಲಿ ಮುತ್ತುಗದ ಮರಗಳೂ ಯಲವದ ಮರಗಳೂ ಬಹಳವಾಗಿರುವುವು. ಯಮುನಾತೀರವು ತನ್ನಲ್ಲಿ ಹುಟ್ಟಿದ ಬಿದಿರುಗಳಿಂದ ಮನೋಹರ ವಾಗಿರುವುದು. ಇದೇ ನಿಮಗೆ ದಾರಿ. ನಾನು ಈ ಮಾರ್ಗದಲ್ಲಿ ಅನೇಕಸಾರಿ ಸಂಚರಿಸಿದ್ದೇನೆ. ಈ ದಾರಿಯು ಕಲ್ಲುಮುಳ್ಳುಗಳಿಲ್ಲದೆ, ಕಾಡುಗಿಚ್ಚಿನ ಬಾಧೆಯಿಲ್ಲದೆ ಮನೋಹರ ವಾಗಿರುವುದು ಎಂದು ಹೇಳಿ ಮಾರ್ಗವನ್ನು ತೋರಿಸಿ ತನ್ನ ಆಶ್ರಮಕ್ಕೆ ತಿರುಗಿದನು. ಆಮೇಲೆ ಶ್ರೀರಾಮನು ಲಕ್ಷ್ಮಣನನ್ನು ಕುರಿತು ಲಕ್ಷ್ಮಣ, ನಾವು ಮಹಾಪುಣ್ಯವನ್ನು ಮಾಡಿದವರು. ಮಹಾತ್ಮನಾದ ಭರದ್ವಾಜ ಮುನೀಶ್ವರನು ನಮ್ಮನ್ನು ಅನುಗ್ರಹಿಸಿ ಮಾರ್ಗವನ್ನು ತೋರಿಸಿದನು ಎಂದು ನುಡಿದು ಸೀತಾದೇವಿಯನ್ನು ಮುಂದಿಟ್ಟುಕೊಂಡು ಕಾಳಿಂದೀತೀರಕ್ಕೆ ಬಂದನು.

ಆಮೇಲೆ ಲಕ್ಷ್ಮಣನು ಅತಿಶೀಘ್ರ ಪ್ರವಾಹವುಳ್ಳ ಕಾಳಿಂದೀನದಿಯನ್ನು ಕಂಡು ಅದನ್ನು ದಾಟುವುದಕ್ಕಾಗಿ ಅನೇಕ ಒಣಗಿದ ಮರಗಳನ್ನೂ ಒಣಗಿದ ಬಿದಿರುಗಳನ್ನೂ ತಂದು ಆ ನದೀತೀರದಲ್ಲಿ ಹುಟ್ಟಿದ ಲಾವಂಚದ ಹುಲ್ಲಿನಿಂದ ತೆಪ್ಪವನ್ನು ಕಟ್ಟಿ ಬೆತ್ತದ ಕಟ್ಟಿಗೆಯಿಂದಲೂ ಮರದ ಕೊಂಬೆಗಳಿಂದಲೂ ಪೀಠವನ್ನು ನಿರ್ಮಿಸಿ ಸೀತಾದೇವಿಯು ಆ ತೆಪ್ಪದಮೇಲೆ ಕುಳಿತು ಕೊಳ್ಳುವುದಕ್ಕೆ ಅನುಕೂಲಮಾಡಿದನು. ಶ್ರೀರಾಮನು ಸಾಕ್ಷಾತ್ ಮಹಾಲಕ್ಷ್ಮಿಯಂತಿದ್ದ ಸೀತಾದೇವಿ ಯನ್ನು ಅದರಮೇಲೆ ಕುಳ್ಳಿರಿಸಿ ಆಕೆಯ ಸಮೀಪದಲ್ಲಿ ವಸ್ತ್ರಾಭರಣಭೂಷಣಾದಿಗಳನ್ನಿರಿಸಿದನು. ಮರದ ಕೊರಡುಗಳನ್ನು ಕಡಿದು ಅವುಗಳಿಂದ ರಾಮನೂ ಲಕ್ಷ್ಮಣನೂ ತೆಪ್ಪವನ್ನು ನಡೆಸಿಕೊಂಡು ಅತ್ಯಂತ ಸಾವಧಾನದಿಂದ ಕಾಳಿಂದೀನದಿಯನ್ನು ದಾಟುತ್ತಿದ್ದರು. ಆ ನದಿಯ ಮಧ್ಯಪ್ರದೇಶಕ್ಕೆ ಬಂದಾಗ ಸೀತಾದೇವಿಯು ಕಾಳಿಂದಿಯನ್ನು ಕುರಿತು ಕೈ ಮುಗಿದುಕೊಂಡು ಹೇ ದೇವಿ, ಮಂಗಳಕರಳಾದ ನಿನ್ನನ್ನು ದಾಟಿಹೋಗುತ್ತಿದ್ದೇವೆ. ದಶರಥರಾಯನ ಕುಮಾರನಾದ ನನ್ನ ಪತಿಯು ವನವಾಸವನ್ನು ಮುಗಿಸಿ ಅಯೋಧ್ಯಾ ಪಟ್ಟಣಕ್ಕೆ ಸುಖವಾಗಿ ಬಂದರೆ ನಿನಗೆ ಸಂತೋಷವಾಗುವಂತೆ ಸಾವಿರ ಗೋವುಗಳಿಂದಲೂ, ನೂರು ಸುರಾಘಟಗಳಿಂದಲೂ ಪೂಜಿಸುವೆನು ಎಂದು ಬಹಳವಾಗಿ ಪ್ರಾರ್ಥನೆಮಾಡಿದಳು. ಸೀತಾಲಕ್ಷ್ಮಣಸಮೇತನಾದ ಶ್ರೀರಾಮನು ಕಾಳಿಂದೀನದಿಯನ್ನು ದಾಟಿ ಆ ನದಿಯ ತೆಂಕಣತೀರಕ್ಕೆ ಬಂದು ಹಸುರಾದ ಎಲೆಗಳಿಂದ ಮನೋಹರವಾದ ಆಲದ ಮರದಡಿಗೆ ಬರಲು ಸೀತಾದೇವಿಯಂ ಭರದ್ವಾಜಮುನೀಶ್ವರನ ಉಪದೇಶವನ್ನು ನೆನೆದು ಆ ಆಲದ ಮರಕ್ಕೆ ಅಭಿನಂದಿಸಿ ಎಲೈ ಮಹಾವೃಕ್ಷವೆ, ನನ್ನ ಪತಿಯಾದ ಶ್ರೀರಾಮನು ವನದಿಂದ ತಿರುಗಿ ಬಂದು ಕೌಸಲ್ಯಾದೇವಿಯನ್ನೂ ಸುಮಿತ್ರಾದೇವಿಯನ್ನೂ ಮತ್ತೆ ಕಾಣುವಂತಾದರೆ ನಿನಗೆ ಅನೇಕ ಪೂಜೆಯನ್ನು ಮಾಡಿಸುವೆನು ಎಂದು ಕೈಮುಗಿದುಕೊಂಡು ಪ್ರಾರ್ಥನೆ ಮಾಡಿದಳು.

**ಮುಂದುವರಿಯುವುದು...**

# ಬುದ್ಧ ಪೂರ್ಣಿಮೆ, ವಿಶ್ವ ಮಾನ್ಯತೆಗಳಿಸಿರುವ ಬೌದ್ಧಧರ್ಮ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ,
ವಿಮರ್ಶಕರು

ಆರನೇ ಶತಮಾನದಲ್ಲಿ ನೇಪಾಳದ ಬಳಿ ಕಪಿಲವಸ್ತು ಈ ರಾಜ್ಯದ ದೊರೆ ಶುದ್ಧೋದನ, ರಾಣಿ ಮಾಯಾದೇವಿ ಈ ರಾಜ ದಂಪತಿಗಳ ಮಗನೇ ಸಿದ್ಧಾರ್ಥ. ಮಗನಿಗೆ ಸಾಕಷ್ಟು ವಿದ್ಯೆ-ಬುದ್ಧಿ, ರಾಜ ಗೌರವ,ಸಕಲ ಭೋಗ ಭಾಗ್ಯಗಳು ದೊರೆಯುವಂತೆ ವ್ಯವಸ್ಥೆ ಮಾಡಿದನು. ಯಶೋಧರೆ ಎಂಬ ರಾಜ ಕನ್ಯೆಯೊಂದಿಗೆ ವಿವಾಹವಾಗಿ ದಂಪತಿಗಳಿಗೆ ರಾಹುಲ್ ಎಂಬ ಗಂಡು ಮಗು ಜನಿಸಿದನು.

ಕಾಲಕ್ರಮೇಣ ಹೊರಗಿನ ಪ್ರಪಂಚ ನೋಡಲು ಅನುಮತಿ ಪಡೆದು ಹೊರಗಡೆ ಹೋಗಿ ನೋಡಿ ಪ್ರಪಂಚ ದುಃಖದಿಂದ ತುಂಬಿದೆ ಎಂದು ಅರಿತು ಎಲ್ಲಾ ಸಕಲ ಭೋಗ ವಿಲಾಸ ಜೀವನವನ್ನು ಮರೆತು ಅರಮನೆ ತ್ಯಜಿಸಿ ತಪಸ್ಸಿಗೆ ಹೊರಟನು.

ಸಿದ್ಧಾರ್ಥ ಅರಮನೆ ಬಿಟ್ಟನಂತರ ಬುದ್ಧನಾಗಿದ್ದು, ಬುದ್ಧ ಎಂದರೆ ಜ್ಞಾನಿ ಎಂದರ್ಥ. ಕಠಿಣ ತಪಸ್ಸಿನಿಂದ ಪರಿಪೂರ್ಣ ಜ್ಞಾನವನ್ನುಗಳಿಸಿಕೊಂಡು ವಿಶ್ವ ಮಾನವನಾಗಿ ಜಗತ್ತಿಗೆ ಬೆಳಕು ಮಾಡಿರುವ ಆರಾಧ್ಯ ದೈವ. ಬೌದ್ಧ ಧರ್ಮದ ಮಹತ್ವವನ್ನು ಅರಿಯದ ನಾವು ಬೌದ್ಧಧರ್ಮದ ತತ್ವಗಳನ್ನು ಹೊರದೇಶಕ್ಕೆ ಬಳುವಳಿಯಾಗಿ ಕೊಟ್ಟು ತಪ್ಪು



ಮಾಡಿ ಆಯಾಯ ನಮ್ಮ ನಮ್ಮ ಧರ್ಮಗಳನ್ನು ಮೈಮೇಲೆ ಎಳೆದು ಕೊಂಡೆವು. ಇಂತಹ ಧರ್ಮದ ಮಹತ್ವವನ್ನು ಕಂಡು ಹಿಡಿದುಕೊಂಡ ಅನ್ಯ ರಾಷ್ಟ್ರಗಳು ಅದರ ತತ್ವ ಸಾರಗಳನ್ನು ಜೀವನದ ಬದುಕಿನಲ್ಲಿ ಅಳವಡಿಸಿಕೊಂಡು ಬಾಳುವ ರಾಷ್ಟ್ರಗಳನ್ನು ನಾವು ನೋಡಿ ಕಲಿಯಬೇಕಾಗಿದೆ. ದುರಾದೃಷ್ಟ ಬುದ್ಧ ಹುಟ್ಟಿದ್ದು ಈ ಪುಣ್ಯ ಭೂಮಿಯಲ್ಲಿ ಆದರೆ ಬೆಳಕಾಗಿದ್ದು ವಿದೇಶದಲ್ಲಿ ಎಂತಹ ವಿಪರ್ಯಾಸ.

ಬೌದ್ಧಧರ್ಮದ ತತ್ವಗಳನ್ನು ಅರ್ಥಮಾಡಿಕೊಂಡು ಕಳಿಂಗ ರಾಜ್ಯದ ಮೇಲೆ ಯುದ್ಧ ಮಾಡಿದ ಅಶೋಕ ಚಕ್ರವರ್ತಿ ತನ್ನ ಹಿಂಸಾರೂಪ ಬದುಕನ್ನ ತ್ಯಜಿಸಿ ವಿದೇಶಗಳಾದ ಬರ್ಮಾ, ಮಾಲ್ಡಿವ್ಸ್, ಮಲೇಷ್ಯಾ, ಇಂಡೋನೇಷಿಯಾ, ಶ್ರೀಲಂಕಾ, ಟಿಬೆಟ್, ಚೈನಾ, ಜಪಾನ್, ಥೈಲ್ಯಾಂಡ್, ಸಿಂಗಪುರ್, ಹಾಂಕಾಂಗ್, ಬ್ಯಾಂಕಾಕ್ ಇನ್ನು ಇತರೆ ದೇಶಗಳಲ್ಲಿ ಬೌದ್ಧ ಧರ್ಮದ ತತ್ವಗಳು ಹರಡುವಂತೆ ಪ್ರಚಾರ ಮಾಡಿದರು. ಆ ದೇಶಗಳು ಬುದ್ಧನೇ ನಿಜವಾದ ಆರಾಧ್ಯ ದೈವನೆಂದು ಪೂಜಿಸುತ್ತಾರೆ. ಮಾನವ ಜಗತ್ತಿನಲ್ಲಿ ದುಃಖವಿದೆ,ಆಸೆ ಇದೆ ಆದರೆ ಆಸೆಯೇ ದುಃಖಕ್ಕೆ ಕಾರಣ ಇದು ಬುದ್ಧನ ತತ್ವದಲ್ಲಿ ಪ್ರಮುಖ ತತ್ವವಾಗಿದೆ. ಬೌದ್ಧ ಧರ್ಮ ವಿಶ್ವದ ಪ್ರಮುಖ ಧರ್ಮವಾಗಿ ಬುದ್ಧನ ತತ್ವಗಳು ವಿಶ್ವಮಾನ್ಯತೆ ಗಳಿಸಿವೆ.

6ನೇ ಶತಮಾನದಿಂದ ಇಲ್ಲಿಯವರೆವಿಗೂ ಅಂದರೆ 14 ಶತಮಾನಗಳು ಕಳೆದು ಹೋದರೂ ಸಹ ಇನ್ನೂ ನಾವು ಬುದ್ಧನ ತತ್ವಗಳನ್ನು ಜೀವನದ ಬದುಕಿನಲ್ಲಿ ಶಾಶ್ವತವಾಗಿ ಅಳವಡಿಸಿಕೊಳ್ಳಲು ಮೀನಾಮೇಷ ಎಣಿಸು ತ್ತಿದ್ದೇವೆ ಎಂತಹ ವಿಪರ್ಯಾಸ. ಭೋಗ ವಿಲಾಸ ಜೀವನವನ್ನು ತ್ಯಾಗ ಮಾಡಿದ ತ್ಯಾಗಮೂರ್ತಿ ತ್ಯಾಗಮಯಿ. ಮಾನವನಾಗಿ ಹುಟ್ಟಿ, ಮಾನವನಾಗಿ ಬೆಳೆದು, ಮಾನವೀಯತೆಯ ಆಗರವಾಗಿ, ವೈರಾಗ್ಯ ದೀಕ್ಷೆಪಡೆದು,ತಪಸ್ವಿಯಾಗಿ ಜಗತ್ತಿಗೆ ಬೆಳಕು ಮಾಡಿ ದೈವತ್ವ ಗುಣಗಳನ್ನು ಕಲಿತು ದೇವರಾದರು ಅವರೇ ಅಮರ ಅಜರಾಮರ. ಬುದ್ಧನ ಜನನ, ಜ್ಞಾನೋದಯ ಮತ್ತು ನಿರ್ವಾಣ ಈ ಮೂರು ಮಹತ್ವದ ಘಟನೆಗಳು ವೈಶಾಖ ಪೂರ್ಣಿಮೆಯ ದಿನವೇ ನಡೆದವು. ಆದ್ದರಿಂದ ಬೌದ್ಧಧರ್ಮದಲ್ಲಿ ವೈಶಾಖ ಪೂರ್ಣಿಮೆಯನ್ನು ಮಹತ್ವ ದಿನವೆಂದು ಆಚರಿಸಿ ಆ ದಿನವನ್ನು ಬುದ್ಧಪೂರ್ಣಿಮೆ ಎಂದು ಕರೆಯುವವರು. ಇಡೀ ಜಗತ್ತಿನ ಕರಾಳ ಇತಿಹಾಸವನ್ನು ಶಾಂತಿ ಮತ್ತು ಕರುಣೆಯಿಂದ ಪ್ರಕಾಶಮಾನವಾಗಿ ಜಗತ್ತಿಗೆ ಬೆಳಕಾಗಿಸಿದವು.

### ಈ ದುಃಖದಿಂದ ಪಾರಾಗಲು ಬುದ್ಧನ ಅಷ್ಟ ಮಾರ್ಗಗಳನ್ನು ಅನುಸರಿಸುವುದು ಸೂಕ್ತ

- ಒಳ್ಳೆಯ ಆಲೋಚನೆಗಳು
- ಒಳ್ಳೆಯ ಉದ್ದೇಶದಿಂದ ಕೆಲಸ ಮಾಡುವುದು
- ಸದಾ ಸತ್ಯವನ್ನು ನುಡಿಯುವುದು
- ಸತ್ಕಾರ್ಯವನ್ನು ಆಚರಿಸುವುದು
- ಶುದ್ಧ ಜೀವನವನ್ನು ನಡೆಸುವುದು
- ನಮ್ಮ ಎಲ್ಲಾ ಪ್ರಯತ್ನಗಳಲ್ಲಿ ಪ್ರಮಾಣಿಕರಾಗಿರುವುದು
- ಅನ್ಯರ ಬಗ್ಗೆ ಒಳ್ಳೆಯದನ್ನ ಆಲೋಚಿಸುವುದು
- ಒಳ್ಳೆಯ ವಿಷಯಗಳಲ್ಲಿ ಮನಸ್ಸನ್ನು ತೊಡಗಿಸಿಕೊಳ್ಳುವುದು
- ವೈಚಾರಿಕ ಪ್ರಜ್ಞೆಗಳನ್ನ ಜೀವನದಲ್ಲಿ ಅಳವಡಿಸಿಕೊಳ್ಳುವುದು



ಸಾಮಾಜಿಕ ಕಳಕಳಿ
ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

# ನನ್ನಮ್ಮ

ಲೋಕದ ಆಡಂಬರವ ಅರಿತವಳಲ್ಲ
ಕಷ್ಟ ಸುಖವ ಅರಿತು ಬಾಳಿದವಳು
ದುಃಖ ದುಮ್ಮಾನಗಳ ಮೆಟ್ಟಿ ನಿಂತವಳು
ಜೀವನದಿ ಸಫಲತೆಗೆ ಹೋರಾಡಿದವಳು
ಬೈಗುಳಗಳನ್ನೇ ಪಾಠವಾಗಿ ಪಡೆದವಳು




ಉದಯವಾಹಿನಿ ಚಿತ್ರ

ತಪ್ಪು ಒಪ್ಪುಗಳ ಅರಿತು ಜೀವನ ಮಾಡಿದವಳು ನನ್ನಮ್ಮ ಎಲ್ಲರಂತೆ
ಅಲ್ಲದಿದ್ದರೂ ಸದ್ಗುಣವಂತಳು
ಮನೆಯ ಏಳಿಗೆಗಾಗಿ ತನ್ನ ತಾನು ತ್ಯಾಗಮಾಡಿಕೊಂಡವಳು
ತನಗೆ ಬೇಕಾದದ್ದನ್ನೆಲ್ಲ ಪಡೆಯದೆ ಬಾಡಿದವಳು ಅವಿಭಕ್ತ ಕುಟುಂಬವ ಸಮಾಲಿಸಿದವಳು
ಕೆಲವೊಮ್ಮೆ ಕಣ್ಣೀರು, ಸಂತೋಷವ ಪಡೆದವಳು ಆಕಸ್ಮಿಕ ಕೆಟ್ಟ ಘಟನೆಗಳನು ಸಹ ಎದರಿಸಿದವಳು....
ವಿದ್ಯಾವಂತಳಾದರೂ ಅವಿದ್ಯಾವಂತಳಂತೆ ಬಾಳಿದವಳು ಹೊರ ಜಗತ್ತಿನ ಅರಿವೇ ಇಲ್ಲದಂತೆ ಮನೆಯೊಳಗೆ ಇದ್ದವಳು
ಬಾಳಿನ, ಬದುಕಿನ ಅರ್ಥವ ಅರಿಯುತ ಸಾಗಿದವಳು
ಮಕ್ಕಳಿಗೆ ನೀತಿ ಪಾಠಗಳ ಕಲಿಸುತ್ತಾ ನಡೆದವಳು
ಸಾಧನೆಯ ದಾರಿ ಸುಗಮವಲ್ಲ ಎಂಬುದ ತಿಳಿಸಿದವಳು
ಜೀವನದಿ ಬರುವ ಕಷ್ಟಗಳ ಎದುರಿಸುವುದ ಕಲಿಸಿದವಳು
ತಗ್ಗಿ ಬಗ್ಗಿ ನಡೆಯುವುದ ತಿಳಿಸುತ್ತಾ ಸಾಗಿದವಳು
ಬಾಳು ಮೂರೇ ದಿನ ಅದರಲ್ಲಿ ಒಳಿತಿನ ಕಾರ್ಯ ಮಾಡೆಂದವಳು.....
ಭೂತಾಯಿಯ ಜೊತೆಗೆ ಅಡೆದವ್ವ ನನ್ನಮ್ಮ ನನ್ನವಳು
ಇವಳಿಗಿಂತ ತ್ಯಾಗಮಹಿಯ ಕಾಣಬೇಕೇನು ನಾನು
ಯಾವ ಜನ್ಮದಿ ನಿನ್ನ ಋಣ ವಾ ತೀರಿಸುವೆನು ನಾ ತಿಳಿಯೇನು?
ನನ್ನಮ್ಮನ ಹಾಗೆ ಯಾರು ಇಲ್ಲ ಎಂಬ ಭಾವದಿ ಕೊನೆ ಉಸಿರೆಳೆಯುವೆನು.

# ತಾಯಂದಿರ ದಿನದ ವಿಶೇಷ ಅಮ್ಮ



● ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ



ಮೇ 11ರಂದು ತಾಯಂದಿರ ದಿನಾಚರಣೆ ಮದರ್ ಡೇ ದಿನದ ಅರ್ಥ ಮತ್ತು ತಾಯಂದಿರ ಮಹತ್ವವನ್ನು ತಿಳಿದುಕೊಳ್ಳಬೇಕು.

ತಾಯಿ ದೇವರ ಸಮಾನ. ಅಮ್ಮ ಎಂದರೆ ಜನನಿ. ಜನ್ಮ ನೀಡುವಳು ಮಗುವಿಗೆ ತಾಯಿ. ಮಕ್ಕಳನ್ನು ಸಾಕಿ ಬೆಳೆಸುವಳು ತಾಯಿ. ಮಮತೆಯ ಕಡಲು ತಾಯಿ ತನ್ನ ಮಕ್ಕಳ ಜೀವನವನ್ನು ರೂಪಿಸುವಳು ತಾಯಿ. ಮನೆಯಲ್ಲಿ ಏನೇ ಕೆಲಸವಿದ್ದರೂ ಅಮ್ಮ ನಮ್ಮನ್ನು ಒಂಬತ್ತು ತಿಂಗಳು ಹೊತ್ತು ಹೆತ್ತಿರುತ್ತಾಳೆ. ಅಮ್ಮನ ಸ್ಥಾನವನ್ನು ಯಾರಿಂದಲೂ ತುಂಬಲು ಸಾಧ್ಯವಿಲ್ಲ. ತಾಯಿಯ ಸ್ಥಾನ ಮತ್ತು ಅಮ್ಮನ ಪ್ರೀತಿ ಅತ್ಯಮೂಲ್ಯವಾದದ್ದು. ನಮ್ಮನ್ನು ಕಣ್ಣಲ್ಲಿ ಕಣ್ಣಿಟ್ಟು ಸಾಕುವಳು ಅಮ್ಮ. ಅಂತಹ ತಾಯಿಗೆ ನಾವು ಯಾವಗಲೂ ಗೌರವದಿಂದ ಕಾಣಬೇಕು. ಅದು ನಮ್ಮ ಕರ್ತವ್ಯ ಕೂಡ. ಅಮ್ಮ ನೀ ದೇವರು ಈ ಜಗವೆಲ್ಲಾ ನೀನೆ ಅಮ್ಮ. ಅಮ್ಮ ಎಂಬ ಎರಡಕ್ಷರ ಪವಿತ್ರವಾದ ಸಂಕೇತ. ಹೌದು ತಾಯಿ ದೇವರ ಸ್ವರೂಪ. ನಾವು ದೇವರನ್ನು ಎಷ್ಟು ಭಯ ಭಕ್ತಿಯಿಂದ ಗೌರವದಿಂದ ಪೂಜಿಸಿ ಆರಾಧಿಸುತ್ತೇವೆಯೋ ಹಾಗೇಯೇ ಅಮ್ಮನ ಭಯ ಭಕ್ತಿಯಿಂದ ಗೌರವದಿಂದ ನೋಡಿಕೊಳ್ಳಬೇಕು. ಅಮ್ಮ ಇಲ್ಲದ ಪ್ರಪಂಚವಿಲ್ಲ. ಎಲ್ಲಾ ಮಕ್ಕಳಿಗೂ ತಾಯಿಯ ಆಶೀರ್ವಾದ ಬೇಕು ಅವರಿಂದಲೇ ನಾವು. ತಾಯಿ ಮೊದಲ ಗುರು ಮನೆಯ ಮೊದಲ ಪಾಠ ಶಾಲೆ ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಮಗು ತನ್ನ ಜೀವನದಲ್ಲಿ ಹೇಳುವ ಮೊದಲ ಪದವೂ ಅಮ್ಮ. ತಾಯಿ ತನ್ನ ಮಕ್ಕಳಿಗೆ ಇಡೀ ಜೀವನವನ್ನು ತ್ಯಾಗ ಮಾಡುತ್ತಾರೆ. ತನ್ನ ಇಡೀ ಜೀವನವನ್ನು ನಮಗೆ ಅರ್ಪಿಸುತ್ತಾಳೆ. ಅಮ್ಮ ಯಾವಗಲೂ ತನ್ನ ದುಃಖಗಳನ್ನು ಮರೆತು ಮಕ್ಕಳ ಜೀವನ ಸಂತೋಷದ ಬಗ್ಗೆ ಯೋಚಿಸುತ್ತಾರೆ. ಮಕ್ಕಳು ಸಂತೋಷವಾಗಿರುವುದು ನೋಡಿ ಅವರು ಸಂತೋಷವಾಗಿರುತ್ತಾರೆ. ತಾಯಿಯ ಋಣವನ್ನು ನಾವು ಎಂದಿಗೂ ತೀರಿಸಲು ಸಾಧ್ಯವಿಲ್ಲ ಆದ್ದರಿಂದ ನಾವು ನಮ್ಮ ತಾಯಿಗೆ ಸಾಧ್ಯವಾದಷ್ಟು ಸೇವೆ ಸಲ್ಲಿಸಬೇಕು


ನಮ್ಮ ವ್ಯಕ್ತಿತ್ವವನ್ನು ಹೆಚ್ಚಿಸಲು ಅವರು ತಮ್ಮ ಜೀವನವನ್ನು ಮುಡಿಪಾಗಿಟ್ಟ ಜೀವನದ ಪ್ರತಿಯೊಂದು ಸಂತೋಷವನ್ನು ನಾವು ತಾಯಿ ತಂದೆಗೇ ನೀಡಬೇಕು. ಅಮ್ಮ ಐ ಲವ್ ಯೂ... ಅಮ್ಮ ನಾ ಕಂಡ ಮೊದಲ ಮುಖ ನಾ ಕೇಳಿದ ಮೊದಲ ಧ್ವನಿ ನಾ ಪೂಜಿಸು ಮೊದಲನೇ ದೇವರು ನೀನೇ ಅಮ್ಮ. ಅಮ್ಮ ಐ ಲವ್ ಯೂ..!

# ಶ್ರೀನರಸಿಂಹ ಜಯಂತಿ ಉತ್ಸವ ಲೋಕ ಕಲ್ಯಾಣಕ್ಕಾಗಿ ರಾಯರಲ್ಲಿ ಪ್ರಾರ್ಥನೆ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ 1008 ಶ್ರೀ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ನರಸಿಂಹ ಜಯಂತಿಯ ಪ್ರಯುಕ್ತ ಲೋಕ ಕಲ್ಯಾಣಕ್ಕಾಗಿ ಪ್ರಾರ್ಥನೆ ಸಲ್ಲಿಸಿ ವಿಶೇಷ ಉತ್ಸವಗಳು ನೆರವೇರಿತು ಎಂದು ಶ್ರೀ ನಂದಕಿಶೋರ ಆಚಾರ್ಯರು ತಿಳಿಸಿದರು,


ಇದೇ ಸಂದರ್ಭದಲ್ಲಿ ಲೋಕ ಕಲ್ಯಾಣಕ್ಕಾಗಿ ದೀಪಗಳನ್ನು ಬೆಳಗಿಸಿ ಪ್ರಾರ್ಥನೆ ಸಲ್ಲಿಸಲು ಶ್ರೀ ಮಠಕ್ಕೆ ಆಗಮಿಸಿದ ವಾರ್ತಾ ವಿಭಾಗ, ರಿಪಬ್ಲಿಕ್ ಕನ್ನಡ, ರಿಪಬ್ಲಿಕ್ ನ್ಯಾಶನಲ್ ನೆಟ್ವರ್ಕ್ ವಾರ್ತಾ ನಿರೂಪಕರು ಆದ ಶ್ರೀಯುತ ಶ್ರೀಪಾದ್ ಪಾಟೀಲ್ ರವರು ಸಕುಟುಂಬ ಸಮೇತ ಆಗಮಿಸಿ ಶ್ರೀರಾಘವೇಂದ್ರ ಸ್ವಾಮಿಗಳಲ್ಲಿ ಪ್ರಾರ್ಥನೆಯನ್ನು ಸಲ್ಲಿಸುವ ಮೂಲಕ ದೀಪಗಳನ್ನು ಬೆಳಗಿಸಿ ಗುರುಗಳ ಫಲ ಮಂತ್ರಾಕ್ಷತೆ ಸ್ವೀಕರಿಸಿ ಶ್ರೀ ಗುರುರಾಯರ ಅನುಗ್ರಹಕ್ಕೆ ಪಾತ್ರರಾದರು.



ಉದಯವಾಹಿನಿ ಚಿತ್ರ

# ಗರ್ಭಿಣಿಯರು ಪಾನೀಪುರಿ ತಿನ್ನಬಹುದೇ ಏನಂತಾರೆ ಡಾಕ್ಟರ್

ಪಾನೀಪುರಿ ಎಂದರೆ ಕಣ್ಣಮುಂದೆ ಬರೋದು ರಸ್ತೆ ಬದಿಯಲ್ಲಿ ಪಾನೀಪುರಿ ಮಾರುವವರು ಇದು ತಿನ್ನಲು ರುಚಿಯಾಗಿರುತ್ತದೆ. ಆದರೆ ಅದು ಗರ್ಭಿಣಿಯರಿಗೆ ಒಳ್ಳೆಯದೋ, ಕೆಟ್ಟದ್ದೋ ಎನ್ನುವುದನ್ನು ವೈದ್ಯರಿಂದಲೇ ತಿಳಿಯೋಣ. ಗರ್ಭಿಣಿ ಮಹಿಳೆಯರಿಗೆ ನಾನಾ ರೀತಿಯ ಬಯಕೆಗಳಿರುತ್ತವೆ. ಅದರಲ್ಲಿ ತಿನ್ನುವ ವಿಷ್ಯದಲ್ಲಿ ನಾನಾ ರೀತಿಯ ತಿನಿಸು ತಿನ್ನಬೇಕನಿಸುತ್ತದೆ. ಕೆಲವರಿಗಂತೂ ಚಾಟ್ಸ್ ತಿನ್ನುವ ಬಯಕೆಯಾಗುತ್ತದೆ.ಅದರಲ್ಲೂ ಪಾನೀಪುರಿ ತಿನ್ನುವ ಬಯಕೆ ಇರುತ್ತದೆ. ಹಾಗಿರುವಾಗ ಬೀದಿ ಬದಿಯಲ್ಲಿ ಮಾರಾಟ ಮಾಡುವ, ಯಾವ್ಯಾವುದೋ, ಮಸಾಲೆ, ನೀರನ್ನು ಬಳಸಿ ತಯಾರಿಸಲಾಗುವ ಪಾನೀಪುರಿಯನ್ನು ಗರ್ಭಾವಸ್ಥೆಯಲ್ಲಿ ತಿನ್ನಬಹುದೇ ಎನ್ನುವ ಗೊಂದಲ ಹಲವರಲ್ಲಿರುತ್ತದೆ. ಈ ಬಗ್ಗೆ ಕ್ಲೌಡ್‌ನೈನ್ ಆಸ್ಪತ್ರೆಗಳ ಸ್ತ್ರೀರೋಗ ವಿಭಾಗದ ಹಿರಿಯ ಸಲಹೆಗಾರ್ತಿ ಡಾ. ಸಾಧನಾ ಸಿಂಘಾಲ್ ವಿಷ್ಣೋಯ್ ಓನ್ಲಿಮೈ ಹೆಲ್ತ್‌ಗೆ ತಿಳಿಸಿದ್ದಾರೆ.





**ಮನೆಯ ಆಹಾರ:** ಕೆಲವೊಮ್ಮೆ ಹೊರಗಿನ ಆಹಾರವು ಗರ್ಭಾವಸ್ಥೆಯಲ್ಲಿ ತಾಯಿ ಹಾಗೂ ಮಗುವಿನ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು. ಅದಕ್ಕಾಗಿ ಆದಷ್ಟು ಮನೆಯಲ್ಲೇ ತಯಾರಿಸಿದ ಆಹಾರವನ್ನು ಸೇವಿಸಲು ಸಲಹೆ ನೀಡಲಾಗುತ್ತದೆ. ಪಾನೀಪುರಿಯ ವಿಷ್ಯದಲ್ಲೂ ಅಷ್ಟೇ. ಗರ್ಭಿಣಿಯರಿಗೆ ಪಾನೀಪುರಿ ತಿನ್ನುವ ಬಯಕೆಯಾಗಿದ್ದರೆ ಮನೆಯಲ್ಲೇ ಪಾನೀಪುರಿ ತಯಾರಿಸಿ ತಿನ್ನುವಂತೆ ಸಲಹೆ ನೀಡುತ್ತಾರೆ. ಅದಕ್ಕಾಗಿ ಪಾಕವಿಧಾನವನ್ನೂ ಹಂಚಿಕೊಂಡಿದ್ದಾರೆ.

**ಗರ್ಭಾವಸ್ಥೆಯಲ್ಲಿ ಹೊರಗೆ ಪಾನೀಪುರಿ ತಿನ್ನುವುದು ಸುರಕ್ಷಿತವೇ:** ವೈದ್ಯರ ಪ್ರಕಾರ,ಗರ್ಭಾವಸ್ಥೆಯಲ್ಲಿ ರೋಗನಿರೋಧಕ ಶಕ್ತಿ ಸ್ವಲ್ಪ ದುರ್ಬಲಗೊಳ್ಳುತ್ತದೆ. ಇದರಿಂದಾಗಿ ತಾಯಿ ಮತ್ತು ಮಗುವಿಗೆ ಸೋಂಕು ತಗಲುವ ಸಾಧ್ಯತೆ ಹೆಚ್ಚು. ಬೀದಿ ಆಹಾರದಲ್ಲಿ, ಪಾನೀಪುರಿ ಮತ್ತು ಅದರ ಚಟ್ನಿಯನ್ನು ತೆರೆದ ಸ್ಥಳದಲ್ಲಿ ಇಡಲಾಗುತ್ತದೆ. ಆದ್ದರಿಂದ, ಅದರ ಗುಣಮಟ್ಟ ಉತ್ತಮವಾಗಿರುತ್ತದೆ ಎನ್ನುವುದು ಕಷ್ಟ. ಗರ್ಭಿಣಿಯರು ಆಹಾರ ಸೇವಿಸುವಾಗ ತಮ್ಮ ಸುತ್ತ ಮುತ್ತಲಿನ ಶುಚಿತ್ವವನ್ನು ಸಹ ಕಾಳಜಿ ವಹಿಸುವುದಿಲ್ಲ, ಇದರಿಂದಾಗಿ ಗರ್ಭಿಣಿ ಮಹಿಳೆ ಅನಾರೋಗ್ಯಕ್ಕೆ ಒಳಗಾಗುವ ಅಪಾಯವಿದೆ.


ಪಾನೀಪುರಿಗೆ ಬಳಸುವ ನೀರು, ಆಲೂಗಡ್ಡೆ, ಮಸಾಲೆಗಳು, ಚಟ್ನಿ ಸೇವನೆ ಸೋಂಕಿಗೆ ಕಾರಣವಾಗಬಲ್ಲದು ಎನ್ನುತ್ತಾರೆ ವೈದ್ಯರು.

**ನಿರ್ಜಲೀಕರಣ ಹಾಗೂ ನೀರಿನ ಧಾರಣ**

ಹೊರಗಿನ ಆಹಾರ ತಿಂದು ಗರ್ಭಿಣಿಗೆ ಹೊಟ್ಟೆಯ ಸಮಸ್ಯೆ ಉಂಟಾದರೆ ಅವಳು ಪದೇ ಪದೇ ವಾಂತಿ ಅಥವಾ ಅತಿಸಾರವನ್ನು ಹೊಂದಿರಬಹುದು. ಇದು ದೇಹದಲ್ಲಿ ನಿರ್ಜಲೀಕರಣಕ್ಕೆ ಕಾರಣವಾಗಬಹುದು, ಇದು ಗರ್ಭಾವಸ್ಥೆಯಲ್ಲಿ ಮಹಿಳೆ ಮತ್ತು ಮಗುವಿಗೆ ಅಪಾಯಕಾರಿ. ಗರ್ಭಿಣಿಯರು ನಿರಂತರವಾಗಿ ಚಾಟ್ಸ್‌ಗಳನ್ನು ತಿನ್ನುತ್ತಿದ್ದರೆ ಹೆಚ್ಚುವರಿ ಉಪ್ಪಿನಿಂದಾಗಿ, ಕಣಕಾಲುಗಳು ಅಥವಾ ಪಾದಗಳಲ್ಲಿ ಊತದಂತಹ ಸಮಸ್ಯೆಗಳು ಉಂಟಾಗಬಹುದು.

### ಮಗುವಿನ ಬೆಳವಣಿಗೆಯ ಮೇಲೆ ಪರಿಣಾಮ

**ಗರ್ಭಾವಸ್ಥೆಯಲ್ಲಿ ಮಹಿಳೆ ಪದೇ ಪದೇ ಸೋಂಕುಗಳಿಂದ ಬಳಲುತ್ತಿದ್ದರೆ ಅಥವಾ ಪೌಷ್ಟಿಕಾಂಶದ ಕೊರತೆಯಿಂದ ಬಳಲುತ್ತಿದ್ದರೆ, ಅದು ಭ್ರೂಣದ ಬೆಳವಣಿಗೆಯ ಮೇಲೆ ಪರಿಣಾಮ ಬೀರುತ್ತದೆ.**



**ಹೊಟ್ಟೆ ಸಮಸ್ಯೆ:** ಪಾನೀಪುರಿಗೆ ಬಳಸುವ ನೀರು ಶುದ್ಧವಾಗಿಲ್ಲದಿದ್ದರೆ ಅಥವಾ ಫಿಲ್ಟರ್ ಮಾಡದಿದ್ದರೆ, ಬ್ಯಾಕ್ಟೀರಿಯಾ ಅಥವಾ ವೈರಲ್ ಸೋಂಕಿನ ಅಪಾಯ ಕಾಡಬಹುದು. ಇದು ವಾಂತಿ, ಭೇದಿ, ಜ್ವರ ಮತ್ತು ದೌರ್ಬಲ್ಯದಂತಹ ಸಮಸ್ಯೆಗಳನ್ನು ಉಂಟುಮಾಡಬಹುದು. ಇದು ಗರ್ಭಿಣಿಯರಿಗೆ ಒಳ್ಳೆಯದಲ್ಲ.

**ಎದೆಯುರಿ:** ಪಾನೀಪುರಿಗೆ ಬಳಸುವ ಚಟ್ನಿ ಮತ್ತು ನೀರಿನಲ್ಲಿರುವ ಮಸಾಲೆಗಳು ಆಮ್ಲೀಯತೆ ಮತ್ತು ಎದೆಯುರಿಯಂತಹ ಸಮಸ್ಯೆಗಳನ್ನು ಉಂಟುಮಾಡಬಹುದು. ಗರ್ಭಾವಸ್ಥೆಯಲ್ಲಿ ಆಮ್ಲೀಯತೆಯ ಸಮಸ್ಯೆ ಮುಂದುವರಿದರೆ ತುಂಬಾ ಕಷ್ಟಕರವಾಗಿರುತ್ತದೆ.

# ಭೋವಿ ಉಪ ಜಾತಿಯಲ್ಲ, ಜಾತಿಯೆಂದೇ ನಮೂದಿಸಿ



• ಉದಯವಾಹಿನಿ, ಬೆಂಗಳೂರು

ಒಳಮೀಸಲಾತಿಗಾಗಿ ನಡೆಯುತ್ತಿರುವ ಸಮೀಕ್ಷೆಯಲ್ಲಿ ಹಲವರು ಜಾತಿ ಕಾಲಂನಲ್ಲಿ ಆದಿ-ಕರ್ನಾಟಕ, ಆದಿ-ಆಂಧ್ರ, ಆದಿ-ದ್ರಾವಿಡ ಎಂದು ನಮೂದಿಸುತ್ತಿದ್ದು, ಉಪ ಜಾತಿ ಕಲಂನಲ್ಲಿ ಭೋವಿ ಎಂದು ನಮೂದಿಸುತ್ತಿದ್ದಾರೆ. ಇದರಿಂದ ಭೋವಿ/ವಡ್ಡರ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಎಂದು ಭೋವಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಜಿ.ವಿ. ಸೀತಾರಾಮು ದೂರಿದ್ದಾರೆ.ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿರುವ 101 ಜಾತಿಗಳಲ್ಲಿ ಭೋವಿ ಕೂಡಾ ಒಂದಾಗಿದೆ. ಆದರೆ, ಭೋವಿಯನ್ನು ಉಪ ಜಾತಿಯಾಗಿ ದಾಖಲು ಮಾಡಬೇಕೆಂದು ಸಮೀಕ್ಷೆದಾರರೇ ಹಲವು ಕಡೆ ಹೇಳುತ್ತಿದ್ದು, ಅಂಥ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಎಲ್ಲಾ ದತ್ತಾಂಶ ಪರಿಶೀಲಿಸಿ ಉಪ ಜಾತಿಯ ಕಾಲಂನಲ್ಲಿ ಭೋವಿ ಎಂದು ಇರುವುದನ್ನು ಸರಿಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಅಧಿಕಾರಿಗಳ ಎಡವಟ್ಟಿನಿಂದ ಬಹಳ ಕಡೆಗಳಲ್ಲಿ ಪಡಿತರ ಚೀಟಿಯಲ್ಲಿ ಪರಿಶಿಷ್ಟ ಜಾತಿಯ ಬದಲು ಪರಿಶಿಷ್ಟ ಪಂಗಡ ಎಂದು ನಮೂದಾಗುತ್ತಿದೆ. ಆಹಾರ ಸರಬರಾಜು ಇಲಾಖೆಯ ಅಧಿಕಾರಿಗಳು ಮಾಡಿದ ತಪ್ಪಿನಿಂದಾಗಿ ಇವರು ಸಮೀಕ್ಷೆಯಲ್ಲಿ ಭಾಗವಹಿಸದಂತಾಗಿದೆ. ಪಡಿತರ ಚೀಟಿಯಲ್ಲಿ ಇಂತಹ ಲೋಪ ಇದ್ದಾಗ ಅವರು ಮತದಾರರ ಚೀಟಿ ಅಥವಾ ಆಧಾರ್ ಕಾರ್ಡ್ ಅನ್ನು ಇಲ್ಲವೇ ಜಾತಿ ಪ್ರಮಾಣಪತ್ರವನ್ನು ಪರಿಗಣಿಸಿ ಗಣತಿ ಮಾಡಬೇಕು. ಇಲ್ಲದೇ ಇದ್ದರೆ ಭೋವಿ ಸಮುದಾಯದ ಅನೇಕ ಕುಟುಂಬಗಳಿಗೆ ಅನ್ಯಾಯವಾಗಲಿದೆ. ಸರ್ಕಾರ ಎಲ್ಲಾ ದೋಷಗಳನ್ನು ಸರಿಪಡಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

## ಬಲವೆ ಜೀವನದ ಗುರಿಯಾಗಬೇಕು : ಎಂ.ವೈ.ಪಾಟೀಲ


**ಶಿವಾನಂದಾ ಗ್ರಂಥ ಬಿಡುಗಡೆ**

• ಉದಯವಾಹಿನಿ ಕಲಬುರಗಿ

ವ್ಯಕ್ತಿ ತನ್ನ ವ್ಯಕ್ತಿತ್ವ ಬೆಳೆಸಿಕೊಳ್ಳುವಲ್ಲಿ ಗುಣ, ನಡತೆ, ವಿಚಾರಗಳು ತುಂಬಾ ಪೂರಕವಾಗಿರಬೇಕು ಬಲವೇ ಜೀವನದ ಗುರುವಾಗಿರಬೇಕು ಎಂದು ಅಫಜಲಪುರ ಮತಕ್ಷೇತ್ರದ ಶಾಸಕರಾದ ಎಂ.ವೈ. ಪಾಟೀಲ ಅವರು ನುಡಿದರು.

ಜಯನಗರ ಬಸವ ಸಮಿತಿಯ ಅನುಭವ ಮಂಟಪದಲ್ಲಿ ಹಮ್ಮಿಕೊಂಡ ಎಸ್.ವಿ.ಹತ್ತಿ ಅವರ ಅಭಿನಂದನ ಹಾಗೂ ಶಿವಾನಂದಾ ಗ್ರಂಥ ಬಿಡುಗಡೆಗೊಳಿಸುತ್ತಾ ಬಿಡುಗಡೆಗೊಳಿಸಿ ಮಾತನಾಡಿದ ಅವರು, ನೈತಿಕ ಬಲ, ಜ್ಞಾನ ಬಲ, ಗುಣ ಬಲ ಮತ್ತು ನಡತೆ ಬಲಗಳು ವ್ಯಕ್ತಿತ್ವ ಪ್ರಖರವಾಗಿ ಬೆಳೆಯಲು ಮತ್ತು ಗಟ್ಟಿಗೊಳಿಸುವಲ್ಲಿ ಪುಷ್ಠಿಯಾಗಿರುತ್ತವೆ. ಇದರೊಂದಿಗೆ ಕುತೂಹಲತೆ ತುಂಬಾ ಪರಿಣಾಮಕಾರಿಯಾಗಿ ಕಲಿಕೆಯ ದಿಶೆಯಲ್ಲಿ ಸಾಗಿಸುತ್ತದೆ ವ್ಯಕ್ತಿತ್ವರೂಪ ಗೊಳ್ಳಲು ಮತ್ತು ಬೌದ್ಧಿಕವಾಗಿ ಬೆಳೆಯಲು ಉತ್ತಮ ಗುಣಗಳಲ್ಲಿನ ಅವಶ್ಯಕತೆ ಬಿಂಬಿಸುವಂತಹ ಅಂಶ ಎಸ್.ವಿ.ಹತ್ತಿ ಅವರಲ್ಲಿ ಎದ್ದು ಕಾಣುತ್ತದೆ.

ಎಸ್.ವಿ ಹತ್ತಿ ಅವರನ್ನು ಬಹಳ ದಿನಗಳಿಂದ ನನಗೆ ಪರಿಚಿತರು ನಮ್ಮ ಹತ್ತಿರದ ಸಂಬಂಧಿಕರಾಗಿದ್ದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುವಾಗ ವಿನಮ್ರತೆ ಮತ್ತು ಸೇವಾ ಮನೋಭಾವಕ್ಕೆ ಹೆಸರಾದರು ಹಲವಾರು ಸಾಮಾಜಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸರ್ಕಾರಿ ಸೇವೆಯಲ್ಲಿ ಹಾಗೂ ಸಾರ್ವಜನಿಕ ಸೇವೆಯಲ್ಲಿ ತಮ್ಮದೇ ಆದಂತಹ ಛಾಪು ಮೂಡಿಸಿದ್ದು ಸಾರ್ವತ್ರಿಕ


ಉದಯವಾಹಿನಿ ಚಿತ್ರ

ಸತ್ಯವಾಗಿದ್ದು, ಸಾತ್ವಿಕ ಸ್ವಭಾವದವರಾಗಿದ್ದಾರೆ. ಅನೇಕ ಪ್ರಗತಿಪರ ಸಂಘಟನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ನಿಸ್ವಾರ್ಥ ಸೇವೆ ಸಲ್ಲಿಸಿದ್ದಾರೆ. ಇಂದು ಬಿಡುಗಡೆಗೊಂಡ ಶಿವನಂದಾ ಕೃತಿಯು ಮುಂದೆ ಬರುವ ಪೀಳಿಗೆಗೆ ಆದರ್ಶ ಪ್ರಾಯವಾಗಿದ್ದು ಅವರ ಬಲ ಇನ್ನಷ್ಟು ಹೆಚ್ಚಾಗಲಿ ಎಂದು ನುಡಿದರು.

ಕಾರ್ಯಕ್ರಮ ಉದ್ಘಾಟಿಸಿದ ನಿವೃತ್ತ ಪೊಲೀಸ ಮಹಾ ನಿರ್ದೇಶಕರು ಹಾಗೂ ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾದ ಡಾ.ಶಂಕರ ಬಿದರಿ ಅವರು ಮಾತನಾಡಿ ಸರಳ ಮತ್ತು ಸಜ್ಜನ ವ್ಯಕ್ತಿಯಾದ ಶಿವಶಂಕರ ಹತ್ತಿಯವರ ದಕ್ಷತೆ, ಪ್ರಾಮಾಣಿಕತೆ ಮತ್ತು ಸೇವಾ ಮನೋಭಾವದಿಂದ ಆರೋಗ್ಯ ಇಲಾಖೆಯಲ್ಲಿ ಕ್ಷೇತ್ರ, ಶಿಕ್ಷಣಾಧಿಕಾರಿಯಾಗಿ ತಮ್ಮ ಸೇವೆಯನ್ನು ಪ್ರಾರಂಭಿಸಿ ನಿವೃತ್ತಿಯ ನಂತರ ಸಾಹಿತ್ಯ, ಸಂಸ್ಕೃತಿ ಮತ್ತು ಧಾರ್ಮಿಕ ಚಟುವಟಿಕೆಗಳಲ್ಲಿ ತಮ್ಮನ್ನ ತಾವು ತೊಡಗಿಸಿಕೊಂಡು ಒಬ್ಬ ಸ್ನೇಹ ಮಹಿ ವ್ಯಕ್ತಿಯಾಗಿ ಬೆಳೆದಿದ್ದು ಅಲ್ಲದೆ ನನ್ನ ಸಹೋದರಿಯ ಯಜಮಾನರು ಎಂಬುದು ಹೆಮ್ಮೆಪಡುವ ವಿಷಯ ಎಂದರು.

---

### ಪಾಲಿಕೆ ಅಧಿಕಾರಿಗಳಿಗೆ ಒಳಚರಂಡಿ ವ್ಯವಸ್ಥೆ ದುರಸ್ತಿ ಮತ್ತು ನಿರ್ವಹಣೆ ಮಾಡುವುದು ದಿನಕಳೆದಂತೆ ಸವಾಲಾಗಿ ಪರಿಣಮಿಸಿದೆ

# ಸವಾಲಾದ ಒಳಚರಂಡಿ ವ್ಯವಸ್ಥೆ ನಿರ್ವಹಣೆ: ದುರಸ್ತಿಗೆ ಮನವಿ

• ಉದಯವಾಹಿನಿ ಹುಬ್ಬಳ್ಳಿ

ಮ್ಯಾನ್‌ಹೋಲ್‌ನಿಂದ ಗಲೀಜು ಹೊರಗೆ ಹರಿದು ಬರುತ್ತಿದೆ. ರಸ್ತೆ ತುಂಬೆಲ್ಲ ಗಬ್ಬು ಹರಡಿಕೊಂಡು ಒಂದು ವಾರ ಕಳೆದಿದೆ. ದುರಸ್ತಿ ಮಾಡುವಂತೆ ಮಹಾನಗರ ಪಾಲಿಕೆಗೆ ಮನವಿ ಕೊಟ್ಟರೂ ಸ್ಪಂದಿಸುತ್ತಿಲ್ಲ...'

ಅಂಗವಿಕಲರ ಹಕ್ಕುಗಳ ಹೋರಾಟಗಾರ ಹುಬ್ಬಳ್ಳಿಯ ಹೃದಯಭಾಗ ಜೆ.ಸಿ.ನಗರ ಅಜಂತಾ ಹೋಟೆಲ್ ಪಕ್ಕದ ಆಟೊ ನಿಲ್ದಾಣದಲ್ಲಿದ್ದ ಆಟೊ ಚಾಲಕ ಸುಲೇಮಾನ್ ಅವರ ಮಾತಿದು. ಇದು ಕೇವಲ ಅವರೊಬ್ಬರದೇ ಸಮಸ್ಯೆ ಅಲ್ಲ, ಅವಳಿ ನಗರದ ಬಹುತೇಕ ಭಾಗಗಳಲ್ಲಿ ಇಂತಹ ದೂರುಗಳು ಕೇಳಿಬರುತ್ತಿವೆ. ಅವಳಿನಗರದ ಹಲವೆಡೆ ಮ್ಯಾನ್‌ಹೋಲ್‌ಗಳು ಭರ್ತಿಯಾಗಿ, ತ್ಯಾಜ್ಯದ ನೀರು ಹೊರ ಚಿಮ್ಮುವ ಸಮಸ್ಯೆ ಮಳೆಗಾಲದಲ್ಲಿ ಮಾತ್ರವಲ್ಲ, ಬೇಸಿಗೆಯಲ್ಲೂ ಕಾಣಬಹುದಾಗಿದೆ.

ನಗರದಲ್ಲಿ ಪ್ರತಿ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ವಾಸಿಸುವ ಜನಸಂಖ್ಯೆ ಪ್ರಮಾಣ ವರ್ಷದಿಂದ ವರ್ಷಕ್ಕೆ ಏರಿಕೆಯಾಗುತ್ತಿದೆ. ಆದರೆ, ಹಲವು ದಶಕಗಳ ಹಿಂದೆ ಅಳವಡಿಸಿದ ಒಳಚರಂಡಿಯಲ್ಲಿ (ಯುಜಿಡಿ) ಅಳವಡಿಸಿದ ಕೊಳವೆಗಳು ಜನಸಂಖ್ಯೆಗೆ ಅನುಗುಣವಾಗಿ ಸಾಕಾಗುತ್ತಿಲ್ಲ. ಹೀಗಾಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಕೆಯುಡಬ್ಲುಎಸ್‌ಡಿಬಿ) ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಒಳಚರಂಡಿ ವ್ಯವಸ್ಥೆ ದುರಸ್ತಿ ಮತ್ತು ನಿರ್ವಹಣೆ ಮಾಡುವುದು ದಿನಕಳೆದಂತೆ ಸವಾಲಾಗಿ ಪರಿಣಮಿಸಿದೆ.





ಉದಯವಾಹಿನಿ ಚಿತ್ರ

ಈ ನಿಟ್ಟಿನಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ (ಕೆಯುಐಡಿಎಫ್‌ಸಿ) ಮೂಲಕ 40 ಕೋಟಿ ವೆಚ್ಚದಲ್ಲಿ ವಿವಿಧೆಡೆ ಒಳಚರಂಡಿ ಕೆಲಸ ಆರಂಭಿಸಲಾಗಿದೆ. ಹುಬ್ಬಳ್ಳಿ ನಗರದಲ್ಲಿ ಒಳಚರಂಡಿ ವ್ಯವಸ್ಥೆ ಹದಗೆಟ್ಟಿರುವ ಪ್ರದೇಶಗಳನ್ನು ಗುರುತಿಸಿ.

ಕಿರಿದಾದ ಕೊಳವೆಗಳನ್ನು ಬದಲಾಯಿಸುವ ಕಾಮಗಾರಿ ಈಗಾಗಲೇ ಕೈಗೊಳ್ಳಲಾಗಿದೆ. ಹುಬ್ಬಳ್ಳಿ ನಗರದಲ್ಲಿ ಬಹುತೇಕ ಶೇ 99ರಷ್ಟು ಪ್ರದೇಶವು ಒಳಚರಂಡಿ ವ್ಯವಸ್ಥೆಗೆ ಒಳಪಟ್ಟಿದೆ. ಹೊಸದಾಗಿ ತಲೆ ಎತ್ತಿರುವ ಕೆಲವು ಬಡಾವಣೆಗಳಲ್ಲಿ ಮಾತ್ರ ಒಳಚರಂಡಿ ವ್ಯವಸ್ಥೆ ಇಲ್ಲ ಎನ್ನುವುದು ಪಾಲಿಕೆ ಅಧಿಕಾರಿಗಳ ವಿವರಣೆ. ಧಾರವಾಡ ನಗರದಲ್ಲಿ ಒಳಚರಂಡಿ ವ್ಯವಸ್ಥೆ ಅಯೋಮಯವಾಗಿದೆ. ಜಿಲ್ಲಾ ಕೇಂದ್ರವಾದರೂ ಇದುವರೆಗೂ ಶೇ 40ರಷ್ಟು ಪ್ರದೇಶದಲ್ಲಿ ಮಾತ್ರ ಒಳಚರಂಡಿ ವ್ಯವಸ್ಥೆ ಇದೆ. ಇನ್ನುಳಿದ ಶೇ 60ರಷ್ಟು ಪ್ರದೇಶದಲ್ಲಿ ಒಳಚರಂಡಿ ವ್ಯವಸ್ಥೆ ಮಾಡಬೇಕಿದೆ. ವಿವಿಧ ಯೋಜನೆಗಳಡಿ ಯುಜಿಡಿ ಕಾಮಗಾರಿ ಮಾಡುವುದಕ್ಕಾಗಿ ಮಹಾನಗರ ಪಾಲಿಕೆಯು ಸರ್ಕಾರಸದಿಂದ ಅನುದಾನ ಪಡೆಯುವುದಕ್ಕಾಗಿ ಪ್ರಸ್ತಾವ ಸಲ್ಲಿಸಿದೆ.

> **ಧಾರವಾಡದಲ್ಲಿಯೂ ಹಂತಹಂತವಾಗಿ ಒಳಚರಂಡಿ ವ್ಯವಸ್ಥೆ ಬರಲಿದೆ. ಹುಬ್ಬಳ್ಳಿ ನಗರ ಸಂಪೂರ್ಣ ಒಳಚರಂಡಿ ವ್ಯವಸ್ಥೆಯಲ್ಲಿದೆ. ಆದರೆ ಕೆಲವು ಕಡೆ ಕೊಳವೆ ಬದಲಾಯಿಸುವ ಕೆಲಸ ಮಾಡಲಾಗುತ್ತಿದೆ**
> **-ವಿಜಯಕುಮಾರ್, ಆರ್. ಹು-ಧಾ ಮಹಾನಗರ ಪಾಲಿಕೆಯ ಸೂಪರಿಟೆಂಡೆಂಟ್ ಎಂಜಿನಿಯರ್**

ಅಮೃತ ಯೋಜನೆ-1 ಅನುದಾನದಲ್ಲಿ ಧಾರವಾಡದ ಕೆಲವು ಬಡಾವಣೆಗಳಲ್ಲಿ ಒಳಚರಂಡಿ ಕಾಮಗಾರಿ ಕೈಗೊಳ್ಳಲಾಗಿತ್ತು. ಆದರೆ 'ಬಕಾಸುರನ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆ' ಎನ್ನುವ ರೀತಿಯಲ್ಲಿ ಕಾಮಗಾರಿಯಾಗಿದೆ. ಒಳಚರಂಡಿ ವ್ಯವಸ್ಥೆ ಇರುವ ಪ್ರದೇಶಕ್ಕಿಂತಲೂ ವ್ಯವಸ್ಥೆ ಇಲ್ಲದ ಪ್ರದೇಶವೇ ಹೆಚ್ಚಿನ ಪ್ರಮಾಣದಲ್ಲಿದೆ.

#### ರಸ್ತೆಯಲ್ಲಿ ಗಲೀಜು ಹೊರ ಚಿಮ್ಮುವ ಸಮಸ್ಯೆ

**ಜನರಿಂದ ವ್ಯಕ್ತವಾದ ಆಕ್ರೋಶ ಒಳಚರಂಡಿ ಭರ್ತಿಯಾಗಿ ಮ್ಯಾನ್‌ಹೋಲ್ ಮೂಲಕ ರಸ್ತೆಯಲ್ಲಿ ಗಲೀಜು ಹೊರ ಚಿಮ್ಮುವ ಸಮಸ್ಯೆ ಕೆಲವು ಕಡೆಗಳಲ್ಲಿ ಶಾಶ್ವತ ಎನ್ನುವಂತಾಗಿದೆ. ಹುಬ್ಬಳ್ಳಿಯ ಹೆಗ್ಗೇರಿ ಮಾರುತಿನಗರದ ಮೂಲಕ ಆರ್.ಎನ್.ಶೆಟ್ಟಿ ರಸ್ತೆ ಸಂಪರ್ಕಿಸುವ ಮಾರ್ಗದಲ್ಲಿ ಮ್ಯಾನ್‌ಹೋಲ್ ಬಾಯ್ದೆರೆದು ಸಮಸ್ಯೆ ನಿರ್ಮಾಣವಾಗುವುದು ಪುನರಾವರ್ತನೆ ಆಗುತ್ತಲೇ ಇತ್ತು. ಅಕ್ರೋಶಗೊಂಡ ಜನರು ರಸ್ತೆ ಸಂಚಾರ ತಡೆದು ಈಚೆಗೆ ಪ್ರತಿಭಟನೆ ನಡೆಸಿದರು. ಸ್ಥಳಕ್ಕೆ ಧಾವಿಸಿದ್ದ ಪಾಲಿಕೆ ಅಧಿಕಾರಿಗಳು ದುರಸ್ತಿ ಕಾಮಗಾರಿ ಆರಂಭಿಸಿದ್ದಾರೆ. ಗೋಕುಲ್ ರಸ್ತೆ ಬಸ್ ಡಿಪೋ ಪಕ್ಕದಲ್ಲಿ ಹುಬ್ಬಳ್ಳಿ ಹೊಸ ಕೋರ್ಟ್ ಹಿಂಭಾಗ ಗೋಕುಲ್ ಕೈಗಾರಿಕಾ ಪ್ರದೇಶ ಸರ್ಕಿಟ್ ಹೌಸ್ ಮುಂಭಾಗ ಬಂಗ್ಲೆ ರಸ್ತೆ ದಾಜೀಬಾನ್ ಪೇಟೆ ಮಾರ್ಗ ಹೀಗಾಗಿ ಅನೇಕ ಕಡೆಗಳಲ್ಲಿ ಮ್ಯಾನ್‌ಹೋಲ್‌ನಿಂದ ಗಲೀಜು ರಸ್ತೆಯಲ್ಲಿ ಹರಡುವ ಸಮಸ್ಯೆ ಹಾಗೇ ಇದೆ.**

#### ಹೊಸ ಕಾಮಗಾರಿ


**ಧಾರವಾಡ ನಗರದ ವಾರ್ಡ್ ಸಂಖ್ಯೆ 1ರಿಂದ 9ರ ವ್ಯಾಪ್ತಿಯಲ್ಲಿ ಸಮಗ್ರವಾಗಿ ಒಳಚರಂಡಿ ವ್ಯವಸ್ಥೆ ಮಾಡುವುದಕ್ಕಾಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೂಲಕ ಡಿಪಿಆರ್ ಸಿದ್ಧಪಡಿಸಲಾಗಿದೆ. ಧಾರವಾಡದ ಶಾಸಕ ವಿನಯ ಕುಲಕರ್ಣಿ ಸರ್ಕಾರದಿಂದ 170 ಕೋಟಿ ಅನುದಾನ ಮಂಜೂರಾತಿ ಮಾಡಿಸಿದ್ದಾರೆ. ಹೊಸದಾಗಿ ಯುಜಿಡಿ ಕಾಮಗಾರಿ ಆರಂಭಿಸುವುದಕ್ಕಾಗಿ ಈಗಾಗಲೇ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿದೆ' ಎಂದು ಮಹಾನಗರ ಪಾಲಿಕೆಯ ಸೂಪರಿಟೆಂಡೆಂಟ್ ಎಂಜಿನಿಯರ್ ವಿಜಯಕುಮಾರ್ ಆರ್. ಅವರು ತಿಳಿಸಿದರು.**

---

## ಮಿನಿ ನ್ಯೂಸ್

### ಕೊಲೆ ಆಗುತ್ತಲೇ ಇರುತ್ತವೆ, ಎಲ್ಲರ ಮನೆಗೆ ನಾವು ಹೋಗಬೇಕಿಲ್ಲ

• ಉದಯವಾಹಿನಿ ಮಂಗಳೂರು



ಕೊಲೆಗಳು ಆಗುತ್ತಲೇ ಇರುತ್ತವೆ. ಕೊಲೆಯಾದ ಪ್ರತಿಯೊಬ್ಬರ ಮನೆಗೆ ಸಚಿವರು ಹೋಗಲೇಬೇಕು ಎಂದೇನೂ ಇಲ್ಲ. ಕೊಲೆ ಏಕೆ ಆಗಿದೆ ಎಂಬುದೂ ಮುಖ್ಯವಾಗುತ್ತದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಬಜಪೆ ಬಳಿ ಈಚೆಗೆ ಹತ್ಯೆಗೀಡಾದ ಹಿಂದುತ್ವ ಪರ ಕಾರ್ಯಕರ್ತ, ರೌಡಿಶೀಟರ್ ಸುಹಾಸ್ ಶೆಟ್ಟಿ ಮನೆಗೆ ಸಚಿವರು ಭೇಟಿ ನೀಡಿಲ್ಲ ಎಂಬ ಬಿಜೆಪಿಯವರ ಆರೋಪಕ್ಕೆ ಸಚಿವರು ಹೀಗೆ ಪ್ರತಿಕ್ರಿಯಿಸಿದರು.

ಸುದ್ದಿಗೋಷ್ಠಿಯಲ್ಲಿ ಅವರು, ಸುಹಾಸ್ ಶೆಟ್ಟಿ ಕೊಲೆ ಏಕೆ ಆಗಿದೆ ಎಂಬುದನ್ನು ತಿಳಿದಿರುವ ಸರ್ಕಾರ, ತಪ್ಪಿತಸ್ಥರನ್ನು ಬಂಧಿಸಿ ಜವಾಬ್ದಾರಿ ನಿರ್ವಹಿಸಿದೆ. ಯಾರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ' ಎಂದರು. 'ಆರೋಪಿಗಳನ್ನು ಬಂಧಿಸಿದ್ದೇವೆ. ನಿಷ್ಪಕ್ಷಪಾತವಾಗಿ ತನಿಖೆ ನಡೆಯುತ್ತಿದೆ. ಎನ್‌ಐಎಗೆ ತನಿಖೆ ವಹಿಸಬೇಕು ಎಂಬ ಬಿಜೆಪಿಯವರ ಒತ್ತಾಯಕ್ಕೆ ಉತ್ತರಿಸಲು ಆಗುವುದಿಲ್ಲ. ಬಿಜೆಪಿಯವರು ಊಹಾಪೋಹದ ಹೇಳಿಕೆ ಬಿಟ್ಟು ಸ್ಪಷ್ಟ ಮಾಹಿತಿ ಇದ್ದರೆ ತಿಳಿಸಲಿ' ಎಂದು ಹೇಳಿದರು.

### ಪದೇ ಪದೇ ಸರ್ವರ್ ಡೌನ್, ಒಟಿಪಿ ಹೇಳಲು ಹಿಂದೇಟು

• ಉದಯವಾಹಿನಿ ಶಿವಮೊಗ್ಗ

ಪದೇಪದೇ ಮೊಬೈಲ್‌ಫೋನ್ ಆ್ಯಪ್‌ನ ಸರ್ವರ್ ಡೌನ್ ಆಗುವುದು ಹಾಗೂ ದತ್ತಾಂಶ ಸಂಗ್ರಹ ವೇಳೆ ಸಂಬಂಧಿಸಿದವರು ಆಧಾರ್ ಕಾರ್ಡ್ ಒಟಿಪಿ ಹೇಳಲು ಹಿಂದೇಟು ಹಾಕುತ್ತಿರುವುದು ಪರಿಶಿಷ್ಟ ಜಾತಿಯ ಒಳಮೀಸಲು ನಿಗದಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಮನೆಮನೆ ಸಮೀಕ್ಷೆ ವೇಳೆ ಗಣತಿದಾರರಿಗೆ ತಲೆನೋವಾಗಿದೆ.

ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ನಿಗದಿಗೆ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ ದಾಸ್ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗ ಪರಿಶಿಷ್ಟ ಜಾತಿಗಳ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಸ್ಥಿತಿಗತಿಯ ಬಗ್ಗೆ ದತ್ತಾಂಶ ಸಂಗ್ರಹಿಸಲು ಸಮಾಜ ಕಲ್ಯಾಣ ಇಲಾಖೆ ನೇತೃತ್ವದಲ್ಲಿ ಮೇ 5ರಿಂದ ಮನೆಮನೆ ಸಮೀಕ್ಷೆ ಆರಂಭಿಸಿದೆ. ಅದು ಮೇ 17ಕ್ಕೆ ಮುಕ್ತಾಯವಾಗಬೇಕಿದೆ. ದತ್ತಾಂಶ ಸಂಗ್ರಹಿಸಲು ಗಣತಿದಾರರಿಗೆ ಸರ್ಕಾರ ಮೊಬೈಲ್ ಫೋನ್ ಆ್ಯಪ್ ಒದಗಿಸಿದೆ. ತಾಂತ್ರಿಕ ತೊಂದರೆ ಎದುರಾದಲ್ಲಿ ಆಫ್‌ಲೈನ್ ಮೂಲಕ ಸಂಬಂಧಿಸಿದವರ ಮಾಹಿತಿ ದಾಖಲು ಮಾಡಿಕೊಳ್ಳಬೇಕಿದೆ.

**ಸರ್ವರ್ ಡೌನ್ ಸಮಸ್ಯೆ:** ಮೇ 5ರಿಂದ ಮನೆ ಮನೆ ಸಮೀಕ್ಷೆ ಆರಂಭವಾಗಿದ್ದರೂ ಮೊದಲ ದಿನ ಸಿದ್ಧತೆಯಲ್ಲಿಯೇ ಕಳೆದುಹೋಗಿದೆ. ವಾಸ್ತವವಾಗಿ ಮೇ 6ರಿಂದ ಸಮೀಕ್ಷೆ ಶುರುವಾಗಿದೆ. ಈ ಮಧ್ಯೆ, ಸರ್ಕಾರ ಒದಗಿಸಿರುವ ಮೊಬೈಲ್‌ಫೋನ್ ಆ್ಯಪ್ ಸರ್ವರ್ ಸಮಸ್ಯೆಯಿಂದ ಕೆಲಸ ನಿಲ್ಲಿಸುತ್ತಿದೆ. ಮೇ 9ರಂದು ಇಡೀ ದಿನ ಆ್ಯಪ್ ಕಾರ್ಯ ನಿರ್ವಹಿಸಿಲ್ಲ. ಮೇ 10ರ ಮಧ್ಯಾಹ್ನದಿಂದ ಮತ್ತೆ ಚಾಲನೆಗೊಂಡಿದೆ.

ಮೇ 17ರ ಡೆಡ್‌ಲೈನ್‌ನಲ್ಲಿ ಸಮೀಕ್ಷೆ ಪೂರ್ಣಗೊಳಿಸಬೇಕಿದೆ. ಈ ತಾಂತ್ರಿಕ ಸಮಸ್ಯೆಯಿಂದ ಸಮೀಕ್ಷೆದಾರರು ಒತ್ತಡಕ್ಕೆ ಸಿಲುಕುತ್ತಿದ್ದಾರೆ.

ಜೊತೆಗೆ ಮಲೆನಾಡಿನಲ್ಲಿ ಈ ಬಾರಿಯ ವಿಪರೀತ ಬಿಸಿಲು ಅವರಿಗೆ ಸವಾಲಾಗಿದೆ. ಸಮೀಕ್ಷೆ ವೇಳೆ ಸದರಿ ಮನೆಯಲ್ಲಿ ಪರಿಶಿಷ್ಟ ಜಾತಿಯವರ ಹೊರತಾಗಿ ಬೇರೆ ಸಮುದಾಯದವರು ಇದ್ದರೆ ಅವರ ಜಾತಿ, ಆ ಕುಟುಂಬದ ಸದಸ್ಯರ ಸಂಖ್ಯೆಯನ್ನು ಆ್ಯಪ್‌ನಲ್ಲಿ ನಮೂದಿಸಬೇಕಿದೆ. ಆದರೆ, ಇದಕ್ಕೆ ಬಹಳಷ್ಟು ಜನ ಅಸಹಕಾರ ತೋರುತ್ತಿದ್ದಾರೆ.

---

### ಧರ್ಮದ ಏಳಿಗೆಗೆ ಶಿಕ್ಷಣ ಮುಖ್ಯ, ಜೊತೆ ಆಧ್ಯಾತ್ಮದ ಏಳಿಗೆ ಆಗಬೇಕು: ಪೂಜ್ಯ ಅಭಿನವ ಸಿದ್ಧರತ್ನ ಮದಗೊಂಡೇಶ್ವರ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಆಧ್ಯಾತ್ಮಿಕ ಏಳಿಗೆ ಆಗಬೇಕು,ಶಿಕ್ಷಣದಿಂದ ಮಾತ್ರ ಧರ್ಮದ ಏಳಿಗೆಆಗುತ್ತದೆ ಸಮಾಜದ ಬಾಂಧವರು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿದರೆ ಹಾಲು ಮತ ಸಮಾಜ ಬೆಳೆಯುತ್ತದೆ ಎಂದು ಅಕ್ಕಲಕೋಟದ ಬಸವ ಸಂಗೋಳಗಿಯ ಪರಮಪೂಜ್ಯ ಅಭಿನವ ಸಿದ್ಧರತ್ನ ಮದಗೊಂಡೇಶ್ವರ ಮಹಾರಾಜರು ಹೇಳಿದರು.

ತಾಲ್ಲೂಕಿನ ಗಡಿಕೇಶ್ವಾರ ಗ್ರಾಮದ ಬೀರಲಿಂಗೇಶ್ವರ ದೇವಾಸ್ಥಾನದಲ್ಲಿ ಹುಲಜಂತಿ ಮಾಳಿಂಗರಾಯರ 11ದಿನದ ಮಹಾಪುರಣದ ಮಂಗಲೋತ್ಸೋವ ಸಮಾರಂಭದಲ್ಲಿ ಮಾತನಾಡಿದ ಅವರು,ಧ್ಯಾನ ದಾನ ಧರ್ಮದಿಂದ ದೇವರನ್ನು ಒಲಿಸಿಕೊಳ್ಳಬಹುದು. ವೃದ್ಧರಿಗೆ, ಹಿರಿಯರಿಗೆ,ಅನಾಥರಿಗೆ ಕರುಣೆ ತೋರಬೇಕು ವೇದಾಂತ ಪುರಾಣದಲ್ಲಿದೆ,ಹಿರಿಯರಿಗೆ ಗೌರವಿಸಿ ತಂದೆ ತಾಯಿಗೆ ಪ್ರೀತಿಸಿ ಪೋಷಣೆ ಮಾಡಿ ಅವರು ಹೇಳುವ ಪ್ರತಿಯೊಂದು ಮಾತುಗಳು ಪಾಲನೆ ಮಾಡಿ ದುಶ್ಚಟಗಳಿಂದ ದೂರವಿದ್ದು ಉತ್ತಮ ಕುಟುಂಬ ನಿರ್ವಹಣೆ ಮಾಡಿ ಸಮಾಜದಲ್ಲಿ ಒಳ್ಳೆಯ ಹೆಸರು ಇರುತ್ತೆ,ಹಾಲುಮತದ ಇತಿಹಾಸ ಕೊನೆಯಿಲ್ಲದ ಇತಿಹಾಸವಿದೆ, ಮೂಲ ಸಂಸ್ಕೃತಿ ಸಂಸ್ಕಾರ ಬಹಳಷ್ಟು ಮುಖ್ಯವಾಗಿದೆ ಎಂದರು.

ಸಿದ್ರಾಮಪ್ಪಾ ಮಾಸ್ಟರ್ ಕುಕುಂದಾ ಮಾತನಾಡಿ ಪುರಾಣಗಳು ಕೇಳಿ ಅರ್ಥ ಮಾಡಿಕೊಂಡರೆ ಪುಣ್ಯ ಸಿಗುತ್ತದೆ ಎಂದರು. ಗೋಪಾಲ ಪೂಜಾರಿ ಗಾರಂಪಳ್ಳಿ ಮಾತನಾಡಿ ಪುರಾಣ ಎಂದರೆ ಇತಿಹಾಸ ಎಲ್ಲಾ ಮಹಾಪುರುಷರ ಇತಿಹಾಸ ತಿಳಿದುಕೊಳ್ಳಬೇಕಾದರೆ ಪುರಾಣಗಳು ಕೇಳಬೇಕು ಪುರಾಣ ಕೇಳುವುದರಿಂದ ಮಹಾಪುರುಷರ ಇತಿಹಾಸ ತಿಳಿಯುತ್ತದೆ ಎಂದರು. ಕೃಷಿಕ ಸಮಾಜದ ರಾಜ್ಯ ನಿರ್ದೇಶಕರು ಬಸವರಾಜ ಪಾಟೀಲ ಊಡಗಿ,ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಮಹಾಂತೇಶ ಕಾವಲಗಿ, ಮಾತನಾಡಿದರು. ಮಾಳಪ್ಪಾ ಅಪ್ಪುಜೀ ಸ್ವಾಗತಿಸಿದರು,ಕಾಳಗಿ ತಾಲ್ಲೂಕಾ ಕುರುಬ ಸಮಾಜ ಅಧ್ಯಕ್ಷ ರೇವಣಸಿದ್ದಪ್ಪ ಅಣಕಲ್ ನಿರೂಪಿಸಿದರು,ರಾಜಶೇಖರ ಅಣಕಲ್ ವಂದಿಸಿದರು.

### ಕೆಂಚಾಂಬಾ ದೇವಿ ದೊಡ್ಡ ಜಾತ್ರೆ

• ಉದಯವಾಹಿನಿ ಆಲೂರು

ಸುತ್ತಲಿನ 48 ಹಳ್ಳಿಗಳಿಗೆ ಸೇರಿದ ಕೆ.ಹೊಸಕೋಟೆ ಹೋಬಳಿಯ ಹರಿಹಳ್ಳಿ ಕೆಂಚಾಂಬಾ ದೇವಿ ವರ್ಷದ ದೊಡ್ಡ ಜಾತ್ರೆ ಕಟ್ಟು ನಿಟ್ಟಿನಿಂದ ಅತ್ಯಂತ ವೈಭವ, ಭಕ್ತಿಯಿಂದ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು. ಈ ಜಾತ್ರೆಯಲ್ಲಿ ಮಾತ್ರ ದೇವಿ ಪಾದ ಮುಟ್ಟಿ ನಮಸ್ಕರಿಸಲು ಅವಕಾಶವಿದ್ದರಿಂದ ನೆರೆದಿದ್ದ ಭಕ್ತರೆಲ್ಲ ದೇವಿ ಪಾದ ಮುಟ್ಟಿ ನಮಸ್ಕರಿಸಿ ಪುನೀತರಾದರು.

ಮೇ 4ರಿಂದ ಆರಂಭವಾದ ಜಾತ್ರೆಗೆ ಭಾನುವಾರ ದೊಡ್ಡ ಜಾತ್ರೆ ನಡೆಯುವುದರೊಂದಿಗೆ ನಾಂದಿ ಹಾಡಲಾಯಿತು. 48 ಹಳ್ಳಿಗೆ ಒಳಪಡುವ ಈ ಜಾತ್ರೆ, ವಿಶೇಷವೆಂದರೆ ಪ್ರತಿ ಹಳ್ಳಿಗಳಲ್ಲಿ ಕೆಂಚಮ್ಮ ದೇವಿ ಮುಖ ಧರಿಸಿ ಕೂರಿಸಿ, ಪ್ರತಿದಿನ ಸಂಜೆ ದೇವರ ಉತ್ಸವ ಮತ್ತು ಸುಗ್ಗಿ ಕುಣಿತದಿಂದ ಸಂಭ್ರಮಿಸಿದರು.

ಹರಿಹಳ್ಳಿ ಗ್ರಾಮದ ಮೂಲ ದೇವಸ್ಥಾನದಲ್ಲಿ ಸಪ್ತಮಾತೃಕೆಯರ ಮುಖವಾಡವನ್ನಿಟ್ಟು ರಾತ್ರಿ 10 ಗಂಟೆಯವರೆಗೆ ಅಲಂಕಾರ ಮಾಡಿ ಸುಗ್ಗಿ ಕುಣಿತ ಕುಣಿದರು. ಬೆಳಗಿನ ಜಾವ ಪ್ರತಿ ಹಳ್ಳಿಗಳಲ್ಲಿ ಮಹಿಳೆಯರು ಕಲಶ ತೆಗೆದುಕೊಂಡು, ಹೊಳೆ ಬಳಿ ತೆರಳಿ ಕೆಂಚಾಂಬಿಕೆ ದೇವಿಗೆ ಪೂಜೆ ಸಲ್ಲಿಸಿದರು.

### ಪಂಪಸೆಟ್‌ಗಳಿಗೆ ಸಿಗದ ವಿದ್ಯುತ್, ಒಣಗುತ್ತಿದೆ ಕಬ್ಬು

• ಉದಯವಾಹಿನಿ ಔರಾದ್

ತಾಲ್ಲೂಕಿನ ಕೆಲ ಹೋಬಳಿಯಲ್ಲಿ ಕೃಷಿ ಪಂಪಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಸಿಗದೆ ರೈತರಿಗೆ ಸಮಸ್ಯೆಯಾಗಿದೆ. ಸಂತಪುರ ಹೋಬಳಿಯ ಹೆಡಗಾಪೂರ, ನಾಗೂರ, ಬೆಳಕುಣಿ ಸೇರಿದಂತೆ ಈ ಭಾಗದ ವಿವಿಧ ಗ್ರಾಮಗಳ ರೈತರು ಅಲ್ಪ ಸ್ವಲ್ಪ ನೀರಾವರಿ ಪ್ರದೇಶ ಮಾಡಿಕೊಂಡಿದ್ದಾರೆ. ಕಬ್ಬು, ತರಕಾರಿ ಹಾಗೂ ಕೆಲ ಬೇಸಿಗೆ ಬೆಳೆ ಬೆಳೆಯುತ್ತಾರೆ. ಆದರೆ, ಕಳೆದ ಕೆಲ ದಿನಗಳಿಂದ ಕೃಷಿ ಪಂಪಸೆಟ್‌ಳಿಗೆ ಸರ್ಮಪಕ ವಿದ್ಯುತ್ ಸಿಗದೇ ಬೆಳೆಗಳು ಒಣಗುತ್ತಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

'ನಾಗೂರ ಸೇರಿದಂತೆ ನಮ್ಮ ಊರಿನ ಅಕ್ಕ ಪಕ್ಕದಲ್ಲಿ 400 ಎಕರೆಗೂ ಜಾಸ್ತಿ ಕಬ್ಬು ಇದೆ. ರೈತರು ಸಾಕಷ್ಟು ಹಣ ಖರ್ಚು ಮಾಡಿ ಕೊಳವೆ ಬಾವಿ, ತೆರೆದ ಬಾವಿ ಮಾಡಿಕೊಂಡು ಕಬ್ಬು ಬೆಳೆಸುತ್ತಿದ್ದಾರೆ. ಆದರೆ, ಸರ್ಕಾರದ ನಿಯಮದಂತೆ ಕೃಷಿ ಪಂಪಸೆಟ್‌ಗಳಿಗೆ ನಿತ್ಯ 7 ಗಂಟೆ ತ್ರಿಫೇಸ್ ವಿದ್ಯುತ್ ಕೊಡಬೇಕು. ಆದರೆ, ಎರಡು ಗಂಟೆಯೂ ನಿಯಮಿತವಾಗಿ ವಿದ್ಯುತ್ ಸಿಗತ್ತಿಲ್ಲ. ಪದೇ ಪದೇ ಕಡಿತ ಆಗುತ್ತಿರುವುದು ನಮಗೆ ದೊಡ್ಡ ಸಮಸ್ಯೆ. ಇಂತಹ ಕೆಟ್ಟ ಬಿಸಿಲಲ್ಲಿ ವಿದ್ಯುತ್ ಬರುವಿಕೆಗಾಗಿ ಕಾಯಬೇಕಾಗಿದೆ. ಪದೇ ಪದೇ ಕಡಿತ ಆಗಿ ಮೋಟಾರ್‌ಗಳು ಸುಟ್ಟು ಹೋಗುತ್ತಿವೆ' ಎಂದು ನಾಗೂರ ರೈತ ಸಂತೋಷ ಮಸ್ಕಲೆ ಗೋಳು ತೋಡಿಕೊಂಡಿದ್ದಾರೆ.


ಉದಯವಾಹಿನಿ ಚಿತ್ರ

> **ರಿಪೇರಿ ಹೆಸರಿನಲ್ಲಿ ಪದೇ ಪದೇ ವಿದ್ಯುತ್ ಕಡಿತ ಮಾಡುವುದು ಸರಿಯಲ್ಲ. ಬೆಳಿಗ್ಗೆ 9ರ ಮೊದಲು ಹಾಗೂ ಸಂಜೆ 4 ಗಂಟೆ ನಂತರ ರಿಪೇರಿ ಮಾಡಿಕೊಳ್ಳಿ. ಪಂಪಸೆಟ್‌ಗಳಿಗೆ ಪೂರೈಕೆಯಾಗುವ ಸಮಯದಲ್ಲಿ ವಿದ್ಯುತ್ ಕಡಿತ ಮಾಡಿದರೆ ರೈತರಿಗೆ ಸಮಸ್ಯೆಯಾಗಲಿದೆ'**
> **-ಶ್ರೀಮಂತ ಬಿರಾದಾರ, ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ**

---

### ಬಾಂಬ್ ಬೆದರಿಕೆ ಕರೆ ವ್ಯಕ್ತಿ ಬಂಧನ

• ಉದಯವಾಹಿನಿ ಕಲಬುರ್ಗಿ

ನವದೆಹಲಿ-ಬೆಂಗಳೂರು ಮಾರ್ಗದಲ್ಲಿ ಓಡಾಡುವ ಕರ್ನಾಟಕ ಎಕ್ಸ್‌ಪ್ರೆಸ್(ಕೆಕೆ ಎಕ್ಸ್ ಪ್ರೆಸ್) ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕನೊಬ್ಬ ಅದೇ ರೈಲಿನಲ್ಲಿ ಬಾಂಬ್ ಇಡಲಾಗಿದೆ ಎಂದು ರೈಲ್ವೆ ಕಂಟ್ರೋಲ್ ರೂಮ್ ಗೆ ಬೆದರಿಕೆ ಕರೆ ಮಾಡಿರುವ ಘಟನೆ ಇಂದು ಮುಂಜಾನೆ ನಡೆದಿದೆ. ಈ ಸಂಬಂಧ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸುವಲ್ಲಿ



ವಾಡಿ ರೈಲ್ವೆ ಪೊಲೀಸರು ಯಶಸ್ವಿಯಾಗಿದ್ದು, ಉತ್ತರ ಪ್ರದೇಶ ಮೂಲದ ದೀಪಸಿಂಗ್ ರಾಥೋಡ್(33) ಬಂಧಿತ ಆರೋಪಿ. ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಾಡಿ ರೈಲ್ವೆ ಪೊಲೀಸ್ ಠಾಣೆಯ ಪಿಎಸ್ಐ ವೀರಭದ್ರಪ್ಪ ಎಚ್.ಎಸ್. ತಿಳಿಸಿದ್ದಾರೆ. ಕೆಕೆ ಎಕ್ಸ್ ಪ್ರೆಸ್ ರೈಲಿನಲ್ಲಿ ಬಾಂಬ್ ಇಟ್ಟಿರುವ ಅನುಮಾನವಿದೆ ಎಂದು ಪ್ರಯಾಣಿಕನೋರ್ವ ರೈಲ್ವೆ ಕಂಟ್ರೋಲ್ ರೂಮ್‌ಗೆ ಕರೆ ಮಾಡಿದ್ದಾನೆ. ಈ ಹಿನ್ನೆಲೆಯಲ್ಲಿ ಹೊಸದಿಲ್ಲಿ-ಬೆಂಗಳೂರು ಕರ್ನಾಟಕ ಎಕ್ಸ್ ಪ್ರೆಸ್ ರೈಲನ್ನು ಇಂದು (ಮೇ 11) ಮುಂಜಾನೆ ವಾಡಿ ರೈಲು ನಿಲ್ದಾಣದಲ್ಲಿ ನಿಲ್ಲಿಸಿ 4 ಗಂಟೆಗಳ ಕಾಲ ತಪಾಸಣೆಗೊಳಪಡಿಸಲಾಯಿತು. ಬಾಂಬ್ ನಿಷ್ಕ್ರಿಯ ದಳದ ಡಾಗ್ ಸಿಬ್ಬಂದಿ ಪ್ರಯಾಣಿಕರನ್ನು ಕೆಳಗಿಳಿಸಿ ರೈಲಿನ 22 ಬೋಗಿಗಳನ್ನು ತಪಾಸಣೆ ಮಾಡಿದರು. ಬಳಿಕ ಅದೊಂದು ಹುಸಿಬಾಂಬ್ ಕರೆ ಎಂಬುದು ದೃಢಪಟ್ಟಿತ್ತು.

ಹುಸಿ ಬಾಂಬ್ ಮಾಡಿರುವ ವ್ಯಕ್ತಿಯನ್ನು ಪತ್ತೆಹಚ್ಚಲಾಯಿತು. ಆರೋಪಿ ದೀಪಸಿಂಗ್ ರಾಥೋಡ್ ನನ್ನು ವಿಚಾರಣೆಗೆ ಒಳಪಡಿಸಿದಾಗ ಸುಳ್ಳು ಮಾಹಿತಿ ನೀಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಆತ ಗುಂತಕಲ್ ಕಡೆ ಹೊರಟಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

### 10 ಲಕ್ಷ ಪಡೆದು ನಕಲಿ ಚಿನ್ನ ನೀಡಿದ ಆರೋಪಿ ಹಣದೊಂದಿಗೆ ಬಂಧನ

• ಉದಯವಾಹಿನಿ ಬಳ್ಳಾರಿ

ಕಡಿಮೆ ಬೆಲೆಯಲ್ಲಿ ಬಂಗಾರ ನೀಡುವುದಾಗಿ ನಕಲಿ ಚಿನ್ನ ನೀಡಿ ಆಂಧ್ರ ಮೂಲದ ವ್ಯಕ್ತಿಯಿಂದ 10 ಲಕ್ಷ ರೂ. ಪಡೆದು ವಂಚನೆ ಮಾಡಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಸಂಡೂರು ತಾಲ್ಲೂಕಿನ ಅಂತಾಪುರ ಗ್ರಾಮದ ಆರೋಪಿ ತಿರುಪತಿ (30)ಆಂದ್ರ ಪ್ರದೇಶದ ಅನಂತಪುರಂನ ಶಿವರೆಡ್ಡಿ ಎಂಬುವರಿಗೆ ತೋರಣಗಲ್ಲು ಗ್ರಾಮಕ್ಕೆ ಕರೆಸಿ 10 ಲಕ್ಷ ನಗದು ಪಡೆದು ನಕಲಿ ಗೋಲ್ಡ್ ಕೊಟ್ಟು ಕಳಿಸಿದ್ದಾನೆ.

ನಕಲಿ ಬಂಗಾರ ಎಂದು ಗೊತ್ತಾಗುತ್ತಿದಂತೆ ಶಿವರೆಡ್ಡಿ ತೋರಣಗಲ್ ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದ. ಪೊಲೀಸರು ತನಿಖೆ ನಡೆಸಿ ಆರೋಪಿಯನ್ನು 10 ಲಕ್ಷ ಹಣ ಸಮೇತ ಬಂಧಿಸಿದ್ದಾರೆ.

ತಿರುಪತಿ ಶಿವಾರೆಡ್ಡಿಗೆ ತನ್ನ ಬಳಿಹಳೇ ಕಾಲದ ಬಂಗಾರ ದೊರೆತಿದೆ. ಮಾರಾಟ ಮಾಡಲು ಆಗುತ್ತಿಲ್ಲ. ಅದನ್ನು ಕಡಿಮೆ ಬೆಲೆಗೆ ಕೊಡುವುದಾಗಿ ನಂಬಿಸಿ ಶಿವಾರೆಡ್ಡಿಗೆ ಬಲೆ ಬೀಸಿ, ತಾನೇ ಪೊಲೀಸರ ಬಲೆಯಲ್ಲಿ ಬೀಳುವಂತಾಗಿದೆ.

### ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವುದನ್ನು ವಿರೋಧಿಸಿ ಸಭೆ

• ಉದಯವಾಹಿನಿ ಬಳ್ಳಾರಿ

ನಗರದ ಕಾಟೆಗುಡ್ಡ ಏರಿಯಾದ ಅಂಜೇನೇಯ ದೇವಾಸ್ಥಾನದ ಬಳಿ ಎಐಡಿಎಸ್‌ಓ ಮತ್ತು ಎಐಎಸ್‌ಇಸಿ ವತಿಯಿಂದ ಸಂಯೋಜನೆ ಹೆಸರಿನಲ್ಲಿ ಆರು ಸಾವಿರಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವ ಸರ್ಕಾರದ ನಿಲುವನ್ನು ವಿರೋಧಿಸಿ ಪೋಷಕರ ಸಭೆ ನಡೆಸಲಾಯಿತು. ಇದೆ ಏರಿಯಾದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕೂಡ ಕಡಿಮೆ ದಾಖಲಾತಿ ಹೊಂದಿರುವ ಹಿನ್ನೆಲೆಯಲ್ಲಿ ಇಲ್ಲಿನ ಪೋಷಕರ ಜೊತೆ ಚರ್ಚಿಸಲಾಯಿತು.

ಎಐಎಸ್‌ಇಸಿ ಜಿಲ್ಲಾ ಅಧ್ಯಕ್ಷರು ಆರ್.ಸೋಮಶೇಖರ್ ಗೌಡ ಅವರು ಮಾತನಾಡಿ ರಾಜ್ಯದ ಸರ್ಕಾರಿ ಶಾಲೆಗಳು ಎದುರಿಸುತ್ತಿರುವ ಯಾವ ಗಂಭೀರ ಸಮಸ್ಯೆಗಳನ್ನು ಪರಿಹರಿಸದೇ, ಕಡಿಮೆ ದಾಖಲಾತಿ ಹೆಸರಲ್ಲಿ ಶಾಲೆಗಳನ್ನು ಮುಚ್ಚುತ್ತಿರುವುದು ಬಡವರ ಮಕ್ಕಳಿಂದ ಶಾಶ್ವತವಾಗಿ ಶಿಕ್ಷಣವನ್ನು ಕಿತ್ತುಕೊಳ್ಳುವ ಹುನ್ನಾರವಾಗಿದೆ ಎಂದು ಕಿಡಿಕಾರಿದರು.

ಸರ್ಕಾರವು ತನ್ನ ಈ ಅವೈಜ್ಞಾನಿಕ,ಅಪ್ರಜಾತಾಂತ್ರಿಕ ಜನ ವಿರೋಧಿ ನಿರ್ಧಾರವನ್ನು ಕೈಬಿಡಬೇಕು ಹಾಗೂ ಕೂಡಲೇ ಹಾಜರಾತಿ ಕಡಿಮೆ ಇರುವ ಶಾಲೆಗಳನ್ನು ಮುಚ್ಚುವ ಬದಲು ಅವಶ್ಯಕ ಮೂಲಭೂತ ಸೌಲಭ್ಯಗಳನ್ನು ನೀಡಿ



ಉದಯವಾಹಿನಿ ಚಿತ್ರ

ಅಭಿವೃದ್ಧಿಪಡಿಸಿ, ರಕ್ಷಿಸಬೇಕು ಎಂದು ಆಗ್ರಹಿಸಿದರು.

ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷರು ಕೆ.ಈರಣ್ಣ ಮಾತನಾಡುತ್ತಾ ರಾಜ್ಯ ಸರ್ಕಾರ ಕಡಿಮೆ ದಾಖಲಾತಿ ಹೆಸರಿನಲ್ಲಿ 6,000ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗಿದೆ ಅದರಲ್ಲಿ ಬಳ್ಳಾರಿಯಲ್ಲಿ ಮುಚ್ಚುತ್ತಿರುವ ಶಾಲೆಗಳ ಸಂಖ್ಯೆ 171(ಕಡಿಮೆ ದಾಖಲಾತಿ ಹೊಂದಿರುವ ಶಾಲೆಗಳು) ಸರ್ಕಾರಿ ಶಾಲೆಗಳು ಬಡಜನರ ಮಕ್ಕಳ ಶಿಕ್ಷಣದ ಆಶಾಕಿರಣ, ಕೋಟ್ಯಾಂತರ ವಿದ್ಯಾರ್ಥಿಗಳ ಭವಿಷ್ಯದ ಅಡಿಪಾಯ, ಈ ಶಾಲೆಗಳಿಗೆ ಶಿಕ್ಷಣದ ಕನಸು ಹೊತ್ತು ಬರುವವರು ಬಹುತೇಕ ಬಡವರ, ರೈತ-ಕಾರ್ಮಿಕರ ಮಕ್ಕಳು. ಅಂತಹ ಸರ್ಕಾರಿ ಶಾಲೆಗಳ ಇಂದಿನ ಪರಿಸ್ಥಿತಿ ಬಹಳ ಶೋಚನೀಯ ಹಾಗೂ ಚಿಂತಾಜನಕವಾಗಿದೆ ಎಂದರು.

### ಮಿನಿ ಲಾರಿಯಲ್ಲಿ ಹೊತ್ತಿ ಉರಿದ ಭತ್ತದ ಹುಲ್ಲು ದೌಡಾಯಿಸಿ ನಂದಿಸಿದ ಅಗ್ನಿಶಾಮಕ ದಳ, ಗ್ರಾಮಸ್ಥರಿಂದ ಮೆಚ್ಚುಗೆ

• ಉದಯವಾಹಿನಿ ಕಾರಟಗಿ

ತಾಲ್ಲೂಕಿನ ಸೋಮನಾಳ ಗ್ರಾಮದ ಸಮೀಪದ ಮುಖ್ಯ ರಸ್ತೆಯಲ್ಲಿ ಎಮ್ ಎಚ್ 09 ಸಿಯು, 1768 ಸಂಖ್ಯೆಯ ಮಿನಿ ಲಾರಿಯಲ್ಲಿ ಸಾಗಿಸುತ್ತಿರುವ ಭತ್ತದ ಹುಲ್ಲು ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಸಂಭವಿಸಿ ಬೆಂಕಿ ಹತ್ತಿಕೊಂಡು ಉರಿದ ಘಟನೆ ಮೇ 11 ಭಾನುವಾರ ನಡೆದಿದೆ.

ಸೋಮನಾಳ ಗ್ರಾಮದ ಸಂಗಪ್ಪ ತಂದೆ ಅಯ್ಯಪ್ಪ ಎನ್ನುವವರ ಸುಮಾರು 03 ಎಕರೆಯ 08 ಸಾವಿರ ಮೌಲ್ಯದ ಭತ್ತದ ಹುಲ್ಲನ್ನು ಕುಷ್ಟಗಿ ತಾಲ್ಲೂಕ ಮಲ್ಲಾಪುರ, ಬುನ್ನಟ್ಟಿ, ಗ್ರಾಮಕ್ಕೆ ಸಾಗಿಸುತ್ತಿದ್ದರು ಈ ವೇಳೆ ರಸ್ತೆಯ ಮೇಲ್ಭಾಗದಲ್ಲಿ ವಿದ್ಯುತ್ ತಂತಿಗಳಿಗೆ ಮಿನಿ ಲಾರಿಯಲ್ಲಿರುವ ಹುಲ್ಲು ತಾಗಿರುವುದರಿಂದ ವಿದ್ಯುತ್ ತಂತಿಗಳು ಒಂದಕ್ಕೊಂದು ಸ್ಪರ್ಶಿಸಿ ಬೆಂಕಿ ಕಿಡಿ ಲಾರಿಯಲ್ಲಿರುವ ಹುಲ್ಲಿನ ಮೇಲೆ ಬಿದ್ದು ಹುಲ್ಲು ಬೆಂಕಿಗೆ ಹೊತ್ತಿ ಉರಿದಿದೆ ವೇಳೆ ಅಲ್ಲಿಯೇ ಇದ್ದ ಸ್ಥಳೀಯರಾದ ದಲಿತ ವಿಮೋಚನಾ ಸೇನೆಯ ಪ್ರಧಾನ


ಉದಯವಾಹಿನಿ ಚಿತ್ರ

**2000 ಮೌಲ್ಯದ ಹುಲ್ಲು ನಷ್ಟ**

ಕಾರ್ಯದರ್ಶಿ ಶರಣಪ್ಪ ವಣಗೇರಿ ಹಾಗೂ ಗ್ರಾಮಸ್ಥರು ಅಗ್ನಿಶಾಮಕ ಠಾಣೆಗೆ ದೂರವಾಣಿ ಮುಖಾಂತರ ಕರೆ ಮಾಡಿದ್ದಾರೆ, ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ದೌಡಾಯಿಸಿದ ಅಗ್ನಿ ಶಾಮಕ ಇಲಾಖೆ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ನಂತರ ಮಾತನಾಡಿದ ಅಗ್ನಿ,ಶಾಮಕ ಅಧಿಕಾರಿ ಮಾತನಾಡಿ ಸುಮಾರು 2 ಸಾವಿರ ಮೌಲ್ಯದ ಹುಲ್ಲು ನಷ್ಟವಾಗಿದೆ, ನಾವು ಶೀಘ್ರ ಆಗಮಿಸಿದ ಕಾರಣ ಶೇಕಡ 80% ಹುಲ್ಲನ್ನು ಬೆಂಕಿಯಿಂದ ಉಳಿಸಲು ಕಾರಣ ವಾಯಿತು ಎಂದಿದ್ದಾರೆ.

ಅಗ್ನಿಶಾಮಕ ದಳ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ ಸ್ಥಳೀಯ ದಲಿತ ವಿಮೋಚನಾ ಸೇನೆಯ ಪ್ರದಾನ ಕಾರ್ಯದರ್ಶಿ ಶರಣಪ್ಪ ವಣಗೇರಿ ಮಾತನಾಡಿ ಅಗ್ನಿ ಅವಘಡಗಳು ನಡೆದಾಗ ತುರ್ತಾಗಿ ಸ್ಪಂದಿಸುತ್ತಿರುವ ಅಗ್ನಿಶಾಮಕ ಕಾರ್ಯ ವೈಖರಿ ನಿಜಾವಾಗಿಯೂ ಶ್ಲಾಘನೀಯ ಎಂದರು ಜೀವದ ಹಂಗು ತೊರೆದು ಸಾರ್ವಜನಿಕರ ಆಸ್ತಿ ಮತ್ತು ಸಾರ್ವಜನಿಕರಿಗೆ ತೊಂದರೆ ಆಗದಂತೆ ಕರ್ತವ್ಯ ನಿರ್ವಹಿಸುತ್ತಿರುವ ಅಗ್ನಿಶಾಮಕ ದಳ ಸಿಬ್ಬಂದಿಗೆ ಧನ್ಯವಾದಗಳು ಎಂದು ತಿಳಿಸಿದ್ದಾರೆ.

ಅಗ್ನಿಶಾಮಕ ಪ್ರಭಾರತನಾಧಿಕಾರಿ ರಾಘವೇಂದ್ರ, ಈಳಿಗೆರ. ಅಕ್ಬರ್ ಸಾಬ್ ಸೇರಿ ಸಿಬ್ಬಂದಿ ವರ್ಗ ಇದ್ದರು.

---

### • 2 ವಾರದ ನೀರು ಕುಡಿಯುವುದರಿಂದ ಬೇದಿ, ಹೊಟ್ಟೆ ನೋವು ಸೇರಿದಂತೆ ಇನ್ನಿತರ ರೋಗಗಳು ಕಾಣಿಸಿಕೊಳ್ಳುತ್ತಿವೆ

# ಕುಡಿಯಲು ಹಾಗೂ ಬಳಕೆಗೆ 16 ದಿನಕ್ಕೆ ಒಮ್ಮೆ ನೀರು: ಜನರ ಪರದಾಟ

• ಉದಯವಾಹಿನಿ ಮುದಗಲ್

ಪಟ್ಟಣದ ನಿವಾಸಿಗಳಿಗೆ ಕುಡಿಯಲು ಹಾಗೂ ಬಳಕೆಗೆ 16 ದಿನಕ್ಕೆ ಒಮ್ಮೆ ನೀರು ಸರಬರಾಜು ಮಾಡಲಾಗುತ್ತಿದ್ದು ಜನ ಪರದಾಡುತ್ತಿದ್ದಾರೆ.

ಪಟ್ಟಣದ 6 ಚದುರ ಕಿ.ಮೀ ವಿಸ್ತೀರ್ಣದಲ್ಲಿ 23 ವಾರ್ಡ್‌ಗಳಿವೆ. 35,731ಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ. ಪಟ್ಟಣಕ್ಕೆ ನಾರಾಯಣಪುರ ಜಲಾಶಯದ ಹಿನ್ನಿರಿನಿಂದ ನೀರು ಸರಬರಾಜು ಮಾಡಲಾಗುತ್ತಿದೆ. ಪಟ್ಟಣದಲ್ಲಿ 2 ನೀರಿನ ಟ್ಯಾಂಕ್‌ಗಳಿವೆ. 1 ದುರಸ್ತಿ ಹಂತದಲ್ಲಿವೆ. 16 ದಿನಕ್ಕೆ ಒಮ್ಮೆ ನೀರು ಪೂರೈಕೆಯಾಗುತ್ತಿದೆ. ಜನ ಸಂಖ್ಯೆಗೆ ಅನುಗುಣವಾಗಿ ನೀರು ದೊರೆಯುತ್ತಿಲ್ಲ.

ಪಟ್ಟಣದ ಸುತ್ತಲಿನ ಕೆ.ಮರಿಯಮ್ಮನ ಹಳ್ಳಿ, ಕನಸಾವಿ, ಆಶಿಹಾಳ, ಆಶಿಹಾಳ ತಾಂಡಾ, ಹಾಲವರ್ತಿತಾಂಡಾ, ಅಡವಿಭಾವಿ, ಆರ್ಯಭೋಗಾಪುರ, ವ್ಯಾಕರನಾಳ, ಹೆಗ್ಗಾಪುರ ತಾಂಡಾ, ಗ್ರಾಮಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದರಿಂದ ಗ್ರಾಮಗಳಲ್ಲಿರುವ ಖಾಸಗಿ ವ್ಯಕ್ತಿಗಳ


ಉದಯವಾಹಿನಿ ಚಿತ್ರ

**ನೀರು ಸಂಗ್ರಹಿಸಲು ಹರಸಾಹಸ**

ಜಮೀನಿನಲ್ಲಿರುವ ಕೊಳವೆಬಾವಿಗಳನ್ನು ಬಾಡಿಗೆ ತೆಗೆದುಕೊಂಡು ನೀರು ಪೂರೈಕೆ ಮಾಡಲಾಗುತ್ತಿದೆ. ಕನ್ನಾಪುರ ಹಟ್ಟಿ, ಆಶಿಹಾಳ ತಾಂಡಾ, ಪಿಕ್ಕಳಿಹಾಳ ಸೇರಿದಂತೆ ಇನ್ನಿತರ ಕಡೆಯ ಆರ್‌ಓ ಪ್ಲಾಂಟ್‌ಗಳು ಬಂದ್ ಆಗಿವೆ. ಕೆಲ ಗ್ರಾಮದಲ್ಲಿ ಖಾಸಗಿ ವ್ಯಕ್ತಿಗಳು ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ಮಿಸಿ, ವಾಹನಕ್ಕೆ ನೀರಿನ ಟ್ಯಾಂಕ್ ಅಳವಡಿಸಿ, ಮನೆಮನೆಗೆ ತೆರಳಿ ದುಬಾರಿ ಹಣಕ್ಕೆ ನೀರು ಪೂರೈಕೆ ಮಾಡುತ್ತಿದ್ದಾರೆ. ಇನ್ನೂ ಕೆಲ ಗ್ರಾಮದ ಜನರಿಗೆ ಅಶುದ್ಧ ನೀರೇ ಗತಿಯಾಗಿದೆ. ಪಟ್ಟಣಕ್ಕೆ ನಿರಂತರ ನೀರು ಸರಬರಾಜು ಯೋಜನೆ ರೂಪಿಸಿ, 31.29 ಕೋಟಿಗಳಲ್ಲಿ ಕಾಮಗಾರಿ ಆರಂಭಿಸಲಾಗುತ್ತು.

ಕಾಮಗಾರಿಯ ಗುತ್ತಿಗೆಯನ್ನು ಹೈದರಾಬಾದ್ ಮೂಲದ ಎ.ಎಸ್.ಆರ್. ಕಂಪನಿ ಪಡೆಯಿತು. ಕಳಪೆಯಾಗಿ ಮತ್ತು ಆಮೆಗತಿಯಲ್ಲಿ ಕಾಮಗಾರಿ ಮಾಡುತ್ತಿದ್ದರಿಂದ ರದ್ದುಪಡಿಸಲಾಗಿದೆ. ಮರು ಟೆಂಡರ್‌ಗಾಗಿ 44 ಕೋಟಿ ಅನುದಾನ ನೀಡಬೇಕು ಎಂದು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಕಾಮಗಾರಿ ಪೂರ್ಣಗೊಳಿಸುವ ಕಡೆ ಶಾಸಕ ಮಾನಪ್ಪ ವಜ್ಜಲ ಗಮನ ಹರಿಸುತ್ತಿಲ್ಲ. ಇದ್ದ ಅನುದಾನ ಸಮರ್ಪಕವಾಗಿ ಬಳಕೆ ಮಾಡಿಕೊಳ್ಳದೆ, ಮುದಗಲ್ ಪುರಸಭೆ ಅಮೃತ ಯೋಜನೆ ಒಳಪಡಿಸಿ ನೀರಿನ ಸೌಲಭ್ಯ ಕಲ್ಪಿಸುತ್ತೇನೆ ಎಂದು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಈ ಕಾಮಗಾರಿ ಪೂರ್ಣಗೊಳಿಸಲು ಶಾಸಕರಿಗೆ ಇಚ್ಛಾಶಕ್ತಿ ಕೊರತೆ ಇದೆ ಎಂದು ಸಾರ್ವಜನಿಕರ ದೂರು.

ಪಟ್ಟಣದ ಕುಡಿವ ನೀರಿಗಾಗಿ ಕಳೆದ ವಿಧಾನ ಸಭೆ ಚುನಾವಣೆಯಲ್ಲಿ ಸಂದರ್ಭದಲ್ಲಿ ಆಗನ ಶಾಸಕ ಡಿ.ಎಸ್.ಹೂಲಗೇರಿ ಹಾಗೂ ಈಗಿನ ಶಾಸಕ ಮಾನಪ್ಪ ವಜ್ಜಲ ಅವರು ಬಹಿರಂಗ ವೇದಿಕೆಯಲ್ಲೇ ಗಲಾಟೆ ಮಾಡಿಕೊಂಡಿದ್ದರು. ಕುಡಿಯುವ ನೀರು ನೀಡುವಲ್ಲಿ ಶಾಸಕ ಡಿ.ಎಸ್. ಹೂಲಗೇರಿ ವಿಫಲರಾಗಿದ್ದಾರೆ ಎಂದು ಆರೋಪ ಮಾಡಿದ್ದರು. ಇದರಿಂದ ಇಬ್ಬರ ಬೆಂಬಲಿಗರ ಮಧ್ಯೆ ಮಾತಿನ ಚಕಮಕಿ ನಡೆದಿತ್ತು. ಈಗ ಮಾನಪ್ಪ ವಜ್ಜಲ ಶಾಸಕರಾಗಿ ಎರಡು ವರ್ಷ ಕಳೆದರು, ನೀರಿನ ಸಮಸ್ಯೆಗೆ ಪರಿಹಾರ ಸಿಕ್ಕಿಲ್ಲ.

#### ನೀರಿನ ಟ್ಯಾಂಕ್ ಅರ್ಧಕ್ಕೆ

**ತರಕಾರಿ ಮಾರುಕಟ್ಟೆಯಲ್ಲಿ ನಿರ್ಮಾಣವಾಗುತ್ತಿರುವ ನೀರಿನ ಟ್ಯಾಂಕ್ ಅರ್ಧಕ್ಕೆ ನಿಂತಿದೆ. ನಿರಂತರ ಕುಡಿಯುವ ನೀರಿನ ಯೋಜನೆಗೆ ತಂದ ಪೈಪ್‌ಗಳು ಮಾನ್ವಿ-ರಾಮದುರ್ಗ ರಸ್ತೆ ಬದಿಯಲ್ಲಿ ಬಿದ್ದಿವೆ. ಪಟ್ಟಣದಲ್ಲಿ ಪೈಪ್ ಲೈನಿಂಗ್ ತಗೆದ ತೆಗ್ಗು ಕೆಲ ಕಡೆ ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತಿದೆ.**

> **16 ದಿನಕ್ಕೆ ಒಮ್ಮೆ ನೀರು ಬಿಡುವುದರಿಂದ ಬ್ಯಾರಲ್, ಕೊಡ, ಹಂಡೆ ಸೇರಿ ಇನ್ನಿತರ ವಸ್ತುಗಳಲ್ಲಿ ನೀರು ಸಂಗ್ರಹಿಸಿ ಇಟ್ಟಕೊಂಡು ಕುಡಿಯುತ್ತಿದ್ದಾರೆ. 2 ವಾರದ ನೀರು ಕುಡಿಯುವುದರಿಂದ ಬೇದಿ, ಹೊಟ್ಟೆ ನೋವು ಸೇರಿದಂತೆ ಇನ್ನಿತರ ರೋಗಗಳು ಕಾಣಿಸಿಕೊಳ್ಳುತ್ತಿವೆ -ಪೌಲರಾಜ್ ಎಮ್ಮಿ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಹಣಕಾಸಿನ ಲಾಭದ ಬಗ್ಗೆ ಯೋಚಿಸಬೇಡಿ, ಏಕೆಂದರೆ ದೀರ್ಘಾವಧಿಯಲ್ಲಿ ಇದು ನಿಮಗೇ ಲಾಭತರುತ್ತದೆ. ನೀವು ದಿನವನ್ನು ಅತ್ಯುತ್ತಮವಾಗಿಸಲು ನಿಮ್ಮ ಗುಪ್ತ ಗುಣಗಳನ್ನು ಬಳಸುತ್ತೀರಿ.

**ವೃಷಭ** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನಿಮ್ಮ ವಂಶಸ್ಥರಿಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ.

**ಮಿಥುನ** ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ.

**ಕರ್ಕಾಟಕ** ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು.

**ಸಿಂಹ** ನೀವು ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು. ಬುದ್ಧಿವಂತಿಕೆಯಿಂದ ಹೂಡಿಕೆ ಮಾಡಿ. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಇತರರ ಹಸ್ತಕ್ಷೇಪ ವ್ಯಾಜ್ಯವುಂಟುಮಾಡುತ್ತದೆ.

**ಕನ್ಯಾ** ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ವ್ಯಾಪರದಲ್ಲಿ ಪ್ರಯೋಜನ ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ.

**ತುಲಾ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ.

**ವೃಶ್ಚಿಕ** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು.

**ಧನಸ್ಸು** ಒತ್ತಡವನ್ನು ಉಪೇಕ್ಷಿಸಬಾರದು. ಇದು ವೇಗವಾಗಿ ತಂಬಾಕು ಮತ್ತು ಮದ್ಯದಷ್ಟೇ ಗಂಭೀರವಾದ ಒಂದು ಸಾಂಕ್ರಾಮಿಕ ರೋಗವಾಗುತ್ತಿದೆ ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.

**ಮಕರ** ಜೀವನದ ಏಳುಬೀಳುಗಳನ್ನು ಹಂಚಿಕೊಳ್ಳಲು ಅವರ ಸಹಕಾರದೊಂದಿಗೆ ಕೆಲಸ ಮಾಡಿ. ನಿಮ್ಮ ಬದಲಾದ ಧೋರಣೆ ಅವರಿಗೆ ಅನಿಯಮಿತ ಆನಂದ ನೀಡುತ್ತದೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ.

**ಕುಂಭ** ಮನರಂಜನೆ ಮತ್ತು ಮೋಜಿನ ಒಂದು ದಿನ. ವಿವಾಹಿತರು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮನೆಯ ಸೌಂದರ್ಯದ ಜೊತೆಗೆ ಮಕ್ಕಳ ಅಗತ್ಯಗಳನ್ನೂ ನೋಡಿಕೊಳ್ಳಿ.

**ಮೀನ** ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಜಂಟಿ ಯೋಜನೆಗಳು ಮತ್ತು ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ.

---

● ಗ್ರಾ.ಪಂ ಮಟ್ಟದಲ್ಲಿ ಖಾಸಗಿ ಶಾಲೆ ಮೀರಿಸುವ ಶಾಲೆ ಇದಾಗಿದ್ದು, ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಲಿದೆ

# ಕ. ಕರ್ನಾಟಕ ಪ್ರದೇಶದಲ್ಲಿ 50 ಕೆ.ಪಿ.ಎಸ್. ಶಾಲೆ ನಿರ್ಮಾಣ: ಡಾ.ಅಜಯ್ ಸಿಂಗ್

• **ಉದಯವಾಹಿನಿ ಕಲಬುರಗಿ**

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಸಕ್ತ 2025-26ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಪ್ರದೇಶದಲ್ಲಿ 100 ಕರ್ನಾಟಕ ಪಬ್ಲಿಕ್ ಶಾಲೆ ನಿರ್ಮಾಣದ ಹೊರತಾಗಿ ಮಂಡಳಿಯಿಂದ ಹೆಚ್ಚುವರಿಯಾಗಿ 50 ಶಾಲೆ ನಿರ್ಮಾಣಕ್ಕೆ 100 ಕೋಟಿ ರೂ. ಅನುದಾನ ಖರ್ಚು ಮಾಡಲಾಗುತ್ತದೆ ಎಂದು ಕೆ.ಕೆ.ಆರ್.ಡಿ.ಬಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಹೇಳಿದರು.

ಶನಿವಾರ ಇಲ್ಲಿನ ಕೆ.ಕೆ.ಆರ್.ಡಿ.ಬಿ ಮಂಡಳಿ ಸಭಾಂಗಣದಲ್ಲಿ ಸಭೆಯ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ತಲಾ 4 ಕೋಟಿ ರೂ. ವೆಚ್ಚದಲ್ಲಿ ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ 7 ಜಿಲ್ಲೆಗಳಲ್ಲಿ 100 ಕೆ.ಪಿ.ಎಸ್. ಶಾಲೆ ನಿರ್ಮಾಣ ಮಾಡುತ್ತಿದೆ. ಇದರ ಜೊತೆಗೆ ಹೆಚ್ಚುವರಿಯಾಗಿ ಮಂಡಳಿಯಿಂದ 50 ಶಾಲೆ ನಿರ್ಮಾಣಕ್ಕೆ ಮಂಡಳಿ ಮತ್ತು ಸರ್ಕಾರ ತಲಾ 100 ಕೋಟಿ ರೂ. ಖರ್ಚು ಮಾಡಲಿದೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ಖಾಸಗಿ ಶಾಲೆ ಮೀರಿಸುವ ಶಾಲೆ ಇದಾಗಿದ್ದು, ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಲಿದೆ ಎಂದರು. ಡಾ.ಡಿ.ಎಂ. ನಂಜುಂಡಪ್ಪ ವರದಿಯಂತೆ ಕಳೆದ ಎರಡು ವರ್ಷದಿಂದ ಆರೋಗ್ಯ ಮತ್ತು ಶಿಕ್ಷಣ ಆವಿಷ್ಕಾರದ ಯೋಜನೆ ಜಾರಿಗೆ ಶೇ.25ರಷ್ಟು ಅನುದಾನ ಮೀಸಲಿರಿಸಿದ್ದು, ಈ ವರ್ಷ ಸಹ ಸದರಿ ಯೋಜನೆಗಳು ಮುಂದುವರೆಸಲು ಸಭೆಯಲ್ಲಿ ನಿರ್ಧರಿಸಿದೆ ಎಂದರು.


ಉದಯವಾಹಿನಿ ಚಿತ್ರ

ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ

ಕಲಬುರಗಿಯಲ್ಲಿ ನಿಮ್ಹಾನ್ಸ್ ಶಾಖೆ, ಇನ್ಸ್ಟಿಟ್ಯೂಟ್ ಆಫ್ ಡಯಬಟಾಲೋಜಿ ಸೆಂಟರ್ ಸ್ಥಾಪನೆ, ರಾಯಚೂರು ಮತ್ತು ಬೀದರನಲ್ಲಿ ಕ್ಯಾನ್ಸರ್ ಆಸ್ಪತ್ರೆ ಹಾಗೂ ಕೊಪ್ಪಳದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಅನುದಾನ ನೀಡಲು ಮತ್ತು ಪ್ರದೇಶದಲ್ಲಿ ಎಂ.ಎಸ್.ಎಮ್.ಇ ಸಣ್ಣ ಕೈಗಾರಿಕೆ ಸ್ಥಾಪನೆಗೆ ನೆರವು ನೀಡಲು 100 ಕೋಟಿ ರೂ. ಅನುದಾನ ಮೀಸಲಿರಿಸಿ ಒದಗಿಸಲು ಸಭೆಯಲ್ಲಿ ನಿರ್ಧರಿಸಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶದ 7 ಜಿಲ್ಲೆಗಳಲ್ಲಿ ಅರಣ್ಯ ಕ್ಷೇತ್ರ ತುಂಬಾ ಕಡಿಮೆ ಇರುವುದರಿಂದ ಅರಣ್ಯ ಕ್ಷೇತ್ರ ವಿಸ್ತರಣೆಗೆ ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಶೇ.50-50 ಅನುದಾನದಡಿ ಪ್ರದೇಶದಲ್ಲಿ ಹೆಚ್ಚಿನ ಸಸಿ ನೆಡಲಾಗುವುದು. ಸಮಾಜ ಕಲ್ಯಾಣ, ಅಲ್ಪಸಂಖ್ಯಾತ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಸತಿ ನಿಲಯ ನಿರ್ಮಾಣ, ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ 125 ಕೋಟಿ ರೂ. ಸೇರಿದಂತೆ ಆಯವ್ಯಯ ಘೋಷಣೆ ಮತ್ತು ಸಚಿವ ಸಂಪುಟ ಸಭೆಯ ನಿರ್ಣಯದಂತೆ ಸುಮಾರು 1,500 ಕೋಟಿ ರೂ. ಅನುದಾನ ನೀಡಲು ನಿರ್ಧರಿಸಿದ್ದು, ಆಯಾ ಇಲಾಖೆಯಿಂದ ಇದೇ ಯೋಜನೆಗಳಿಗೆ ರಾಜ್ಯ ಸರ್ಕಾರದ ಪಾಲುದಾರಿಕೆಯಾಗಿ 1,500 ಕೋಟಿ ರೂ. ಗಳಿಗೂ ಹೆಚ್ಚಿನ ಹಣ ಆಯಾ ಇಲಾಖೆಯಿಂದ ಪ್ರದೇಶಕ್ಕೆ ಹರಿದು ಬರಲಿದೆ ಎಂದರು. ಸಭೆಯಲ್ಲಿ ಎಸ್.ಎಸ್.ಎಲ್.ಸಿ. ಫಲಿತಾಂಶ ಕುಸಿತ ಮತ್ತು ಶಿಕ್ಷಣ ಕ್ಷೇತ್ರ ಸುದಾರಣೆ ಕುರಿತು ಸುರ್ದಿಘವಾಗಿ ಚರ್ಚಿಸಲಾಗಿದೆ. ಆಯಾ ಜಿಲ್ಲೆಯಲ್ಲಿ ಶಿಕ್ಷಣ ಮೂಲಸೌಕರ್ಯಕ್ಕೆ ಬೇಕಾಗಿರುವ ಅಗತ್ಯ ಯೋಜನೆಗಳು ಕುರಿತು ಶಿಕ್ಷಣ ಇಲಾಖೆಯು ಜಿಲ್ಲಾಧಿಕಾರಿಗಳಿಗೆ ಪಟ್ಟಿ ನೀಡಿದಲ್ಲಿ, ಅದೆಲ್ಲವನ್ನು ಮಂಡಳಿಯಿಂದ ಅನುದಾನ ಒದಗಿಸಿ ಪೂರ್ಣಗೊಳಿಸಲಾಗುವುದು ಎಂದರು.

**ಕೃಷಿ ಆವಿಷ್ಕಾರಕ್ಕೆ ಒತ್ತು**

**ಕೃಷಿ, ಜಲ, ಆರೋಗ್ಯ, ಪೋಷಣೆ ಕ್ಷೇತ್ರಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಲು ಶಿಕ್ಷಣ ತಜ್ಞರ ಸಮಿತಿ ಮಾದರಿಯಲಿಯೇ ಕೃಷಿ ಮತ್ತು ಜಲಸಂಪನ್ಮೂಲ ತಜ್ಞರ ಸಮಿತಿ ಹಾಗೂ ಆರೋಗ್ಯ ಮತ್ತು ಪೋಷಣೆ ತಜ್ಞರ ಸಮಿತಿ ಸ್ಥಾಪನೆಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಮಂಡಳಿ ಸಭೆಯಲ್ಲಿ ಒಪ್ಪಿಗೆ ಪಡೆಯಲಾಗಿದೆ. ಇದಲ್ಲದೆ ಪ್ರದೇಶದಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸಲು ಮತ್ತು ಕೆರೆ, ಚೆಕ್ ಡ್ಯಾಂ, ಬಾಂದಾರು ನಿರ್ಮಾಣಕ್ಕೆ 100 ಕೋಟಿ ರೂ. ಅನುದಾನ ಮೀಸಲಿರಿಸಲು ಮತ್ತು ಗ್ರಾಮೀಣ ಭಾಗದಲ್ಲಿ ಗೋಡೌನ್ ನಿರ್ಮಾಣ ಮಾಡಲಾಗುತ್ತಿದೆ. 50 ಕೋಟಿ ರೂ. ವೆಚ್ಚದಲ್ಲಿ ಕಲಬುರಗಿಯಲ್ಲಿ ಮೆಗಾ ಡೈರಿ ಸ್ಥಾಪಿಸುವ ನಿರ್ಣಯ ಕೈಗೊಂಡಿದ್ದು, ಈ ಎಲ್ಲಾ ಯೋಜನೆಗಳು ಕೃಷಿ ಆವಿಷ್ಕಾರಕ್ಕೆ ಹೆಚ್ಚಿನ ಒತ್ತು ನೀಡಲಿವೆ ಎಂದರು.**

**ರಾಜ್ಯ ಸರ್ಕಾರ ಪ್ರಸಕ್ತ ಸಾಲಿಗೆ ಮಂಡಳಿಗೆ 5,000 ಕೋಟಿ ರೂ. ಅನುದಾನ ಘೋಷಿಸಿದ್ದು, ಅಷ್ಟು ಮೊತ್ತಕ್ಕೆ ಮೈಕ್ರೋ ಮತ್ತು ಮ್ಯಾಕ್ರೋ ಯೋಜನೆಯಡಿ ಕ್ರಿಯಾ ಯೋಜನೆ ರೂಪಿಸಲು ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಮಂಡಳಿ ಅನುದಾನ ಖರ್ಚು ಮಾಡುತ್ತಿಲ್ಲ ಎಂಬ ಅಪವಾದ ದೂರ ಮಾಡಲು ಕಳೆದ ಆರ್ಥಿಕ ವರ್ಷದಲ್ಲಿ ದಾಖಲೆ ಪ್ರಮಾಣದಲ್ಲಿ 3,145 ಕೋಟಿ ರೂ. ಖರ್ಚು ಮಾಡಿದ್ದು, ಈ ವರ್ಷ ಸಂಪೂರ್ಣ ಅನುದಾನ ಖರ್ಚು ಮಾಡುವ ಗುರಿ ಹೊಂದಲಾಗಿದೆ ಎಂದ ಡಾ.ಅಜಯ್ ಸಿಂಗ್ ಅವರು, ನಾನ್ ಟೆಂಡರಿಂಗ್ ಏಜೆನ್ಸಿಗಳಿಗೆ ಮಂಡಳಿಯ ಕಾಮಗಾರಿಗಳ ಪೈಕಿ ಶೇ.50ಕ್ಕಿಂತ ಹೆಚ್ಚಿನ ಕಾಮಗಾರಿಗಳು ನೀಡಬಾರದೆಂದು ನಿರ್ಧರಿಸಿದೆ -ಡಾ.ಅಜಯ್ ಸಿಂಗ್**

---

## 26.17 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಚಾಲನೆ

• **ಉದಯವಾಹಿನಿ ಹೊಸಪೇಟೆ**

ಕಮಲಾಪುರದ ವಾಲ್ಮೀಕಿ ವೃತ್ತದ ಬಳಿಯಿರುವ ನೀರು ಸರಬರಾಜು ಕೇಂದ್ರದ ಆವರಣದಲ್ಲಿ ಕೇಂದ್ರ ಸರ್ಕಾರದ ಅಮೃತ್ 2.0 ಯೋಜನೆಯಡಿ ಕಮಲಾಪುರ ಪಟ್ಟಣಕ್ಕೆ ಸುಧಾರಿತ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗೆ ಹೊಸಪೇಟೆ ಶಾಸಕ ಹೆಚ್.ಆರ್ ಗವಿಯಪ್ಪ ಭೂಮಿಪೂಜೆ ನೆರವೇರಿಸಿದರು.

ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕಾಗಿ ಅಮೃತ್ 2.0 ಯೋಜನೆಯಡಿ ಕುಡಿಯುವ ನೀರು ಸರಬರಾಜು ಘಟಕ ಆರಂಭವಾಗಲಿದೆ. ಇದರೊಳಗೆ ಪಟ್ಟಣದಲ್ಲಿ ಫೀಡರ್ ಮೇನ್ ಕೊಳವೆ ಮಾರ್ಗ, 10 ಲಕ್ಷ ಲೀಟರ್ ಸಾಮಾರ್ಥ್ಯದ ಮೇಲ್ಮಟ್ಟ ಜಲ ಸಂಗ್ರಹಗಾರ ನಿರ್ಮಾಣ, 6199 ಕಿಲೋ ಮೀಟರ್ ವಿತರಣಾ ಜಾಲಾ


ಉದಯವಾಹಿನಿ ಚಿತ್ರ

ಹಾಗೂ ಪಟ್ಟಣದಲ್ಲಿ ಸುಮಾರು 6000 ಮನೆಗಳಿಗೆ ನಳ ಸಂಪರ್ಕ ಕಲ್ಪಿಸಲಾಗುವುದು. ಹಾಲಿ 4.54 ಎಂಎಲ್‌ಡಿ ಸಾಮಾರ್ಥ್ಯದ ಜಲಶುದ್ಧಿಕರಣ ಘಟಕವನ್ನು ನವೀಕರಣಗೊಳಿಸಲಾಗುವುದು. ಒಟ್ಟಾರೆಯಾಗಿ 26.17 ಕೋಟಿ ರೂಗಳ ವೆಚ್ಚದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ವಿಶೇಷವಾಗಿ ಗುಣಮಟ್ಟದ ಕಾಮಗಾರಿಗೆ ನಿರ್ಮಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಈ ಸಂದರ್ಭದಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದರು.

---

## ಇಳಿಮುಖದತ್ತ ದೇವಾಲಯ ಆದಾಯ

• **ಉದಯವಾಹಿನಿ ಕಾರವಾರ**

**ಕಳೆದ ಅವಧಿಯಲ್ಲಿ 2.45 ಕೋಟಿ ಆದಾಯ ಗಳಿಸಿದ್ದ ಭಟ್ಕಳ ತಾಲ್ಲೂಕು ಅಳ್ವೆಕೋಡಿಯ ದುರ್ಗಾಪರಮೇಶ್ವರಿ ದೇವಾಲಯದ ಆದಾಯ ಈ ಬಾರಿ 3.40 ಕೋಟಿಗೆ ಏರಿಕೆಯಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಬಿ ಶ್ರೇಣಿಯ ಬಹುತೇಕ ದೇವಾಲಯಗಳ ಆದಾಯದಲ್ಲಿಯೂ ಇಳಿಕೆಯಾಗಿದೆ ಎಂದು ಮುಜರಾಯಿ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

ರಾಜ್ಯ ಸರ್ಕಾರ ಮಹಿಳೆಯರಿಗೆ ಉಚಿತವಾಗಿ ಬಸ್ ಪ್ರಯಾಣದ ಶಕ್ತಿ ಯೋಜನೆ ಜಾರಿಗೆ ತಂದಿದ್ದರ ಪರಿಣಾಮ ಜಿಲ್ಲೆಯ ಹಲವು ದೇವಾಲಯಗಳು ಕಳೆದ ವರ್ಷ ಭರಪೂರ ಆದಾಯ ಗಳಿಸಿದ್ದವು. ಆದರೆ, ಈ ಬಾರಿ ಬಹುತೇಕ ದೇವಾಲಯಗಳು ಹೆಚ್ಚಿನ ಆದಾಯ ಗಳಿಕೆಯಲ್ಲಿ ಹಿಂದೆ ಬಿದ್ದಿವೆ.

ಆರ್ಥಿಕ ವರ್ಷ ಮುಗಿದ ಬೆನ್ನಲ್ಲೆ ಮುಜರಾಯಿ ಇಲಾಖೆ ತನ್ನ ವ್ಯಾಪ್ತಿಗೆ ಒಳಪಡುವ ದೇವಾಲಯಗಳ ವಾರ್ಷಿಕ ಆದಾಯದ ಮಾಹಿತಿ ಸಂಗ್ರಹಿಸಿದೆ. 9 ಎ ಶ್ರೇಣಿಯ, 8 ಬಿ ಶ್ರೇಣಿಯ ದೇವಾಲಯಗಳಿಂದ ಮಾಹಿತಿ ಕೇಳಲಾಗಿತ್ತಾದರೂ 3 ಎ ಶ್ರೇಣಿ ಮತ್ತು 2 ಬಿ ಶ್ರೇಣಿಯ ದೇವಾಲಯಗಳು ಮಾಹಿತಿ ನೀಡಿಲ್ಲ. ಉಳಿದ ದೇವಾಲಯಗಳು ಮಾಹಿತಿ ನೀಡಿವೆ.

ಕೆಲ ದೇವಾಲಯಗಳು ಕಳೆದ ವರ್ಷಕ್ಕಿಂತ ಹೆಚ್ಚು, ಇನ್ನು ಕೆಲವು ಕಡಿಮೆ ಆದಾಯಗಳಿಸಿವೆ ಎಂದು ಮುಜರಾಯಿ ಇಲಾಖೆ ತಿಳಿಸಿದೆ.

2023-24ನೇ ಆರ್ಥಿಕ ವರ್ಷದಲ್ಲಿ 2.14 ಕೋಟಿ ಆದಾಯ ಗಳಿಸಿದ್ದ ಶಿರಸಿ ತಾಲ್ಲೂಕಿನ ಮಂಜುಗುಣಿಯ ವೆಂಕರಮಣ ದೇವಾಲಯದ ಆದಾಯ 2024-25ರಲ್ಲಿ 1.66 ಕೋಟಿಗೆ ಇಳಿಕೆಯಾಗಿದೆ. 1.13 ಕೋಟಿ ಗಳಿಸಿದ್ದ ಶಿರಸಿಯ ಮಹಾಗಣಪತಿ ದೇವಸ್ಥಾನದ ಆದಾಯ 1.05 ಕೋಟಿಗೆ ಇಳಿದಿದೆ.

2023ರ ಜೂನ್‌ನಲ್ಲಿ ಶಕ್ತಿ ಯೋಜನೆ ಆರಂಭಗೊಂಡಿದ್ದರಿಂದ ಉಚಿತ ಪ್ರಯಾಣದ ಅವಕಾಶ ಸಿಕ್ಕ ಖುಷಿಯಲ್ಲಿ ಮಹಿಳೆಯರು ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಪ್ರಮಾಣ ಹೆಚ್ಚಿತ್ತು. ವರ್ಷ ಕಳೆದಂತೆ ಅವರಲ್ಲಿ ಉಚಿತ ಪ್ರಯಾಣದ ಆಸಕ್ತಿ ಕಡಿಮೆಯಾಗಿದೆ.

---

## ತ್ಯಾಜ್ಯ ವಿಲೇವಾರಿ ತಾಣಗಳಾದ ನಿವೇಶನಗಳು

• **ಉದಯವಾಹಿನಿ, ರಬಕವಿ ಬನಹಟ್ಟಿ**

ಇಲ್ಲಿನ ಲಕ್ಷ್ಮಿನಗರದಲ್ಲಿರುವ ಖಾಲಿ ನಿವೇಶನಗಳು ತ್ಯಾಜ್ಯ ವಿಲೇವಾರಿ ತಾಣಗಳಾಗಿದ್ದು, ಇದರಿಂದ ಸುತ್ತ ಮುತ್ತಲಿನ ಪರಿಸರ ಗಬ್ಬೆದ್ದು ನಾರುತ್ತಿದೆ. ಸಾರ್ವಜನಿಕರು ತಿರುಗಾಡಲು ಆಗದಂತಹ ಸ್ಥಿತಿ ನಿರ್ಮಾಣಗೊಂಡಿದೆ. ಇದು ಸಾಂಕ್ರಾಮಿಕ ರೋಗಗಳು ಹರಡುವ ತಾಣವಾಗುತ್ತಿದೆ ಎಂದು ಇಲ್ಲಿಯ ನಿವಾಸಿಗಳು ಆರೋಪಿಸಿದ್ದಾರೆ.

ಖಾಲಿ ನಿವೇಶನಗಳಲ್ಲಿ ಹೆಚ್ಚಾಗಿ ಪ್ಲಾಸ್ಟಿಕ್ ವಸ್ತುಗಳು, ಮನೆಯಲ್ಲಿ ಬೇಡವಾದ ಹಳೆಯ ಬಟ್ಟೆಗಳು, ಕಟ್ಟಡದ ನಿರುಪಯುಕ್ತ

**ತ್ಯಾಜ್ಯ ಸಂಗ್ರಹವಾಗಿರುವ ನಿವೇಶನಗಳ ಮಾಲೀಕರಿಗೆ ನೋಟಿಸ್ ನೀಡಲಾಗುವುದು. ಲಕ್ಷ್ಮಿನಗರದ ನಿವಾಸಿಗಳು ಮನೆಯ ತ್ಯಾಜ್ಯವನ್ನು ನಗರಸಭೆಯ ಕಸ ವಿಲೇವಾರಿ ವಾಹನಗಳಿಗೆ ನೀಡಬೇಕು -ಜಗದೀಶ ಈಟಿ ಪೌರಾಯುಕ್ತ ನಗರಸಭೆ ರಬಕವಿ ಬನಹಟ್ಟಿ**


ಉದಯವಾಹಿನಿ ಚಿತ್ರ

ವಸ್ತುಗಳು ಇಲ್ಲಿ ಸಂಗ್ರಹಗೊಂಡಿವೆ. ಜಾನುವಾರು, ನಾಯಿ ಮತ್ತು ಹಂದಿಗಳು ಕಸವನ್ನು ಮತ್ತಷ್ಟು ಹರಡುತ್ತಿವೆ. ನಂತರ ಅವೇ ಮತ್ತೆ ಚರಂಡಿಯನ್ನು ಸೇರುತ್ತಿವೆ. ಇದರಿಂದಾಗಿ ಚರಂಡಿಗಳಲ್ಲಿ ಕೂಡ ತ್ಯಾಜ್ಯ ತುಂಬಿಕೊಂಡಿವೆ. ಆದ್ದರಿಂದ ಸಂಬಂಧಪಟ್ಟ ನಿವೇಶನಗಳ ಮಾಲೀಕರು ತಮ್ಮ ನಿವೇಶನಗಳಿಗೆ ಬೌಂಡರಿಗಳನ್ನು ನಿರ್ಮಾಣ ಮಾಡಿ ಸ್ವಚ್ಛವಾಗಿಟ್ಟುಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಲಕ್ಷ್ಮಿನಗರದ ಸೌಂದರ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಇಲ್ಲಿನ ನಿವಾಸಿಗಳು ಸಹಕರಿಸಬೇಕು ಎಂದು ಶಶಿಕಾಂತ ಹುನ್ನೂರ, ವಿಶ್ವನಾಥ ಜಾಡಗೌಡ, ಬಿ. ನಾಗರಾಜ, ಬಿ.ಆರ್. ಗೊಡ್ಡಾಳೆ, ರಾಜು ಕಾಡದೇವರ ಸೇರಿದಂತೆ ಅನೇಕರು ಆಗ್ರಹಿಸಿದ್ದಾರೆ.

---

## ಅಂಗನವಾಡಿ ಕೇಂದ್ರದ ಬೀಗ ಮುರಿದು ಗ್ಯಾಸ್ ಸಿಲಿಂಡರ್, ಒಲೆ ಕಳವು

• **ಉದಯವಾಹಿನಿ ಕಲಬುರಗಿ**

ಅಂಗನವಾಡಿ ಕೇಂದ್ರದ ಬೀಗ ಮುರಿದು ಗ್ಯಾಸ್ ಸಿಲಿಂಡರ್ ಮತ್ತು ಗ್ಯಾಸ್ ಒಲೆ ಕಳವು ಮಾಡಿರುವ ಘಟನೆ ನಗರದ ಮಿಸ್ಬಾ ನಗರದ ಖದೀರ್ ಚೌಕ್‌ನಲ್ಲಿ ನಡೆದಿದೆ. ಅಂಗನವಾಡಿ ಕೇಂದ್ರದ ಬೀಗ ಮುರಿದು ಕಳ್ಳರು 5 ಸಾವಿರ ರೂ.ಮೊತ್ತದ ಗ್ಯಾಸ್ ಸಿಲಿಂಡರ್ ಮತ್ತು 2,500 ರೂ.ಮೊತ್ತದ ಗ್ಯಾಸ್ ಒಲೆ ಕಳವು ಮಾಡಿದ್ದಾರೆ ಎಂದು ಅಂಗನವಾಡಿ ಟೀಚರ್ ಆಸ್ಮಾ ಬೇಗಂ ಅವರು ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

## ಸ್ವಯಂ ಸೇವಕರು ದೇಶಕ್ಕೆ ಕೊಡುಗೆ ನೀಡಲಿ

• **ಉದಯವಾಹಿನಿ, ಬೀದರ್**

ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂ ಸೇವಕರು ಸಮಾಜ, ದೇಶಕ್ಕೆ ಕೊಡುಗೆ ನೀಡಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಸಹ ಪ್ರಾಧ್ಯಾಪಕ ಅಶೋಕ ರೆಡ್ಡಿ ಹೇಳಿದರು.

ನಗರದ ಓಡವಾಡದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಹಮ್ಮಿಕೊಳ್ಳಲಾದ ಏಳು ದಿನಗಳ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಿದೆ ಎಂದು ತಿಳಿಸಿದರು.


ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯ ಪ್ರಜ್ಞೆ, ಸಂಯಮ ಮೈಗೂಡಿಸಿಕೊಳ್ಳಬೇಕು. ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲೂ ಪಾಲ್ಗೊಳ್ಳಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರೊ. ಮನೋಜಕುಮಾರ ಕಿವಿಮಾತು ಹೇಳಿದರು.

## ಹೇಮರೆಡ್ಡಿ ಮಲ್ಲಮ್ಮನ ಆದರ್ಶ ಪಾಲಿಸಿ

• **ಉದಯವಾಹಿನಿ ಹುಮನಾಬಾದ್**

ದೈವಭಕ್ತಿ, ಕಾಯಕನಿಷ್ಠೆ, ಗುರುಲಿಂಗ ಜಂಗಮರಲ್ಲಿ ಅನನ್ಯ ಭಕ್ತಿ ಹೊಂದಿ, ಸುಖ-ದು:ಖ, ಅಂಬಲಿ-ಅಮೃತ, ಸ್ತುತಿ-ನಿಂದೆಯನ್ನು ಸಮಾನವಾಗಿ ಸ್ವೀಕರಿಸಿದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಆದರ್ಶ ಎಲ್ಲರೂ ಪಾಲಿಸಬೇಕು ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.

ಪಟ್ಟಣದ ತಹಶೀಲ್ ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ವತಿಯಿಂದ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದರು. ಶ್ರೀಶೈಲ ಮಲ್ಲಿಕಾರ್ಜುನನ ಮೇಲೆ ಅಪಾರ ಭಕ್ತಿ ಹೊಂದಿ, ಭಾವನಾತ್ಮಕ ಜೀವಿಯಾಗಿ, ಮಾನಸಿಕ ಶಿವಲಿಂಗ ದೀಕ್ಷೆ ತೊಟ್ಟು ಸಮಾಜ, ನಾಡು, ನುಡಿ ಹಾಗೂ ಮನುಕುಲದ ಉದ್ಧಾರಕ್ಕೆ ಅಪಾರ ಕೊಡುಗೆ ನೀಡಿದ, ಸ್ತ್ರೀ ಕುಲದ ಗೌರವ ಹೆಚ್ಚಿಸಿದ, ಮಲ್ಲಮ್ಮನವರ ವಿಚಾರ ಧಾರೆಗಳನ್ನು ಇಂದಿನ ಯುವ ಸಮುದಾಯದವರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ನಾಗರಿಕರಾಗಬೇಕು ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

---

## 40 ದಿನ ರಜೆ ಪಡೆದು ನಿಶ್ಚಿತಾರ್ಥ ಮಾಡಿಕೊಳ್ಳಲು ಬಂದ ವೀರ ಯೋಧನಿಗೆ ಸೇನೆಯ ಮುಖ್ಯಸ್ಥರಿಂದ ಬುಲಾವ್, ಯೋಧ ಆನಂದ ಸೇನೆಗೆ ವಾಪಸ್

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಿನ ಚಿಮ್ಮಾಯಿದ್ಲಾಯಿ ಗ್ರಾಮದ ಆನಂದ ನಾಗಪ್ಪ ಮಾಳಕೇರ್ ಎಂಬ ಸೈನಿಕ ಜಮ್ಮು ಕಾಶ್ಮೀರದ ಶ್ರೀನಗರದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದು 40 ದಿನ ರಜೆ ಪಡೆದು ನಿಶ್ಚಿತಾರ್ಥ ಮಾಡಿಕೊಳ್ಳಲು ಕಳೆದ ಎಪ್ರಿಲ್ 28ಕ್ಕೆ ಗ್ರಾಮಕ್ಕೆ ಆಗಮಿಸಿದ್ದು ಮತ್ತೆ ಪಾಕಿಸ್ತಾನ ಮತ್ತು ಇಂಡಿಯಾ ನಡುವೆ ಕದನ ನಡೆಯುತ್ತಿರುವ ಕಾರಣ ಸೇನೆಯ ಮುಖ್ಯಸ್ಥ ಕರ್ನಲ್ ಜಸ್ವಂತ್ ಸಿಂಗ್ ಕರೆ ಮಾಡಿ ಕರೆದರೆ ಮತ್ತೊಬ್ಬ ಮುಖ್ಯಸ್ಥ ಕರ್ನಲ್ ರಾಜನಾಥಸಿಂಗ್ ಮೆಸೇಜ್ ಮೂಲಕ ಶೀಘ್ರದಲ್ಲೇ ಶ್ರೀನಗರಕ್ಕೆ ಆಗಮಿಸಿ ಸೇನೆಗೆ ಸೇರಿಕೊಳ್ಳುವಂತೆ ಆದೇಶ ನೀಡಲಾಗಿದ್ದು ಆದೇಶ ಅನುಸಾರ ಕುಟುಂಬಸ್ಥರು ಸ್ನೇಹಿತರು ಸನ್ಮಾನಿಸಿ ಗೌರವಿಸಿ ಶುಭಹಾರೈಸಿ ಕಳುಹಿಸಿದ್ದರು. ಪತ್ರಕರ್ತರೊಂದಿಗೆ ಮಾತನಾಡಿದ ವೀರ ಯೋಧ


ಉದಯವಾಹಿನಿ ಚಿತ್ರ

ಸನ್ಮಾನಿಸಿ ಗೌರವಿಸಿ ಶುಭಹಾರೈಕೆ

ಆನಂದ ನಾಗಪ್ಪ ಮೊಹಕೇರ್ ಅವರು, ಕಳೆದ ಐದು ವರ್ಷದಿಂದ ಇಂಡಿಯನ್ ಆರ್ಮಿಯಲ್ಲಿ ಸೇವೆ ಸಲ್ಲಿಸುತ್ತಿದ್ದೇನೆ ಅದರಂತೆ 40 ದಿನ ರಜೆ ಪಡೆದು ನನ್ನ ನಿಶ್ಚಿತಾರ್ಥ ಮಾಡಿಕೊಂಡು ನನ್ನ ಸ್ನೇಹಿತರ ಲಗ್ನಗಳು ಮುಗಿಸಿಕೊಂಡು ಹೋಗೋಣವೆಂದು ರಜೆ ಪಡೆದು ಎಪ್ರಿಲ್ 28ಕ್ಕೆ ಬಂದಿದ್ದೇನೆ ಆದರೆ ಮೇ 10ಕ್ಕೆ ರಾತ್ರಿ ವೇಳೆ ಸೇನೆ ಮುಖ್ಯಸ್ಥ ಕರ್ನಲ್ ರಾಜನಾಥ್ ಸಿಂಗ್ ಮೆಸೇಜ್ ಮೂಲಕ ಶೀಘ್ರದಲ್ಲೇ ಶ್ರೀನಗರಕ್ಕೆ ಆಗಮಿಸಿ ಸೇನೆಗೆ ಸೇರಿಕೊಳ್ಳಲು ಆದೇಶ ಮಾಡಿದರೆ ಮತ್ತೊಬ್ಬ ಮುಖ್ಯಸ್ಥರು ಜಸ್ವಂತ್ ಸಿಂಗ್ ಕರೆ ಮಾಡಿ ಶೀಘ್ರದಲ್ಲೇ ಬೆಳಿಗ್ಗೆ ಅಲ್ಲಿಂದ ಹೊರಟು ಶ್ರೀನಗರಕ್ಕೆ ಬನ್ನಿ ಎಂದು ಆದೇಶ ಮಾಡಿರುವುದರಿಂದ ನಿಶ್ಚಿತಾರ್ಥ ಮಾಡಿಕೊಳ್ಳದೆ ಚಿಮ್ಮಾಯಿದ್ಲಾಯಿ ಗ್ರಾಮದಿಂದ ಕಲಬುರ್ಗಿ ಜಿಲ್ಲೆಗೆ ಹೋಗಿ ಅಲ್ಲಿಂದ ಬೆಂಗಳೂರು ಹೋಗಿ ಬೆಂಗಳೂರುದಿಂದ ಶ್ರೀನಗರಕ್ಕೆ ಹೋಗಿ ಸೇನೆಯಲ್ಲಿ ಪಾಲ್ಗೊಳ್ಳಲು ಹೋಗುತ್ತಿದ್ದೇನೆ ಎಂದರು.

ಈ ಸಂದರ್ಭದಲ್ಲಿ ವಕೀಲ ಇರ್ಫಾನ್ ಪಟೇಲ ಐನೋಳ್ಳಿ,ಗೌತಮ್ ಬೋಮ್ನಳ್ಳಿ,ಕೆ.ಎಂ.ಬಾರಿ,ಅಮರ ಲೋಡನೂರ,ಅನೀಲ ಕಟ್ಟಿ,ಚೇತನ,ಮಖ್ದೂಮ ಖಾನ, ನಾರಾಯಣ ನಾಟೀಕಾರ, ಬಸವರಾಜ,ಪ್ರಥ್ವಿ ಚಿಮ್ಮಾಯಿದ್ಲಾಯಿ ಸೇರಿದಂತೆ ಅನೇಕರಿದ್ದರು.

---

## ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

• **ಉದಯವಾಹಿನಿ, ವಿಜಯಪುರ**

ತಮ್ಮ ಬದುಕಿನ ಮಾರ್ಗದ ಮೂಲಕ ಸಮಾಜಕ್ಕೆ ಒಳ್ಳೆಯ ಸಂದೇಶ ಸಾರಿದವರು ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಎಂದು ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶಿವಶರಣೆ ಮಲ್ಲಮ್ಮನವರು ಕಷ್ಟಗಳಿಗೆ ಎದೆಗುಂದದೇ ತಾಳ್ಮೆಯ ಬದುಕಿನ ಮಾರ್ಗದಲ್ಲಿ ನಡೆದಿದ್ದಾರೆ. ಅವರ ಬದುಕಿನ ತತ್ವಾದರ್ಶಗಳು ಇಂದಿನ ಸಮಾಜಕ್ಕೆ ಪ್ರೇರಣಾದಯಾಕವಾಗಿದೆ ಎಂದು ಅವರು ತಿಳಿಸಿದರು. ಮೈದುನ ವೇಮನನಿಗೆ ಸನ್ಮಾರ್ಗ ತೋರಿಸಿ


ಉದಯವಾಹಿನಿ ಚಿತ್ರ

ಆದರ್ಶ ವ್ಯಕ್ತಿಯನ್ನಾಗಿಸಿದವರು ಶಿವಶರಣೆ ಮಲ್ಲಮ್ಮ. ಅವಿಭಕ್ತ ಕುಟುಂಬದ ಪರಿಕಲ್ಪನೆಯಲ್ಲಿ ಸಾಗಿ ಸಮಾಜಕ್ಕೆ ಕುಟುಂಬದ ಮೌಲ್ಯಗಳನ್ನು ಸಾರಿದರು. ಅವರ ತತ್ವಾದರ್ಶಗಳನ್ನು ಇಂದಿನ ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಅವರು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಭಾರತಿ ಕುಂದನಗಾರ (ಸೋನಾರ) ಹಾಗೂ ಅವರ ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಿತು.

---

## ಮನುಕುಲದ ಶ್ರೇಯಕ್ಕೆ ದಾರಿ ತೋರಿದ ಮಲ್ಲಮ್ಮ

• **ಉದಯವಾಹಿನಿ ಗದಗ**

ವೇಮನರನ್ನು ತಿದ್ದುವ ಮೂಲಕ ಸಮಾಜಕ್ಕೆ ದಾರ್ಶನಿಕ, ಮಹಾ ತತ್ವಜ್ಞಾನಿಯನ್ನು ನೀಡಿದಂತಹ ಮಹಾನುಭಾವೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ತತ್ವ, ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ನಡೆದ ಮಹಾಸಾಧ್ವಿ ಸಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

'ಹೇಮರಡ್ಡಿ ಮಲ್ಲಮ್ಮ ಅವರನ್ನು ಜನರಿಗೆ ಸಾಕಷ್ಟು ನಾಟಕಗಳು,


ಉದಯವಾಹಿನಿ ಚಿತ್ರ

ಕೀರ್ತನೆ ಹಾಗೂ ಪುರಾಣಗಳ ಮೂಲಕ ಪರಿಚಯಿಸಲಾಗುತ್ತಿದೆ. ಭಕ್ತಿಯ ಪರಕಾಷ್ಠೆ, ಶ್ರೇಷ್ಠತೆಯನ್ನು ಸಮಾಜಕ್ಕೆ ತೋರಿಸಿದವರು ಮಲ್ಲಮ್ಮ' ಎಂದರು. ಮಹನೀಯರ ಜಯಂತಿಗಳು ಕೇವಲ ಒಂದು ಸಮುದಾಯಕ್ಕೆ ಮಾತ್ರ ಸೀಮಿತವಾಗಬಾರದು. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವಂತಹ ಕೆಲಸ ಆಗಬೇಕು. ಜಾತಿ, ಮತ ಎಂದು ಭೇದಭಾವ ಮಾಡದೆ ಇಡೀ ಮನುಕುಲದ ಶ್ರೇಯಕ್ಕೆ ದಾರಿ ತೋರಿದಂತಹ ಹೇಮರಡ್ಡಿ ಮಲ್ಲಮ್ಮ ಅವರಿಗೆ ನಾವೆಲ್ಲರೂ ಸದಾ ಚಿರಋಣಿ ಆಗಿರಬೇಕು' ಎಂದರು.

ರೋಣ ಶಾಸಕ ಜಿ.ಎಸ್.ಪಾಟೀಲ ಮಾತನಾಡಿ, 'ಕುಟುಂಬಗಳು ಒಗ್ಗಟ್ಟಿನಿಂದ ಹೇಗೆ ಸಾಗಬೇಕು ಎಂಬ ಪರಿಪಾಠವನ್ನು ಕಲಿಸಿ ದಂತಹ ಮಹಾಮಾತೆ ಹೇಮರಡ್ಡಿ ಮಲ್ಲಮ್ಮಅವರು ಸಂಸಾರದಲ್ಲಿ ಬರುವಂತಹ ಕಷ್ಟಗಳನ್ನು ಎದುರಿಸಲು ಮಾರ್ಗದರ್ಶನ ಮಾಡಿದ್ದಾರೆ.

ಅವರ ಮಾರ್ಗದರ್ಶನಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು' ಎಂದರು. ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಮಾತನಾಡಿ, ಸಮಾಜದಲ್ಲಿ ಮಾನವೀಯ ಮೌಲ್ಯಗಳು ಕುಸಿಯುತ್ತಿವೆ. ಮಹನೀಯರ ಆದರ್ಶಗಳನ್ನು ಮೆಲಕು ಹಾಕುವುದರ ಮೂಲಕ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜ ಸುಧಾರಣೆಗಾಗಿ ಮಹನೀಯರ ಜಯಂತಿಗಳನ್ನು ಆಚರಿಸಲಾಗುತ್ತಿದೆ' ಎಂದರು.

---

● ರಾಜ್ಯದ ನಾಲ್ಕು ಜಿಲ್ಲೆಗಳು ಮೊದಲನೇ ಹಂತದಲ್ಲಿ ಆಯ್ಕೆಯಾಗಿದ್ದು, ಅದರಲ್ಲಿ ಜಿಲ್ಲೆಯು ಕೂಡ ಒಂದಾಗಿದೆ

# ಗಣಿಬಾಧಿತ ವಲಯ ಪ್ರದೇಶಗಳ ಮಣ್ಣು, ನೀರಿನ ಸಂರಕ್ಷಣೆ ಅಗತ್ಯ

• **ಉದಯವಾಹಿನಿ ಬಳ್ಳಾರಿ**


ಗಣಿಬಾಧಿತ ವಲಯ ಪ್ರದೇಶದ ರೈತರಿಗೆ ತಮ್ಮ ತಮ್ಮ ಜಮೀನುಗಳಲ್ಲಿ ಯಾವ ರೀತಿಯಾಗಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡಬೇಕು, ಸಂರಕ್ಷಣೆಯನ್ನು ಮಾಡಲು ಯಾವ ರೀತಿಯಾಗಿ ಉಪಚಾರ ಕೈಗೊಳ್ಳಬೇಕು ಎಂಬುದರ ಬಗ್ಗೆ ತಿಳಿಸಿ ಕೊಡುವುದು ಗಣಿಗಾರಿಕೆ ಪ್ರಭಾವಿತ ವಲಯಗಳ ಸಮಗ್ರ ಪರಿಸರ ಯೋಜನೆಯ ಉದ್ದೇಶವಾಗಿದೆ ಎಂದು ಉಪ ಕೃಷಿ ನಿರ್ದೇಶಕ ಮಂಜುನಾಥ್ ಅವರು ಹೇಳಿದರು.

ಜಲಾನಯನ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ ಬಳ್ಳಾರಿ ಹಾಗೂ ಗ್ರಾಮ್ಸ್ ಲಿಂಗಸೂಗೂರು ಅನುಷ್ಠಾನ ಸಂಸ್ಥೆಯ ವತಿಯಿಂದ ಗಣಿಗಾರಿಕೆ ಪ್ರಭಾವಕ್ಕೆ ಒಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆ ಅಡಿ ಬಳ್ಳಾರಿ ತಾಲ್ಲೂಕಿನ ಹಲಕುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಹೊನ್ನಾಳಿ ತಾಂಡದಲ್ಲಿ ಏರ್ಪಡಿಸಿದ್ದ ಸಮುದಾಯ ಸಹಭಾಗಿತ್ವ ಕಾರ್ಯಕ್ರಮ (ಪಿಆರ್‌ಎ) ದಲ್ಲಿ ಭಾಗವಹಿಸಿ

**ಗಣಿಬಾಧಿತ ಪ್ರದೇಶದಲ್ಲಿ ನಾಶವಾಗಿರುವ ಮೇಲ್ಮಣ್ಣನ್ನು ಪುನರ್ ಸ್ಥಾಪಿಸಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮೂಲಕ ಮಣ್ಣಿನ ಫಲವತ್ತತೆಯನ್ನು ಪುನರುಜ್ಜೀವನಗೊಳಿಸಿ ವ್ಯವಸಾಯಕ್ಕೆ ಯೋಗ್ಯವನ್ನಾಗಿಸುವ ಮೂಲಕ ರೈತರಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸುಸ್ಥಿರತೆಯನ್ನು ಪಡೆಯಲು ಈ ಯೋಜನೆ ಅನುಷ್ಠಾನವಾಗುತ್ತಿದೆ -ದಯಾನಂದ್, ಸಹಾಯಕ ಕೃಷಿ ನಿರ್ದೇಶಕ**

ಅವರು ಮಾತನಾಡಿದರು.

ಈ ಯೋಜನೆಯು ಗಣಿಗಾರಿಕೆ ಪರಿಣಾಮ ವಲಯಕ್ಕೆ ರಾಜ್ಯದ ನಾಲ್ಕು ಜಿಲ್ಲೆಗಳು ಮೊದಲನೇ ಹಂತದಲ್ಲಿ ಆಯ್ಕೆಯಾಗಿದ್ದು, ಅದರಲ್ಲಿ ಬಳ್ಳಾರಿ ಜಿಲ್ಲೆಯು ಕೂಡ ಒಂದಾಗಿದೆ. ಈ ಯೋಜನೆಯು ಐದು ವರ್ಷದ ಅವಧಿಗೆ ಅನುಷ್ಠಾನ ಮಾಡಲಾಗುವುದು ಎಂದು


ಉದಯವಾಹಿನಿ ಚಿತ್ರ

ತಿಳಿಸಿದರು. ಈ ಯೋಜನೆಯಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ತಮ್ಮ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿ ಅಗತ್ಯವಿರುವ ಮಾಹಿತಿಯ ದಾಖಲೆಗಳನ್ನು ಪಡೆದುಕೊಳ್ಳಲು ಸಮೀಕ್ಷೆ ಮಾಡಲಾಗುತ್ತದೆ. ಹಾಗಾಗಿ ಗ್ರಾಮದ ಎಲ್ಲಾ ರೈತರು ಸರಿಯಾಗಿ ಮಾಹಿತಿ ಕೊಡಬೇಕು ಎಂದು ಹೇಳಿದರು.

ಗ್ರಾಮ್ಸ್ ಸಂಸ್ಥೆಯ ಸಿಇಓ ಮಹೇಶ್ ಕುಮಾರ್ ಅವರು ಮಾತನಾಡಿ, ಯೋಜನಾ ವ್ಯಾಪ್ತಿಯ ಗ್ರಾಮಗಳ ರೈತರಿಗೆ ತಮ್ಮ ತಮ್ಮ ಜಮೀನುಗಳಲ್ಲಿ ಯಾವ ರೀತಿಯಾಗಿ ಮಣ್ಣು ಮತ್ತು ನೀರಿನ ಸಂರಕ್ಷಣೆಯನ್ನು ಮಾಡಿಕೊಳ್ಳಬೇಕು, ಸಂರಕ್ಷಣೆಯನ್ನು ಮಾಡಲು ಯಾವ ರೀತಿಯಾಗಿ ಉಪಚಾರಗಳನ್ನು ಮಾಡಬೇಕು ಎಂದು ತಿಳಿಸಿಕೊಡಲಾಗುವುದು ಎಂದರು.

**ಗ್ರಾಮಸ್ಥರಿಗೆ ಮನವರಿಕೆ**

**ರೈತರಿಗೆ ತಿಳಿಸಿದಂತಹ ಉಪಚಾರಗಳನ್ನು ಯೋಜನಾ ವಿಸ್ತೃತ ವರದಿಯಲ್ಲಿ ನಿಯಮಾನಸಾರ ನಮೂದಿಸಿ, ಜಿಲ್ಲಾ ಮಟ್ಟದ ಸಭೆಯಲ್ಲಿ ಅನುಮೋದನೆ ಪಡೆದು ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತದೆ. ಈ ಯೋಜನೆಯನ್ನು ಉಚ್ಚ ನ್ಯಾಯಾಲಯ ನಿರ್ದೇಶನದ ಮೇರೆಗೆ ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ ನಿರ್ದೇಶನ ಮತ್ತು ಮಾರ್ಗದರ್ಶನದಲ್ಲಿ ಅನುಷ್ಠಾನವಾಗುತ್ತದೆ ಎಂದು ನಕ್ಷೆಯ ಮೂಲಕ ಗ್ರಾಮಸ್ಥರಿಗೆ ಮನ ಮುಟ್ಟುವಂತೆ ತಿಳಿಸಿದರು.**


**ಪರಿಸರ ಯೋಜನೆಯ ಉದ್ದೇಶ**

ಈ ಯೋಜನೆಯಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ತಮ್ಮ ಜಮೀನುಗಳಿಗೆ ಖುದ್ದಾಗಿ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿ ಅಗತ್ಯವಿರುವ ಮತ್ತು ಜಮೀನಿಗೆ ಸೂಕ್ತವೆನಿಸುವ ಮಣ್ಣು ಮತ್ತು ನೀರಿನ ಸಂರಕ್ಷಣೆ ಉಪಚಾರ, ತೋಟಗಾರಿಕೆ, ಅರಣ್ಯೀಕರಣ, ಜೀವನೋಪಾಯ ಚಟುವಟಿಕೆಗಳ ಮಾಹಿತಿ ನೀಡುವರು ಎಂದರು.

ತೇರಿ ಸಂಸ್ಥೆಯ ವಿಜಯ ಮೇಟಿ, ಕ್ಷೇತ್ರದ ಜಿಲ್ಲಾ ತಂಡದ ನಾಯಕರಾದ ಅಶ್ವಿನಿ, ಗ್ರಾಮ ಪಂಚಾಯಿತಿ ಸದಸ್ಯರಾದ ನಿರ್ಮಲ ಬಾಯಿ, ರಮೇಶ್ ನಾಯಕ್, ರವಿನಾಯಕ್, ಲೋಕರಾಜ್, ಸಾರ್ವಜನಿಕರು ಹಾಜರಿದ್ದರು.

## ಪಾಕ್ ಜತೆ ಶಾಶ್ವತ ಕದನ ವಿರಾಮ ಒಪ್ಪಂದ ಮಾಡಿಕೊಳ್ಳಿ: ಭಾರತಕ್ಕೆ ಚೀನಾ ಕರೆ

**ಬೀಜಿಂಗ್:** ಚೀನಾದ ವಿದೇಶಾಂಗ ಸಚಿವ ವಾಂಗ್‌ಯಿ ಭಾರತದ ಭದ್ರತಾ ಸಲಹೆಗಾರ ಅಜಿತ್ ದೋಬಲ್ ಅವರೊಂದಿಗೆ ಮಾತನಾಡಿದ್ದು, ಪಾಕಿಸ್ತಾನದ ಜತೆಗಿನ ಭಿನ್ನಾಭಿಪ್ರಾಯಗಳನ್ನು ಮಾತುಕತೆಯ ಮೂಲಕ ಪರಿಹರಿಸಿಕೊಂಡು ಶಾಶ್ವತ ಕದನ ವಿರಾಮ ಸ್ಥಾಪಿಸುವಂತೆ ಕರೆ ನೀಡಿದ್ದಾರೆ. ಮಾತುಕತೆಯ ವೇಳೆ ಯಿ ಅವರಿಗೆ ಪ್ರತಿಕ್ರಿಯಿಸಿದ ದೋಬಲ್, ಯುದ್ಧ ಭಾರತದ ಆಯ್ಕೆಯಲ್ಲ ಆದರೆ ಪಹಲ್ಗಾಮ್ ದಾಳಿಯ ನಂತರ ಭಾರತಕ್ಕೆ ಭಯೋತ್ಪಾದನಾ ನಿಗ್ರಹ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಹೇಳಿರುವುದಾಗಿ ಚೀನಾದ ಸುದ್ದಿ ಸಂಸ್ಥೆ ಕ್ಸಿನ್ನುವಾ ವರದಿ ತಿಳಿಸಿದೆ. ಭಾರತ ಮತ್ತು ಪಾಕಿಸ್ತಾನ ಸಮಾಲೋಚನೆಯ ಮೂಲಕ ಸಮಗ್ರ, ಶಾಶ್ವತವಾದ ಕದನ ವಿರಾಮವನ್ನು ಸಾಧಿಸುವುದನ್ನು ಚೀನಾ ಬೆಂಬಲಿಸುತ್ತದೆ, ಅದನ್ನೇ ನಿರೀಕ್ಷಿಸುತ್ತದೆ. ಇದು ಎರಡೂ ದೇಶಗಳ ಮೂಲಭೂತ ಹಿತಾಸಕ್ತಿಯಾಗಿದೆ ಎಂದು ಯಿ ಹೇಳಿದ್ದಾರೆ. ಪಹಲ್ಲಾಮ್ ದಾಳಿಯನ್ನು ಖಂಡಿಸಿದ್ದು, ಪಾಕಿಸ್ತಾನ ಉಪ ಪ್ರಧಾನಿ ಮೊಹಮ್ಮದ್ ಇಶಾಕ್ ದಾರ ಜತೆಗೆ ಮಾತನಾಡಿದ್ದಾರೆ ಎಂದು ವರದಿ ತಿಳಿಸಿದೆ. ಏ. 22ರಂದು ಜಮ್ಮು, ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರರ ದಾಳಿಗೆ ಪ್ರತೀಕಾರವಾಗಿ ಮೇ 7 ರಂದು ಭಾರತ ಪಾಕಿ ಸ್ತಾನದ ಮೇಲೆ ಆಪರೇಷನ್ ಸಿಂಧೂರ ಕಾರ್ಯಾಚರಣೆ ಕೈಗೊಂಡಿತ್ತು. ಅಲ್ಲಿಂದ ಭಾರತ, ಪಾಕ್ ನಡುವೆ ಸತತ ನಾಲ್ಕು ದಿನಗಳ ಕಾಲ ಡ್ರೋನ್, ಕ್ಷಿಪಣಿ ದಾಳಿಗಳು ಮುಂದುವರಿದಿದ್ದವು. ಶನಿವಾರ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ನೇತೃತ್ವದಲ್ಲಿ ಉಭಯ ದೇಶಗಳ ನಡುವೆ ಕದನ ವಿರಾಮ ಏರ್ಪಟ್ಟಿತ್ತು. ಆದರೆ ಕೆಲವೇ ಗಂಟೆಗಳಲ್ಲಿ ಪಾಕಿಸ್ತಾನ, ಜಮ್ಮು ಮತ್ತು ಕಾಶ್ಮೀರದ ಮೇಲೆ ಡ್ರೋನ್ ದಾಳಿ ನಡೆಸಿ ಕದನ ವಿರಾಮ ಉಲ್ಲಂಘಿಸಿತ್ತು.



ಪಾಕ್ ದಾಳಿಗೆ ಭಾರತ ಸೇನೆ ಪ್ರತ್ಯುತ್ತರ ನೀಡಿ ಡ್ರೋನ್‌ಗಳನ್ನು ಹೊಡೆದುರುಳಿಸಿದೆ.

## ಸ್ವಾತಂತ್ರ್ಯ ಗಳಿಸಿಕೊಟ್ಟ ಆವಾಮಿ ಲೀಗ್ ಪಕ್ಷವನ್ನೇ ನಿಷೇಧಿಸಿದ ಬಾಂಗ್ಲಾದೇಶ; ದು:ಖದಲ್ಲಿ ಹಸೀನಾ
# ರಾಜಕೀಯ ಪಕ್ಷ ಆವಾಮಿ ಲೀಗ್ ಮೇಲೆ ತಾತ್ಕಾಲಿಕ ನಿಷೇಧ

**ಢಾಕಾ:** ಬಾಂಗ್ಲಾದೇಶ ಮಧ್ಯಂತರ ಸರ್ಕಾರವು, ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ರಾಜಕೀಯ ಪಕ್ಷವಾದ ಅವಾಮಿ ಲೀಗ್‌ನ್ನು ತಾತ್ಕಾಲಿಕವಾಗಿ ನಿಷೇಧಿಸಿದೆ. ಕಳೆದ ವರ್ಷ ಶೇಖ್ ಹಸೀನಾ ಆಡಳಿತಾವಧಿಯಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆಗಳ ವಿಚಾರಣೆ ಮುಗಿಯುವವರೆಗೂ, ಆವಾಮಿ ಲೀಗ್‌ನ ಚಟುವಟಿಕೆಗಳ ಮೇಲೆ ನಿಷೇಧ ಹೇರಲಾಗಿದೆ ಎಂದು ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶ ಮಧ್ಯಂತರ ಸರ್ಕಾರ ಸ್ಪಷ್ಟಪಡಿಸಿದೆ.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಸರ್ಕಾರ ಕಳೆದ ವರ್ಷ ನಡೆದ ಪ್ರತಿಭಟನೆಗಳನ್ನು ಹತ್ತಿಕ್ಕಲು ಪ್ರಯತ್ನಿಸಿತ್ತು. ಇದೇ ಕಾರಣಕ್ಕೆ ಸರ್ಕಾರ ಉರುಳಿ, ಶೇಖ್ ಹಸೀನಾ ಭಾರತದಲ್ಲಿ ರಾಜತಾಂತ್ರಿಕ ಆಶ್ರಯ ಪಡೆದುಕೊಂಡಿದ್ದರು. ಇದೀಗ ಆವಾಮಿ ಲೀಗ್ ಪಕ್ಷದ ಮೇಲೆ ನಿಷೇಧ ಹೇರಿರುವುದು, ಶೇಖ್ ಹಸೀನಾ ಅವರಿಗೆ ಭಾರೀ ಹಿನ್ನಡೆ ಎಂದು ವಿಶ್ಲೇಷಿಸಲಾಗುತ್ತಿದೆ. ವಿಶ್ವ ಸಂಸ್ಥೆ ಪ್ರಕಾರ 2024ರ ಜುಲೈನಲ್ಲಿ ಶೇಖ್ ಹಸೀನಾ ಸರ್ಕಾರವು ವಿರೋಧ ಪಕ್ಷದವರನ್ನು ದಮನ ಮಾಡಲು ಪ್ರಯತ್ನಿಸಿತ್ತು. ಈ ಹಿಂಸಾತ್ಮಕ ಪ್ರತಿಭಟನೆಗಳಲ್ಲಿ ಸುಮಾರು 1,400 ಪ್ರತಿಭಟನಾಕಾರರು ಸಾವನ್ನಪ್ಪಿದರು.



- ಬಾಂಗ್ಲಾದೇಶದಲ್ಲಿ ಆವಾಮಿ ಲೀಗ್ ರಾಜಕೀಯ ಪಕ್ಷದ ಮೇಲೆ ನಿಷೇಧ ಹೇರಿದ ಮುಹಮ್ಮದ್ ಯೂನಸ್ ಮಧ್ಯಂತರ ಸರ್ಕಾರ
- ಆವಾಮಿ ಲೀಗ್ ನಾಯಕರ ವಿಚಾರಣೆ ಮುಗಿಯುವವರೆಗೆ ಪಕ್ಷದ ಮೇಲೆ ನಿಷೇಧ ಎಂದ ಮುಹಮ್ಮದ್ ಯೂನಸ್ ಸರ್ಕಾರ
- ಭಾರತದಲ್ಲಿ ರಾಜತಾಂತ್ರಿಕ ಆಶ್ರಯ ಪಡೆದ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರಿಗೆ ಭಾರೀ ಹಿನ್ನಡೆ

ಇದಾದ ಬಳಿಕ ಶೇಖ್ ಹಸೀನಾ ಬಾಂಗ್ಲಾದೇಶದಿಂದ ಗಡಿಪಾರಾಗಿ ಭಾರದತದಲ್ಲಿ ಆಶ್ರಯ ಪಡೆದಿದ್ದಾರೆ. ಶೇಖ್ ಹಸೀನಾ ಅವರ ಮೇಲೆ ಮಾನವೀಯತೆಯ ವಿರುದ್ಧದ ಅಪರಾಧಗಳ ಆರೋಪ ಹೊರಿಸಿರುವ ಮುಹಮ್ಮದ್ ಯೂನಸ್ ಸರ್ಕಾರ, ಬಂಧನದ ವಾರಂಟ್ ಹೊರಡಿಸಿದೆ. ಅಲ್ಲದೇ ವಿಚಾರಣೆಗಾಗಿ ಶೇಖ್ ಹಸೀನಾ ಅವರನ್ನು ಬಾಂಗ್ಲಾದೇಶಕ್ಕೆ ಹಸ್ತಾಂತರಿಸುವಂತೆ ಭಾರತಕ್ಕೆ ಮನವಿ ಮಾಡಿದೆ. ಈ ಕುರಿತು ಮಾತನಾಡಿರುವ ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಸಲಹೆಗಾರ ಆಸಿಫ್ ನಜ್ರುಲ್, ಅವಾಮಿ ಲೀಗ್, ಅದರ ನಾಯಕರ ವಿಚಾರಣೆ ಮುಗಿಯುವವರೆಗೆ, ಭಯೋತ್ಪಾದನಾ ನಿಗ್ರಹ ಕಾಯ್ದೆಯಡಿ ಅವಾಮಿ ಲೀಗ್‌ನ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮುಹಮ್ಮದ್ ಯೂನಸ್ ಸರ್ಕಾರವು ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿ ಕಾಯ್ದೆಗೆ ತಿದ್ದುಪಡಿಯನ್ನು ಅನುಮೋದಿಸಿದೆ. ಇದರಿಂದ ರಾಜಕೀಯ ಪಕ್ಷಗಳು ಮತ್ತು ಅವುಗಳ ಅಂಗಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲು ಅನುಕೂಲವಾಗುತ್ತದೆ. ಆದರೆ ಆಡಳಿತದ ಈ ಕ್ರಮವನ್ನು ಅವಾಮಿ ಲೀಗ್ ವಿರೋಧಿಸಿದೆ. ಈ ನಡೆಯನ್ನು ಅಕ್ರಮ ಎಂದು ಕರೆದಿರುವ ಪಕ್ಷವು, ಯೂನಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದೆ. ಕಳೆದ ಗುರುವಾರ ತನಿಖೆಗೊಳಪಟ್ಟಿದ್ದ ಅವಾಮಿ ಲೀಗ್‌ನ ಮಾಜಿ ನಾಯಕ ಅಬ್ದುಲ್ ಹಮೀದ್ ದೇಶ ತೊರೆಯುವಲ್ಲಿ ಯಶಸ್ವಿಯಾಗಿದ್ದಾರೆ. ಹಮೀದ್ ಅವರ ನಿರ್ಗಮನದ ನಂತರ ವಿಮಾನ ನಿಲ್ದಾಣದ ಆಗಮನ ಮತ್ತು ನಿರ್ಗಮನಗಳನ್ನು ನೋಡಿಕೊಳ್ಳುತ್ತಿದ್ದ ಮೂವರು ಪೊಲೀಸ್ ಅಧಿಕಾರಿಗಳನ್ನು ಕರ್ತವ್ಯ ಲೋಪದ ಮೇಲೆ ವಜಾ ಮಾಡಲಾಗಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಒಟ್ಟಿನಲ್ಲಿ ನೆರೆ ರಾಷ್ಟ್ರವಾದ ಬಾಂಗ್ಲಾದೇಶದಲ್ಲಿ ರಾಜಕೀಯ ಬಿಕ್ಕಟ್ಟು ಮುಂದುವರೆದಿದೆ ಎಂದು ಹೇಳಬಹುದು.



> ಶೇಖ್ ಹಸೀನಾ ಅವರನ್ನು ಪದಚ್ಯುತಗೊಳಿಸಿದ ನಂತರ ಬಾಂಗ್ಲಾದೇಶದ ಮಧ್ಯಂತರ ಸರ್ಕಾರವನ್ನು ಮುನ್ನಡೆಸುತ್ತಿದ್ದಾರೆ. ದೇಶದ ಸಾರ್ವಭೌಮತ್ವ ಮತ್ತು ಭದ್ರತೆಯನ್ನು ಕಾಪಾಡಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ನಜ್ರುಲ್ ತಿಳಿಸಿದ್ದಾರೆ. ಪ್ರತಿಭಟನಾಕಾರರ ಸುರಕ್ಷತೆ, ದೂರುದಾರರ ರಕ್ಷಣೆ ಮತ್ತು ನ್ಯಾಯಾಧಿಕರಣದ ಸಾಕ್ಷಿಗಳ ಭದ್ರತೆಗಾಗಿ ಈ ಕ್ರಮ ಕೈಗೊಳ್ಳಲಾಗಿದೆ
> –ಮುಹಮ್ಮದ್ ಯೂನಸ್

**ರಾಜಕೀಯ ಬಿಕ್ಕಟ್ಟು ಮುಂದುವರೆದಿದೆ**

## ‘ಆಪರೇಷನ್ ಸಿಂಧೂರ’ ನಿಲ್ಲೋದಿಲ್ಲ : ವದಂತಿಗಳಿಗೆ ತೆರೆ ಎಳೆದ ಭಾರತೀಯ ಸೇನೆ

**ನವದೆಹಲಿ:** ಪುಲ್ವಾಮಾ, ಪಹಲ್ಗಾಮ್ ನರಮೇಧದ ನಂತರ ಪಾಕಿಸ್ತಾನದ ವಿರುದ್ಧ ತಿರುಗಿ ಬಿದ್ದಿದ್ದ ಭಾರತವು ಕನದ ವಿರಾಮಕ್ಕೆ ಸಮತಿಸಿದ್ದರೂ ದೇಶದ ಸಾರ್ವಭೌಮತೆ ಮತ್ತು ನಾಗರಿಕರ ಹಿತರಕ್ಷಣೆಗಾಗಿ ಆರಂಭಿಸಿರುವ ಆಪರೇಷನ್ ಸಿಂಧೂರ ಮುಂದುವರೆಯಲಿದೆ ಎಂದು ಹೇಳುವ ಮೂಲಕ ಭಾರತೀಯ ಸೇನೆ ವದಂತಿಗಳಿಗೆ ತೆರೆ ಎಳೆದಿದೆ.

ಈ ಮೂಲಕ ಪಾಕಿಸ್ತಾನದ ವಿರುದ್ಧ ಕದನ ವಿರಾಮ ಚಾಲ್ತಿಯಲ್ಲಿದ್ದರೂ ಆಪರೇಷನ್ ಸಿಂಧೂರ ಸ್ಥಗಿತ ಮಾಡುವುದಿಲ್ಲ ಎಂಬ ಸಂದೇಶವನ್ನು ನೆರೆ ರಾಷ್ಟ್ರಕ್ಕೆ ರವಾನಿಸಿದೆ. ಈ ಕುರಿತು ಭಾರತೀಯ ವಾಯುಸೇನೆ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿದ್ದು, ಚಾಲ್ತಿಯಲ್ಲಿರುವ ಆಪರೇಷನ್ ಸಿಂಧೂರ ಮುಂದುವರೆಯಲಿದೆ. ಯಾವುದೇ ಕಾರಣಕ್ಕೂ ನಿಲ್ಲಿಸುವ ಪ್ರಮೇಯವಿಲ್ಲ. ದೇಶದ ಸಾರ್ವಭೌಮತೆ ಮತ್ತು ನಾಗರಿಕರ ಹಿತರಕ್ಷಣೆಗೆ ಆರಂಭಿಸಿರುವ ಆಪರೇಷನ್ ಸಿಂಧೂರ ಪ್ರಗತಿಯಲ್ಲಿದೆ ಎಂದು ವಾಯುಪಡೆ ಹೇಳಿದೆ. ಕುತಂತ್ರಿ ಪಾಕ್ ಕದನ ವಿರಾಮ ಉಲ್ಲಂಘಿಸುತ್ತಿದ್ದಂತೆ ಭಾರತೀಯ ಸೇನೆ ಆಪರೇಷನ್ ಸಿಂಧೂರ ಮುಂದುವರಿಯುತ್ತದೆ ಎಂದು ಅಧಿಕೃತವಾಗಿ ಘೋಷಿಸಿದೆ. ಕಾರ್ಯಾಚರಣೆಗಳು ಇನ್ನೂ ನಡೆಯುತ್ತಿರುವುದರಿಂದ ಸರಿಯಾದ ಸಮಯದಲ್ಲಿ ವಿವರವಾದ ಮಾಹಿತಿ ನೀಡಲಾಗುವುದು ಎಂದು ವಾಯಸೇನೆ ಅಧಿಕಾರಿಗಳು ವಿವರಣೆ ನೀಡಿದ್ದಾರೆ. ಪರಿಶೀಲಿಸದ ಮಾಹಿತಿ, ವದಂತಿ ಸುದ್ದಿಗಳಿಗೆ ಯಾರು ಕಿವಿಗೊಡಬಾರದು.




ಭಾರತೀಯ ವಾಯುಪಡೆ ಆಪರೇಷನ್ ಸಿಂಧೂರ್‌ನಲ್ಲಿ ತನಗೆ ನಿಯೋಜಿಸಲಾದ ಕಾರ್ಯಗಳನ್ನು ನಿಖರತೆ ಮತ್ತು ವೃತ್ತಿಪರತೆಯೊಂದಿಗೆ ಯಶಸ್ವಿಯಾಗಿ ನಿರ್ವಹಿಸಿದೆ. ಕಾರ್ಯಾಚರಣೆಗಳನ್ನು ರಾಷ್ಟ್ರೀಯ ಉದ್ದೇಶಗಳಿಗೆ ಅನುಗುಣವಾಗಿ ನಡೆಸಲಾಗಿದೆ ಎಂದು ಸೇನೆ ಹೇಳಿದೆ. ಇನ್ನೊಂದೆಡೆ ಕದನ ವಿರಾಮ ಉಲ್ಲಂಘನೆಯಾದ ಬಳಿಕ ರಕ್ಷಣಾ ಪಡೆಗಳ ಮುಖ್ಯಸ್ಥ (ಸಿಡಿಎಸ್) ಜನರಲ್ ಅನಿಲ್ ಚೌಹಾಣ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದರು. ಭೂಸೇನೆ, ನೌಕಾಪಡೆ, ವಾಯುಪಡೆ ಸೇರಿದಂತೆ ಮೂರು ಸೇನಾ ಪಡೆಗಳ ಮುಖ್ಯಸ್ಥರು ಸಹ ಹಾಜರಿದ್ದರು.

### ಸೈನ್ಯಕ್ಕೆ ಮತ್ತಷ್ಟು ಬಲ

**ಪಾಕಿಸ್ತಾನದೊಂದಿಗೆ ಹೆಚ್ಚುತ್ತಿರುವ ಮಿಲಿಟರಿ ಉದ್ವಿಗ್ನತೆಯ ನಡುವೆಯೇ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಲಕ್ನೋದ ಉತ್ತರ ಪ್ರದೇಶದ ರಕ್ಷಣಾ ಕೈಗಾರಿಕಾ ಕಾರಿಡಾರ್‌ನಲ್ಲಿ ಬ್ರಹೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿ ಉತ್ಪಾದನಾ ಘಟಕವನ್ನು ಲೋಕಾರ್ಪಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಭಾಗವಹಿಸಿದ್ದರು.**

## ಭಾರತದ ಬ್ರಹ್ಮಾಸ್ತ್ರಕ್ಕೆ ಹೆದರಿ ಕದನ ವಿರಾಮಕ್ಕೆ ಗೋಗರೆದ ಪಾಕ್

**ನವದೆಹಲಿ:** ಭಾರತದ ಬ್ರಹ್ಮೋಸ್ ಕ್ಷಿಪಣಿ ದಾಳಿಗೆ ಬೆದರಿದ ಪಾಕಿಸ್ತಾನ ಅಮೆರಿಕವನ್ನು ಗೋಗರೆದು ಕದನ ವಿರಾಮ ಮಾಡಿಸಿಕೊಂಡಿದೆ ಎಂಬ ಮಾತುಗಳು ಕೇಳಿಬಂದಿವೆ. ಭಾರತದ ಉಗ್ರರ ನೆಲೆಗಳ ಮೇಲೆ ಬಾಂಬ್ ದಾಳಿ ನಡೆ ಸಿದ ಬಳಿಕ ಪಾಕಿಸ್ತಾನ ಆರಂಭದಲ್ಲಿ ಡ್ರೋನ್, ಸಣ್ಣ ಕ್ಷಿಪಣಿ ಗಳನ್ನು ಹಾರಿಸಿ ದಾಳಿ ನಡೆಸುತ್ತಿತ್ತು, ಆದರೆ ಮೇ 9, 10 ರ ರಾತ್ರಿ ದೆಹಲಿ ಯನ್ನು ಗುರಿಯಾಗಿಸಿ ಪಾಜುಕ್ ಫತಾಹ್ ಕ್ಷಿಪಣಿಯನ್ನು ಪಾಕ್ ಪ್ರಯೋಗಿಸಿತ್ತು. ಪಾಕ್ ಖಂಡಾಂತರ ಕ್ಷಿಪಣಿಯನ್ನು ಪ್ರಯೋಗಿಸಿದ ಬೆನ್ನಲ್ಲೇ ಭಾರತ ಮೇ 10ರ ಮುಂಜಾನೆ ಮೊದಲ ಬಾರಿಗೆ ಬ್ರಹ್ಮಸ್ ಕ್ರೂಸ್ ಕ್ಷಿಪಣಿಯನ್ನು ಹಾರಿಸಿತ್ತು. ಇನ್ನೊಂದು ದೇಶದ ಮಧ್ಯೆ ಕಾದಾಟ ನಡೆಸುತ್ತಿದ್ದಾಗ ಭಾರತ ಬ್ರಹ್ಮಸ್ ಕ್ಷಿಪಣಿಯನ್ನು ಹಾರಿಸಿದ್ದು ಇದೇ ಮೊದಲು.

ಪಾಕ್ ಯಾವುದೇ ನಗರಗಳನ್ನು ಗುರಿಯಾಗಿಸಿ ಭಾರತ ಕ್ಷಿಪಣಿಯನ್ನು ಹಾರಿಸಿರಲಿಲ್ಲ. ಪಾಕಿಸ್ತಾನದ ಪ್ರಮುಖ ವಾಯು ನೆಲೆಯನ್ನು ಗುರಿಯಾಗಿಸಿಕೊಂಡೇ ದಾಳಿ ನಡೆಸಿತ್ತು. ಭಾರತ ಮೊದಲೇ ಚೀನಾ ನಿರ್ಮಿತ ವಾಯು ರಕ್ಷಣಾ ವ್ಯವಸ್ಥೆಯನ್ನು ಧ್ವಂಸ ಮಾಡಿತ್ತು. ಹೀಗಾಗಿ ಬಹೋಸ್ ಕ್ಷಿಪಣಿ ಮೊದಲು ರಾವಲ್ಪಿಂಡಿ ಬಳಿಯ ಚಕ್ವಾಲಾ, ಪಂಜಾಬ್ ಪ್ರಾಂತ್ಯದ ಸರ್ಗೋಧಾದ ಮೇಲೆ ಬಿತ್ತು. ಜಕೋಬಾಬಾದ್, ಭೋಲಾರಿ, ಸ್ಕಾಡುರ್ ಮೇಲೆ ದಾಳಿ ನಡೆಸಿತು. ಎಲ್ಲಾ ಸೇರಿ ಒಟ್ಟು 11 ವಾಯು ನೆಲೆ ನೂರ್ ಖಾನ್, ಚಕ್ಲಾಲಾ, ರಫಿಕ್ವಿ, ಮುರಿಡ್, ಸುಕ್ಕುರ್. ಸಿಯಾಲ್ ಕೋಟ್, ವಸರೂರು, ಚುನಿಯನ್, ಸರ್ಗೋಧಾ, ಸ್ಕಾಡುರ್, ಭೋಲಾರಿ, ಜಾಕೋಬಾಬಾದ್ ಮೇಲೆ ಭಾರತ ದಾಳಿ ನಡೆಸಿತ್ತು. ಈ ಸಮಯದಲ್ಲಿಯೇ ಪಾಕಿಸ್ತಾನ ತುರ್ತು ಹಸ್ತಕ್ಷೇಪಕ್ಕಾಗಿ ಅಮೆರಿಕದ ಸಹಾಯವನ್ನು ಕೋರಿದೆ. ಹಾಗೆ ನೋಡಿದರೆ ಅಮೆರಿಕ ಮೊದಲೇ ಎರಡು ದೇಶಗಳ ಜೊತೆ ಸಂಪರ್ಕದಲ್ಲಿತ್ತು, ಆದರೆ ಈಗ ಪಾಕ್ ನೇರವಾಗಿ ಮೊರೆ ಇಟ್ಟ ಕಾರಣ ಅಧಿಕೃತವಾಗಿ ಮಧ್ಯಪ್ರವೇಶ ಮಾಡಲು ಮುಂದಾಯಿತು. ಮೇ 10 ರ ಮಧ್ಯಾಹ್ನದ ವೇಳೆಗೆ ಪಾಕಿಸ್ತಾನದ ಡಿಜಿಎಂಬ ಮೇಜರ್ ಜನರಲ್ ಕಾಶಿಫ್ ಅಬ್ದುಲ್ಲಾ ಅವರು ತಮ್ಮ ಭಾರತ ಡಿಜಿಎಂಒ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಅವರಿಗೆ ನೇರ ಕರೆ ಮಾಡಿ ಕದನ ವಿರಾಮಕ್ಕೆ ಒಪ್ಪಿಗೆ ನೀಡುವಂತೆ ಮನವಿ ಮಾಡಿದರು. ಕೊನೆಗೆ ನಂಜಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಪತ್ರಿಕಾಗೋಷ್ಠಿಯಲ್ಲಿ 2 ದೇಶಗಳ ಮಧ್ಯೆ ಕದನವಿರಾಮ ನಡೆದಿರುವ ಬಗ್ಗೆ ದೃಢಪಡಿಸಿದರು.




# ಪುಲ್ವಾಮಾ ದಾಳಿ ಒಪ್ಪಿಕೊಂಡು ಜಗತ್ತಿನ ಮುಂದೆ ಬೆತ್ತಲಾದ ಪಾಕಿಸ್ತಾನ

**ಇಸ್ಲಾಮಾಬಾದ್:** ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾದಲ್ಲಿ ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ನಮ್ಮ ಪಾತ್ರವಿತ್ತು ಎಂದು ಪಾಕ್ ಒಪ್ಪಿಕೊಂಡಿದೆ. ಪುಲ್ವಾಮಾ ಘಟನೆಯಲ್ಲಿ ನಮ ಪಾತ್ರವಿಲ್ಲ ಎಂದು ವರ್ಷಗಳ ಕಾಲ ನಿರಾಕರಿಸಿಕೊಂಡೇ ಬರುತ್ತಿದ್ದ ಪಾಕ್‌ನ ಉನ್ನತ ವಾಯುಪಡೆಯ ಅಧಿಕಾರಿಯೇ ತಮ ತಪ್ಪನ್ನು ಒಪ್ಪಿಕೊಂಡಿದ್ದಾರೆ.

ಪಾಕಿಸ್ತಾನ ವಾಯುಪಡೆಯ ವಾಯು ವೈಸ್ ಮಾರ್ಷಲ್, ಸಾರ್ವಜನಿಕ ಸಂಪರ್ಕ ನಿರ್ದೇಶಕ (ಡಿಜಿಪಿಆರ್) ಔರಂಗಜೇಬ್ ಅಹ್ಮದ್ ಪತ್ರಿಕಾಗೋಷ್ಠಿಯಲ್ಲಿ, ಪುಲ್ವಾಮಾ ದಾಳಿಯನ್ನು ಯುದ್ಧತಂತ್ರದ ಪ್ರತಿಭೆಗೆ ಒಂದು ಉದಾಹರಣೆ ಎಂದು ಹೇಳಿದ್ದಾರೆ. ಈ ಹೇಳಿಕೆಯು ಪುಲ್ವಾಮಾ ದಾಳಿಯಲ್ಲಿ ಮಾತ್ರವಲ್ಲದೆ ಇತ್ತೀಚಿನ ಪಹಲ್ಗಾಮ್ ದಾಳಿಯಲ್ಲೂ ಪಾಕಿಸ್ತಾನದ ಪಾತ್ರದ ಬಗ್ಗೆ ಅನುಮಾನಗಳನ್ನು ದೃಢಪಡಿಸುತ್ತಿದೆ. ಔರಂಗಜೇಬ್ ಅಹ್ಮದ್ ಅವರ ಈ ಹೇಳಿಕೆಯು ಪಾಕಿಸ್ತಾನದ ವರ್ಷಗಳ ಹಳೆಯ ಕಥೆಯನ್ನು ತಲೆಕೆಳಗೆ ಮಾಡಿದಂತಾಗಿದೆ. ಪುಲ್ವಾಮಾ ಭಯೋತ್ಪಾದಕ ದಾಳಿಯ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಏರ್ ವೈಸ್ ಮಾರ್ಷಲ್ ಔರಂಗಜೇಬ್ ಅಹದ್, ನಮ್ಮ ಯುದ್ಧತಂತ್ರದ ಪ್ರತಿಭೆಯ ಮೂಲಕ ನಾವು ಇದನ್ನು ಭಾರತಕ್ಕೆ ಹೇಳಲು ಪ್ರಯತ್ನಿಸಿದ್ದೇವೆ ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿನ ಪಾಕ್‌ನ ಈ ಹೇಳಿಕೆಯು ಪಾಕಿಸ್ತಾನದ ವರ್ಚಸ್ಸಿಗೆ ದೊಡ್ಡ ಕಳಂಕವಾಗಿದ್ದು, ಅಂತಾರಾಷ್ಟ್ರೀಯ ಸಮುದಾಯದ ಮುಂದೆ ಭಯೋತ್ಪಾದನೆಯನ್ನು ಬೆಂಬಲಿಸುವ ಪಾಕಿಸ್ತಾನದ ನೀತಿಯನ್ನು ಮುನ್ನೆಲೆಗೆ ತಂದಿದೆ.



ಪಾಕಿಸ್ತಾನ ವಾಯುಪಡೆಯ ಹಿರಿಯ ಅಧಿಕಾರಿಯ ಈ ತಪ್ಪೊಪ್ಪಿಗೆಯು ಪುಲ್ವಾಮಾದಲ್ಲಿ ಮಾತ್ರ ವಲ್ಲದೆ ಪಹಲ್ಗಾಮ್ ದಾಳಿಯಲ್ಲೂ ಅದರ ಪಾತ್ರದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಏರ್ ವೈಸ್ ಮಾರ್ಷಲ್ ಔರಂಗಜೇಬ್ ಅಹ್ಮದ್ ಅವರೊಂದಿಗೆ ಹಾಜರಿರುವ ಡಿಜಿ ಐಎಸ್ಪಿಆರ್ ಲೆಫ್ಟಿನೆಂಟ್ ಜನರಲ್ ಅಹ್ಮದ್ ಷರೀಫ್ ಚೌಧರಿ ಸಾಮಾನ್ಯ ವ್ಯಕ್ತಿಯಲ್ಲ.

ಅವರು ಪರಮಾಣು ವಿಜ್ಞಾನಿ ಸುಲ್ತಾನ್ ಬಶೀರುದ್ದೀನ್ ಮಹಮೂದ್ ಅವರ ಪುತ್ರರಾಗಿದ್ದು, ಅವರು ಒಸಾಮಾ ಬಿನ್ ಲಾಡೆನ್‌ರನ್ನು ಭೇಟಿಯಾಗಿದ್ದ, ಅಲ್-ಖೈದಾಗೆ ಪರಮಾಣು ತಂತ್ರಜ್ಞಾನವನ್ನು ಒದಗಿಸುವ ಪ್ರಯತ್ನಗಳಲ್ಲಿ ಭಾಗಿಯಾಗಿದ್ದರು ಎಂದು ತಿಳಿದುಬಂದಿದೆ. ಅವರನ್ನು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅಲ್-ಖೈದಾ ನಿರ್ಬಂಧ ಸಮಿತಿಯು ಗುರುತಿಸಿದೆ.ಫೆಬ್ರವರಿ 14, 2019 ರಂದು ಪುಲ್ವಾಮಾದಲ್ಲಿ ನಡೆದ ಆತ್ಮಾಹುತಿ ದಾಳಿಯಲ್ಲಿ 40 ಯೋಧರು ಹುತಾತ್ಮರಾಗಿದ್ದರು. ಈ ದಾಳಿಯ ಹೊಣೆಯನ್ನು ಜೈಶ್-ಎ-ಮೊಹಮ್ಮದ್ (ಜೆಇಎಂ) ಹೊತ್ತುಕೊಂಡಿತ್ತು.

ಭಾರತವು ಪಾಕಿಸ್ತಾನವನ್ನು ದೂಷಿಸಿತ್ತು ಮತ್ತು ಹಲವಾರು ಬಾರಿ ದೃಢವಾದ ಪುರಾವೆಗಳನ್ನು ಸಹ ಒದಗಿಸಿತ್ತು. ಪಾಕಿಸ್ತಾನ ಯಾವಾಗಲೂ ಅದನ್ನು ನಿರಾಕರಿಸುತ್ತಿತ್ತು, ಆದರೆ ಈಗ ಅದರ ಸ್ವಂತ ಮಿಲಿಟರಿ ಅಧಿಕಾರಿ ಪುಲ್ವಾಮಾ ದಾಳಿಯ ಹಿಂದಿನ ಮಾಸ್ಟರ್ ಮೈಂಡ್ ತನ್ನ ಸೇನೆ ಎಂದು ಒಪ್ಪಿಕೊಂಡಿದ್ದಾರೆ.

## ಉಕ್ರೇನ್ ಜತೆ ಮಾತುಕತೆಗೆ ರಷ್ಯಾ ಪ್ರಸ್ತಾಪ ಯುದ್ಧ ಕೊನೆಗಾಣಿಸಲು ಮುಂದಾದ ಪುಟಿನ್

**ಮಾಸ್ಕೋ:** ಉಕ್ರೇನ್‌ನೊಂದಿಗೆ ನೇರ ಮಾತುಕತೆ ನಡೆಸುವ ಪ್ರಸ್ತಾಪವೊಂದನ್ನು ರಷ್ಯಾದ ಅಧ್ಯಕ್ಷ ವಾದ್ಲಿಮಿರ್ ಪುಟಿನ್ ಮುಂದಿಟ್ಟಿದ್ದಾರೆ. ಮೇ 15 ರಂದು ಇಸ್ತಾಂಬುಲ್‌ನಲ್ಲಿ ಉಕ್ರೇನ್‌ನೊಂದಿಗೆ ನೇರ ಮಾತುಕತೆ ನಡೆಸಲು ಪ್ರಸ್ತಾಪಿಸಲಾಗಿದೆ. ಈ ಮಾತುಕತೆ ಮೂಲಕ ಶಾಶ್ವತ ಶಾಂತಿ ಸ್ಥಾಪನೆ ಮತ್ತು ಯುದ್ಧದ ಕಾರಣಗಳನ್ನು ತೊಡೆದುಹಾಕಲು ಉದ್ದೇಶಿಸಲಾಗಿದೆ ಎಂದು ಪುಟಿನ್ ಹೇಳಿದ್ದಾರೆ. ನಮ್ಮ ಪ್ರಸ್ತಾಪವನ್ನು ಅವರ ಮುಂದೆ ಇಟ್ಟಿದ್ದೇವೆ. ಈ ಕುರಿತ ನಿರ್ಧಾರವು ಈಗ ಉಕ್ರೇನ್‌ನ ಅಧಿಕಾರಿಗಳು, ಮೇಲ್ವಿಚಾರಕರ ಮೇಲಿದೆ ಎಂದು ತಿಳಿಸಿದ್ದಾರೆ.

ಕದನ ವಿರಾಮ ಉಲ್ಲಂಘನೆ ಕುರಿತ ಉಕ್ರೇನ್ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ವಿಜಯೋತ್ಸವ ಪರೇಡ್ ಸಂದರ್ಭ 72 ಗಂಟೆಗಳ ಕದನ ವಿರಾಮ, ಈಸ್ಟರ್ ಕದಾನ ವಿರಾಮ ಸೇರಿದಂತೆ ಹಲವಾರು ಕದನ ವಿರಾಮಗಳನ್ನು ರಷ್ಯಾ ಪ್ರಸ್ತಾಪಿಸಿತ್ತು.



ಆದರೆ ಇವುಗಳನ್ನು ಉಲ್ಲಂಘಿಸಿ ಉಕ್ರೇನ್ ರಷ್ಯಾದ ಮೇಲೆ ದಾಳಿ ನಡೆಸಿತ್ತು ಎಂದು ಆರೋಪಿಸಿದ್ದಾರೆ. ಮೇ ಕದನ ವಿರಾಮದ ಸಂದರ್ಭ ಉಕ್ರೇನ್ 524 ವೈಮಾನಿಕ ಡ್ರೋನ್‌ಗಳು, 45 ಸಮುದ್ರ ಡ್ರೋನ್‌ಗಳು ಸೇರಿದಂತೆ ಹಲವಾರು ಪಾಶ್ಚಿಮಾತ್ಯ ಕ್ಷಿಪಣಿಗಳೊಂದಿಗೆ ರಷ್ಯಾದ ಮೇಲೆ ದಾಳಿ ಮಾಡಿತ್ತು. ಆದರೆ, ಇದನ್ನು ರಷ್ಯಾ ಯಶಸ್ವಿಯಾಗಿ ಹಿಮ್ಮೆಟ್ಟಿಸಿತ್ತು ಎಂದಿದ್ದಾರೆ.

# ಭಾರತ-ಪಾಕ್ ಕದನ ವಿರಾಮಕ್ಕೆ ಶ್ಲಾಘನೆ

**ನ್ಯೂಯಾರ್ಕ್:** ಭಾರತ, ಪಾಕಿಸ್ತಾನ ಕದನ ವಿರಾಮ ಒಪ್ಪಂದ ಮಾಡಿಕೊಂಡಿದ್ದು, ಉಭಯ ದೇಶ ಗಳ ನಾಯಕರ ಅಚಲ, ಬಲವಾದ ನಿರ್ಧಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶ್ಲಾಘಿಸಿದ್ದಾರೆ. ಎರಡೂ ರಾಷ್ಟ್ರಗಳ ಕ್ರಮಗಳಿಂದ ಅವರ ನಡುವಿನ ಪರಂಪರೆ ವೃದ್ಧಿಸಿದೆ ಎಂದು ಟ್ರಂಪ್ ಹೇಳಿದ್ದಾರೆ. ಶನಿವಾರ ಭಾರತ, ಪಾಕಿಸ್ತಾನ ಗಡಿ ನಿಯಂತ್ರಣಾ ರೇಖೆಯಲ್ಲಿ ಕದನ ವಿರಾಮಕ್ಕೆ ಒಪ್ಪಂದ ಮಾಡಿಕೊಂಡಿತ್ತು. ಈ ಕುರಿತು ಟ್ರಂಪ್, ಅಮೆರಿಕದ ಮಧ್ಯಸ್ಥಿಕೆಯಲ್ಲಿ ಕದನ ವಿರಾಮಕ್ಕೆ ಉಭಯ ದೇಶಗಳು ಒಪ್ಪಿಕೊಂಡಿವೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದರು.

ಈ ಕುರಿತು ಟ್ರುತ್ ಸೋಶಿಯಲ್‌ನಲ್ಲಿ ಬರೆದು ಕೊಂಡಿರುವ ಟ್ರಂಪ್, ಅನೇಕರ ಸಾವು, ವಿನಾಶಕ್ಕೆ ಕಾರಣವಾಗಬಹುದಾದ ಪ್ರಸ್ತುತ ಆಕ್ರಮಣವನ್ನು ನಿಲ್ಲಿಸುವ ಸಮಯ ಬಂದಿದೆ ಎಂಬುದನ್ನು ತಿಳಿದು, ಅರ್ಥಮಾಡಿಕೊಳ್ಳುವ ಶಕ್ತಿಶಾಲಿ ನಾಯಕತ್ವವು ಹೊಂದಿದ್ದಕ್ಕಾಗಿ ಭಾರತ ಮತ್ತು ಪಾಕಿಸ್ತಾನ ಬಗ್ಗೆ ನನಗೆ ತುಂಬಾ ಹೆಮ್ಮೆಯಿದೆ. ಲಕ್ಷಾಂತರ ಮುಗ್ಧ ಜನರ ಸಾವಾಗಬಹುದಿತ್ತು. ಆದರೆ ನಿಮ್ಮ ಅಚಲ ನಿರ್ಧಾರದಿಂದ ಪರಂಪರೆ ವೃದ್ಧಿಸುತ್ತದೆ ಎಂದು ಬರೆದುಕೊಂಡಿದ್ದಾರೆ. ಅಮೆರಿಕದ ನಾಯಕತ್ವವನ್ನು ಹೊಗಳಿದ ಟ್ರಂಪ್, ಈ ಐತಿಹಾಸಿಕ ನಿರ್ಧಾರವನ್ನು ತೆಗೆದುಕೊಳ್ಳಲು ನಿಮಗೆ ಸಹಾಯ ಮಾಡಲು ಅಮೆರಿಕಕ್ಕೆ ಸಾಧ್ಯವಾಯಿತು ಎಂದು ನನಗೆ ಹೆಮ್ಮೆ ಇದೆ.



ನಾವಿನ್ನೂ ಚರ್ಚಿಸಿಲ್ಲ ಆದರೂ ಈ ಎರಡೂ ರಾಷ್ಟ್ರಗಳೊಂದಿಗೆ ವ್ಯಾಪಾರವನ್ನು ಗಣನೀಯವಾಗಿ ಹೆಚ್ಚಿಸಲಿದ್ದೇನೆ. ಸಾವಿರ ವರ್ಷಗಳಿಂದ ಕಾಶ್ಮೀರ ಸಮಸ್ಯೆಯಿದೆ. ಹೀಗಾಗಿ ಸಮಸ್ಯೆ ಬಗೆಹರಿಸಿ ಉಭಯ ದೇಶಗಳ ನಡುವೆ ಶಾಂತಿ ಸ್ಥಾಪನೆಗೆ ಅಮೆರಿಕ ಕೆಲಸ ಮಾಡಲಿದೆ. ಒಟ್ಟಿನಲ್ಲಿ ಉತ್ತಮ ಕೆಲಸಕ್ಕಾಗಿ ಭಾರತ ಮತ್ತು ಪಾಕಿಸ್ತಾನಕ್ಕೆ ದೇವರು ಆಶೀರ್ವದಿಸಲಿ ಎಂದು ಬರೆದುಕೊಂಡಿದ್ದಾರೆ.


**ಅಮೆರಿಕ ಮಧ್ಯಸ್ಥಿಕೆ ಕೊಂಡಾಡಿದ ಟ್ರಂಪ್**

# ಕದನ ವಿರಾಮ ಘೋಷಣೆ ಬಗ್ಗೆ ಚರ್ಚೆ ಮಾಡೋಣ
## ವಿಶೇಷ ಅಧಿವೇಶನಕ್ಕೆ ಒತ್ತಾಯಿಸಿದ ರಾಹುಲ್, ಮಲ್ಲಿಕಾರ್ಜುನ ಖರ್ಗೆ

**ಹೊಸದಿಲ್ಲಿ:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರದಾಳಿ, ನಂತರ ಬೆಳವಣಿಗೆಗಳಾದ ಆಪರೇಷನ್ ಸಿಂಧೂರ್ ಮತ್ತು ಕದನ ವಿರಾಮ ಘೋಷಣೆಗಳ ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನ ಕರೆಯುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೇಂದ್ರ ವಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, ಆಪರೇಷನ್ ಸಿಂಧೂರ್ ಮತ್ತು ಕದನ ವಿರಾಮದ ಬಗ್ಗೆ ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನ ಕರೆಯುವಂತೆ ವಿನಂತಿಸಿದ್ದಾರೆ. ಈ ವೇಳೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೊದಲು ಕದನ ವಿರಾಮವನ್ನು ಘೋಷಿಸಿದರು ಎಂದು ರಾಹುಲ್ ಒತ್ತಿ ಹೇಳಿದರು.

**ಮೋದಿಗೆ ಪತ್ರ ಬರೆದು ಆಗ್ರಹ**

‘ಆತ್ಮೀಯ ಪ್ರಧಾನ ಮಂತ್ರಿಯವರೇ, ಸಂಸತ್ತಿನ ವಿಶೇಷ ಅಧಿವೇಶನವನ್ನು ತಕ್ಷಣವೇ ಕರೆಯಬೇಕೆಂಬ ವಿರೋಧ ಪಕ್ಷದ ಸರ್ವಾನುಮತದ ವಿನಂತಿಯನ್ನು ನಾನು ಪುನರುಚ್ಚರಿಸುತ್ತೇನೆ. ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ್ ಮತ್ತು ಇಂದಿನ ಕದನ ವಿರಾಮವನ್ನು ಅಮೆರಿಕ ಅಧ್ಯಕ್ಷ ಟ್ರಂಪ್ ಮೊದಲು ಘೋಷಿಸಿದರು. ಈ ಸಂದರ್ಭ ಮುಂಬರುವ ಸವಾಲುಗಳನ್ನು ಎದುರಿಸಲು ಹಾಗೂ ನಮ್ಮ ಒಗ್ಗೂಡುವಿಕೆಯ ಸಂಕಲ್ಪವನ್ನು ಪ್ರದರ್ಶಿಸಲು ಒಂದು ಅವಕಾಶವಾಗಿದೆ. ನೀವು ಈ ಬೇಡಿಕೆಯನ್ನು ಗಂಭೀರವಾಗಿ ಮತ್ತು ತ್ವರಿತವಾಗಿ ಪರಿಗಣಿಸುತ್ತೀರಿ ಎಂದು ನಾನು ನಂಬುತ್ತೇನೆ? ಎಂದು ರಾಹುಲ್ ಗಾಂಧಿ ಪತ್ರದಲ್ಲಿ ಬರೆದಿದ್ದಾರೆ.



**ಪ್ರಧಾನಿಗೆ ಪತ್ರ ಬರೆದ ಮಲ್ಲಿಕಾರ್ಜುನ ಖರ್ಗೆ:** ಈ ಕುರಿತು ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿರುವ ಮಲ್ಲಿಕಾರ್ಜುನ ಖರ್ಗೆ, ‘ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ, ಸಂಸತ್ತಿನ ಉಭಯ ಸದನಗಳ ವಿಶೇಷ ಅಧಿವೇಶನವನ್ನು ಕರೆಯುವಂತೆ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕನಾಗಿ ಏ.28 ರಂದು ಬರೆದ ನಮ್ಮ ಪತ್ರಗಳ ಮೂಲಕ ನಿಮ್ಮ ಹಿತೈಷಿಗಳನ್ನು ವಿನಂತಿಸಿಕೊಂಡಿದ್ದೇನೆ ಎಂದಿದ್ದಾರೆ. ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಲೋಕ ಸಭೆಯು ಈಗಾಗಲೇ ನಿಮಗೆ ಮತ್ತೊಮ್ಮೆ ಪತ್ರ ಬರೆದಿದ್ದು, ಪಹಲ್ಗಾಮ್ ಭಯೋತ್ಪಾದನೆ, ಆಪರೇಷನ್ ಸಿಂಧೂರ್, ಮೊದಲು ವಾಷಿಂಗ್ಟನ್ ಡಿಸಿಯಿಂದ, ನಂತರ ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳಿಂದ ಕದನ ವಿರಾಮ ಘೋಷಣೆಗಳ ಬಗ್ಗೆ ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆಯಲು ಎಲ್ಲಾ ವಿರೋಧ ಪಕ್ಷಗಳ ಸರ್ವಾನುಮತದ ವಿನಂತಿಯನ್ನು ತಿಳಿಸಿದೆ. ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕನಾಗಿ, ನಾನು ಈ ವಿನಂತಿಯನ್ನು ಬೆಂಬಲಿಸಿ ಬರೆಯುತ್ತಿದ್ದೇನೆ. ನೀವು ಒಪ್ಪುತ್ತೀರಿ ಎಂದು ನಾನು ನಂಬುತ್ತೇನೆ ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ.

> **ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರದಾಳಿ, ನಂತರ ಬೆಳವಣಿಗೆಗಳಾದ ಆಪರೇಷನ್ ಸಿಂಧೂರ್ ಮತ್ತು ಕದನ ವಿರಾಮ ಘೋಷಣೆಗಳ ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನ ಕರೆಯುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೇಂದ್ರ ವಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದ್ದಾರೆ. ಆಪರೇಷನ್ ಸಿಂಧೂರ್ ಮತ್ತು ಕದನ ವಿರಾಮದ ಬಗ್ಗೆ ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನ ಕರೆಯುವಂತೆ ವಿನಂತಿಸಿದ್ದಾರೆ. ಈ ವೇಳೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೊದಲು ಕದನ ವಿರಾಮವನ್ನು ಘೋಷಿಸಿದರು**
> –ರಾಹುಲ್‌ಗಾಂಧಿ, ಕೇಂದ್ರ ವಿಪಕ್ಷ ನಾಯಕ

### ಮೋದಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ

**ಕದನ ವಿರಾಮ ಒಪ್ಪಂದದ ಕುರಿತು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆದಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಎಸ್.ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ಡೊಭಾಲ್, ಸೇನಾಪಡೆಗಳ ಮುಖ್ಯಸ್ಥರೆ. ಜನರಲ್ ಅನಿಲ್ ಚೌಹಾಣ್ ಹಾಗೂ ಮೂರು ಸೇನಾ ಪಡೆಗಳ ಮುಖ್ಯಸ್ಥರು ಭಾಗವಹಿಸಿದ್ದಾರೆ.**

## ಮಿನಿ ನ್ಯೂಸ್

### ಮೋದಿ ಗುಣಗಾನ ಮಾಡಿದ ಕಾಂಗ್ರೆಸ್‌ನ ಹಿರಿಯ ಮುಖಂಡ ಪಿ. ಚಿದಂಬರಂ

**ನವದೆಹಲಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ವಿರುದ್ಧ ಪ್ರತಿ ಕ್ಷಣವೂ ಕೆಂಡಕಾರುತ್ತಿದ್ದ ಕಾಂಗ್ರೆಸ್‌ನ ಹಿರಿಯ ಮುಖಂಡ ಪಿ. ಚಿದಂಬರಂ ಅವರು ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಬಗ್ಗೆ ಶ್ಲಾಘನೆ ಮಾಡಿ ಗಮನ ಸೆಳೆದಿದ್ದಾರೆ. ನಾಗರೀಕರ ಮೇಲೆ ದಾಳಿ ನಡೆಸದೆ ಕೇವಲ ಉಗ್ರರ ನೆಲೆಗಳನ್ನು ಆಪರೇಷನ್ ಸಿಂಧೂರ್ ಹೆಸರಿನಲ್ಲಿ ನಡೆಸಿದ ಕಾರ್ಯಾಚರಣೆಯನ್ನು ಜಾಗರೂಕ, ಅಗತ್ಯ ನಡೆ ಎಂದು ಅವರು ಗುಣಗಾನ ಮಾಡಿದ್ದಾರೆ. ಉಗ್ರ ನೆಲೆ ನಾಶಗೊಳಿಸಿದ ನಂತರ ಮುಂದೆ ಯುದ್ಧ ಬೇಡ ಎಂಬ ಮೋದಿ ನಡೆಯನ್ನು ಅವರು ಜಾಗರೂಕ ನಿರ್ಧಾರ ಎಂದು ಬಣ್ಣಿಸಿದ್ದಾರೆ.

### ದೇಶದಲ್ಲಿ ತೈಲ ಅಭಾವ ಇಲ್ಲ ತೈಲ ಸಂಸ್ಥೆಗಳ ಸ್ಪಷ್ಟನೆ

**ನವಹದಲಿ:** ಭಾರತದಲ್ಲಿ ತೈಲ ಅಭಾವ ಇಲ್ಲ ಎಂದು ಭಾರತೀಯ ತೈಲ ಸಂಸ್ಥೆಗಳು ಹೇಳಿವೆ. ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ವಾತವರಣ ಸೃಷ್ಟಿಯಾಗಿರುವ ನಡುವೆಯೇ ಪೆಟ್ರೋಲ್, ಡಿಸೇಲ್, ಎಲ್‌ಪಿಜಿ ಅನಿಲ ಯಾವುದೇ ಅಭಾವ ಇಲ್ಲ ಈಗಾಗಲೆ ನಾವು ಮುನ್ನಚ್ಚರಿಕೆಯಿಂದ ಸಾಕಾಷ್ಟು ದಾಸ್ತಾನು ಮಾಡಲಾಗಿದೆ. ಆತಂಕ ಪಟಡುವ ಅಗತ್ಯವಿಲ್ಲವೆಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ದೇಶದ ಅತೀದೊಡ್ಡ ತೈಲ ಸಂಸ್ಥೆಯಾಗಿರುವ ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿ) ಈಗಾಗಲೇ ತನ್ನ ಅಂಗ ಸಂಸ್ಥೆಗಳಿಗೆ ಈ ಬಗ್ಗೆ ಯಾವುದೇ ಸುಳ್ಳು ಮಾಹಿತಿಗಳಿಗೆ ತಲೆ ಕೆಡಿಸಿಕೊಳ್ಳಬೇಡಿ ಪೆಟ್ರೋಲ್ ಬಂಕ್ ಗಳ ಮುಂದೆ ಜನರು ಸಾಲು ಗಟ್ಟಿ ನಿಟ್ಟಿದ್ದಾರೆ ಎಂಬುದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಿ ಎಂದು ಹೇಳಿದ್ದಾರೆ.

ದೇಶದ ಬಹುತೇಕ ಅತೀ ಹೆಚ್ಚು ಬಳಕೆಯ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳು ಒಂದು ತಿಂಗಳಿಗೆ ಆಗುವಷ್ಟು ರೀ ಪಿಲ್ಲಿಂಗ್ ಮಾಡಲಾಗಿದೆ. ಅದೇ ರೀತಿ ರೈಲ್ವೆ ಇಲಾಖೆಯು ಕೂಡ ಸಾಕಷ್ಟು ಡಿಸೇಲ್ ಬಳಕೆಯನ್ನು ಗಣನೀಯವಾಗಿ ಕಡಿಮೆ ಮಾಡಿದೆ ಎಂದು ಹೇಳಿದೆ. ಇಷ್ಟಾದರೂ ಹೆಚ್ಚಾಗಿ ಸ್ವಂತ ವಾಹನಗಳನ್ನು ಬಳಸುವುದನ್ನು ಕಡಿಮೆ ಮಾಡಿ ಸಮೂಹ ಸಾರಿಗೆಯನ್ನ ಬಳಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಲಾಗಿದೆ.

### ಪಾಕಿಸ್ತಾನವನ್ನು ಬೆಂಬಲಿಸಿದ ಟರ್ಕಿ, ಅಜೆರ್ಬೈಜಾನ್‌ಗೆ ಪೆಟ್ಟು ಕೊಟ್ಟ ಭಾರತ

**ನವದೆಹಲಿ:** ಪಾಕಿಸ್ತಾನಕ್ಕೆ ಬೆಂಬಲ ನೀಡಿದ ಟರ್ಕಿ, ಅಜೆರ್ಬೈಜಾನ್‌ಗೆ ಭಾರತ ಪೆಟ್ಟು ನೀಡಿದೆ. ಪ್ರಮುಖ ಪ್ರಯಾಣ ಕಂಪನಿಗಳು ಈ ಎರಡೂ ದೇಶಗಳಿಗೆ ಎಲ್ಲಾ ಪ್ಯಾಕೇಜ್‌ಗಳನ್ನು ಸ್ಥಗಿತಗೊಳಿಸಿವೆ ಉಗ್ರರ ಬೆಂಬಲಿಸುವ ಪಾಕಿಸ್ತಾನಕ್ಕೆ ಈ ಎರಡು ದೇಶಗಳು ಬೆಂಬಲ ಘೋಷಿಸಿವೆ. ಅದರ ಬೆನ್ನಲ್ಲೇ ಈ ಕ್ರಮಕ್ಕೆಗೊಳ್ಳಲಾಗಿದೆ.

ಈಸ್‌ಮೈಟ್ರಿಪ್, ಕಾಕ್ಸ್ ಕಿಂಗ್ಸ್, ಟ್ರಾವೊಮಿಂಟ್, ಟರ್ಕಿ, ಅಜೆರ್ಬೈಜಾನ್‌ಗೆ ಬುಕಿಂಗ್‌ಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸುವುದಾಗಿ ಭಾರತ ಘೋಷಿಸಿವೆ. ಇದು ರಾಷ್ಟ್ರೀಯ ಭಾವನೆಗೆ ಅನುಗುಣವಾಗಿ ಮತ್ತು ಸುರಕ್ಷತೆ ಮತ್ತು ರಾಜತಾಂತ್ರಿಕ ಪರಿಣಾಮಗಳ ಬಗ್ಗೆ ಹೆಚ್ಚುತ್ತಿರುವ ಕಳವಳವನ್ನು ಪ್ರತಿಬಿಂಬಿಸುತ್ತದೆ. ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಅಜೆರ್ಬೈಜಾನ್, ಉಲ್ಲೇಕಿಸ್ತಾನ್ ಮತ್ತು ಟರ್ಕಿಗೆ ಎಲ್ಲಾ ಹೊಸ ಪ್ರಯಾಣ ಕೊಡುಗೆಗಳನ್ನು ಸ್ಥಗಿತಗೊಳಿಸಲು ನಾವು ನಿರ್ಧರಿಸಿದ್ದೇವೆ. ನಮಗೆ ಮತ್ತು ನಮ್ಮ ದೇಶದ ಜನರಿಗೆ ಬದ್ದತೆಯಿಂದ ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ ಎಂದು ಕಾಕ್ಸ್ ಕಿಂಗ್ಸ್‌ನ ನಿರ್ದೇಶಕ ಕರಣ್ ಅಗರ್ವಾಲ್ ಹೇಳಿದ್ದಾರೆ.


### ಭಾರತ-ಪಾಕ್ ನಡೆ ಸ್ವಾಗತಿಸಿದ ಕ್ಯಾಥೋಲಿಕ್ ಚರ್ಚ್‌ನ ಪೋಪ್



**ವ್ಯಾಟಿಕನ್ ಸಿಟಿ:** ಭಾರತ, ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದವನ್ನು ರೋಮನ್ ಕ್ಯಾಥೋಲಿಕ್ ಚರ್ಚ್‌ನ ನೂತನ ಪೋಪ್ ರಾಬರ್ಟ್ ಫ್ರಾನ್ಸಿಸ್ ಪ್ರಿವೊಸ್ಟ್ ಸ್ವಾಗತಿಸಿದ್ದಾರೆ. ಭಾರತ- ಪಾಕಿಸ್ತಾನ ಬಿಕ್ಕಟ್ಟು ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದ್ವಿಪಕ್ಷೀಯ ಮಾತುಕತೆಗಳು ಶಾಶ್ವತವಾಗಿ ಶಾಂತಿ ನೆಲೆಸಲು ಕಾರಣವಾಗುತ್ತವೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಏ. 22ರಂದು ಕಾಶ್ಮೀರದ ಪಹಲ್ಲಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ಪ್ರವಾಸಿಗರು ಮೃತಪಟ್ಟಿದ್ದರು. ಇದರ ಬೆನ್ನಲ್ಲೇ ಭಾರತದ ಸಶಸ್ತ್ರ ಪಡೆಗಳು ಅಪರೇಷನ್ ಸಿಂಧೂರದ ಮೂಲಕ ಪಾಕಿಸ್ತಾನ, ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿತ್ತು. ಇದರ ಬೆನ್ನಲ್ಲೇ ಗಡಿಯಲ್ಲಿ ಎರಡೂ ದೇಶಗಳ ನಡುವೆ ಸೇನಾ ಸಂಘರ್ಷ ತೀವ್ರಗೊಂಡಿದೆ. ಯುದ್ಧದ ಸ್ವರೂಪದ ಸಂಘರ್ಷ ಕೊನೆಗೊಳಿಸಲು 5 ಗಂಟೆಯಿಂದ ಅನ್ವಯವಾಗುವಂತೆ ಕದನ ವಿರಾಮಕ್ಕೆ ಭಾರತ, ಪಾಕಿಸ್ತಾನ ಒಪ್ಪಿರುವುದಾಗಿ ವಿದೇಶಾಂಗ ಸಚಿವಾಲಯ ಘೋಷಿಸಿತ್ತು. ಆದರೆ, ಶನಿವಾರ ರಾತ್ರಿ ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರಾಜಸ್ಥಾನ, ಗುಜರಾತ್ ಗಡಿಪ್ರದೇಶಗಳಲ್ಲಿ ಡ್ರೋನ್ ದಾಳಿಗೆ ಪಾಕ್ ಯತ್ನ ನಡೆಸಿದ್ದು, ಭಾರತ ತಕ್ಕ ಪ್ರತ್ಯುತ್ತರ ನೀಡಿದೆ.

### ಕಂದಕಕ್ಕೆ ಉರುಳಿದ ಬಸ್: 21 ಸಾವು, 30ಕ್ಕೂ ಹೆಚ್ಚು ಮಂದಿಗೆ ಗಾಯ

**ಕೊಲಂಬೊ:** ಶ್ರೀಲಂಕಾದಲ್ಲಿ ಸರ್ಕಾರಿ ಬಸ್‌ವೊಂದು ಕಂದಕಕ್ಕೆ ಉರುಳಿದ ಪರಿಣಾಮ ಕನಿಷ್ಠ 21 ಜನರು ಮೃತಪಟ್ಟಿದ್ದು,30ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮಧ್ಯ ಪ್ರಾಂತ್ಯದ ಕೋಟ್ಮಲೆ ಪ್ರದೇಶದಲ್ಲಿ ಎಡಕ್ಕೆ ತಿರುವು ತೆಗೆದುಕೊಳ್ಳಲು ಸಂದರ್ಭದಲ್ಲಿ ಬಸ್ ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿದೆ ಎಂದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಸ್ ದಕ್ಷಿಣ ಯಾತ್ರಾ ಸ್ಥಳವಾದ ಕತರಗಮದಿಂದ ಕುರುನಗರಕ್ಕೆ 75 ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದಾಗ 100 ಮೀಟರ್ ಆಳದ ಕಂದಕಕ್ಕೆ ಬಿದ್ದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅವಘಡದಲ್ಲಿ 21 ಮಂದಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ. ಗಾಯಗೊಂಡಿರುವ 30ಕ್ಕೂ ಹೆಚ್ಚು ಪ್ರಯಾಣಿಕರನ್ನು ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಸಾರಿಗೆ ಸಚಿವ ಪ್ರಸನ್ನ ಗುಣಸೇನ ಹೇಳಿದ್ದಾರೆ.





## ಮೂವತ್ತೇ ಸೆಕೆಂಡುಗಳಲ್ಲಿ ಕಲಾ ಲೋಕ

ನಟಿ ರಿಮಾ ಕಲ್ಲಿಂಗಲ್ ಹಾಗೂ ಪದ್ಮಪ್ರಿಯಾ 'ಅಲಯ್ ಪಾಯುದೆ' ಹಾಡಿಗೆ ಡ್ಯಾನ್ಸ್ ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಭಾರೀ ಸದ್ದು ಮಾಡುತ್ತಿದೆ. ಈ ವಿಡಿಯೋದಲ್ಲಿ ಇಬ್ಬರೂ ಕಪ್ಪು ಬಟ್ಟೆ ತೊಟ್ಟು ಸುಂದರವಾಗಿ ಕಾಣಿಸಿಕೊಂಡಿದ್ದಾರೆ.

ನಾವು ಒಟ್ಟಿಗೆ ಹಾರುತ್ತೇವೆ ಎಂಬ ಶೀರ್ಷಿಕೆಯೊಂದಿಗೆ ಈ ವಿಡಿಯೋವನ್ನು ಇನ್ಸ್ಟಾದಲ್ಲಿ ಇಬ್ಬರೂ ನಟಿಯರು ಹಂಚಿಕೊಂಡಿದ್ದಾರೆ. ಈ 30 ಸೆಕೆಂಡ್‌ಗಳ ವಿಡಿಯೋಗೆ ನಿರ್ದೇಶಕಿ ಅಂಜಲಿ ಮೆನನ್, ಸುಂದರವಾಗಿದೆ ಎಂದು ಕಾಮೆಂಟ್ ಮಾಡಿದ್ದಾರೆ. ಪಾರ್ವತಿ ತಿರುವೋತ್, ನೈಲಾ ಉಷಾ ಮತ್ತು ಇತರರು ಸೇರಿದಂತೆ ಅನೇಕ ತಾರೆಯರು ಸಹ ಈ ನೃತ್ಯಕ್ಕೆ ಮಾರುಹೋಗಿದ್ದಾರೆ. ಈ ನೃತ್ಯದ ಬಗ್ಗೆ ಪೋಸ್ಟ್‌ನಲ್ಲಿ ಕೆಲವು ಸಾಲುಗಳನ್ನು ಸಹ ಬರೆಯಲಾಗಿದೆ. ಎರಡು ಆತ್ಮಗಳು, ಒಂದೇ ಲಯ, ವೇದಿಕೆಯ ಹಿಂದೆ ಪಿಸುಗುಟ್ಟುವ ಬಿರುಗಾಳಿಗಳಿಂದ ಹಿಡಿದು, ಬೆಳಕಿನ ಬೆಳಕಿನಲ್ಲಿ ಸರಾಗವಾದ ಹೆಜ್ಜೆಗಳವರೆಗೆ.. ಮೌನ ಬಿರುಕು ಬಿಟ್ಟ ಮತ್ತು ಕೋಪ ಭುಗಿಲೆದ್ದ ಸ್ಥಳದಲ್ಲಿ, ಎರಡು ಹೃದಯಗಳು ಬಿರುಗಾಳಿಯ ಮೂಲಕ ನೃತ್ಯ ಮಾಡಿದವು. ವೇದಿಕೆಯ ಮೇಲೆ ಆ ಭೂತಕಾಲ ಕರಗಿತು, ಇಲ್ಲಿ ರೆಕ್ಕೆಗಳು ಮಾತ್ರ ಉಳಿದವು. ನಾವು ಹಾರಿಹೋದೆವು, ಆದರೆ ದೂರವಾಗಲಿಲ್ಲ ಎಂದು ಸಾಹಿತ್ಯಾತ್ಮಕವಾಗಿ ಬರೆಯಲಾಗಿದೆ. ರಿಮಾ ಕಲ್ಲಿಂಗಲ್ ಮತ್ತು ಪದ್ಮಪ್ರಿಯಾ ಅಂಜಲಿ ಮೆನನ್ ನಿರ್ದೇಶನದ 'ಬ್ಯಾಕ್ ಸ್ಟೇಜ್' ಚಿತ್ರದಲ್ಲಿ ಒಟ್ಟಿಗೆ ಕಾಣಿಸಿಕೊಂಡಿದ್ದಾರೆ. ಕೇರಳದ ಹಿನ್ನೆಲೆಯಲ್ಲಿ ನಡೆಯುವ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ಇಬ್ಬರೂ ನರ್ತಕಿಯರ ಪಾತ್ರದಲ್ಲಿ ನಟಿಸಿದ್ದಾರೆ. ಚಿತ್ರ ಬಿಡುಗಡೆಯಾದ ನಂತರ ಇಬ್ಬರೂ ನೃತ್ಯದ ವಿಡಿಯೋಕ್ಕಾಗಿ ಮತ್ತೆ ಒಟ್ಟಿಗೆ ಕಾಣಿಸಿಕೊಂಡಿದ್ದಾರೆ.

## ಭಾರತೀಯ ಸೇನೆಗೆ ದೇಣಿಗೆ ಘೋಷಿಸಿದ ವಿಜಯ್



### ನಟನ ನಡೆಗೆ ಫ್ಯಾನ್ಸ್ ಮೆಚ್ಚುಗೆ

ಭಾರತ-ಪಾಕಿಸ್ತಾನ ನಡುವೆ ಕದನ ವಿರಾಮ ಘೋಷಣೆಯಾಗಿದೆ. ಈ ನಡುವೆ ಭಾರತೀಯ ಸೇನೆ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡಿರುವ ನಟ ವಿಜಯ್ ದೇವರಕೊಂಡ) ಭಾರತೀಯ ಸೇನೆಗೆ ದೇಣಿಗೆ ನೀಡುವುದಾಗಿ ಘೋಷಿಸಿದ್ದಾರೆ.

ಹೌದು. ತಮ್ಮದೇ 'ರೌಡಿ' ಫ್ಯಾಷನ್ ಬ್ರ್ಯಾಂಡ್ ಸಿನಿಮಾದಿಂದ ಬರುವ ಲಾಭದಲ್ಲಿ ಒಂದು ಭಾಗವನ್ನ ಭಾರತೀಯ ಸೇನೆಗೆ ದೇಣಿಗೆ ಕೊಡುವುದಾಗಿ ಘೋಷಿಸಿದ್ದಾರೆ. ವಿಜಯ್ ನೇತೃತ್ವದ 'ರೌಡಿ' ಫ್ಯಾಷನ್ ಬ್ರ್ಯಾಂಡ್‌ಗೆ ಭರ್ಜರಿ ರೆಸ್ಪಾನ್ಸ್ ಬರ್ತಿದ್ದು, ಕಲೆಕ್ಷನ್ ಸಹ ಮಾಡುತ್ತಿದೆ.

ಈ ಬ್ರ್ಯಾಂಡ್‌ಗೆ ಒಂದೊಳ್ಳೆಯ ರೆಸ್ಪಾನ್ಸ್ ಇದೆ. ಹೀಗಾಗಿ ಇದರ ಲಾಭದಲ್ಲಿ ಒಂದು ಭಾಗವನ್ನ ಭಾರತೀಯ ಯೋಧರ ನಿಧಿಗೆ ಅರ್ಪಿಸಲು ನಟ ನಿರ್ಧರಿಸಿದ್ದಾರೆ. ನಟನ ನಡೆಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

ಅಂದಹಾಗೆ, ವಿಜಯ್ ನಟನೆಯ 'ಕಿಂಗ್‌ಡಮ್' ಸಿನಿಮಾ ಬಹುಭಾಷೆಗಳಲ್ಲಿ ರಿಲೀಸ್‌ಗೆ ಸಜ್ಜಾಗಿದೆ. ಮೇ 30ರಂದು ತೆರೆಗೆ ಬರಲಿದೆ. ನಟಿ ಭಾಗ್ಯ ಶ್ರೀ ಜೊತೆ ವಿಜಯ್ ರೊಮ್ಯಾನ್ಸ್ ಮಾಡಿದ್ದಾರೆ. ಮತ್ತೆ ಅದೇ ಅರ್ಜುನ್ ರೆಡ್ಡಿ ಗೆಟಪ್‌ನಲ್ಲಿ ಅವರು ಮಿಂಚಿದ್ದಾರೆ.

## ಶ್ರೀಲೀಲಾಗೆ ಬಿಗ್ ಚಾನ್ಸ್

### ಜಾನ್ವಿ ಕಪೂರ್‌ಗೆ ಗೇಟ್ ಪಾಸ್

ಕನ್ನಡದ ನಟಿ ಶ್ರೀಲೀಲಾ ಇದೀಗ ಬಾಲಿವುಡ್ ಮತ್ತು ತೆಲುಗು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಅದರಲ್ಲೂ 'ಪುಷ್ಪ 2' ಸಿನಿಮಾದಲ್ಲಿ ಕಿಸಿಕ್ ಹಾಡಿಗೆ ಸೊಂಟ ಬಳುಕಿಸಿದ್ಮೇಲೆ ಬಾಲಿವುಡ್ ಮಂದಿ ಕನ್ನಡದ ಈ ನಟಿಗೆ ಮಣೆ ಹಾಕಿದ್ದಾರೆ. ಕರಣ್ ಜೋಹರ್ ಸಿನಿಮಾದಲ್ಲಿ ಜಾನ್ವಿ ಕಪೂರ್ ನಟಿಸಬೇಕಿದ್ದ ಪಾತ್ರಕ್ಕೆ ಶ್ರೀಲೀಲಾ ಗ್ರ್ಯಾಂಡ್ ಎಂಟ್ರಿ ಕೊಟ್ಟಿದ್ದಾರೆ. ಕರಣ್ ಜೋಹರ್ ಒಡೆತನದ ಧರ್ಮ ಪ್ರೊಡಕ್ಷನ್ಸ್ ಇದೀಗ 'ದೋಸ್ತಾನ 2' ಸಿನಿಮಾ ಮಾಡಲು ಮುಂದಾಗಿದೆ. ಇದಕ್ಕೆ ವಿಕ್ರಾಂತ್ ಮಾಸ್ಸಿ ನಾಯಕನಾಗಿ ನಟಿಸಲಿದ್ದಾರೆ. ಅವರಿಗೆ ಜೋಡಿಯಾಗಿ ನಟಿಸಲು ಜಾನ್ವಿ ಕಪೂರ್ ಅವರನ್ನು ಆಯ್ಕೆ ಮಾಡಿದ್ದರು. ಕಾರಣಾಂತರಗಳಿಂದ ಜಾನ್ವಿ ನಟಿಸಬೇಕಿದ್ದ ಜಾಗಕ್ಕೆ ಶ್ರೀಲೀಲಾ ಆಯ್ಕೆ ಮಾಡಿದ್ದಾರೆ. ವಿಕ್ರಾಂತ್ ಮತ್ತು ಶ್ರೀಲೀಲಾ ಜೋಡಿಯ ಮೂಲಕ 'ದೋಸ್ತಾನ 2' ಚಿತ್ರದಲ್ಲಿ ವಿಭಿನ್ನ ಪ್ರೇಮಕಥೆಯನ್ನು ಹೇಳೋಕೆ ರೆಡಿಯಾಗಿದ್ದಾರೆ. ಕನ್ನಡದ ನಟಿಯ ಮೇಲಿರುವ ಪಡ್ಡೆ ಹುಡುಗರ ಕ್ರೇಜ್ ನೋಡಿ ಅವರಿಗೆ ನಟಿಸಲು ಆಫರ್ ನೀಡಲಾಗಿದೆ.



2008ರಲ್ಲಿ 'ದೋಸ್ತಾನ' ಸಿನಿಮಾದಲ್ಲಿ ಜಾನ್ ಅಬ್ರಾಹಂ, ಪ್ರಿಯಾಂಕಾ ಚೋಪ್ರಾ, ಅಭಿಷೇಕ್ ಬಚ್ಚನ್ ನಟಿಸಿದ್ದರು. ಈ ಸಿನಿಮಾವನ್ನು ಕರಣ್ ಜೋಹರ್ ನಿರ್ಮಿಸಿದ್ದರು. ಇದೀಗ ಮತ್ತೆ ಸಿನಿಮಾ ಇದರ ಪಾರ್ಟ್ 2 ಮೂಲಕ ಹೊಸ ಜೋಡಿಯನ್ನು ಪರಿಚಯಿಸಲು ಮುಂದಾಗಿದೆ. ಅಂದಹಾಗೆ, ಕಾರ್ತಿಕ್ ಆರ್ಯನ್ ಜೊತೆ 'ಆಶಿಕಿ-3', ಸೈಫ್ ಅಲಿ ಖಾನ್ ಪುತ್ರ ಇಬ್ರಾಹಿಂಗೆ ಜೋಡಿಯಾಗಿ ಹೊಸ ಸಿನಿಮಾದಲ್ಲಿ ಶ್ರೀಲೀಲಾ ಕೆಲಸ ಮಾಡುತ್ತಿದ್ದಾರೆ. ಈ ಸಿನಿಮಾಗಳು ರಿಲೀಸ್ ಆಗುವ ಮುನ್ನವೇ ಅವರಿಗೆ ಬಾಲಿವುಡ್‌ನಲ್ಲಿ ಬಂಪರ್ ಆಫರ್‌ಗಳು ಬರುತ್ತಿವೆ.



## ಕಯಾದು ಸೌಂದರ್ಯಕ್ಕೆ ಸೈ ನಂತರ ಅರ್ಧ ಡಜನ್ ಸಿನಿಮಾ!

### ನಟಿಯ ಯಶಸ್ಸಿನ ಛಾಯೆ

ಕೇವಲ ಒಂದೇ ಒಂದು ಹಿಟ್ ಸಿನಿಮಾ, ನಟಿ ಕಯಾದು ಲೋಹರ್ ಅವರ ವೃತ್ತಿ ಜೀವನವನ್ನೇ ಬದಲಾಯಿಸಿದೆ. ತಮಿಳಿನ ಡ್ರ್ಯಾಗನ್ ಚಿತ್ರ ಈ ಸುಂದರಿಯನ್ನು ರಾತ್ರೋರಾತ್ರಿ ತಾರೆಯನ್ನಾಗಿಸಿತು. ಈಗ ಸುಮಾರು ಆರು ಚಿತ್ರಗಳು ಅವರ ನಟನೆಯನ್ನು ಬಯಸಿ ಕ್ಯೂ ನಿಂತಿವೆ!

ಕಯಾದುಗೆ ಕಾಲಿವುಡ್‌ನಲ್ಲಿ ಮಾತ್ರವಲ್ಲ, ಟಾಲಿವುಡ್‌ನಲ್ಲೂ ಅದೃಷ್ಟದ ಬಾಗಿಲು ತೆರೆದಿದೆ. ಶ್ರೀ ವಿಷ್ಣು ಮತ್ತು ಅಲ್ಲೂರಿ ಚಿತ್ರಗಳ ಮೂಲಕ ತೆಲುಗು ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದಾಗ ಇವರ ಕಡೆ ಯಾರೂ ಹೆಚ್ಚು ಗಮನ ಹರಿಸಿರಲಿಲ್ಲ. ಡ್ರ್ಯಾಗನ್ ಸೂಪರ್ ಹಿಟ್ ಆದ ನಂತರ ಕಯಾದು ಹಾಟ್ ಫೇವರಿಟ್ ಹೀರೋಯಿನ್ ಆಗಿದ್ದು, ತೆಲುಗು ಚಿತ್ರಗಳಲ್ಲೂ ಅವಕಾಶ ಗಿಟ್ಟಿಸಿಕೊಂಡಿದ್ದಾರೆ. ತೆಲುಗಿನ ನಟ ವಿಶ್ವಕ್ ಸೇನ್ ನಟನೆಯ 'ಫಂಕಿ' ಚಿತ್ರಕ್ಕೂ ಕಯಾದು ನಾಯಕಿಯಾಗಿ ಸೆಲೆಕ್ಟ್ ಆಗಿದ್ದಾರೆ.

ಜಿ.ವಿ. ಪ್ರಕಾಶ್ ಕುಮಾರ್ ಮತ್ತು ಕಯಾದು ಅಭಿನಯದ ಮುಂಬರುವ ಚಿತ್ರ 'ಇಮ್ಮಾರ್ಟಲ್'ನ ಫಸ್ಟ್-ಲುಕ್ ಪೋಸ್ಟರ್ ಈಗಾಗಲೇ ಅಧಿಕೃತವಾಗಿ ಅನಾವರಣಗೊಳಿಸಲಾಗಿದೆ. ಮರಿಯಪ್ಪನ್ ಚಿನ್ನಾ ಅವರ ಚೊಚ್ಚಲ ನಿರ್ದೇಶನದ ಈ ಚಿತ್ರದ ಪೋಸ್ಟರ್ ಯುವ ಜನರನ್ನು ಆಕರ್ಷಿಸುತ್ತಿದೆ. ಈ ಪೋಸ್ಟರ್‌ನಲ್ಲೂ ಡ್ರ್ಯಾಗನ್‌ನ ಚಿತ್ರವಿದ್ದು, ನಟಿಯ ಯಶಸ್ಸಿನ ಛಾಯೇ ಎದ್ದು ಕಾಣುತ್ತಿದೆ.

ಸಧ್ಯ ತಮಿಳಿನಲ್ಲಿ 'ಇದಯಂ ಮುರಳಿ' ಸಿನಿಮಾದಲ್ಲಿ ಅವರು ನಟಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಸಹ ಬಿಡುಗಡೆ ಮಾಡಲಾಗಿತ್ತು. ಈ ಸಿನಿಮಾ ಜೂನ್ ಇಲ್ಲವೇ ಜುಲೈನಲ್ಲಿ ಬಿಡುಗಡೆಯಾಗುವ ಸಾಧ್ಯತೆ ಇದೆ. ಇವುಗಳ ಜೊತೆಗೆ ಇನ್ನೂ ಆರು ಚಿತ್ರಗಳಲ್ಲಿ ನಟಿಸಲು ಕಯಾದು ಒಪ್ಪಿಕೊಂಡಿದ್ದಾರೆ ಎಂದು ವರದಿಯಾಗಿದೆ.

2021ರಲ್ಲಿ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ಮನೋರಂಜನ್ ನಟನೆಯ 'ಮುಗಿಲ್‌ಪೇಟೆ' ಚಿತ್ರದಲ್ಲಿ ಕಯಾದು ನಾಯಕಿಯಾಗಿ ನಟಿಸಿದ್ದರು.





## ಐಶ್ವರ್ಯಾ ರಾಜೇಶ್‌ಗೆ ನೆಟ್ಟಿಗರಿಂದ ತರಾಟೆ

ಭಾರತ-ಪಾಕ್ ನಡುವೆ ಯುದ್ಧ ಬೇಡ ಎಂದು ಸೋಷಿಯಲ್ ಮೀಡಿಯಾದಲ್ಲಿ ಸೌತ್ ನಟಿ ಐಶ್ವರ್ಯಾ ರಾಜೇಶ್ ಮನವಿ ಮಾಡಿದ್ದಾರೆ. ಯುದ್ಧಕ್ಕೆ ನನ್ನ ಬೆಂಬಲವಿಲ್ಲ ಎಂದು ಪೋಸ್ಟ್ ಮಾಡಿರುವ ನಟಿಗೆ ನೆಟ್ಟಿಗರು ತರಾಟೆ ತೆಗೆದುಕೊಂಡಿದ್ದಾರೆ. ಯುದ್ಧ ಬೇಡ. ಈ ದೇಶದ ಪ್ರಜೆಯಾಗಿ ನಾನು ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳನ್ನು ವಿನಂತಿಸುತ್ತೇನೆ. ಯುದ್ಧದ ಬದಲು ಶಾಂತಿಗೆ ಆದ್ಯತೆ ನೀಡಿ. ಜೀವಗಳನ್ನು ಕಳೆದುಕೊಳ್ಳಲು ಬಿಡಬೇಡಿ. ಸೈನಿಕರು, ಮುಗ್ಧ ನಾಗರಿಕರು ಸಾಯಬಾರದು. ನಾವು ಇದರ ಬಗ್ಗೆ ಜಾಗೃತಿ ಮೂಡಿಸಬೇಕು ಮತ್ತು ಮತ್ತೊಂದು ಯುದ್ಧ ತಡೆಯಲು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಐಶ್ವರ್ಯಾ ರಾಜೇಶ್ ಇನ್‌ಸ್ಟಾಗ್ರಾಂನಲ್ಲಿ ಬರೆದುಕೊಂಡಿದ್ದಾರೆ. ಅವರು ಹಂಚಿಕೊಂಡಿರುವ ಪೋಸ್ಟ್ ವಿವಾದವನ್ನು ಹುಟ್ಟು ಹಾಕಿದೆ.

ಕನ್ನಡದ 'ಉತ್ತರಾಖಂಡ' ಸಿನಿಮಾದಲ್ಲಿ ಶಿವಣ್ಣ, ಡಾಲಿ ಜೊತೆ ನಟಿಸುವ ಮೂಲಕ ತಮಿಳು ನಟಿ ಐಶ್ವರ್ಯಾ ರಾಜೇಶ್ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟಿದ್ದಾರೆ.

## ಆರ್‌ಸಿಬಿ ಪಾಲಿಗೆ ವರವಾದ ಐಪಿಎಲ್ ಮುಂದೂಡಿಕೆ

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯಿಂದಾಗಿ ಐಪಿಎಲ್ 2025 ಅನ್ನು ಪ್ರಸ್ತುತ ಒಂದು ವಾರ ಮುಂದೂಡಲಾಗಿದೆ. ಆದಾಗ್ಯೂ, ಮೇ 10 ರಂದು ಭಾರತ ಮತ್ತು ಪಾಕಿಸ್ತಾನ ನಡುವೆ ಕದನ ವಿರಾಮ ಜಾರಿಗೆ ಬಂದಿದೆ. ಈಗ ಐಪಿಎಲ್ ಶೀಘ್ರದಲ್ಲೇ ಮತ್ತೆ ಪ್ರಾರಂಭವಾಗಲಿದೆ ಎಂದು ತೋರುತ್ತಿದೆ. ಆದಾಗ್ಯೂ ಐಪಿಎಲ್ ಮುಂದೂಡಿಕೆಯಿಂದ ಕೆಲವು ತಂಡಗಳಿಗೆ ಒಳ್ಳೇಯದ್ದೇ ಆಗಿದೆ. ಏಕೆಂದರೆ ಕೆಲವು ತಂಡದ ಆಟಗಾರರು ಇಂಜುರಿಯಿಂದ ಬಳಲುತ್ತಿದ್ದರು. ಅದರಲ್ಲೂ ಈ ಬಾರಿ ಕಪ್ ಗೆಲ್ಲುವ ನೆಚ್ಚಿನ ತಂಡಗಳಲ್ಲಿ ಒಂದಾಗಿರುವ ಆರ್‌ಸಿಬಿಗೆ ಸಾಕಷ್ಟು ಲಾಭವಾಗಿದೆ.

**ಆರ್‌ಸಿಬಿಗೆ ದೊಡ್ಡ ಲಾಭ**

ವಾಸ್ತವವಾಗಿ ಆರ್‌ಸಿಬಿ ನಾಯಕ ರಜತ್ ಪಾಟಿದಾರ್ ಪ್ರಸ್ತುತ ಬೆರಳಿನ ಗಾಯದಿಂದ ಬಳಲುತ್ತಿದ್ದಾರೆ. ಸಿಎಸ್‌ಕೆ ವಿರುದ್ಧದ ಪಂದ್ಯದಲ್ಲಿ ಫೀಲ್ಡಿಂಗ್ ಮಾಡುವಾಗ ರಜತ್ ಕೈಗೆ ಗಾಯವಾಗಿತ್ತು. ಇದರಿಂದಾಗಿ ಅವರು ಕನಿಷ್ಠ 2 ಪಂದ್ಯಗಳಿಗೆ ಹೊರಗುಳಿಯಬೇಕಾಗಿತ್ತು. ಆದರೆ ಭಾರತ-ಪಾಕಿಸ್ತಾನ ಉದ್ವಿಗ್ನತೆಯನ್ನು ಗಮನದಲ್ಲಿಟ್ಟುಕೊಂಡು, ಬಿಸಿಸಿಐ ಐಪಿಎಲ್ 2025 ಅನ್ನು ಒಂದು ವಾರ ಮುಂದೂಡಿದೆ. ಹೀಗಾಗಿ ರಜತ್ ಪಟಿದಾರ್ ಫಿಟ್ ಆಗಲು ಒಂದು ವಾರ ಸಮಯ ಸಿಕ್ಕಿದೆ. ಪ್ರಸ್ತುತ ರಜತ್ ಗಾಯದಿಂದ ಚೇತರಿಸಿಕೊಳ್ಳುತ್ತಿದ್ದು, ಐಪಿಎಲ್ 2025 ಪುನರಾರಂಭವಾದ ತಕ್ಷಣ ಅವರು ಕಣಕ್ಕಿಳಿಯುವ ಸಾಧ್ಯತೆಗಳಿವೆ.

ಮೇ 10 ರ ಶನಿವಾರ, ರಜತ್ ಪಾಟಿದಾರ್ ಆರ್‌ಸಿಬಿ ತಂಡದೊಂದಿಗೆ ಲಕ್ನೋದಿಂದ ಬೆಂಗಳೂರಿಗೆ ಮರಳಿದ್ದಾರೆ. ಲಕ್ನೋದಲ್ಲಿ ನಡೆಯಬೇಕಿದ್ದ ಪಂದ್ಯವನ್ನು ಸ್ಥಗಿತಗೊಳಿಸಲಾಗಿರುವುದರಿಂದ ಅವರು ತಂಡದೊಂದಿಗೆ ಬೆಂಗಳೂರಿನಲ್ಲಿದ್ದಾರೆ. ಒಂದು ವೇಳೆ ಪಾಟೀದಾರ್ ಲಕ್ನೋ ವಿರುದ್ಧ ಆಡದಿದ್ದರೆ, ಜಿತೇಶ್ ಶರ್ಮಾ ಆರ್‌ಸಿಬಿಯ ನಾಯಕತ್ವ ವಹಿಸಿಕೊಳ್ಳುತ್ತಿದ್ದರು.

**ಜಿತೇಶ್‌ಗೆ ನಾಯಕತ್ವ ಹಸ್ತಾಂತರ**

ಈ ವಿಷಯದ ಬಗ್ಗೆ ಮಾತನಾಡಿರುವ ಜಿತೇಶ್ ಶರ್ಮಾ, ನನಗೆ ಸಿಕ್ಕ ಅವಕಾಶಕ್ಕಾಗಿ ನಾನು ತುಂಬಾ ಕೃತಜ್ಞನಾಗಿದ್ದೇನೆ. ಆರ್‌ಸಿಬಿ ಫ್ರಾಂಚೈಸಿ ನನಗೆ ತಂಡದ ನಾಯಕನಾಗುವ ಅವಕಾಶ ನೀಡಿತ್ತು. ಅದು ನನಗೆ ಮತ್ತು ನನ್ನ ಕುಟುಂಬಕ್ಕೆ ದೊಡ್ಡ ವಿಷಯವಾಗಿದೆ. ದೇವದತ್ ಪಡಿಕ್ಕಲ್ ಮತ್ತು ರಜತ್ ಪಾಟಿದಾರ್ ಇಬ್ಬರೂ ಲಭ್ಯವಿಲ್ಲದ ಕಾರಣ ಮತ್ತು ಅವರನ್ನು ಬದಲಾಯಿಸುವುದು ದೊಡ್ಡ ಜವಾಬ್ದಾರಿಯಾಗಿರುವುದರಿಂದ ಸರಿಯಾದ ಸಂಯೋಜನೆ ಯಾವುದು ಎಂದು ನಾನು ಯೋಚಿಸುತ್ತಿದ್ದೆ ಎಂದು ಜಿತೇಶ್ ಹೇಳಿಕೊಂಡಿರುವ ವಿಡಿಯೋವನ್ನು ಆರ್‌ಸಿಬಿ ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಹಂಚಿಕೊಂಡಿತ್ತು.



### ರಜತ್ ಕೈಗೆ ಗಾಯ

## ಹೊಸ ಇತಿಹಾಸ ರಚಿಸಿದ ಸ್ಮೃತಿ ಮಂಧಾನ

### ಶತಕಗಳ ಮೇಲೆ ಶತಕ

ಕೊಲಂಬೊದಲ್ಲಿ ನಡೆಯುತ್ತಿರುವ ತ್ರಿಕೋನ ಸರಣಿಯ ಫೈನಲ್ ಪಂದ್ಯದಲ್ಲಿ ಟೀಮ್ ಇಂಡಿಯಾದ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ಆರ್. ಪ್ರೇಮದಾಸ ಮೈದಾನದಲ್ಲಿ ನಡೆಯುತ್ತಿರುವ ಶ್ರೀಲಂಕಾ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕಿ ಹರ್ಮನ್‌ಪ್ರೀತ್ ಕೌರ್ ಬ್ಯಾಟಿಂಗ್ ಆಯ್ದುಕೊಂಡಿದ್ದಾರೆ.

ಅದರಂತೆ ಮೊದಲು ಬ್ಯಾಟ್ ಮಾಡಿದ ಭಾರತ ತಂಡಕ್ಕೆ ಸ್ಮೃತಿ ಮಂಧಾನ ಹಾಗೂ ಪ್ರತಿಕಾ ರಾವಲ್ ಉತ್ತಮ ಆರಂಭ ಒದಗಿಸಿದ್ದರು. ಮೊದಲ ವಿಕೆಟ್‌ಗೆ 70 ರನ್ ಪೇರಿಸಿದ ಬಳಿಕ ಪ್ರತಿಕಾ 30 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ಇದಾಗ್ಯೂ ಮತ್ತೊಂದೆಡೆ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ ಸ್ಮೃತಿ ಮಂಧಾನ ಮೈದಾನದ ಮೂಲೆ ಮೂಲೆಗೆ ಫೋರ್‌ಗಳನ್ನು ಬಾರಿಸಿದರು.

ಈ ಮೂಲಕ ಕೇವಲ 92 ಎಸೆತಗಳಲ್ಲಿ ಶತಕ ಪೂರೈಸಿದರು. ವಿಶೇಷ ಎಂದರೆ ಇದು ಸ್ಮೃತಿ ಮಂಧಾನ ಅವರ 11ನೇ ಏಕದಿನ ಶತಕ. ಈ ಸೆಂಚುರಿಯೊಂದಿಗೆ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ಶತಕ ಸಿಡಿಸಿದ ಮೂರನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಹಾಗೆಯೇ ವುಮೆನ್ಸ್ ಕ್ರಿಕೆಟ್‌ನಲ್ಲಿ 10 ಕ್ಕಿಂತ ಅಧಿಕ ಶತಕ ಸಿಡಿಸಿ ಮೊದಲ ಭಾರತೀಯ ಆಟಗಾರ್ತಿ ಹಾಗೂ ವಿಶ್ವದ ಮೂರನೇ ಬ್ಯಾಟರ್ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.

ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ಶತಕ ಸಿಡಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಆಸ್ಟ್ರೇಲಿಯಾ ತಂಡದ ಮಾಜಿ ನಾಯಕಿ ಮೆಗ್ ಲ್ಯಾನಿಂಗ್. ಮೆಗ್ 103 ಏಕದಿನ ಪಂದ್ಯಗಳಲ್ಲಿ ಒಟ್ಟು 15 ಶತಕ ಸಿಡಿಸಿದ್ದಾರೆ. ಹಾಗೆಯೇ ನ್ಯೂಝಿಲೆಂಡ್‌ನ ಸುಝಿ ಬೇಟ್ಸ್ 171 ಏಕದಿನ ಪಂದ್ಯಗಳಿಂದ 13 ಶತಕ ಬಾರಿಸಿದ್ದಾರೆ.

ಇದೀಗ ಸ್ಮೃತಿ ಮಂಧಾನ 102 ಏಕದಿನ ಪಂದ್ಯಗಳ ಮೂಲಕ ಒಟ್ಟು 11 ಶತಕ ಬಾರಿಸಿದ್ದಾರೆ. ಈ ಮೂಲಕ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ಹತ್ತಕ್ಕಿಂತ ಅಧಿಕ ಸೆಂಚುರಿ ಸಿಡಿಸಿದ ವಿಶ್ವದ 3ನೇ ಬ್ಯಾಟರ್ ಎಂಬ ವಿಶ್ವ ದಾಖಲೆಯನ್ನು ಸ್ಮೃತಿ ಮಂಧಾನ ತಮ್ಮದಾಗಿಸಿಕೊಂಡಿದ್ದಾರೆ.



## 10 ಬ್ಯಾಟರ್‌ಗಳು ರಿಟೈರ್ ಔಟ್!



### ಟಿ20 ಕ್ರಿಕೆಟ್‌ನಲ್ಲಿ ಹೊಸ ಇತಿಹಾಸ

ಟಿ20 ಕ್ರಿಕೆಟ್ ಅಪರೂಪದ ಸ್ಕೋರ್ ಕಾರ್ಡ್‌ಗೆ ಸಾಕ್ಷಿಯಾಗಿದೆ. ಅದು ಕೂಡ ಒಂದು ತಂಡದ 10 ಬ್ಯಾಟರ್‌ಗಳು ರಿಟೈರ್ ಔಟ್ ಆಗುವ ಮೂಲಕ ಎಂಬುದೇ ವಿಶೇಷ. ಬ್ಯಾಂಕಾಕ್‌ನ ಟೆರ್ಡ್‌ಥೈ ಕ್ರಿಕೆಟ್ ಮೈದಾನದಲ್ಲಿ ನಡೆಯುತ್ತಿರುವ ಮಹಿಳಾ ಟಿ20 ವಿಶ್ವಕಪ್ ಏಷ್ಯನ್ ಅರ್ಹತಾ ಸುತ್ತಿನ ಪಂದ್ಯದಲ್ಲಿ ಯುಎಇ ಹಾಗೂ ಕತಾರ್ ತಂಡಗಳು ಮುಖಾಮುಖಿಯಾಗಿದ್ದವು.

ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಯುಎಇ ತಂಡಕ್ಕೆ ಇಶಾ ರೋಹಿತ್ ಓಜಾ ಹಾಗೂ ತೀರ್ಥ ಸತೀಶ್ ಉತ್ತಮ ಆರಂಭ ಒದಗಿಸಿದ್ದರು. ಮೊದಲ ಓವರ್‌ನಿಂದಲೇ ಬಿರುಸಿ ಬ್ಯಾಟಿಂಗ್‌ಗೆ ಒತ್ತು ನೀಡಿದ ಇಶಾ ರೋಹಿತ್ ಓಜಾ 55 ಎಸೆತಗಳಲ್ಲಿ 5 ಭರ್ಜರಿ ಸಿಕ್ಸ್ ಹಾಗೂ 14 ಫೋರ್‌ಗಳೊಂದಿಗೆ 113 ರನ್ ಬಾರಿಸಿದರು. ಮತ್ತೊಂದೆಡೆ ತೀರ್ಥ ಸತೀಶ್ 42 ಎಸೆತಗಳಲ್ಲಿ 11 ಫೋರ್‌ಗಳೊಂದಿಗೆ 74 ರನ್ ಬಾರಿಸಿದರು. ಈ ಮೂಲಕ ತೀರ್ಥ ಸತೀಶ್ ಹಾಗೂ ಇಶಾ ರೋಹಿತ್ ಮೊದಲ ವಿಕೆಟ್‌ಗೆ 16 ಓವರ್‌ಗಳಲ್ಲಿ 192 ರನ್‌ಗಳ ಜೊತೆಯಾಟವಾಡಿದ್ದಾರೆ. ಈ ವೇಳೆ ಮಳೆ ಬರುವ ಮುನ್ಸೂಚನೆ ಸಿಕ್ಕಿದೆ. ಮೈದಾನದ ಸುತ್ತಲೂ ಕಾರ್ಮೋಡ ಕವಿಯುತ್ತಿದ್ದಂತೆ ಯುಎಇ ತಂಡವು 2 ಅಂಕಗಳನ್ನು ಪಡೆಯಲು ಮಾಸ್ಟರ್ ಪ್ಲ್ಯಾನ್ ರೂಪಿಸಿದರು. ಮಳೆ ಬರುವ ಮುನ್ಸೂಚನೆ ಸಿಗುತ್ತಿದ್ದಂತೆ ಯುಎಇ ತಂಡದ ಆರಂಭಿಕರಿಬ್ಬರು ರಿಟೈರ್ ಔಟ್ ನೀಡಿ ಪೆವಿಲಿಯನ್‌ಗೆ ಹಿಂತಿರುಗಿದ್ದಾರೆ. ಇದರ ಬೆನ್ನಲ್ಲೇ ಉಳಿದ ಬ್ಯಾಟರ್‌ಗಳು ಕೂಡ ಒಬ್ಬರ ಹಿಂದೆ ಒಬ್ಬರಂತೆ ರಿಟೈರ್ ಔಟ್ ಘೋಷಿಸಿದ್ದಾರೆ. ಟಿ20 ಕ್ರಿಕೆಟ್‌ನಲ್ಲಿ ಡಿಕ್ಲೇರ್ ಘೋಷಿಸಲು ಅವಕಾಶವಿಲ್ಲ. ಇತ್ತ ಮಳೆ ಬರುವ ಮುನ್ನ ಇನಿಂಗ್ಸ್ ಅಂತ್ಯಗೊಳಿಸುವ ಅನಿವಾರ್ಯತೆ ಯುಎಇ ತಂಡದ ಮುಂದಿತ್ತು. ಹೀಗಾಗಿ 10 ಬ್ಯಾಟರ್‌ಗಳು ಕೂಡ ರಿಟೈರ್ ಔಟ್ ಘೋಷಿಸಿ ಇನಿಂಗ್ಸ್ ಅಂತ್ಯಗೊಳಿಸಿದ್ದಾರೆ. ಅದು ಕೂಡ 16 ಓವರ್‌ಗಳಲ್ಲಿ 192 ರನ್‌ಗಳಿಸುವ ಮೂಲಕ ಎಂಬುದು ವಿಶೇಷ.

**ಗೆದ್ದು ಬೀಗಿದ ಯುಎಇ:** ಯುಎಇ ತಂಡದ ಮಾಸ್ಟರ್ ಪ್ಲ್ಯಾನ್ ಬೆನ್ನಲ್ಲೇ ಇನಿಂಗ್ಸ್ ಆರಂಭಿಸಿದ ಕತಾರ್ ತಂಡವು 11.1 ಓವರ್‌ಗಳಲ್ಲಿ 29 ರನ್‌ಗಳಿಸಿ ಆಲೌಟ್ ಆಗಿದೆ. ಈ ಮೂಲಕ ಯುಎಇ ತಂಡ 163 ರನ್‌ಗಳ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಯುಎಇ 2 ಅಂಕಗಳನ್ನು ಪಡೆದು ಪಾಯಿಂಟ್ಸ್ ಟೇಬಲ್‌ನಲ್ಲಿ ಅಗ್ರಸ್ಥಾನ ಪಡೆದುಕೊಂಡಿದೆ. ಅಂದರೆ ಮಳೆ ಬರುವ ಮುನ್ನವೇ ಎದುರಾಳಿ ತಂಡಕ್ಕೆ ಬ್ಯಾಟಿಂಗ್ ನೀಡಿ 2 ಅಂಕಗಳನ್ನು ಪಡೆಯುವ ಯುಎಇ ತಂಡದ ಯೋಜನೆ ಕಾರ್ಯಗತಗೊಂಡಿದ್ದು, ಇದರೊಂದಿಗೆ ಟಿ20 ಕ್ರಿಕೆಟ್ ಇತಿಹಾಸದಲ್ಲಿ 10 ಬ್ಯಾಟರ್‌ಗಳು ರಿಟೈರ್ ಔಟ್ ಆದ ಮೊದಲ ತಂಡವೆಂಬ ಕೀರ್ತಿ ಕೂಡ ಯುನೈಟೆಡ್ ಅರಬ್ ಎಮಿರೇಟ್ಸ್ ತಂಡದ ಪಾಲಾಗಿದೆ.

## ಪೂರ್ವ ನಿಗದಿತ ಸ್ಥಳಗಳಲ್ಲೇ ನಡೆಯಲಿವೆ ಪ್ಲೇಆಫ್, ಫೈನಲ್

ಐಪಿಎಲ್ 2025 ರ ದ್ವಿತೀಯಾರ್ಧದ ಪಂದ್ಯಗಳ ಹೊಸ ವೇಳಾಪಟ್ಟಿ ಭಾನುವಾರ ಬಿಡುಗಡೆಯಾಗುವ ನಿರೀಕ್ಷೆಯಿದೆ ಎಂಬ ಸುದ್ದಿ ಹೊರಬಿದ್ದಿದೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯಿಂದಾಗಿ ಪಂದ್ಯಾವಳಿಯನ್ನು ಒಂದು ವಾರ ಮುಂದೂಡಲಾಗಿದೆ. ಇದೀಗ ಉಭಯ ದೇಶಗಳು ಕದನ ವಿರಾಮ ಘೋಷಿಸಿರುವುದರಿಂದ ಮೇ 16 ರಿಂದ ಪಂದ್ಯಾವಳಿ ಪುನರಾರಂಭಗೊಳ್ಳುವ ಸಾಧ್ಯತೆ ಇದ್ದು, ಫೈನಲ್ ಪಂದ್ಯವನ್ನು ಮೇ 25 ರ ಬದಲು ಮೇ 30 ರಂದು ನಡೆಸಲು ಯೋಜಿಸಲಾಗಿದೆ. ಹಾಗೆಯೇ ಆಟಗಾರರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು, ಬಿಸಿಸಿಐ ಉಳಿದ ಎಲ್ಲಾ ಪಂದ್ಯಗಳನ್ನು 3 ಸ್ಥಳಗಳಲ್ಲಿ ನಡೆಸಲು ಚಿಂತಿಸಲಾಗಿದೆ. ಏತನ್ಮಧ್ಯೆ, ಪ್ಲೇಆಫ್ ಪಂದ್ಯಗಳು ಮತ್ತು ಫೈನಲ್ ಪಂದ್ಯ ನಡೆಯುವ ಸ್ಥಳದ ಬಗ್ಗೆ ಬಿಗ್ ಅಪ್‌ಡೇಟ್ ಹೊರಬಿದ್ದಿದೆ.



**ಪೂರ್ವ ನಿಗದಿತ ಸ್ಥಳಗಳಲ್ಲೇ ಪ್ಲೇಆಫ್:** ವರದಿಯ ಪ್ರಕಾರ, ಲೀಗ್ ಹಂತದ ಪಂದ್ಯಗಳು ನಡೆಯುವ ಸ್ಥಳ ಬದಲಾದರೂ, ಪ್ಲೇಆಫ್ ಪಂದ್ಯಗಳು ನಡೆಯುವ ಸ್ಥಳವನ್ನು ಬದಲಾಯಿಸಲಾಗುವುದಿಲ್ಲ. ಟೂರ್ನಮೆಂಟ್‌ನ ಮೊದಲ ಅರ್ಹತಾ ಪಂದ್ಯವು ಹೈದರಾಬಾದ್‌ನ ರಾಜೀವ್ ಗಾಂಧಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಎರಡನೇ ಅರ್ಹತಾ ಪಂದ್ಯವನ್ನು ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನ ಆಯೋಜಿಸಲಿದೆ.

ಪೂರ್ವ ನಿಗದಿಯ ಪ್ರಕಾರ ಎಲಿಮಿನೇಟರ್ ಪಂದ್ಯವೂ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಫೈನಲ್ ಪಂದ್ಯ ಕೂಡ ಈಡನ್ ಗಾರ್ಡನ್ಸ್‌ನಲ್ಲಿ ನಡೆಸುವ ಇರಾದೆಯಲ್ಲಿ ಬಿಸಿಸಿಐ ಇದೆ. ಆದಾಗ್ಯೂ, ಪ್ಲೇಆಫ್ ಮತ್ತು ಫೈನಲ್ ಪಂದ್ಯಗಳ ದಿನಾಂಕ ಬದಲಾಗುವುದು ಮಾತ್ರ ಖಚಿತವಾಗಿದೆ. ಇಂಡಿಯನ್ ಎಕ್ಸ್‌ಪ್ರೆಸ್ ಸುದ್ದಿಯ ಪ್ರಕಾರ, ಐಪಿಎಲ್ 2025 ರ ಫೈನಲ್ ಪಂದ್ಯವನ್ನು ಮೇ 25 ರ ಬದಲು ಮೇ 30 ರಂದು ನಡೆಸಬಹುದು. ಇದರೊಂದಿಗೆ, ಪ್ಲೇಆಫ್ ಪಂದ್ಯಗಳ ದಿನಾಂಕವೂ ಬದಲಾಗಬಹುದು.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966